ಕರ್ನಾಟಕ ಸರ್ಕಾರ

**ಸಂಸದೀಯ ವ್ಯವಹಾರಗಳ ಇಲಾಖೆ**
**ಮತ್ತು**
**ಸಾರ್ವಜನಿಕ ಶಿಕ್ಷಣ ಇಲಾಖೆ ವತಿಯಿಂದ (ಡಿ.ಎಸ್.ಇ.ಆರ್.ಟಿ)**

# ಪ್ರೌಢ ಶಾಲಾ ವಿದ್ಯಾರ್ಥಿಗಳಿಗೆ ನಡೆಸಲಾಗುತ್ತಿರುವ ಜಿಲ್ಲಾ ಮತ್ತು ರಾಜ್ಯ ಮಟ್ಟದ ಯುವ ಸಂಸತ್ ಸ್ಪರ್ಧೆ 2019–2020

# ಮಾಹಿತಿ ಕೈಪಿಡಿ 2019–2020

**ಸಂವ್ಯಶಾಇ 04 ವೈಪಿಸಿ 2019**

ಸಂಸದೀಯ ವ್ಯವಹಾರಗಳ ಇಲಾಖೆ

**ಮತ್ತು**

**ಸಾರ್ವಜನಿಕ ಶಿಕ್ಷಣ ಇಲಾಖೆ**

# ಪ್ರೌಢ ಶಾಲಾ ವಿದ್ಯಾರ್ಥಿಗಳಿಗೆ ನಡೆಸಲಾಗುತ್ತಿರುವ ಜಿಲ್ಲಾ ಮತ್ತು ರಾಜ್ಯ ಮಟ್ಟದ ಯುವ ಸಂಸತ್ ಸ್ಪರ್ಧೆ 2019–2020

# ಮಾಹಿತಿ ಕೈಪಿಡಿ 2019–2020

**ಸಂವ್ಯಶಾಇ 04 ವೈಪಿಸಿ 2019**

# ವಿಷಯಸೂಚಿ


| ಕ್ರಮ ಸಂಖ್ಯೆ | ವಿಷಯಗಳು | ಪುಟ ಸಂಖ್ಯೆ |
|---|---|---|
| 1 | ಕೇಂದ್ರಾಡಳಿತ ಪ್ರದೇಶಗಳಿಗೆ ಹಣಕಾಸಿನ ನೆರವು ಯೋಜನೆ – ಭಾರತ ಸರ್ಕಾರದ ಸಂಸದೀಯ ವ್ಯವಹಾರಗಳ ಮಂತ್ರಾಲಯದ ಪತ್ರ | 1–2 |
| 2 | ರಾಜ್ಯಗಳು/ಕೇಂದ್ರಾಡಳಿತ ಪ್ರದೇಶಗಳಲ್ಲಿನ ಮಾನ್ಯತೆ ಪಡೆದ ಪ್ರೌಢ ಶಾಲೆಗಳಲ್ಲಿ ಯುವ ಸಂಸತ್ ಸ್ಪರ್ಧೆಯನ್ನು ವ್ಯವಸ್ಥೆಗೊಳಿಸುವುದಕ್ಕಾಗಿ ರಾಜ್ಯ ಸರ್ಕಾರಗಳು/ ಕೇಂದ್ರಾಡಳಿತ ಪ್ರದೇಶಗಳಿಗೆ ಹಣಕಾಸಿನ ನೆರವು ಯೋಜನೆ | 3–7 |
| 3 | ಪ್ರಮಾಣ ಪತ್ರಗಳು (ಅನುಬಂಧ I ರಿಂದ III ) | 8–11 |
| 4 | 2019–20ನೇ ಸಾಲಿನಲ್ಲಿ ಪ್ರೌಢ ಶಾಲೆ ವಿದ್ಯಾರ್ಥಿಗಳಿಗೆ ಜಿಲ್ಲಾ ಮತ್ತು ರಾಜ್ಯ ಮಟ್ಟದ ಯುವ ಸಂಸತ್ ಸ್ಪರ್ಧೆ ಕಾರ್ಯಕ್ರಮಗಳನ್ನು ನಡೆಸುವ ಬಗ್ಗೆ ಸಂಸದೀಯ ವ್ಯವಹಾರಗಳ ಇಲಾಖೆಯು ನೀಡಿರುವ ಮಾರ್ಗಸೂಚಿಗಳು | 12–13 |
| 5 | ಜಿಲ್ಲಾ ಮಟ್ಟದ ಯುವ ಸಂಸತ್ ಸ್ಪರ್ಧೆಯ ಮಾರ್ಗಸೂಚಿಗಳು | 14–17 |
| 6 | ಮಾದರಿ ಕಾರ್ಯಕ್ರಮಗಳು (ಅನುಬಂಧ–ಎ) | 18 |
| 7 | ಕಡ್ಡಾಯ ಹಾಗೂ ಐಚ್ಛಿಕ ವಿಷಯಗಳ ಪಟ್ಟಿ (ಅನುಬಂಧ–ಬಿ) | 19 |
| 8 | ಜಿಲ್ಲಾ ಮಟ್ಟದ ಯುವ ಸಂಸತ್ ಸ್ಪರ್ಧೆಯಲ್ಲಿ ಭಾಗವಹಿಸಿದ ಶಾಲೆಗೆ ಮತ್ತು ಬಹುಮಾನಿತರಿಗೆ ನೀಡುವ ಪ್ರಮಾಣ ಪತ್ರಗಳ ನಮೂನೆ (ಅನುಬಂಧ IV, V) | 20–21 |
| 9 | ಕರ್ನಾಟಕ ರಾಜ್ಯದ ಪ್ರೌಢ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ನಡೆಸುವ ಯುವ ಸಂಸತ್ ಸ್ಪರ್ಧೆಗೆ ಪೂರಕವಾಗಿ ಸಂಸತ್ ಕಾರ್ಯಕಲಾಪಗಳ ಬಗೆಗೆ ಕೆಲವು ವಿಶೇಷ ಮಾಹಿತಿಗಳು | 22–23 |
| 10 | ಕರ್ನಾಟಕ ವಿಧಾನ ಸಭೆಯ ಮಾದರಿ ಕಾರ್ಯಕಲಾಪಗಳ ಪಟ್ಟಿ (ಅನುಬಂಧ–VI) | 24–25 |
| 11 | ಕರ್ನಾಟಕ ವಿಧಾನ ಪರಿಷತ್ತಿನ ಮಾದರಿ ಕಾರ್ಯಕಲಾಪಗಳ ಪಟ್ಟಿ | 26 |
| 12 | ಮಾದರಿ ಸಂತಾಪ ಸೂಚನೆಗಳು (ಅನುಬಂಧ – VII) | 27–28 |
| 13 | ಸದನದಲ್ಲಿ ಉತ್ತರಿಸುವ (ಚುಕ್ಕೆ ಗುರುತಿನ) ಹಾಗೂ ಲಿಖಿತ ಮೂಲಕ ಉತ್ತರಿಸುವ (ಚುಕ್ಕೆ ಗುರುತಿಲ್ಲದ) ಪ್ರಶ್ನೆಗಳ ಹಾಗೂ ಉತ್ತರಗಳ ಕೆಲವು ಮಾದರಿಗಳು (ಅನುಬಂಧ–VIII) | 29–56 |
| 14 | ಶಾಸನ ರಚನೆ – ಮಾದರಿ ವಿಧೇಯಕ | 57–70 |
| 15 | ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಮತ್ತು ನಡವಳಿಕೆಯ ನಿಯಮಗಳ ನಿಯಮ 324 ರಿಂದ 351ರ ಉಧೃತ ಭಾಗ (ಅನುಬಂಧ– X) | 71–78 |
| 16 | ತೀರ್ಪುಗಾರರ ಮಾದರಿ ಅಂಕಪಟ್ಟಿ | 79 |
| 17 | ಜಿಲ್ಲಾ ಮಟ್ಟದಲ್ಲಿ ಭಾಗವಹಿಸಿದ ಸ್ಪರ್ಧಾರ್ಥಿಗಳ ಪಟ್ಟಿ – (ಶಾಲೆಯ ಹೆಸರು, ಸ್ಪರ್ಧಾರ್ಥಿಗಳ ಹೆಸರು) | 80 |

**ಸಂಖ್ಯೆ: ಎಫ್ 3(3) 2008–ವೈಪಿ**

**ಭಾರತ ಸರ್ಕಾರ**

**ಸಂಸದೀಯ ವ್ಯವಹಾರಗಳ ಮಂತ್ರಾಲಯ**

92, ಸಂಸತ್ ಭವನ,
ನವದೆಹಲಿ – 110001
ದಿನಾಂಕ 12.05.2009

**ಇವರಿಗೆ,**

ಮಾನ್ಯ ಮುಖ್ಯ ಕಾರ್ಯದರ್ಶಿಗಳು,
ಕರ್ನಾಟಕ ಸರ್ಕಾರ,
ಬೆಂಗಳೂರು.

**ಮಾನ್ಯರೆ,**

ಮಾನ್ಯತೆ ಪಡೆದ ಪ್ರೌಢ ಶಾಲೆಗಳಲ್ಲಿ 'ಯುವ ಸಂಸತ್ ಸ್ಪರ್ಧೆಗಳನ್ನು' ನಡೆಸುವುದಕ್ಕಾಗಿ ರಾಜ್ಯಗಳಿಗೆ/ಕೇಂದ್ರಾಡಳಿತ ಪ್ರದೇಶಗಳಿಗೆ ಭಾರತ ಸರ್ಕಾರದ ಸಂಸದೀಯ ವ್ಯವಹಾರಗಳ ಮಂತ್ರಾಲಯವು ಹಣಕಾಸು ನೆರವನ್ನು ಒದಗಿಸುತ್ತಾ ಇದೆ ಎಂಬ ಅಂಶವನ್ನು ತಮಗೆ ತಿಳಿಸಲು ನಾನು ನಿರ್ದೇಶಿತನಾಗಿದ್ದೇನೆ. 2008ರ ಫೆಬ್ರವರಿ 4–5ನೇ ದಿನಾಂಕಗಳಂದು ಮುಂಬೈನಲ್ಲಿ ನಡೆದ 14ನೇ ಅಖಿಲ ಭಾರತ ಸಚೇತಕರ ಸಮ್ಮೇಳನವು, ಇತರೆ ವಿಷಯಗಳ ಜೊತೆಯಲ್ಲಿ ಸಂಸದೀಯ ವ್ಯವಹಾರಗಳ ಮಂತ್ರಾಲಯವು ಒದಗಿಸುತ್ತಿರುವ ಹಣಕಾಸು ನೆರವಿನ ಪ್ರಮಾಣವನ್ನು ಈ ಮುಂದಿನಂತೆ ಹೆಚ್ಚಿಸತಕ್ಕದ್ದೆಂದು ಶಿಫಾರಸ್ಸು ಮಾಡಿದೆ.

| | | |
|---|---|---|
| (ಎ) | 100ರವರೆಗೆ ಸದಸ್ಯರುಗಳನ್ನು ಹೊಂದಿರುವ ವಿಧಾನಮಂಡಲಗಳಿಗೆ | ವರ್ಷಕ್ಕೆ 3 ಲಕ್ಷ ರೂಪಾಯಿಗಳು |
| (ಬಿ) | 100ರಿಂದ 200ರ ನಡುವೆ ಸದಸ್ಯರುಗಳನ್ನು ಹೊಂದಿರುವ ವಿಧಾನಮಂಡಲಗಳು | ವರ್ಷಕ್ಕೆ 4 ಲಕ್ಷ ರೂಪಾಯಿಗಳು |
| (ಸಿ) | 200ಕ್ಕೂ ಹೆಚ್ಚು ಸದಸ್ಯರುಗಳನ್ನು ಹೊಂದಿರುವ ವಿಧಾನಮಂಡಲಗಳು | ವರ್ಷಕ್ಕೆ 5 ಲಕ್ಷ ರೂಪಾಯಿಗಳು |

(ವಿಧಾನಮಂಡಲಗಳನ್ನು ಹೊಂದಿರದ ಕೇಂದ್ರಾಡಳಿತ ಪ್ರದೇಶಗಳ ಸಂಬಂಧದಲ್ಲಿ ಮಿತಿಯು ಈ ಹಿಂದೆ ಇದ್ದಂತೆಯೇ ಇರತಕ್ಕದ್ದು ಎಂದರೆ, ಪ್ರತಿಯೊಂದು ಕೇಂದ್ರಾಡಳಿತ ಪ್ರದೇಶಕ್ಕೆ ಪ್ರತಿವರ್ಷಕ್ಕೆ 5,00,000/– ರೂಪಾಯಿಗಳು)

ಈ ವಿಷಯವನ್ನು ಭಾರತ ಸರ್ಕಾರವು ಹಣಕಾಸು ಮಂತ್ರಾಲಯದೊಡನೆ ಸಮಾಲೋಚಿಸಿದೆ ಮತ್ತು ಪ್ರಸಕ್ತ ವರ್ಷದಿಂದ ಎಂದರೆ, 2009–2010ರಿಂದ 14ನೇ ಅಖಿಲ ಭಾರತ ಸಚೇತಕರ ಸಮ್ಮೇಳನದಲ್ಲಿ ಶಿಫಾರಸ್ಸು ಮಾಡಿರುವಂತೆ ಹಣಕಾಸು ನೆರವನ್ನು ಹೆಚ್ಚಿಸಲು ತೀರ್ಮಾನಿಸಿದೆ.

2. ಹಣಕಾಸು ನೆರವಿನ ಯೋಜನೆಯ ಒಂದು ಪ್ರತಿಯನ್ನು ಇದರೊಂದಿಗೆ ಲಗತ್ತಿಸಲಾಗಿದೆ. ಸ್ಪರ್ಧೆಗಳನ್ನು ನಡೆಸುವಲ್ಲಿ ವಹಿಸಲಾದ ವೆಚ್ಚಗಳನ್ನು ಮರುಸಂದಾಯಕ್ಕಾಗಿ ಪ್ರಸ್ತಾವಗಳನ್ನು ಈ ಮಂತ್ರಾಲಯವು ಕ್ಲೇಮುಗಳ ಬಗ್ಗೆ ಶೀಘ್ರವಾಗಿ ಕ್ರಮ ಕೈಗೊಳ್ಳುವುದು ಸಾಧ್ಯವಾಗುವಂತೆ ಯೋಜನೆಯ ಅನುಬಂಧ–III ರಲ್ಲಿ ನಿರ್ದಿಷ್ಟಪಡಿಸಲಾದ

ನಮೂನೆಯಲ್ಲಿ ಮಾತ್ರವೇ ಈ ಮಂತ್ರಾಲಯಕ್ಕೆ ಕಳುಹಿಸಬೇಕೆಂದು ಕೋರಲಾಗಿದೆ. ಮರುಸಂದಾಯದ ಕ್ಲೇಮನ್ನು ಮಾಡುವಾಗ ಮೂಲ ಓಚರುಗಳು/ಬಿಲ್ಲುಗಳನ್ನು ಈ ಮಂತ್ರಾಲಯಕ್ಕೆ ಒದಗಿಸುವ ಅವಶ್ಯಕತೆ ಇರುವುದಿಲ್ಲ.

3. ಪರಿಷ್ಕೃತ ಹಣಕಾಸು ನೆರವು ಯೋಜನೆಯ ವಿವರಗಳು ಅಧಿಕೃತ ವೆಬ್‌ಸೈಟ್ ಎಂದರೆ, www.mpa.nic.in ನಲ್ಲಿಯೂ ಲಭ್ಯವಿದೆ.

4. ಇದನ್ನು ಸಂಸದೀಯ ವ್ಯವಹಾರಗಳ ಮಂತ್ರಾಲಯದ ಕಾರ್ಯದರ್ಶಿಗಳ ಅನುಮೋದನೆಯೊಡನೆ ಹೊರಡಿಸಲಾಗಿದೆ.

ತಮ್ಮ ವಿಶ್ವಾಸಿ,

ಸಹಿ/–

(ಆರ್.ಸಿ. ಮೊಹಂತಿ)
ಭಾರತ ಸರ್ಕಾರದ ಅಧೀನ ಕಾರ್ಯದರ್ಶಿ,
ದೂರವಾಣಿ: 011–23034761
ಫ್ಯಾಕ್ಸ್: 23018220

## ರಾಜ್ಯಗಳು/ಕೇಂದ್ರಾಡಳಿತ ಪ್ರದೇಶಗಳಲ್ಲಿನ ಮಾನ್ಯತೆ ಪಡೆದ ಪ್ರೌಢ ಶಾಲೆಗಳಲ್ಲಿ ಯುವ ಸಂಸತ್ ಸ್ಪರ್ಧೆಯನ್ನು ಏರ್ಪಡಿಸುವುದಕ್ಕಾಗಿ ರಾಜ್ಯ ಸರ್ಕಾರಗಳು /ಕೇಂದ್ರಾಡಳಿತ ಪ್ರದೇಶಗಳಿಗೆ ಹಣಕಾಸು ನೆರವು ಯೋಜನೆ.

### ಪೀಠಿಕೆ

ಶೈಕ್ಷಣಿಕ ಸಂಸ್ಥೆಗಳಲ್ಲಿ ಯುವ ಸಂಸತ್ ಸ್ಪರ್ಧೆಗಳನ್ನು ಏರ್ಪಡಿಸಿ ನಡೆಸುವ ಪರಿಕಲ್ಪನೆ 1962 ರಲ್ಲಿ ಮುಂಬಯಿಯಲ್ಲಿ ನಡೆದ ನಾಲ್ಕನೇ ಅಖಿಲ ಭಾರತ ಸಚೇತಕರ ಸಮ್ಮೇಳನದಲ್ಲಿ ರೂಪ ತಳೆಯಿತು. ಸದರಿ ಸಮ್ಮೇಳನದಲ್ಲಿ ಇತರೆ ವಿಷಯಗಳ ಜೊತೆಗೆ ಈ ಮುಂದಿನ ಶಿಫಾರಸುಗಳನ್ನು ಮಾಡಲಾಯಿತು:-

"ಈ ಸಮಿತಿಯು, ಅಣಕು ಸಂಸತ್ ಕಾರ್ಯಕ್ರಮಗಳನ್ನು ಶೈಕ್ಷಣಿಕ ಸಂಸ್ಥೆಗಳಲ್ಲಿ ಮತ್ತು ಪಂಚಾಯತಿಗಳ ಮೂಲಕ ಗ್ರಾಮೀಣ ಪ್ರದೇಶಗಳಲ್ಲಿ ನಡೆಸಲು ಸರ್ಕಾರವು ಪ್ರೋತ್ಸಾಹಿಸತಕ್ಕದ್ದೆಂದು ಶಿಫಾರಸು ಮಾಡುತ್ತದೆ".

ಮೇಲ್ಕಂಡ ಶಿಫಾರಸುಗಳನ್ನು 1966 ರಲ್ಲಿ ಬೆಂಗಳೂರಿನಲ್ಲಿ ನಡೆದ ಐದನೇ ಅಖಿಲ ಭಾರತ ಸಚೇತಕರ ಸಮ್ಮೇಳನವು ಈ ಮುಂದೆ ಹೇಳಿರುವಂತೆ ಪುನರುಚ್ಚರಿಸಿತು:-

"ಮುಂಬಯಿಯಲ್ಲಿ ನಡೆದ ನಾಲ್ಕನೇ ಅಖಿಲ ಭಾರತ ಸಚೇತಕರ ಸಮ್ಮೇಳನವು, ಜನಪ್ರತಿನಿಧಿ ಸಂಸ್ಥೆಗಳ ಪಾತ್ರದ ಬಗ್ಗೆ ಅರಿವು ಮೂಡಿಸಲು ಗ್ರಾಮ ಪಂಚಾಯತಿಗಳಲ್ಲಿ ಅಣಕು ಸಂಸತ್ ಕಾರ್ಯಕ್ರಮಗಳನ್ನು ನಡೆಸಬೇಕೆಂದು ಶಿಫಾರಸು ಮಾಡಿತ್ತು. ಈ ಶಿಫಾರಸುಗಳನ್ನು ಕೆಲವು ರಾಜ್ಯಗಳಲ್ಲಿ ಜಾರಿಗೆ ತಂದಿರುವುದಿಲ್ಲ ಎಂಬುದನ್ನು ಈ ಸಮ್ಮೇಳನವು ಗಮನಿಸಿದೆ. ಸಮ್ಮೇಳನವು, ಸಂಬಂಧಪಟ್ಟ ರಾಜ್ಯ ಸರ್ಕಾರಗಳು ತಮ್ಮ ತೀರ್ಮಾನಗಳನ್ನು ಮರುಪರಿಶೀಲಿಸುವಂತೆ ಅವುಗಳ ಮನವೊಲಿಸಬೇಕೆಂದು ಪುನರುಚ್ಚರಿಸುತ್ತದೆ."

ಮೇಲ್ಕಂಡ ಶಿಫಾರಸುಗಳಿಗನುಸಾರ, ಸಂಸದೀಯ ವ್ಯವಹಾರಗಳ ಮಂತ್ರಾಲಯವು ಅಣಕು ಸಂಸತ್ (ಈಗ "ಯುವ ಸಂಸತ್") ಸ್ಪರ್ಧೆಯ ಯೋಜನೆಯ ವಿವರಗಳನ್ನು ತಯಾರಿಸಿತು ಮತ್ತು ಅದನ್ನು ಪ್ರಾಯೋಗಿಕ ರೂಪದಲ್ಲಿ ನಡೆಸುವ ಉದ್ದೇಶದಿಂದ ದೆಹಲಿಯ ಪ್ರೌಢ ಶಾಲೆಗಳಲ್ಲಿ ಸ್ಪರ್ಧೆಗಳನ್ನು ಪ್ರಾರಂಭಿಸಲು ತೀರ್ಮಾನಿಸಿತು.

1967 ರಲ್ಲಿ ಸಿಮ್ಲಾದಲ್ಲಿ ಮತ್ತು 1969 ರಲ್ಲಿ ಮದ್ರಾಸಿನಲ್ಲಿ ಅನುಕ್ರಮವಾಗಿ ನಡೆದ ಆರು ಮತ್ತು ಏಳನೇ ಅಖಿಲಭಾರತ ಸಚೇತಕರ ಸಮ್ಮೇಳನದಲ್ಲಿ ಈ ಮುಂದಿನ ಶಿಫಾರಸುಗಳನ್ನು ಮಾಡಲಾಯಿತು:-

"ದೆಹಲಿಯ ಶಾಲೆಗಳಲ್ಲಿ "ಯುವ ಸಂಸತ್" ಕಾರ್ಯಕ್ರಮವನ್ನು ಉತ್ತೇಜಿಸುವುದಕ್ಕಾಗಿ ಸಂಸದೀಯ ವ್ಯವಹಾರಗಳ ಮಂತ್ರಾಲಯವು ಮಾಡಿರುವ ಉತ್ತಮ ಕಾರ್ಯವನ್ನು ಪ್ರಶಂಸಿಸುತ್ತಾ, ಉಳಿದ ರಾಜ್ಯಗಳು ಸಹ ತಮ್ಮ ತಮ್ಮ ರಾಜ್ಯಗಳಲ್ಲಿ ಈ ಯೋಜನೆಯನ್ನು ಅಳವಡಿಸಲು ವ್ಯವಸ್ಥೆಯನ್ನು ಮಾಡತಕ್ಕದ್ದೆಂದು ಸಮ್ಮೇಳನವು ಆಗ್ರಹಪೂರ್ವಕವಾಗಿ ಶಿಫಾರಸು ಮಾಡುತ್ತದೆ. [6ನೇ ಅಖಿಲ ಭಾರತ ಸಚೇತಕರ ಸಮ್ಮೇಳನ]"

"ದೆಹಲಿಯ ಶಾಲೆಗಳಲ್ಲಿ 'ಅಣಕು ಸಂಸತ್' ಯೋಜನೆಯ ಯಶಸ್ವಿ ಅನುಷ್ಠಾನವನ್ನು ಹಾಗೂ ಪ್ರಮುಖ ಸಂಸದರು, ಪತ್ರಿಕಾ ಮಾಧ್ಯಮಗಳು ಮತ್ತು ಶಿಕ್ಷಣ ತಜ್ಞರಿಂದ ಆ ಬಗ್ಗೆ ಬಂದ ವ್ಯಾಪಕ ಮೆಚ್ಚುಗೆಯನ್ನು ಗಮನದಲ್ಲಿಟ್ಟುಕೊಂಡು ಮತ್ತು ರಾಷ್ಟ್ರದಲ್ಲಿ ಸುಭದ್ರ ಸಂಸದೀಯ ಪದ್ಧತಿಯನ್ನು ಅನುಷ್ಠಾನಗೊಳಿಸುವ ದೃಷ್ಟಿಯಿಂದ ಸಮ್ಮೇಳನವು ಈ ಮುಂದಿನ ಶಿಫಾರಸ್ಸುಗಳನ್ನು ಮಾಡುತ್ತದೆ.-

(ಎ) ಸಂಸದೀಯ ವ್ಯವಹಾರಗಳ ಕೇಂದ್ರ ಮಂತ್ರಾಲಯವು ಅನುಸರಿಸಿದ ಮಾದರಿಯನ್ನೇ ಅನುಸರಿಸಿ ಎಲ್ಲಾ ರಾಜ್ಯಗಳು/ಕೇಂದ್ರಾಡಳಿತ ಪ್ರದೇಶಗಳು ತಮ್ಮ ತಮ್ಮ ರಾಜ್ಯ/ಕೇಂದ್ರಾಡಳಿತ ಪ್ರದೇಶಗಳಲ್ಲಿ ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮಕೈಗೊಳ್ಳತಕ್ಕದ್ದು;

(ಬಿ)ಸಂಸದೀಯ ವ್ಯವಹಾರಗಳ ಕೇಂದ್ರ ಮಂತ್ರಾಲಯವು, ಅಗತ್ಯವಿದ್ದಲ್ಲಿ ಹಣಕಾಸು ನೆರವನ್ನು ನೀಡುವ ಮೂಲಕ ಯೋಜನೆಯನ್ನು ಜಾರಿಗೆ ತರಲು ರಾಜ್ಯಗಳು/ಕೇಂದ್ರಾಡಳಿತ ಪ್ರದೇಶಗಳಿಗೆ ಎಲ್ಲಾ ಬಗೆಯ ಪ್ರೋತ್ಸಾಹಗಳನ್ನು ನೀಡತಕ್ಕದ್ದು; ಮತ್ತು

(ಸಿ) ಸಂಸದೀಯ ವ್ಯವಹಾರಗಳ ಕೇಂದ್ರ ಮಂತ್ರಾಲಯವು, ಯೋಜನೆಯನ್ನು ಈಗಾಗಲೇ ಜಾರಿಗೊಳಿಸಿರುವ ರಾಜ್ಯಗಳು/ಕೇಂದ್ರಾಡಳಿತ ಪ್ರದೇಶಗಳ ನಡುವೆ ಅಂತರ್ ರಾಜ್ಯ ಸ್ಪರ್ಧೆಗಳನ್ನು ಸಹ ವ್ಯವಸ್ಥೆಗೊಳಿಸತಕ್ಕದ್ದು. [7ನೇ ಅಖಿಲ ಭಾರತ ಸಚೇತಕರ ಸಮ್ಮೇಳನ]"

7ನೇ ಅಖಿಲ ಭಾರತ ಸಚೇತಕರ ಸಮ್ಮೇಳನವು ಮಾಡಿದ ಮೇಲ್ಕಂಡ ಶಿಫಾರಸುಗಳ (ಬಿ) ಭಾಗದ ಪಾಲನೆಯಲ್ಲಿ, ಭಾರತ ಸರ್ಕಾರದ ಸಂಸದೀಯ ವ್ಯವಹಾರಗಳ ಮಂತ್ರಾಲಯವು, ರಾಜ್ಯಗಳು/ಕೇಂದ್ರಾಡಳಿತ ಪ್ರದೇಶಗಳಲ್ಲಿನ ಮಾನ್ಯತೆ ಪಡೆದ ಪ್ರೌಢ ಶಾಲೆಗಳಲ್ಲಿ ಯುವ ಸಂಸತ್ ಸ್ಪರ್ಧೆಯನ್ನು ವ್ಯವಸ್ಥೆಗೊಳಿಸುವುದಕ್ಕಾಗಿ – ರಾಜ್ಯ ಸರ್ಕಾರಗಳು/ಕೇಂದ್ರಾಡಳಿತ ಪ್ರದೇಶಗಳಿಗೆ ಹಣಕಾಸು ನೆರವು ನೀಡುವುದಕ್ಕಾಗಿ ಈ ಯೋಜನೆಯನ್ನು ರೂಪಿಸಿದೆ.

1. **ಯೋಜನೆಯ ಉದ್ದೇಶ**:– ಪ್ರಜಾಪ್ರಭುತ್ವದ ಬುನಾದಿಯನ್ನು ಭದ್ರಪಡಿಸುವ, ಶಿಸ್ತು, ಇತರರ ಅಭಿಪ್ರಾಯಗಳ ಬಗ್ಗೆ ತಾಳ್ಮೆ ಮುಂತಾದ ಆರೋಗ್ಯಕರ ಗುಣ ವಿಶೇಷಗಳನ್ನು ಮೈಗೂಡಿಸುವ ಮತ್ತು ವಿದ್ಯಾರ್ಥಿ ಸಮುದಾಯದಲ್ಲಿ ಸಂಸತ್ ಕಾರ್ಯ ಕಲಾಪದ ಬಗ್ಗೆ ಅರಿವು ಮೂಡಿಸುವ ಉದ್ದೇಶದಿಂದ, ಭಾರತ ಸರ್ಕಾರದ ಸಂಸದೀಯ ವ್ಯವಹಾರಗಳ ಮಂತ್ರಾಲಯವು, ದೆಹಲಿಯಲ್ಲಿರುವ ಮಾನ್ಯತೆ ಪಡೆದ ಶಿಕ್ಷಣ ಸಂಸ್ಥೆಗಳಲ್ಲಿ – "ಯುವ ಸಂಸತ್" ನ ಸ್ಪರ್ಧೆಯಲ್ಲಿ ಭಾಗವಹಿಸಲಿಚ್ಛಿಸುವಂಥ ಮತ್ತು ದೆಹಲಿಯ ಎನ್‌ಸಿಟಿ ಸರ್ಕಾರದ ಶಿಕ್ಷಣ ನಿರ್ದೇಶನಾಲಯವು ಪ್ರಾಯೋಜಿಸಿದಂಥ ಶಾಲೆಗಳ ನಡುವೆ ಪ್ರತಿವರ್ಷ "ಯುವ ಸಂಸತ್ ಸ್ಪರ್ಧೆ" ನಡೆಸುತ್ತಾ ಬಂದಿದೆ. ರಾಜ್ಯ ಸರ್ಕಾರಗಳು/ಕೇಂದ್ರಾಡಳಿತ ಪ್ರದೇಶಗಳ ಸರ್ಕಾರಗಳು, ಇಂಥವೇ ಸ್ಪರ್ಧೆಗಳನ್ನು ತಮ್ಮ ಮಾನ್ಯತೆ ಪಡೆದ ಶಾಲೆಗಳಲ್ಲಿ ನಡೆಸಲು ಹಣಕಾಸು ನೆರವನ್ನು ನೀಡುವುದೇ ಈ ಯೋಜನೆಯ ಉದ್ದೇಶ.

2. **ಯೋಜನೆಯ ಕಾರ್ಯಾಚರಣೆ**:– ಈ ಯೋಜನೆಯನ್ನು ಸಂಬಂಧಪಟ್ಟ ರಾಜ್ಯ/ಕೇಂದ್ರಾಡಳಿತ ಪದೇಶಗಳಲ್ಲಿನ ಸಾರ್ವಜನಿಕ ಶಿಕ್ಷಣ ನಿರ್ದೇಶಕರ ಸಹಯೋಗದೊಂದಿಗೆ ಸಂಬಂಧಪಟ್ಟ ರಾಜ್ಯದ/ಕೇಂದ್ರಾಡಳಿತ ಪದೇಶದ ಸರ್ಕಾರದ ಸಂಸದೀಯ ವ್ಯವಹಾರಗಳ ಇಲಾಖೆಯ ಮೂಲಕ ನಿರ್ವಹಿಸಲಾಗುವುದು. ಸಂಸದೀಯ ವ್ಯವಹಾರಗಳ ಇಲಾಖೆಯು ಇಲ್ಲದಿರುವ ರಾಜ್ಯ/ಕೇಂದ್ರಾಡಳಿತ ಪ್ರದೇಶದಲ್ಲಿ, ಯೋಜನೆಯನ್ನು ಸಾರ್ವಜನಿಕ ಶಿಕ್ಷಣ ನಿರ್ದೇಶನಾಲಯ ನೇರವಾಗಿ ಕಾರ್ಯಗತಗೊಳಿಸುತ್ತದೆ.

3. **ಸ್ಪರ್ಧೆಯಲ್ಲಿ ಭಾಗವಹಿಸುವುದಕ್ಕೆ ಅರ್ಹತೆ**:– ಸಂಬಂಧಪಟ್ಟ ರಾಜ್ಯ/ಕೇಂದ್ರಾಡಳಿತ ಪ್ರದೇಶದ ಮಾನ್ಯತೆ ಪಡೆದ ಎಲ್ಲಾ ಹೈಯರ್ ಸೆಕೆಂಡರಿ ಸಂಸ್ಥೆಗಳು/ಪ್ರೌಢ ಶಾಲೆಗಳು ಸ್ಪರ್ಧೆಯಲ್ಲಿ ಭಾಗವಹಿಸಲು ಅರ್ಹತೆ ಹೊಂದಿವೆಯೆಂದು ಪರಿಗಣಿಸಬಹುದು. ಭಾಗವಹಿಸುವ ಶಾಲೆಗಳ ಪಟ್ಟಿಯನ್ನು, ಪ್ರತಿವರ್ಷದ ಮಾರ್ಚ್ 31ರೊಳಗೆ ಸಂದರ್ಭಾನುಸಾರ, ಸಂಬಂಧಪಟ್ಟ ರಾಜ್ಯದ/ಕೇಂದ್ರಾಡಳಿತ ಪ್ರದೇಶದ ಸಂಸದೀಯ ವ್ಯವಹಾರಗಳ ಇಲಾಖೆ ಅಥವಾ ಸಾರ್ವಜನಿಕ ಶಿಕ್ಷಣ ನಿರ್ದೇಶನಾಲಯ ಅಂತಿಮಗೊಳಿಸುತ್ತವೆ.

4. **ಯುವ ಸಂಸತ್ ಸ್ಪರ್ಧೆಯನ್ನು ನಡೆಸುವ ಅವಧಿ**:– "ಯುವ ಸಂಸತ್ ಸ್ಪರ್ಧೆ" ಯನ್ನು, ಪ್ರತಿವರ್ಷವು ನಡೆಸಲಾಗುವುದು. ಈ ಬಗ್ಗೆ ಸವಿವರ ಕಾರ್ಯಕ್ರಮವನ್ನು ಸಂಬಂಧಪಟ್ಟ ರಾಜ್ಯ/ಕೇಂದ್ರಾಡಳಿತ ಪ್ರದೇಶದ ಸಂಸದೀಯ ವ್ಯವಹಾರಗಳ ಇಲಾಖೆ, ಸಾರ್ವಜನಿಕ ಶಿಕ್ಷಣ ನಿರ್ದೇಶನಾಲಯ ರೂಪಿಸತಕ್ಕದ್ದು ಮತ್ತು ವಾರ್ಷಿಕ ಸ್ಪರ್ಧೆಯಲ್ಲಿ ಭಾಗವಹಿಸಲಿರುವ ಸಂಸ್ಥೆಗಳಿಗೆ

ಸುತ್ತೋಲೆ ಮೂಲಕ ತಿಳಿಸತಕ್ಕದ್ದು. ಸದರಿ ವಿಷಯವನ್ನು ನವದೆಹಲಿಯ ಭಾರತ ಸರ್ಕಾರದ ಸಂಸದೀಯ ವ್ಯವಹಾರ ಮಂತ್ರಾಲಯಕ್ಕೂ ತಿಳಿಸತಕ್ಕದ್ದು.

5. **ಯುವ ಸಂಸತ್ತಿನಲ್ಲಿ ಭಾಗವಹಿಸುವವರ ಸಂಖ್ಯೆ:–** ಪ್ರತಿಯೊಂದು ಶಾಲೆಯಲ್ಲಿ "ಯುವ ಸಂಸತ್ ಸ್ಪರ್ಧೆಯನ್ನು" ನಡೆಸುವುದಕ್ಕಾಗಿ ಬೇಕಾಗುವ ವಿದ್ಯಾರ್ಥಿಗಳ ಸಂಖ್ಯೆಗೆ ಯಾವುದೇ ಮಿತಿ ಇಲ್ಲ. ಆದಾಗ್ಯೂ, ಅಧಿವೇಶನದ ಅವಧಿಯನ್ನು ಸೀಮಿತಗೊಳಿಸುವುದು ಅಪೇಕ್ಷಣೀಯವಾಗಿರುವ ಕಾರಣ, ಭಾಗವಹಿಸಿರುವ ವಿದ್ಯಾರ್ಥಿಗಳಲ್ಲಿ ಹಲವರು ಸಂಸತ್ತಿನ ಅಧಿವೇಶನದ ಒಂದು ಚಿತ್ರಣವನ್ನು ಮೂಡಿಸುವುದಕ್ಕೆ ಮಾತ್ರವೇ ಸುಮ್ಮನೆ ಕುಳಿತುಕೊಂಡಿರಬೇಕಾಗುತ್ತದೆ ಮಾತ್ರವಲ್ಲದೆ ಅವರಿಗೆ ಮಾತನಾಡುವ ಅಗತ್ಯವಿರುವುದಿಲ್ಲ.

6. **ಯುವ ಸಂಸತ್ತಿನ ಅಧಿವೇಶನದ ಅವಧಿ:–** ಯುವ ಸಂಸತ್ತಿನ ಅಧಿವೇಶನದ ಅವಧಿಯು ಒಂದು ಗಂಟೆ ಅವಧಿಯನ್ನು ಮೀರತಕ್ಕದಲ್ಲ ಮತ್ತು ಇದರಲ್ಲಿ ಸುಮಾರು 20 ನಿಮಿಷಗಳ ಅವಧಿಯನ್ನು ಪ್ರಶ್ನೆಗಳಿಗೆ ಕಾಯ್ದಿರಿಸತಕ್ಕದ್ದು.

7. **ಯುವ ಸಂಸತ್ತಿನ ಅಧಿವೇಶನದಲ್ಲಿಯ ಚರ್ಚೆಯ ವಿಷಯ:–** ಪ್ರಶ್ನೋತ್ತರಗಳಿಗೆ ಅಥವಾ ಇತರ ಚರ್ಚೆಗೆ ಯಾವುದೇ ನಿರ್ದಿಷ್ಟ ವಿಷಯಗಳನ್ನು ಗೊತ್ತುಪಡಿಸಿರುವುದಿಲ್ಲ. ಆದಾಗ್ಯೂ, ಯುವ ಸಂಸತ್ತಿನಲ್ಲಿ ಕೇಳಲಾಗುವ ಪ್ರಶ್ನೆಗಳು, ಕ್ಷೇಮಾಭ್ಯುದಯ ಕಾರ್ಯ ಚಟುವಟಿಕೆಗಳು, ರಾಷ್ಟ್ರದ ರಕ್ಷಣೆ, ಸಾಮಾಜಿಕ ನ್ಯಾಯ, ಸಮಾಜ ಸುಧಾರಣೆಗಳು, ಆರ್ಥಿಕ ಅಭಿವೃದ್ಧಿ, ಮತೀಯ ಸಾಮರಸ್ಯ, ಆರೋಗ್ಯ, ವಿದ್ಯಾರ್ಥಿಗಳಲ್ಲಿ ಶಿಸ್ತು ಮುಂತಾದವುಗಳಿಗೆ ಸಂಬಂಧಿಸಿದ ವಿಷಯಗಳಾಗಿರುವುದು ಅಪೇಕ್ಷಣೀಯ.

8. **ಭಾಷೆ:–** ಭಾಗವಹಿಸುವವರು, ಕನ್ನಡ, ಹಿಂದಿ ಅಥವಾ ಇಂಗ್ಲಿಷ್ ಅಥವಾ ಸಂಬಂಧಪಟ್ಟ ರಾಜ್ಯ/ಕೇಂದ್ರಾಡಳಿತ ಪ್ರದೇಶದ ಸಂಸದೀಯ ವ್ಯವಹಾರಗಳ ಇಲಾಖೆ, ಸಾರ್ವಜನಿಕ ಶಿಕ್ಷಣ ನಿರ್ದೇಶನಾಲಯ ನಿರ್ದಿಷ್ಟಪಡಿಸಬಹುದಾದಂಥ ಪ್ರಾದೇಶಿಕ ಭಾಷೆಯಲ್ಲಿ ಮಾತನಾಡಬಹುದು.

9. **ಯುವ ಸಂಸತ್ ನಡೆಯುವ ಸ್ಥಳ:–** ಪ್ರತಿಯೊಂದು ಸಂಸ್ಥೆಯು, ಯುವ ಸಂಸತ್ ಸ್ಪರ್ಧೆಯನ್ನು ಸಾಧ್ಯವಾದಷ್ಟು ಮಟ್ಟಿಗೆ ತನ್ನದೇ ಆದ ಕಟ್ಟಡದಲ್ಲಿ ಅಥವಾ ತಾನು ಇಚ್ಛಿಸುವಂಥ ಯಾವುದೇ ಇತರ ಸ್ಥಳದಲ್ಲಿ ನಡೆಸತಕ್ಕದ್ದು. ಸ್ಪರ್ಧೆಯಲ್ಲಿ ಭಾಗವಹಿಸುವ ಸಂಸ್ಥೆಗಳು, ಸಂಬಂಧಪಟ್ಟ ರಾಜ್ಯದ ಸಂಸದೀಯ ವ್ಯವಹಾರಗಳ ಇಲಾಖೆಗೆ, ಸಾರ್ವಜನಿಕ ಶಿಕ್ಷಣ ನಿರ್ದೇಶನಾಲಯಕ್ಕೆ ಚರ್ಚೆಯ

ವಿಷಯಗಳ ಮಾಹಿತಿಯೊಂದಿಗೆ ಸ್ಪರ್ಧೆ ನಡಸುವ ಸ್ಥಳದ ವಿವರಗಳನ್ನು ಸ್ಪರ್ಧೆಯ ದಿನಾಂಕಕ್ಕಿಂತ ಹತ್ತು ದಿನಗಳ ಮೊದಲೇ ತಿಳಿಸತಕ್ಕದ್ದು.

10. **ಬಹುಮಾನಗಳು:–** ಈ ಮುಂದಿನ ಬಹುಮಾನಗಳನ್ನು ಇರಿಸಲಾಗಿದೆ:–

(i) ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಗಳಿಸಿದ ಸಂಸ್ಥೆಗೆ ಪಾರಿತೋಷಕ (ಸಂಸದೀಯ ಪಾರಿತೋಷಕ).

(ii) ಅರ್ಹತೆಯ ಆಧಾರದ ಮೇಲೆ ಸ್ಪರ್ಧೆಯಲ್ಲಿನ ಉತ್ತಮ ಗುಣಮಟ್ಟದ ಪ್ರದರ್ಶನಕ್ಕಾಗಿ ಮೊದಲ ಐದು ಸ್ಥಾನ ಪಡೆದ ಸಂಸ್ಥೆಗಳಿಗೆ ಟ್ರೋಫಿಗಳು.

(iii) ಪ್ರತಿಯೊಂದು ಸಂಸ್ಥೆಯಿಂದ ಭಾಗವಹಿಸಿರುವ ವಿದ್ಯಾರ್ಥಿಗಳಿಂದ ಆಯ್ಕೆ ಮಾಡಲಾದವರಿಗೆ ಪದಕಗಳು / ಕಪ್ಪುಗಳು/ಪುಸ್ತಕಗಳ ರೂಪದಲ್ಲಿ ವೈಯಕ್ತಿಕ ಬಹುಮಾನಗಳು. ಬಹುಮಾನಗಳ ಒಟ್ಟು ಸಂಖ್ಯೆಯು 80ನ್ನು ಮೀರತಕ್ಕದ್ದಲ್ಲ.

(iv) ಇತರೆ ವೆಚ್ಚಗಳು.

**ಸೂಚನೆ:–** ಸಂಬಂಧಪಟ್ಟ ರಾಜ್ಯದ/ಕೇಂದ್ರಾಡಳಿತ ಪ್ರದೇಶದ ಸಂಸದೀಯ ವ್ಯವಹಾರಗಳ ಇಲಾಖೆ, ಸಾರ್ವಜನಿಕ ಶಿಕ್ಷಣ ನಿರ್ದೇಶನಾಲಯ ಸ್ಥಳೀಯ ಪರಿಸ್ಥಿತಿಗಳಿಗೆ ಅನುಸಾರವಾಗಿ ಮೇಲಿನ ನಾಲ್ಕು ಬಾಬುಗಳಿಗೆ ಸಂಬಂಧಿಸಿದ ವೆಚ್ಚವನ್ನು ವ್ಯತ್ಯಾಸಗೊಳಿಸಬಹುದು. ಭಾರತ ಸರ್ಕಾರದ ಸಂಸದೀಯ ವ್ಯವಹಾರಗಳ ಮಂತ್ರಾಲಯದಿಂದ ಮರುಸಂದಾಯವಾಗುವ ಗರಿಷ್ಠ ಮೊಬಲಗು ವಾರ್ಷಿಕವಾಗಿ, ಯೋಜನೆಯ 15ನೇ ಕಂಡಿಕೆಯಲ್ಲಿ ಹೇಳಿರುವುದನ್ನು ಮೀರತಕ್ಕದ್ದಲ್ಲ.

ಪಾರಿತೋಷಕವು ಪರ್ಯಾಯ ಪಾರಿತೋಷಕವಾಗಿದ್ದು ಅದನ್ನು ಸ್ಪರ್ಧೆಯಲ್ಲಿ ಪ್ರಥಮ ಸ್ಥಾನವನ್ನು ಹೊಂದಿದ ಸಂಸ್ಥೆಯು ಒಂದು ವರ್ಷದವರೆಗೆ ಉಳಿಸಿಕೊಳ್ಳಬಹುದಾಗಿದೆ. ಆದಾಗ್ಯೂ, ಒಂದೇ ಸಂಸ್ಥೆಯು ಮೂರು ನಿರಂತರ ವರ್ಷಗಳು ಪಾರಿತೋಷಕವನ್ನು ಗೆದ್ದರೆ ಆ ಸಂಸ್ಥೆಯೇ ಅದನ್ನು ಖಾಯಂ ಆಗಿ ಇಟ್ಟುಕೊಳ್ಳುವುದು.

ಅನುಬಂಧ–I ರಲ್ಲಿ ಇದ್ದಂತೆ ಒಂದು ಪ್ರಮಾಣ ಪತ್ರವನ್ನು ಸ್ಪರ್ಧೆಯಲ್ಲಿ ಭಾಗವಹಿಸಿದ ಎಲ್ಲ ಸಂಸ್ಥೆಗಳಿಗೆ ನೀಡತಕ್ಕದ್ದು.

ಅನುಬಂಧ–2ರಲ್ಲಿ ಇದ್ದಂತೆ ಒಂದು ಪ್ರಮಾಣ ಪತ್ರವನ್ನು ಸ್ಪರ್ಧೆಯಲ್ಲಿ ವೈಯಕ್ತಿಕ ಬಹುಮಾನವನ್ನು ಪಡೆದ ಎಲ್ಲಾ ವಿದ್ಯಾರ್ಥಿಗಳಿಗೆ ನೀಡತಕ್ಕದ್ದು.

11. **ತೀರ್ಪುಗಾರರ ಸಮಿತಿ:–** ಪ್ರತಿಯೊಂದು ಸಂಸ್ಥೆಗಳ ಮೌಲ್ಯ ಮಾಪನಕ್ಕಾಗಿ ತೀರ್ಪುಗಾರರ ಸಮಿತಿಯನ್ನು ಸಂಬಂಧಿಸಿದ ರಾಜ್ಯ/ಕೇಂದ್ರಾಡಳಿತ ಪ್ರದೇಶಗಳ ಸಂಸದೀಯ ವ್ಯವಹಾರಗಳ ಇಲಾಖೆ, ಸಾರ್ವಜನಿಕ ಶಿಕ್ಷಣ ನಿರ್ದೇಶನಾಲಯ ರಚಿಸತಕ್ಕದ್ದು ಹಾಗೂ ಅದರಲ್ಲಿ ಶಿಕ್ಷಣ ತಜ್ಞರು ವಿಧಾನಸಭೆ/ಪರಿಷತ್ತಿನ ಸದಸ್ಯರು ಮತ್ತು ಸಂಸದೀಯ ಸಂಸ್ಥೆಗಳನ್ನು ನಡೆಸುವುದಕ್ಕೆ ಸಂಬಂಧಪಟ್ಟ ಇತರರನ್ನು ಒಳಗೊಂಡಿರಬಹುದು. ಸಾರ್ವಜನಿಕ ಶಿಕ್ಷಣ ನಿರ್ದೇಶನಾಲಯದ ಒಬ್ಬ ಅಧಿಕಾರಿಯು ಸಮಿತಿಯ ಪದನಿಮಿತ್ತ ಸದಸ್ಯರಾಗಿರತಕ್ಕದ್ದು.

12. **ಮೆರಿಟ್ ಪಟ್ಟಿಯನ್ನು ಸಿದ್ಧಪಡಿಸುವಾಗ ಪರಿಗಣಿಸಬೇಕಾದ ಅಂಶಗಳು.–** ಸ್ಪರ್ಧೆಯಲ್ಲಿ ಸಾಧನೆಯನ್ನು ನಿರ್ಧರಿಸುವಾಗ ಸಮಿತಿಯು, ಈ ಮುಂದಿನ ಅಂಶಗಳನ್ನು ಗಮನದಲ್ಲಿಟ್ಟು ಕೊಂಡಿರತಕ್ಕದ್ದು.

13. **ಮರು ಪದರ್ಶನ:–** ಪತಿ ವರ್ಷದ ಸ್ಪರ್ಧೆಗಳ ಮುಕ್ತಾಯದ ಸಂದರ್ಭದಲ್ಲಿ ಸಂಬಂಧಿಸಿದ ರಾಜ್ಯ/ಕೇಂದ್ರಾಡಳಿತ ಪ್ರದೇಶದ ಸಂಸದೀಯ ವ್ಯವಹಾರಗಳ ಇಲಾಖೆ, ಸಾರ್ವಜನಿಕ ಶಿಕ್ಷಣ ನಿರ್ದೇಶನಾಲಯ ನಿರ್ಧರಿಸಬಹುದಾದ ಸ್ಥಳ ಮತ್ತು ದಿನಾಂಕದಂದು ಸ್ಪರ್ಧೆಯ ಬಹುಮಾನ ವಿತರಣೆಯ ಸಮಾರಂಭದಲ್ಲಿ, ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಗಳಿಸಿದ ಸಂಸ್ಥೆಯು ಮತ್ತೊಮ್ಮೆ ಪ್ರದರ್ಶನ ಮಾಡುವಂತೆ ಅಗತ್ಯಪಡಿಸಬಹುದು.

14. **ವರದಿ:–** ಸಂಬಂಧಪಟ್ಟ ರಾಜ್ಯ/ಕೇಂದ್ರಾಡಳಿತ ಪ್ರದೇಶಗಳ ಸಂಸದೀಯ ವ್ಯವಹಾರಗಳ ಇಲಾಖೆ, ಸಾರ್ವಜನಿಕ ಶಿಕ್ಷಣ ನಿರ್ದೇಶನಾಲಯ ಸ್ಪರ್ಧೆಯು ಮುಗಿದ ಮೇಲೆ ಅನುಬಂಧ–IIIರಲ್ಲಿ ನಿಯಮಿಸಲಾದ ನಮೂನೆಯಲ್ಲಿ, ಅದರಲ್ಲಿ ಮೆರಿಟ್ ಆಧಾರದ ಮೇಲೆ, ಮೊದಲನೇ ಐದು ಸ್ಥಾನ ಪಡೆದ ಶಾಲೆಗಳೂ ಸೇರಿದಂತೆ

ಭಾಗವಹಿಸಿದ ಎಲ್ಲಾ ಶಾಲೆಗಳ ಸಂಖ್ಯೆಯನ್ನು ಸೂಚಿಸಿ ವೈಯಕ್ತಿಕ ಬಹುಮಾನಗಳ ಸಂಖ್ಯೆ ಮುಂತಾದವುಗಳನ್ನು ಒಳಗೊಂಡ ಒಂದು ವರದಿಯನ್ನು ತಯಾರಿಸತಕ್ಕದ್ದು. ವರದಿಯಲ್ಲಿ ಭಾರತ ಸರ್ಕಾರದ ಸಂಸದೀಯ ವ್ಯವಹಾರಗಳ ಮಂತ್ರಾಲಯವು ರಾಜ್ಯ/ಕೇಂದ್ರಾಡಳಿತ ಪ್ರದೇಶಗಳ ಸರ್ಕಾರಕ್ಕೆ ಮರುಸಂದಾಯ ಮಾಡಬೇಕಾದ ಮೊಬಲಗನ್ನು ಸ್ಪಷ್ಟವಾಗಿ ಮತ್ತು ಪ್ರತ್ಯೇಕವಾಗಿ ಸೂಚಿಸತಕ್ಕದ್ದು. ವರದಿಯನ್ನು ಸಂಬಂಧಿಸಿದ ರಾಜ್ಯ/ಕೇಂದ್ರಾಡಳಿತ ಪ್ರದೇಶದಲ್ಲಿ ಯೋಜನೆಯ ಪ್ರಭಾರವನ್ನು ಹೊಂದಿರುವ ಇಲಾಖೆಯ ಉಪ ಕಾರ್ಯದರ್ಶಿಯ ದರ್ಜೆಗಿಂತ ಕಡಿಮೆಯಲ್ಲದ ಪ್ರತಿನಿಧಿಯು ಸಹಿ ಮಾಡತಕ್ಕದ್ದು. ಚೆಕ್ಕನ್ನು ಯಾರಿಗೆ ಸಂದಾಯ ಮಾಡಲು ಬರೆಯಬೇಕು ಮತ್ತು ಲೆಕ್ಕ ಶೀರ್ಷಿಕೆ ಮುಂತಾದ ವಿವರಗಳನ್ನು ಸ್ಪಷ್ಟವಾಗಿ ನಮೂದಿಸತಕ್ಕದ್ದು.

ನಿಯಮಿಸಲಾದ ನಮೂನೆಯಲ್ಲಿನ ವರದಿಯನ್ನು ಯೋಜನೆಯ ಅಡಿಯಲ್ಲಿ ಹಣಕಾಸಿನ ನೆರವಿನ ಕೋರಿಕೆಯೊಂದಿಗೆ ಸಂಸದೀಯ ವ್ಯವಹಾರಗಳ ಮಂತ್ರಾಲಯ, ಭಾರತ ಸರ್ಕಾರ, ನವದೆಹಲಿ ಇವರಿಗೆ ಕಳುಹಿಸತಕ್ಕದ್ದು.

15. **ವೆಚ್ಚದ ಮರುಸಂದಾಯದ ಪರಿಮಿತಿ**:– ರಾಜ್ಯ/ಕೇಂದ್ರಾಡಳಿತ ಪ್ರದೇಶ ಸರ್ಕಾರಗಳು ಮಾಡಿದ ವಾಸ್ತವಿಕ ವೆಚ್ಚವನ್ನು, ವರದಿಯನ್ನು ಆಧರಿಸಿ ಈ ಮುಂದಿನ ಮಿತಿಗೊಳಪಟ್ಟು ಸಂಸದೀಯ ವ್ಯವಹಾರಗಳ ಮಂತ್ರಾಲಯ, ಭಾರತ ಸರ್ಕಾರದಿಂದ ಮರುಸಂದಾಯ ಮಾಡಲಾಗುವುದು:

| | |
|---|---|
| (ಎ) 100ರವರೆಗೆ ಸದಸ್ಯರುಗಳನ್ನು ಹೊಂದಿರುವ ವಿಧಾನ ಮಂಡಲಗಳು | ಪ್ರತಿವರ್ಷಕ್ಕೆ 3 ಲಕ್ಷ ರೂಪಾಯಿಗಳು |
| (ಬಿ) 100ರಿಂದ 200ರ ನಡುವೆ ಸದಸ್ಯರುಗಳನ್ನುಹೊಂದಿರುವ ವಿಧಾನಮಂಡಲಗಳು | ಪ್ರತಿವರ್ಷಕ್ಕೆ 4 ಲಕ್ಷ ರೂಪಾಯಿಗಳು |
| (ಸಿ) 200ಕ್ಕೂ ಹೆಚ್ಚಿನ ಸದಸ್ಯರುಗಳನ್ನು ಹೊಂದಿರುವ ವಿಧಾನ ಮಂಡಲಗಳು | ಪ್ರತಿ ವರ್ಷಕ್ಕೆ 5 ಲಕ್ಷ ರೂಪಾಯಿಗಳು |

(ವಿಧಾನಮಂಡಲಗಳನ್ನು ಹೊಂದಿರದ ಕೇಂದ್ರಾಡಳಿತ ಪ್ರದೇಶಗಳ ಸಂಬಂಧದಲ್ಲಿ ಮಿತಿಯು ಪ್ರತಿಯೊಂದು ಕೇಂದ್ರಾಡಳಿತ ಪ್ರದೇಶಕ್ಕೆ ಪ್ರತಿವರ್ಷಕ್ಕೆ 2,00,000/– ರೂಪಾಯಿಗಳು ಆಗಿರುತ್ತದೆ)

* * * * *

## ಅನುಬಂಧ – I

**ರಾಜ್ಯ/ಕೇಂದ್ರಾಡಳಿತ ಪ್ರದೇಶಗಳ ಸರ್ಕಾರ**
**ಸಂಸದೀಯ ವ್ಯವಹಾರಗಳ ಇಲಾಖೆ ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆ**

**"ಯುವ ಸಂಸತ್ ಸ್ಪರ್ಧೆ"**

--------------------------------ಶಾಲೆಯ --------------------- ತರಗತಿಯ ವಿದ್ಯಾರ್ಥಿ/ವಿದ್ಯಾರ್ಥಿನಿಯಾದ ------------------------------ಭಾರತ ಸರ್ಕಾರದ ಸಂಸದೀಯ ವ್ಯವಹಾರಗಳ ಮಂತ್ರಾಲಯ, ನವದೆಹಲಿ ಇವರು ------ನೇ ವರ್ಷದಲ್ಲಿ ನಡೆಸಿದ "ಯುವ ಸಂಸತ್" ಸ್ಪರ್ಧೆಯಲ್ಲಿ ಭಾಗವಹಿಸಿದ್ದಾರೆಂದು ಪ್ರಮಾಣೀಕರಿಸಲಾಗಿದೆ.

**ಸಕ್ಷಮ ಪ್ರಾಧಿಕಾರಿ**
**ಸಂಸದೀಯ ವ್ಯವಹಾರಗಳ ಇಲಾಖೆ ಹಾಗೂ**
**ಸಾರ್ವಜನಿಕ ಶಿಕ್ಷಣ ಇಲಾಖೆ**

**ಅನುಬಂಧ–II**

**ರಾಜ್ಯ/ಕೇಂದ್ರಾಡಳಿತ ಪ್ರದೇಶಗಳ ಸರ್ಕಾರ**

**ಸಂಸದೀಯ ವ್ಯವಹಾರಗಳ ಇಲಾಖೆ ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆ**

**....**

**"ಯುವ ಸಂಸತ್ ಸ್ಪರ್ಧೆ"**

--------------------------------ಶಾಲೆಯ -------------------- ತರಗತಿಯ ವಿದ್ಯಾರ್ಥಿ/ವಿದ್ಯಾರ್ಥಿನಿಯಾದ --------------------------------ಅವರಿಗೆ 2019–2020ನೇ ವರ್ಷದಲ್ಲಿ ಭಾರತ ಸರ್ಕಾರದ ಸಂಸದೀಯ ವ್ಯವಹಾರಗಳ ಮಂತ್ರಾಲಯ, ನವದೆಹಲಿ ಇವರ ನೇತೃತ್ವದಲ್ಲಿ ನಡೆಸಲಾದ "ಯುವ ಸಂಸತ್ ಸ್ಪರ್ಧೆ" ಯಲ್ಲಿನ ಅತ್ಯುತ್ತಮ ಸಾಧನೆಗೆ ---------------------------- ಬಹುಮಾನವನ್ನು-----------------ನೀಡಲಾಗಿದೆಯೆಂದು ಪ್ರಮಾಣೀಕರಿಸಲಾಗಿದೆ.

**ಸಕ್ಷಮ ಪ್ರಾಧಿಕಾರಿ**
**ಸಂಸದೀಯ ವ್ಯವಹಾರಗಳ ಇಲಾಖೆ ಹಾಗೂ**
**ಸಾರ್ವಜನಿಕ ಶಿಕ್ಷಣ ಇಲಾಖೆ**

# ಅನುಬಂಧ–III

**ರಾಜ್ಯ/ಕೇಂದಾಡಳಿತ ಪ್ರದೇಶಗಳ *ಸರ್ಕಾರವು ವರ್ಷದಲ್ಲಿ ನಡೆಸಿದ ಯುವ ಸಂಸತ್ ಸ್ಪರ್ಧೆಯ ವರದಿ– ಹಣಕಾಸು ನೆರವಿನ ಕೋರಿಕೆ.**

| | | | |
|---|---|---|---|
| 1. | ರಾಜ್ಯದ/ಕೇಂದ್ರಾಡಳಿತ ಪ್ರದೇಶದ ಹೆಸರು: | | |
| 2. | ಯುವ ಸಂಸತ್ ಸ್ಪರ್ಧೆಯನ್ನು ನಡೆಸಿದ ಮತ್ತು ಮರು ಸಂದಾಯದ ಕ್ಲೇಮನ್ನು ಮಾಡಿದ ಹಣಕಾಸಿನ ವರ್ಷ: | | |
| 3. | ಯುವ ಸಂಸತ್ ಸ್ಪರ್ಧೆಯಲ್ಲಿ ಭಾಗವಹಿಸಿದ ಶಾಲೆಗಳ ಸಂಖ್ಯೆ: | | |
| 4. | ಸ್ಪರ್ಧೆಯಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳ ಒಟ್ಟು ಸಂಖ್ಯೆ: | | |
| 5. | ಸ್ಪರ್ಧೆಯಲ್ಲಿ ವೈಯಕ್ತಿಕ ಬಹುಮಾನಗಳನ್ನು ಪಡೆದ ವಿದ್ಯಾರ್ಥಿಗಳ ಸಂಖ್ಯೆ: | | |
| 6. | ರಾಜ್ಯ ಮಟ್ಟದ ಸ್ಪರ್ಧೆಯಲ್ಲಿ ಮೊದಲ ಐದು ಸ್ಥಾನಗಳನ್ನು ಗಳಿಸಿದ ಶಾಲೆಗಳ, ಮೆರಿಟ್ ಆಧಾರದ ಮೇಲೆ, ಹೆಸರು ಮತ್ತು ವಿಳಾಸ: | | |
| 7. | ರಾಜ್ಯ/ಕೇಂದ್ರಾಡಳಿತ ಪ್ರದೇಶಗಳ ಸರ್ಕಾರವು ಕ್ಲೇಮು ಮಾಡಿದ ಮೊಬಲಗು: | | |
| | **ವೆಚ್ಚಗಳ ಬಾಬು** | **ವೆಚ್ಚ ಮಾಡಿದ ಒಟ್ಟು ಮೊಬಲಗು** | **ಕ್ಲೇಮು ಮಾಡಿದ ಮೊಬಲಗು** |
| | **ವಿಷಯಾಭಿಮುಖ ಶಿಕ್ಷಣಕ್ಕಾಗಿ**<br>1.<br>2. | | |
| | *ಯುವಸಂಸತ್ ಸ್ಪರ್ಧೆಯ ವ್ಯವಸ್ಥೆಗಾಗಿ*<br>1.<br>2. | | |
| | **ಬಹುಮಾನ ವಿತರಣೆ ಸಮಾರಂಭಕ್ಕಾಗಿ**<br>1.<br>2. | | |
| 8. | ಚೆಕ್ಕನ್ನು ಯಾರ ಹೆಸರಿಗೆ ನೀಡಬೇಕೋ ಅವರ ಹೆಸರು/ವಿಳಾಸ/ದೂರವಾಣಿ ಸಂಖ್ಯೆ ಮತ್ತು ಲೆಕ್ಕ ಶೀರ್ಷಿಕೆಯ ವಿವರ. | | |

1. ಮೇಲೆ ಸೂಚಿಸಿದಂತೆ ಶಾಲೆಗಳಲ್ಲಿ ಯುವ ಸಂಸತ್ ಸ್ಪರ್ಧೆಯನ್ನು ನಡೆಸಲಾಯಿತು.
2. ವೆಚ್ಚದ ಮರುಸಂದಾಯದ ಕ್ಲೇಮುಗಳನ್ನು ಮೂಲ ಓಚರುಗಳೊಂದಿಗೆ ತಾಳೆ ನೋಡಲಾಗಿದ್ದು ಅವುಗಳು ಸರಿಯಾಗಿದೆ ಎಂದು ಕಂಡುಬಂದಿದೆ.

– ಎಂದು ಈ ಮೂಲಕ ಪ್ರಮಾಣೀಕರಿಸಲಾಗಿದೆ:

**(ಹೆಸರು)**
**ಪದನಾಮ**
**ನಿರ್ದೇಶಕರು, ಡಿಎಸ್ಇಆರ್‌ಟಿ**
**ರಾಜ್ಯ/ಕೇಂದಾಡಳಿತ ಪ್ರದೇಶ ಸರ್ಕಾರದ ವಿಳಾಸ,**
**ದೂರವಾಣಿ ಸಂಖ್ಯೆ/ ಇಮೇಲ್ ಐ.ಡಿ.**

## <u>ಸೂಚನೆ</u>:–

**ವಿಷಯಾಭಿಮುಖ ಶಿಕ್ಷಣ** ಎಂದರೆ ಯುವ ಸಂಸತ್ತನ್ನು ನಡೆಸುವುದರ ಪ್ರಭಾರದಲ್ಲಿರುವ ಶಿಕ್ಷಕರ/ಶಿಕ್ಷಣ ಅಧಿಕಾರಿಗಳ ಪ್ರಯೋಜನಕ್ಕಾಗಿ ರಾಜ್ಯ/ಕೇಂದ್ರಾಡಳಿತ ಪ್ರದೇಶಗಳ ನೋಡಲ್ ಪ್ರಾಧಿಕಾರಿಗಳು ನಡೆಸುವ ಒಂದು ಕೋರ್ಸು. ಭಾಗವಹಿಸುವವರಿಗೆ ಹಂಚುವ ಸಾಹಿತ್ಯ/ಲೇಖನ ಸಾಮಗ್ರಿಗಳ ರೂಪದಲ್ಲಿ ವೆಚ್ಚಗಳುಂಟಾಗುತ್ತವೆ.

**ಯುವ ಸಂಸತ್ ಸ್ಪರ್ಧೆಯ ವ್ಯವಸ್ಥೆ** ಎಂದರೆ, ಸ್ಪರ್ಧೆಯನ್ನು ನಡೆಸುವುದಕ್ಕೆ ವಹಿಸಿದ ವೆಚ್ಚ, ಇದು ಉಪಹಾರಕ್ಕೆ, ಭಾಗವಹಿಸುವ ವಿದ್ಯಾರ್ಥಿಗಳ ಸಾರಿಗೆ ವ್ಯವಸ್ಥೆಗೆ, ಬಹುಮಾನ/ಪಾರಿತೋಷಕ ಮುಂತಾದವುಗಳಿಗೆ ತಗಲಿದ ವೆಚ್ಚವನ್ನು ಒಳಗೊಳ್ಳುತ್ತದೆ.

**ಬಹುಮಾನ ವಿತರಣೆ ಸಮಾರಂಭ** ಎಂದರೆ, ರಾಜ್ಯ ಮಟ್ಟದ ಬಹುಮಾನ ವಿಜೇತರು ಮುಂತಾದವರಿಗೆ ಬಹುಮಾನಗಳು/ಷೀಲ್ಡ್‌ಗಳನ್ನು (ಪಾರಿತೋಷಕಗಳನ್ನು) ವಿತರಣೆ ಮಾಡುವುದಕ್ಕಾಗಿ ನಡೆಸಿದ ಸಮಾರಂಭ, ಇದು ಪ್ರತಿಭಾನ್ವಿತ ಶಾಲೆಗಳು ಮತ್ತು ವಿದ್ಯಾರ್ಥಿಗಳಿಗೆ ಪುಸ್ತಕಗಳು, ನೆನಪಿನ ಕಾಣಿಕೆಗಳು, ಪ್ರಮಾಣ ಪತ್ರಗಳು, ಷೀಲ್ಡ್‌ಗಳ (ಪಾರಿತೋಷಕಗಳು) ರೂಪದಲ್ಲಿ ಬಹುಮಾನ ಮುಂತಾದವುಗಳಿಗಾಗಿ ವಹಿಸಿದ ವೆಚ್ಚವನ್ನು ಒಳಗೊಳ್ಳುತ್ತದೆ.

(ಮರುಸಂದಾಯದ ಕ್ಲೇಮಿನಲ್ಲಿ, ಶಿಕ್ಷಕರಿಗೆ/ಅಧಿಕಾರಿಗಳಿಗೆ, ಪ್ರಯಾಣಭತ್ಯೆ/ದಿನಭತ್ಯೆಗಳ ವೆಚ್ಚಗಳನ್ನು ಸೇರಿಸತಕ್ಕದ್ದಲ್ಲ)

*ಸ್ಪರ್ಧೆಗಾಗಿ ವಹಿಸಿದ ವೆಚ್ಚಗಳ ಮರುಸಂದಾಯಕ್ಕಾಗಿ "ರಾಜ್ಯಗಳಿಗೆ/ಕೇಂದ್ರಾಡಳಿತ ಪ್ರದೇಶಗಳಿಗೆ ಹಣಕಾಸು ನೆರವು ಯೋಜನೆ"ಯ 14ನೇ ಕಂಡಿಕೆಯಲ್ಲಿ ಹೇಳಿರುವಂತೆ, ಯುವ ಸಂಸತ್ ಸ್ಪರ್ಧೆಗಳು ಮುಕ್ತಾಯವಾದ ಮೇಲೆ, ರಾಜ್ಯ/ಕೇಂದ್ರಾಡಳಿತ ಸರ್ಕಾರಗಳು ಭರ್ತಿ ಮಾಡಿ ಕಳುಹಿಸಬೇಕು.

ಸಂವ್ಯಶಾಇ **02 ವೈಪಿಸಿ 2019** **21.08.2019**

**ಮಾನ್ಯರೆ,**

**ವಿಷಯ:** 2019–20ನೇ ಸಾಲಿನಲ್ಲಿ ಪ್ರೌಢಶಾಲೆ ವಿದ್ಯಾರ್ಥಿಗಳಿಗೆ ಜಿಲ್ಲಾ ಮತ್ತು ರಾಜ್ಯ ಮಟ್ಟದ ಯುವ ಸಂಸತ್ ಸ್ಪರ್ಧೆಗಳನ್ನು ನಡೆಸುವ ಬಗ್ಗೆ

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2019–20ನೇ ಸಾಲಿನಲ್ಲಿ, ಪ್ರೌಢಶಾಲೆ ವಿದ್ಯಾರ್ಥಿಗಳಿಗೆ ಜಿಲ್ಲಾ ಹಾಗೂ ರಾಜ್ಯ ಮಟ್ಟದ ಯುವ ಸಂಸತ್ ಸ್ಪರ್ಧೆಗಳನ್ನು ನಡೆಸುವ ಬಗ್ಗೆ ಈ ಕೆಳಕಂಡಂತೆ ಮಾರ್ಗಸೂಚಿಗಳನ್ನು ಅನುಸರಿಸಿ, ಅವಶ್ಯಕ ಪೂರ್ವತಯಾರಿ ಕ್ರಮಗಳನ್ನು ಕೂಡಲೇ ಕೈಗೊಂಡು ವರದಿಯನ್ನು ಈ ಇಲಾಖೆಗೆ ತುರ್ತಾಗಿ ಸಲ್ಲಿಸುವಂತೆ ಈ ಮೂಲಕ ತಿಳಿಸಲಾಗಿದೆ.

1. 2019–20ನೇ ಸಾಲಿನ ಯುವ ಸಂಸತ್ ಸ್ಪರ್ಧೆಗಳನ್ನು ಜಿಲ್ಲಾ ಹಾಗೂ ರಾಜ್ಯ ಮಟ್ಟದಲ್ಲಿ ಕಳೆದ ಸಾಲಿನಂತೆ ಆಯೋಜಿಸುವ ಸಲುವಾಗಿ ಪ್ರತಿಯೊಂದು ಜಿಲ್ಲೆಯ ಡಿ.ಡಿ.ಪಿ.ಐ.ಗಳಿಗೆ ಈ ಕೆಳಕಂಡ ಷರತ್ತುಗಳನ್ನು ಒಳಗೊಂಡ ಸುತ್ತೋಲೆಯನ್ನು ಹೊರಡಿಸುವಂತೆ ತಿಳಿಸಿದೆ.–

   (i) 2019–20ನೇ ಸಾಲಿನ ಯುವ ಸಂಸತ್ ಸ್ಪರ್ಧೆಗಳನ್ನು ಜಿಲ್ಲಾ ಮಟ್ಟದಲ್ಲಿ ಆಯೋಜಿಸಲು ಪ್ರತಿ ಜಿಲ್ಲೆಯ ಡಿ.ಡಿ.ಪಿ.ಐ. ಅಧ್ಯಕ್ಷತೆಯಲ್ಲಿ ಸಮಾಜ ವಿಜ್ಞಾನ ಶಿಕ್ಷಕರನ್ನು ಒಳಗೊಂಡ ಒಂದು ಸಮಿತಿಯನ್ನು ರಚಿಸಿ, ಈ ಇಲಾಖೆಯಿಂದ ನಿಯೋಜಿತಗೊಂಡ ಅಧಿಕಾರಿಗಳ ಹಾಗೂ ಆಹ್ವಾನಿತ ವಿಧಾನಸಭೆ ಸದಸ್ಯರ ಸಮಕ್ಷಮದಲ್ಲಿ ಸ್ಪರ್ಧೆಗಳನ್ನು ಆಯೋಜಿಸತಕ್ಕದ್ದು;

   (ii) ಪ್ರತಿ ಜಿಲ್ಲೆಯಿಂದ ಕನಿಷ್ಠ 60 ಸ್ಪರ್ಧಾಳುಗಳ ಹೆಸರು, ತರಗತಿ ಹಾಗೂ ಶಾಲೆಗಳ ವಿವರ ಮತ್ತು 1 ಮತ್ತು 2ನೇ ಸ್ಥಾನವನ್ನು ಪಡೆದ ವಿಜೇತರ ಹೆಸರು, ತರಗತಿ ಹಾಗೂ ಶಾಲೆಯ ವಿವರ ಹಾಗೂ ಕಾರ್ಯಕ್ರಮದ ಕನಿಷ್ಠ 3 ಭಾವಚಿತ್ರಗಳನ್ನು ನಿರ್ದೇಶಕರಿಗೆ ಮತ್ತು ಈ ಇಲಾಖೆಗೆ ಕಳುಹಿಸುವುದು;

   (iii) ರಾಜ್ಯ ಮಟ್ಟದ ಸ್ಪರ್ಧೆಗಳನ್ನು ಡಿಸೆಂಬರ್–2019ರ ಕೊನೆಯ ವಾರದೊಳಗೆ ಆಯೋಜಿಸಲು ಉದ್ದೇಶಿಸಿರುವುದರಿಂದ, ಜಿಲ್ಲಾ ಮಟ್ಟದ ಸ್ಪರ್ಧೆಗಳನ್ನು ನವೆಂಬರ್–2019ರ ಕೊನೆಯ ವಾರದೊಳಗೆ ಆಯೋಜಿಸಲು ತುರ್ತು ಕ್ರಮ ತೆಗೆದುಕೊಳ್ಳುವುದು;

   (iv) ಸದರಿ ಕಾರ್ಯಕ್ರಮಗಳ ಆಯೋಜನೆ ಬಗ್ಗೆ ಈ ಇಲಾಖೆಯ ಗಮನಕ್ಕೆ ತರದೇ ಯಾವುದೇ ಆದೇಶವನ್ನು ಹೊರಡಿಸತಕ್ಕದ್ದಲ್ಲ. ಹಣದ ವ್ಯವಸ್ಥೆಯನ್ನು ಕೇಂದ್ರ ಸರ್ಕಾರದಿಂದ ಕಾರ್ಯಕ್ರಮದ ಆಯೋಜನೆ ಬಗ್ಗೆ ತಿಳಿಸಿ ಹಣ ಪಡೆದು ಸ್ಪರ್ದೆಯನ್ನು ನಡೆಸುವುದು.

   (v) ಮೇಲ್ಕಂಡ ಷರತ್ತುಗಳನ್ನು ಉಲ್ಲಂಘಿಸಿದ ಡಿ.ಡಿ.ಪಿ.ಐ.ಗಳಿಗೆ ನಿರ್ದೇಶಕರು ಅನುದಾನ ಮೊತ್ತವನ್ನು ಬಿಡುಗಡೆ ಮಾಡತಕ್ಕದ್ದಲ್ಲ ಮತ್ತು ಯಾವುದೇ ವ್ಯತ್ಯಯಗಳು ಉಂಟಾದಲ್ಲಿ ಸಂಬಂಧಪಟ್ಟ ಡಿ.ಡಿ.ಪಿ.ಐ.ಗಳನ್ನು ಜವಾಬ್ದಾರರನ್ನಾಗಿ ಮಾಡಲಾಗುವ

(vi) ಮೇಲ್ಕಂಡ ಷರತ್ತುಗಳನ್ನು ಉಲ್ಲಂಘಿಸಿದ ಡಿ.ಡಿ.ಪಿ.ಐ.ಗಳಿಗೆ ನಿರ್ದೇಶಕರು ಅನುದಾನ ಮೊತ್ತವನ್ನು ಬಿಡುಗಡೆ ಮಾಡತಕ್ಕದ್ದಲ್ಲ ಮತ್ತು ಯಾವುದೇ ವ್ಯತ್ಯಯಗಳು ಉಂಟಾದಲ್ಲಿ ಸಂಬಂಧಪಟ್ಟ ಡಿ.ಡಿ.ಪಿ.ಐ.ಗಳನ್ನು ಜವಾಬ್ದಾರರನ್ನಾಗಿ ಮಾಡಲಾಗುವುದು;

(vii) ಜಿಲ್ಲಾ ಮಟ್ಟದ ಯುವ ಸಂಸತ್ ಸ್ಪರ್ಧೆಯನ್ನು ಸಾಧ್ಯವಾದಷ್ಟು ಮಟ್ಟಿಗೆ ಜಿಲ್ಲಾ ಪಂಚಾಯತ್ ಸಭೆ ನಡೆಸುವ ಸಭಾಂಗಣದಲ್ಲಿ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಯವರ ಅನುಮತಿ ಪಡೆದು ನಡೆಸತಕ್ಕದು;

(viii) ಸ್ಪರ್ಧೆಗೆ ಪೂರ್ವಾನ್ವಯವಾಗಿ ಸ್ಪರ್ಧಾಳುಗಳಿಗೆ ಸಾರ್ವಜನಿಕ ಶಿಕ್ಷಣ ತರಬೇತಿ ಶಿಬಿರಗಳನ್ನು ಏರ್ಪಡಿಸತಕ್ಕದು; ಮತ್ತು

(ix) ಸ್ಪರ್ಧೆಯ ವಿಜೇತರುಗಳಿಗೆ ಮಾರ್ಗಸೂಚಿಯಲ್ಲಿ ತಿಳಿಸಿರುವಂತೆ ಪ್ರಮಾಣ ಪತ್ರ (ಸರ್ಟಿಫಿಕೇಟ್)ದೊಂದಿಗೆ ಗುಣ ಮಟ್ಟದ ಬಹುಮಾನಗಳನ್ನು ನೀಡುವುದು.

2. ಜಿಲ್ಲಾ ಮಟ್ಟದ ಸ್ಪರ್ಧೆಯನ್ನು ಆಯೋಜಿಸಲು ಸಾರ್ವಜನಿಕ ಶಿಕ್ಷಣ ಇಲಾಖಾ ವತಿಯಿಂದ ನೇಮಕ ಮಾಡಿರುವ ನೋಡಲ್ ಅಧಿಕಾರಿಗಳ ಹೆಸರು, ವಿಳಾಸ ಹಾಗೂ ಮೊಬೈಲ್ ಸಂಖ್ಯೆಯನ್ನೊಳಗೊಂಡ ವಿವರಣಾ ಪಟ್ಟಿಯನ್ನು ಕೂಡಲೇ ಈ ಇಲಾಖೆಗೆ ಒದಗಿಸಲು ಕೋರಲಾಗಿದೆ.

ಆದರಗಳೊಂದಿಗೆ,

ತಮ್ಮ ನಂಬುಗೆಯ,

**ಇವರಿಗೆ,**

ಶ್ರೀ ಹೆಚ್.ಎನ್. ಗೋಪಾಲಕೃಷ್ಣ,

ನಿರ್ದೇಶಕರು

ರಾಜ್ಯ ಶಿಕ್ಷಣ, ಸಂಶೋದನೆ ಮತ್ತು ತರಬೇತಿ ಸಂಸ್ಥೆ,

ನಂ. 4, 100 ಅಡಿ ರಿಂಗ್ ರೋಡ್,

ಬನಶಂಕರಿ 3ನೇ ಹಂತ, ಬೆಂಗಳೂರು.

## ಜಿಲ್ಲಾಮಟ್ಟದ ಯುವ ಸಂಸತ್ ಸ್ಪರ್ಧೆಯ ಮಾರ್ಗಸೂಚಿಗಳು :- ಇದು ವಿಧಾನಸಭೆಯ ಮಾದರಿ / ಅಣಕು ಪ್ರದರ್ಶನವಾಗಿರತಕ್ಕದ್ದು

**1. ಯುವ ಸಂಸತ್ ಸ್ಪರ್ಧೆಯ ವ್ಯವಸ್ಥೆ:-** (ಎ) ಸಂಬಂಧಪಟ್ಟ ಶೈಕ್ಷಣಿಕ ಜಿಲ್ಲೆಗಳ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ತಮ್ಮ ಜಿಲ್ಲೆಯ ನೋಡಲ್ ಅಧಿಕಾರಿ ಹಾಗೂ ಇತರ ಸಿಬ್ಬಂದಿಯ ಸಮನ್ವಯದೊಂದಿಗೆ ಯುವಸಂಸತ್ ಸ್ಪರ್ಧೆಯನ್ನು ಸರ್ಕಾರ ನಿಗದಿಪಡಿಸಿದ ಕಾಲಮಿತಿಯೊಳಗೆ ವ್ಯವಸ್ಥಿತವಾಗಿ ನಡೆಸತಕ್ಕದ್ದು. ಸ್ಪರ್ಧೆಗಾಗಿ ಉತ್ತಮ ವೇದಿಕೆ, ಧ್ವನಿವರ್ಧಕ, ಹಾಗೂ ಸ್ಪರ್ಧೆಯಲ್ಲಿ ಭಾಗವಹಿಸುವ ವಿದ್ಯಾರ್ಥಿಗಳಿಗೆ ಉಪಹಾರ, ಸ್ಪರ್ಧಾವಿಜೇತರಿಗೆ ಬಹುಮಾನ, ಮುಂತಾದವನ್ನು ಪ್ರತಿ ಜಿಲ್ಲೆಗೆ ನೀಡಲಾಗುವ ಅನುದಾನದಿಂದ ಏರ್ಪಾಡು ಮಾಡತಕ್ಕದ್ದು.

(ಬಿ) ಜಿಲ್ಲಾ ಮಟ್ಟದ ಸ್ಪರ್ಧೆಗೆ 2019-2020ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ಪ್ರತಿಯೊಂದು ಜಿಲ್ಲೆಗೆ ರೂ. 8,000/- (ಎಂಟು ಸಾವಿರ ರೂಪಾಯಿಗಳು ಮಾತ್ರ) ಅಥವಾ ಸ್ಪರ್ಧೆಯ ವಾಸ್ತವ ವೆಚ್ಚ ಇವುಗಳಲ್ಲಿ ಯಾವುದು ಕಡಿಮೆಯೋ ಅದನ್ನು ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆಯ ಮೂಲಕ ನೀಡಲಾಗುವುದು.

**2. ಯುವ ಸಂಸತ್ ಸ್ಪರ್ಧೆಗಳಿಗೆ ವಿಧ್ಯಾರ್ಥಿಗಳನ್ನು ಆಯ್ಕೆ ಮಾಡುವ ವಿಧಾನ.-** ಜಿಲ್ಲಾ ಮಟ್ಟದ ಯುವ ಸಂಸತ್ ಸ್ಪರ್ಧೆಗಳಿಗೆ ಕರ್ನಾಟಕ ರಾಜ್ಯದ ಮಾನ್ಯತೆ ಪಡೆದ ಎಲ್ಲಾ ಪ್ರೌಢ ಶಾಲೆಗಳ ವಿದ್ಯಾರ್ಥಿಗಳು ಸ್ಪರ್ಧೆಯಲ್ಲಿ ಭಾಗವಹಿಸುವ ಅರ್ಹತೆ ಹೊಂದಿರುವುದರಿಂದ ಸುಮಾರು 60 ರಿಂದ 90 ವಿದ್ಯಾರ್ಥಿಗಳು ಜಿಲ್ಲಾ ಮಟ್ಟದ ಸ್ಪರ್ಧೆಯಲ್ಲಿ ಭಾಗವಹಿಸುವಂತೆ ಅವಕಾಶ ನೀಡಬೇಕು. ಇದಕ್ಕಾಗಿ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವಾಗ ಈ ಮುಂದೆ ಹೇಳಿದ ಅರ್ಹತೆಗಳನ್ನು ಸಾಮಾನ್ಯವಾಗಿ ಪರಿಗಣಿಸಬೇಕು.

(1) ಚರ್ಚಿಸುವ ಸಾಮರ್ಥ್ಯವಿರುವ ವಿದ್ಯಾರ್ಥಿಗಳು.
(2) ನಮ್ಮ ದೇಶದ ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ಸಮಸ್ಯೆಗಳ ಬಗ್ಗೆ ಸಾಕಷ್ಟು ಚೆನ್ನಾಗಿ ತಿಳಿದುಕೊಂಡ ವಿದ್ಯಾರ್ಥಿಗಳು.
(3) ತಮ್ಮ ತಮ್ಮ ತರಗತಿಗಳಲ್ಲಿ ಉತ್ತಮ ಮೆರಿಟ್ ಪಡೆದಿರುವ ವಿದ್ಯಾರ್ಥಿಗಳು.
(4) ಮುಖಂಡತ್ವದ ಗುಣಗಳಿರುವ ಮತ್ತು ಪಠ್ಯೇತರ ಚಟುವಟಿಕೆಗಳಲ್ಲಿ ಆಸಕ್ತಿ ಇರುವ ವಿದ್ಯಾರ್ಥಿಗಳು.
(5) ಮಾಧ್ಯಮಿಕ ಶಾಲೆಗಳು ಮತ್ತು ಪ್ರೌಢಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು.

ಪ್ರತಿ ವರ್ಷವೂ ಹೊಸ ವಿದ್ಯಾರ್ಥಿಗಳ ಗುಂಪುಗಳಿಗೆ ಆದ್ಯತೆ ನೀಡಿ, ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಭಾಗವಹಿಸುವಂತೆ ನೋಡಿಕೊಳ್ಳಬೇಕೆಂದು ಮತ್ತು ಪ್ರಶ್ನೋತ್ತರ ಅವಧಿಯಲ್ಲಿ ಮತ್ತು ಇತರ ಶಾಸನ-ಕಲಾಪಗಳ ಅವಧಿಯಲ್ಲಿ ಆಯ್ಕೆ ಮಾಡಿದ ವಿಷಯಗಳಿಗೆ ಸಂಬಂಧಪಟ್ಟ ಅಂಕಿ ಅಂಶಗಳನ್ನು ಸಂಗ್ರಹಿಸುವಂತೆ ಅವರಿಗೆ ಸೂಚಿಸಬೇಕು. ವಿದ್ಯಾರ್ಥಿನಿಯರಿಗೂ ಯುವ ಸಂಸತ್ತಿನಲ್ಲಿ ಭಾಗವಹಿಸಲು ಸಮಾನ ಅವಕಾಶ ನೀಡತಕ್ಕದ್ದು.

**3. ಯುವ ಸಂಸತ್ ರಚನೆ.-** (ಎ) ಪ್ರತಿ ಜಿಲ್ಲೆಯಲ್ಲಿ, ನಿಗದಿತ ದಿನಾಂಕ ಹಾಗೂ ಸ್ಥಳದಲ್ಲಿ ಅಧಿವೇಶನದಲ್ಲಿ ಪಾಲ್ಗೊಳ್ಳುವ ವಿದ್ಯಾರ್ಥಿಗಳು ವೇದಿಕೆಗೆ ಬಂದೊಡನೆ ತಮ್ಮ ಹೆಸರನ್ನು ನೋಂದಾಯಿಸುವರು.

(ಬಿ) ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆಯಿಂದ ನಿಯೋಜಿತ ತೀರ್ಪುಗಾರರ ಸಮಿತಿಯ ಸದಸ್ಯರು ವಿದ್ಯಾರ್ಥಿಗಳನ್ನು,-

ಶೇಕಡ 40 – ಆಡಳಿತ ಪಕ್ಷದ ಸದಸ್ಯರು.
ಶೇಕಡ 20 – ವಿರೋಧ ಪಕ್ಷದ ಸದಸ್ಯರನ್ನಾಗಿ ವಿಂಗಡಿಸುವರು.

(ಸಿ) ಆಡಳಿತ ಪಕ್ಷದ ಸದಸ್ಯರು ತಮ್ಮೊಳಗೆ ಇಬ್ಬರನ್ನು ಆರಿಸುವರು. ಇವರಲ್ಲಿ ಒಬ್ಬರನ್ನು "ಮುಖ್ಯಮಂತ್ರಿ" ಎಂದು ಕರೆಯಲಾಗುವುದು. ಹಾಗೂ ಇನ್ನೊಬ್ಬರನ್ನು ಸಭಾಧ್ಯಕ್ಷರು (speaker) ಎಂದು ಕರೆಯಲಾಗುವುದು. ಮುಖ್ಯಮಂತ್ರಿಯವರು, ಉಪ ಮುಖ್ಯಮಂತ್ರಿಯವರು ಹಾಗೂ ಆಡಳಿತ ಪಕ್ಷದ 5 ಸದಸ್ಯರನ್ನು ಮಂತ್ರಿಗಳನ್ನಾಗಿ ಆರಿಸುವರು. ಇವರನ್ನು

(ಅ) ಶಿಕ್ಷಣ ಸಚಿವರು.
(ಆ) ಗೃಹ ಸಚಿವರು.
(ಇ) ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು.
(ಈ) ಆರೋಗ್ಯ ಸಚಿವರು; ಮತ್ತು
(ಉ) ಸಮಾಜ ಕಲ್ಯಾಣ ಸಚಿವರು.

ಎಂದು ನಾಮಕರಣ ಮಾಡಲಾಗುವುದು.

(ಡಿ) ವಿರೋಧ ಪಕ್ಷದ ಸದಸ್ಯರು ಸಮನಾದ ಮೂರು ಪಂಗಡಗಳಲ್ಲಿ ವಿಭಜಿಸಿ ಕೊಳ್ಳುವರು, ಪ್ರತಿಯೊಂದು ವಿರೋಧ ಪಕ್ಷವನ್ನು

(ಅ) ವಿರೋಧ ಪಕ್ಷ–1
(ಆ) ವಿರೋಧ ಪಕ್ಷ–2
(ಇ) ವಿರೋಧ ಪಕ್ಷ–3

ಎಂದು ಕರೆಯಲಾಗುವುದು. ವಿರೋಧ ಪಕ್ಷದ ಸದಸ್ಯರು ತಮ್ಮೊಳಗೆ ಒಬ್ಬ ನಾಯಕನನ್ನು ಆರಿಸುವರು. ಅವರನ್ನು ಆಯಾ ವಿರೋಧ ಪಕ್ಷದ ಹೆಸರಿನ ನಾಯಕರೆಂದು ಕರೆಯಲಾಗುವುದು.

4. **ಆಸನಗಳ ವ್ಯವಸ್ಥೆ.–** (ಎ) ಆಡಳಿತ ಪಕ್ಷದ ಸದಸ್ಯರು ಕೊಠಡಿಯ (ಇನ್ನು ಮುಂದೆ ಸದನ ಎಂದು ಕರೆಯಲಾಗುವುದು) ಬಲ ಭಾಗದಲ್ಲಿ, ವಿರೋಧ ಪಕ್ಷದ ಸದಸ್ಯರು ಸದನದ ಎಡಭಾಗದಲ್ಲಿ ಕುಳಿತು ಕೊಳ್ಳುವರು. ಸಭಾಧ್ಯಕ್ಷರ ಆಸನವು ಸದನದ ವೇದಿಕೆಯಲ್ಲಿ ಇರುವುದು. ಮುಖ್ಯಮಂತ್ರಿ ಹಾಗೂ ಇತರ ಸಚಿವರು ಆಡಳಿತ ಪಕ್ಷದ ಆಸನಗಳಲ್ಲಿ ಮುಂದಿನ ಸ್ಥಾನಗಳನ್ನು, ವಿರೋಧ ಪಕ್ಷದ ಮುಖಂಡರು ತಮ್ಮ ಪಕ್ಷದ ವಿಭಾಗದಲ್ಲಿ ಮುಂದಿನ ಸ್ಥಳಗಳಲ್ಲಿ ಆಸೀನರಾಗುವರು.

(ಬಿ) ತೀರ್ಪುಗಾರರ ಸಮಿತಿಯ ಸದಸ್ಯರು ಎಲ್ಲಾ ಸದಸ್ಯರನ್ನು ವೀಕ್ಷಿಸಲು ಹಾಗೂ ಆಲಿಸಲು ಸಾಧ್ಯವಾಗುವಂತಹ ಸೂಕ್ತ ಸ್ಥಳದಲ್ಲಿ ಆಸೀನರಾಗುವರು.

5. **ಸ್ಪರ್ಧೆಗಳನ್ನು ನಡೆಸುವ ವಿಧಾನ.–(ಎ)** ಮೊದಲಿಗೆ ಆಡಳಿತ ಹಾಗೂ ವಿರೋಧ ಪಕ್ಷದ ಸದಸ್ಯರು ತಮ್ಮ ತಮ್ಮ ನಾಯಕರನ್ನು ಆಯ್ಕೆ ಮಾಡಲು ವಿಫಲರಾದಲ್ಲಿ ತೀರ್ಪುಗಾರರ ಸಮಿತಿಯ ಸದಸ್ಯರು ಅವರಿಗೆ ಮಾರ್ಗದರ್ಶನ ನೀಡುವರು ಅಥವಾ ಸೂಕ್ತ ವಿದ್ಯಾರ್ಥಿಯನ್ನು ಸರ್ದೆಯ ನಾಮನಿರ್ದೇಶನ ಮಾಡುವರು. ಮೇಲಿನ ಪ್ರಕ್ರಾರ್ಯಗಳು 10–00 ಗಂಟೆಯಿಂದ 10–55 ರೊಳಗೆ ಮುಕ್ತಾಯಗೊಳ್ಳಬೇಕಾಗಿದೆ.

(ಬಿ) 11–00 ಗಂಟೆಗೆ "ಸಭಾಧ್ಯಕ್ಷರು ಸದನಕ್ಕೆ ಆಗಮಿಸುತ್ತಿದ್ದಾರೆ" ಯೆಂಬುದಾಗಿ ಶಾಲಾ ಸಿಬ್ಬಂದಿಯೊಬ್ಬರು ಘೋಷಿಸುವರು.

(ಸಿ) ಸದನದ ಸದಸ್ಯರು ತಮ್ಮ ಆಸನಗಳಿಂದ ಎದ್ದು ನಿಲ್ಲುವರು. ಸಭಾಧ್ಯಕ್ಷರು ತಮ್ಮ ಸ್ಥಾನದಲ್ಲಿ ಕುಳಿತ ನಂತರ ಸದಸ್ಯರು ಆಸೀನರಾಗುವರು.

(ಡಿ) ಸಭಾಧ್ಯಕ್ಷರು.–ಸಂತಾಪಸೂಚನೆಯನಂತರ

1. ಪ್ರಶ್ನೋತ್ತರ

ಸದನದಲ್ಲಿ ಉತ್ತರಿಸುವ (ಚುಕ್ಕೆ ಗುರುತಿನ) ಪ್ರಶ್ನೆಗಳು

ಪ್ರಶ್ನೆ ಸಂಖ್ಯೆ–1

ಸಚಿವರು – ಉತ್ತರ ಒದಗಿಸಲಾಗಿದೆ.

ಸಭಾಧ್ಯಕ್ಷರು – ಪ್ರಶ್ನೆ ಸಂಖ್ಯೆ –2

ಸಚಿವರು – ಉತ್ತರ ಒದಗಿಸಲಾಗಿದೆ.

(ಇದೇ ಕ್ರಮವನ್ನು ಅನುಬಂಧ–3 ರ ಪ್ರಶ್ನೆಗಳ ಬಗ್ಗೆ ಅನುಸರಿಸಲಾಗುವುದು)

ಸಭಾಧ್ಯಕ್ಷರು – ಸದನದಲ್ಲಿ ಉತ್ತರಿಸುವ (ಚುಕ್ಕೆ ಗುರುತಿನ) ಪ್ರಶ್ನೆಗಳು ಮುಗಿದಿವೆ.

ಲಿಖಿತ ಮೂಲಕ ಉತ್ತರಿಸುವ (ಚುಕ್ಕೆ ಗುರುತಿಲ್ಲದ) ಪ್ರಶ್ನೆಗಳು

ಸಚಿವರು – ಉತ್ತರಗಳನ್ನು ಕಳುಹಿಸಲಾಗಿದೆ.

ಪ್ರಶ್ನೆ ಕೇಳುವ ಸದಸ್ಯರು – (ಅ) ಉತ್ತರಗಳು ತೃಪ್ತಿಕರವಿಲ್ಲ;
(ಆ) ಉತ್ತರಗಳು ಸತ್ಯಕ್ಕೆ ದೂರವಾಗಿದೆ.
(ಇ) ಮಾನ್ಯ ಸಚಿವರು ಆಶ್ವಾಸನೆ ಕೊಡಬೇಕು.
(ಮುಂತಾದ ವಿಷಯಗಳ ಬಗ್ಗೆ ಮಾತಾಡುವರು)

ಇತರೆ ಸದಸ್ಯರು – ಅಧ್ಯಕ್ಷರ ಅನುಮತಿಯೊಂದಿಗೆ ಉತ್ತರಗಳ ಬಗ್ಗೆ ಮಾತಾಡಬಹುದು.

(ಇದೇ ಕ್ರಮವನ್ನು ಸದನದಲ್ಲಿ ಉತ್ತರಿಸುವ (ಚುಕ್ಕೆ ಗುರುತಿನ) ಪ್ರಶ್ನೆಗಳ ಬಗ್ಗೆ ಜರುಗಿಸುವುದು)

(ಇ) **ಶೂನ್ಯ ವೇಳೆ.**– ವಿಧಾನ ಸಭೆಯ ಕಾರ್ಯಕಲಾಪಗಳ ಪಟ್ಟಿಯಲ್ಲಿ ಪ್ರಶ್ನೋತ್ತರಕ್ಕೆ ನಿಗದಿಪಡಿಸಿರುವ ಕಾರ್ಯಕಲಾಪವನ್ನು ಪೂರೈಸಿದನಂತರ ಸರ್ಕಾರಿ ಕಾರ್ಯಕಲಾಪ ಪ್ರಾರಂಭಿಸುವ ಮಧ್ಯದಲ್ಲಿನ ಅವಧಿಯನ್ನು "ಶೂನ್ಯ ವೇಳೆ" ಯೆಂದು ಕರೆಯಲಾಗುವುದು. ಪ್ರಸ್ತುತ ಅಧಿವೇಶನದಲ್ಲಿ ಪಶ್ನೋತ್ತರ ಮುಗಿದಿದೆ. "ಗಮನ ಸೆಳೆಯುವ ಸೂಚನೆ" ಗಳನ್ನು ತೆಗೆದು ಕೊಳ್ಳಬೇಕಾಗಿದೆ. ಈ ಶೂನ್ಯ ವೇಳೆಯಲ್ಲಿ ಅನೇಕ ಶಾಸಕರು ಪ್ರಸ್ತುತ ನಡೆಯುತ್ತಿರುವ ಎಸ್. ಎಸ್. ಎಲ್. ಸಿ. ಪರೀಕ್ಷೆಯಲ್ಲಿ "ವಿಜ್ಞಾನ" ವಿಷಯಕ್ಕೆ ಸಂಬಂಧಪಟ್ಟ ಪ್ರಶ್ನೆ ಪತ್ರಿಕೆಗಳು ಬಯಲಾಗಿರುವ ವಿಷಯದ ಬಗ್ಗೆ ಪ್ರಸ್ತಾಪಿಸಲು ಎದ್ದು ನಿಂತು ಅಧ್ಯಕ್ಷರ ಅನುಮತಿ ಕೋರುವರು.

ಸದಸ್ಯರು: ಪ್ರಸ್ತುತ ನಡೆಯುತ್ತಿರುವ ಎಸ್. ಎಸ್. ಎಲ್. ಸಿ. ಪರೀಕ್ಷೆಯ ವಿಜ್ಞಾನ ವಿಷಯದ ಪ್ರಶ್ನೆ ಪತ್ರಿಕೆ ನೂರು ರೂಪಾಯಿಗೆ ದೊರೆಯುತ್ತಿದೆ. ಇದರ ಬಗ್ಗೆ ಪ್ರಸ್ತಾಪಿಸಲು ನಮಗೆ ಅನುಮತಿ ಕೊಡಬೇಕು ಇತ್ಯಾದಿ.

ಸಭಾಧ್ಯಕ್ಷರು: ತಾವು ಎತ್ತ ಬೇಕೆಂದಿರುವ ವಿಷಯದ ಬಗ್ಗೆ ಸೂಚನಾ ಪತ್ರ ಕೊಡಿ. ಮಾನ್ಯ ಸಚಿವರು ಅದಕ್ಕೆ ಉತ್ತರಿಸಲು ಕಾಲಾವಕಾಶ ಬೇಕು. ನಂತರ ತೆಗೆದುಕೊಳ್ಳೋಣ.

ಸದಸ್ಯರು: ಇದು ಅತ್ಯಂತ ಗಂಭೀರವಾದ ತುರ್ತು ವಿಷಯ ನಡೆಯುತ್ತಿರುವ ಪರೀಕ್ಷೆಗಳು ತುರ್ತಾಗಿ ನಿಲ್ಲಬೇಕು. ಉಳಿದ ಕಲಾಪಗಳನ್ನು ನಂತರ ತೆಗೆದುಕೊಳ್ಳಬಹುದು.

ಸಂಬಂಧಪಟ್ಟ ಸಚಿವರು: ಈಗಾಗಲೇ ನಾನು ಎಸ್. ಎಸ್. ಎಲ್. ಸಿ. ಪರೀಕ್ಷಾ ಮಂಡಳಿಯಿಂದ ವರದಿ ಕೋರಿದ್ದೇನೆ. ಇಂದು ಸಂಜೆ ವರದಿ ತಲುಪುವ ನಿರೀಕ್ಷೆಯಿದೆ. ನಾಳೆ ವಿಷಯವನ್ನು ಚರ್ಚೆಗೆ ತೆಗೆದುಕೊಳ್ಳಬಹುದು.

ಸಭಾಧ್ಯಕ್ಷರು: ವಿಷಯವನ್ನು ನಾಳಿನ ಕಾರ್ಯಕಲಾಪಗಳ ಪಟ್ಟಿಯಲ್ಲಿ "ಗಮನ ಸೆಳೆಯುವ ಸೂಚನೆಗಳಡಿಯಲ್ಲಿ ತೆಗೆದುಕೊಳ್ಳಲಾಗುವುದು" ಮುಂದಿನ ಕಾರ್ಯಕಲಾಪ "ಗಮನ ಸೆಳೆಯುವ ಸೂಚನೆ".

(ಎಫ್) **ಗಮನ ಸೆಳೆಯುವ ಸೂಚನೆ.**– ಪುಟ ಸಂಖ್ಯೆ 25 ಹಾಗು 26 ರಲ್ಲಿರುವ ವಿಷಯದ ಬಗ್ಗೆ ಸಂಬಂಧಪಟ್ಟ ಸಚಿವರು ವಿವರಣೆಯನ್ನು ನೀಡುವರು.

ಗಮನ ಸೆಳೆಯುವ ಸೂಚನೆ ನೀಡಿರುವ ಶಾಸಕರು "ವಿವರಣೆ ತೃಪ್ತಿಕರವಾಗಿಲ್ಲ". ವಾಸ್ತವಿಕತೆ ದೂರವಾಗಿದೆ, ಸರ್ಕಾರವು ತಮ್ಮ ಅಸಮರ್ಥತೆಯನ್ನು ಒಪ್ಪಿಕೊಳ್ಳಬೇಕು. ಸದನ ಸಮಿತಿ ರಚಿಸಬೇಕು ಇತ್ಯಾದಿ ವಿಷಯಗಳ ಬಗ್ಗೆ ಮಾತಾಡುವರು.

ಉಳಿದ ಶಾಸಕರು ಅಧ್ಯಕ್ಷರ ಅನುಮತಿಯ ಮೇರೆಗೆ ಚರ್ಚೆಯಲ್ಲಿ ಭಾಗವಹಿಸಬಹುದು. ನಂತರ ಸಚಿವರು ಉತ್ತರ/ ಆಶ್ವಾಸನೆ ನೀಡುವರು.

(ಜಿ) **ಅಲ್ಪ ಕಾಲಾವಧಿ ಚರ್ಚೆ.–** ಪುಟ ಸಂಖ್ಯೆ 25ರ ಮಾದರಿಗಳನ್ವಯ ಸೂಚನೆಯನ್ನು ಕೊಟ್ಟಿರುವ ಸದಸ್ಯರು ಒಂದು ಸಂಕ್ಷಿಪ್ತ ಹೇಳಿಕೆಯನ್ನು ಕೊಡುವರು. ಸಂಬಂಧಪಟ್ಟ ಮಂತ್ರಿಯವರು ಸಂಕ್ಷಿಪ್ತ ಉತ್ತರ ನೀಡುವರು. ಕೆಲವು ಸದಸ್ಯರು ಅಧ್ಯಕ್ಷರ ಅನುಮತಿ ಪಡೆದು ಚರ್ಚೆಯಲ್ಲಿ ಭಾಗವಹಿಸುವರು.

(ಹೆಚ್) **ವಿಧೇಯಕದ ಮಂಡನೆ.–** ಪುಟ ಸಂಖ್ಯೆ 57–70 ಮಾದರಿಗಳನ್ವಯ ವಿಧೇಯಕವನ್ನು ಮಂಡಿಸುವಂತೆ ಸಂಬಂಧಪಟ್ಟ ಸಚಿವರಿಗೆ ಸಭಾಧ್ಯಕ್ಷರು ಸೂಚಿಸುವರು.

ಸಂಬಂಧಪಟ್ಟ ಮಂತ್ರಿಯವರು (ಮಾನ್ಯ ಸಹಕಾರ ಮಂತ್ರಿಗಳು) ಎದ್ದು ನಿಂತು.– ನಾನು "ಕರ್ನಾಟಕ ಋಣ ಪರಿಹಾರ ವಿಧೇಯಕ, 2018"ನ್ನು ಮಂಡಿಸುತ್ತಿದ್ದೇನೆ.

ಸಭಾಧ್ಯಕ್ಷರು – ವಿಧೇಯಕವನ್ನು ಮಂಡಿಸಲಾಗಿದೆ.

(ಐ) **ವಿಧೇಯಕದ ಪರ್ಯಾಲೋಚನೆ.–** ಸಂಬಂಧಪಟ್ಟ ಸಚಿವರು ವಿಧೇಯಕದ ಉದ್ದೇಶವನ್ನು ವಿವರಿಸುವರು ಹಾಗೂ ಮುಗಿಸಿದನಂತರ ಕುಳಿತುಕೊಳ್ಳುವರು.

ಸಭಾಧ್ಯಕ್ಷರು: ವಿಧೇಯಕದ ಬಗ್ಗೆ ಚರ್ಚೆಯಲ್ಲಿ ಪಾಲ್ಗೊಳ್ಳಲು ಸೂಚನೆ ನೀಡಿರುವ ಶಾಸಕರ ಹೆಸರನ್ನು ಕರೆಯುವರು– ತಮ್ಮ ತಮ್ಮ ಸರದಿಯನ್ವಯ ಶಾಸಕರು ಚರ್ಚೆಯಲ್ಲಿ ಭಾಗವಹಿಸಿ ಸಲಹೆ/ಸೂಚನೆ ನೀಡುವರು.

ಸಂಬಂಧಪಟ್ಟ ಸಚಿವರು: ಸಲಹೆಗಳ ಬಗ್ಗೆ ಉತ್ತರಿಸುವರು. ಇದಾದ ನಂತರ

ಸಭಾಧ್ಯಕ್ಷರು: ವಿಧೇಯಕವನ್ನು ಖಂಡ ಖಂಡವಾಗಿ ಮತಕ್ಕೆ ಹಾಕಲಾಗಿದೆ. ವಿಧೇಯಕದ ಪರವಾಗಿರುವವರು "ಹೌದು" ಎಂದು ಉತ್ತರಿಸಬೇಕು. ವಿಧೇಯಕಕ್ಕೆ ವಿರುದ್ಧವಾಗಿರುವವರು "ಇಲ್ಲ" ಎಂದು ಉತ್ತರಿಸಬೇಕು ಎಂದು ಹೇಳುವರು.

(ಸದಸ್ಯರು ತಮ್ಮ ತಮ್ಮ ನಿರ್ಣಯಗಳನ್ನು "ಹೌದು" ಅಥವಾ "ಇಲ್ಲ" ಎಂದು ಉತ್ತರಿಸುವರು.)

ಸಭಾಧ್ಯಕ್ಷರು – ವಿಧೇಯಕ ಅಂಗೀಕಾರವಾಗಿದೆ.

ಸಭಾಧ್ಯಕ್ಷರು – ಇಂದಿನ ಕಾರ್ಯಕಲಾಪಗಳು ಮುಗಿದಿವೆ. ನಾಳೆ ಪೂರ್ವಾಹ್ನ 11–00 ಗಂಟೆಗೆ ಸೇರಲಾಗುವುದು.

ಎಂದು ತಿಳಿಸುವರು. ಸದಸ್ಯರೆಲ್ಲರೂ ಎದ್ದು ನಿಲ್ಲುವರು. ಸಭಾ ಸದಸ್ಯರು ನಿರ್ಗಮಿಸಿದ ನಂತರ ಸದಸ್ಯರು ತಮ್ಮ ಆಸನಗಳಿಂದ ನಿರ್ಗಮಿಸುವರು.

ಮಾದರಿ ಕಾರ್ಯಕ್ರಮ ಹಾಗೂ ಕಡ್ಡಾಯ ವಿಷಯಗಳ ಪಟ್ಟಿಯನ್ನು ಕ್ರಮವಾಗಿ ಅನುಬಂಧ–ಎ ಮತ್ತು ಅನುಬಂಧ–ಬಿ ಯಲ್ಲಿ ಒದಗಿಸಲಾಗಿದೆ.

**(ಜೆ) ಶಿಷ್ಟಾಚಾರ ಸಂಹಿತೆ** –ಸ್ಪರ್ಧೆಗೆ ಭಾಗವಹಿಸುವ ವಿದ್ಯಾರ್ಥಿಗಳು ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.–

(1) ವಿದ್ಯಾರ್ಥಿಗಳು ಕೊಟ್ಟ ವಿಷಯವನ್ನು ಮಾತನಾಡಬೇಕಾಗುತ್ತದೆ. ವಿಷಯವನ್ನು ಮೀರಿ ಮಾಡನಾಡಲು ಅವಕಾಶವಿರುವುದಿಲ್ಲ.

(2) ಶಿಸ್ತು ಸಂಯಮಗಳು, ನಿಯಮಗಳು ಸ್ಪರ್ಧೆಯ ಎಲ್ಲಾ ವಿದ್ಯಾರ್ಥಿಗಳಿಗೆ ಮೀಸಲಾಗಿರುತ್ತದೆ.

**6.ತೀರ್ಪುಗಾರರ ಸಮಿತಿಯ ರಚನೆ:–** ಜಿಲ್ಲಾ ಮಟ್ಟದ ಯುವ ಸಂಸತ್ ಸ್ಪರ್ಧೆಯ ತೀರ್ಪುಗಾರರ ಸಮಿತಿಯಲ್ಲಿ,–

(1) ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆಯ ನಿಯೋಜಿತ ಅಧಿಕಾರಿ;
(2) ಸಾರ್ವಜನಿಕ ಶಿಕ್ಷಣ ಇಲಾಖೆಯ ಕ್ಷೇತ್ರ ಶಿಕ್ಷಣಾಧಿಕಾರಿಯ ದರ್ಜೆಗಿಂತ ಕಡಿಮೆ ಇಲ್ಲದ ಅಧಿಕಾರಿ;
(3) ಸ್ಥಳೀಯ ಶಾಸಕರು/ಜಿಲ್ಲಾ ಪಂಚಾಯತ್/ ತಾಲ್ಲೂಕ್ ಪಂಚಾಯತ್ ಸದಸ್ಯರು.
ಇರತಕ್ಕದ್ದು.

**7. ಮೆರಿಟ್ ಪಟ್ಟಿಯನ್ನು ಸಿದ್ಧಪಡಿಸುವುದು ಹಾಗೂ ಬಹುಮಾನ:–** ಮೆರಿಟ್ ಪಟ್ಟಿ ಹಾಗೂ ವರದಿಯನ್ನು ರಾಜ್ಯಮಟ್ಟದ ಯುವ ಸಂಸತ್ ಸ್ಪರ್ಧೆಗೆ ನಿಗದಿ ಪಡಿಸಿರುವ ಮಾದರಿಯಲ್ಲೇ ಸಿದ್ದಪಡಿಸತಕ್ಕದ್ದು. ಬಹುಮಾನಗಳನ್ನು ಸ್ಥಳೀಯ ಅಗತ್ಯತೆಗಳಿಗನುಗುಣವಾಗಿ ಮೊದಲ 5 ಸ್ಥಾನ ಗಳಿಸಿದವರಿಗೆ ಉತ್ತಮ ನಿರ್ವಹಣೆಗಾಗಿ ಬಹುಮಾನಗಳನ್ನು ನೀಡುವುದರೊಂದಿಗೆ, ಸ್ಪರ್ಧಿಗಳಿಗೆ ಬಹುಮಾನ ನೀಡುವುದನ್ನು ತೀರ್ಪುಗಾರರ ಸಮಿತಿಯು ನಿರ್ಧರಿಸಬಹುದು. ಜಿಲ್ಲಾ ಮಟ್ಟದ ಸ್ಪರ್ಧಿಗಳಿಗೆ/ಶಾಲೆಗಳಿಗೆ ಅನುಬಂಧ IV (ಪುಟ 20 ನೋಡಿ) ಮತ್ತು v (ಪುಟ 21 ನೋಡಿ)ರಲ್ಲಿ ನಿಗದಿ ಪಡಿಸಿದ ರೀತ್ಯಾ ಪ್ರಮಾಣ ಪತ್ರಗಳನ್ನು ಸ್ಪರ್ಧೆಯ ಸ್ಥಳದಲ್ಲೇ ನೀಡಲಾಗುವುದು.

## ಅನುಬಂಧ – ಎ

## ಮಾದರಿ ಕಾರ್ಯಕ್ರಮಗಳು

| | | |
|---|---|---|
| **ಪೂರ್ವಾಹ್ನ** | **11.00 ರಿಂದ 11.30 ರವರೆಗೆ** | **ಉದ್ಘಾಟನೆ** |
| | 11.30 ರಿಂದ 11.45 ರವರೆಗೆ | ಆಸನಗಳ ಜೋಡಣೆ ಇತ್ಯಾದಿ |
| | 11.45 ರಿಂದ ಅ. 2.00 ರವರೆಗೆ | ತಂಡದ ಪ್ರದರ್ಶನ |
| ಅಪರಾಹ್ನ | 2.00 ರಿಂದ 3.00 ರವರೆಗೆ | ಊಟದ ವಿರಾಮ |
| | 3.00 ರಿಂದ 3.15 ರವರೆಗೆ | ಬಹುಮಾನ ವಿತರಣಾ ಸಮಾರಂಭ |
| | 4.0 0 ರಿಂದ 4.30 ರವರೆಗೆ | ಫಲಿತಾಂಶ ನಿರ್ಣಯ, ಬಹುಮಾನ ವಿತರಣೆ |
| | 5 ಗಂಟೆಗೆ | ಕಾರ್ಯಕ್ರಮ ಮುಕ್ತಾಯ, ವಂದನಾರ್ಪಣೆ |

## ಅನುಬಂಧ – ಬಿ

## ಭಾಗ – 1 – ಕಡ್ಡಾಯ ವಿಷಯಗಳ ಪಟ್ಟಿ

1. ಸಭಾಧ್ಯಕ್ಷರ ಆಗಮನ
2. ಸಂತಾಪ ಸೂಚನೆಗಳು
3. ಪ್ರಶ್ನೋತ್ತರ ವೇಳೆ
4. ಗಮನ ಸೆಳೆಯುವ ಸೂಚನೆಗಳು
5. ಇಲಾಖಾ ಬೇಡಿಕೆಗಳ ಮೇಲಿನ ಚರ್ಚೆ
6. ವಿಧೇಯಕಗಳ ಮಂಡನೆ
7. ಖಾಸಗೀ ಕಲಾಪಗಳು (ನಿರ್ಣಯ ಅಥವಾ ಖಾಸಗೀ ವಿಧೇಯಕದ ಮಂಡನೆ ಇತ್ಯಾದಿ)
8. ಅಲ್ಪ ಕಾಲಾವಧಿ ಚರ್ಚೆ
9. ಶೂನ್ಯ ವೇಳೆ

ಸ್ಪರ್ಧೆಯ ಬಗ್ಗೆ ಸ್ಪಷ್ಟೀಕರಣ ಅಗತ್ಯತೆ ಇದ್ದಲ್ಲಿ ನಿರ್ದೇಶಕರು, ಡಿ.ಎಸ್.ಇ.ಆರ್.ಟಿ., 100 ಅಡಿ ರಿಂಗ್‌ರಸ್ತೆ, ಹೊಸಕೆರೆ ಹಳ್ಳಿ, ಬೆಂಗಳೂರು ಅಥವಾ ಕಾರ್ಯದರ್ಶಿ, ಸಂಸದೀಯ ವ್ಯವಹಾರಗಳ ಇಲಾಖೆ, ವಿಧಾನಸೌಧ, ಬೆಂಗಳೂರು ಇವರನ್ನು ಸಂಪರ್ಕಿಸಬಹುದು.(ದೂರವಾಣಿ–22254445,22033387)

**ಜಿಲ್ಲಾ ಮಟ್ಟದ ಯುವ ಸಂಸತ್ ಸ್ಪರ್ಧೆಯಲ್ಲಿ ಭಾಗವಹಿಸಿದ ಶಾಲೆಗೆ ಹಾಗೂ ಬಹುಮಾನಿತರಿಗೆ ನೀಡುವ ಪ್ರಮಾಣ ಪತ್ರಗಳ ನಮೂನೆ**

ಅನುಬಂಧ- IV

ಕರ್ನಾಟಕ ಸರ್ಕಾರ

ಸಂಸದೀಯ ವ್ಯವಹಾರಗಳ ಇಲಾಖೆ ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆ

**ಜಿಲ್ಲಾ ಮಟ್ಟದ ಯುವ ಸಂಸತ್ ಸ್ಪರ್ಧೆ 2019–20**

------------------------------------ಶಾಲೆಯ ------------------------ ತರಗತಿಯ ವಿದ್ಯಾರ್ಥಿ/ವಿದ್ಯಾರ್ಥಿನಿಯಾದ ----------------------------------ಕರ್ನಾಟಕ ಸರ್ಕಾರದ ಸಂಸದೀಯ ವ್ಯವಹಾರಗಳ ಇಲಾಖೆ ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆಯ ಸಹಭಾಗಿತ್ವದಲ್ಲಿ 2019–20ನೇ ಶೈಕ್ಷಣಿಕ ವರ್ಷದಲ್ಲಿ ನಡೆಸಿದ **"ಜಿಲ್ಲಾ ಮಟ್ಟದ ಯುವ ಸಂಸತ್ ಸ್ಪರ್ಧೆಯಲ್ಲಿ"** ಭಾಗವಹಿಸಿದ್ದಾರೆಂದು ಪ್ರಮಾಣೀಕರಿಸಲಾಗಿದೆ.

| | | |
|---|---|---|
| ಸ್ಥಳ:__________ | ಉಪ ನಿರ್ದೇಶಕರು | ಸಕ್ಷಮ ಪ್ರಾಧಿಕಾರಿ |
| ದಿನಾಂಕ:__________ | ಸಾರ್ವಜನಿಕ ಶಿಕ್ಷಣ ಇಲಾಖೆ | ಸಂಸದೀಯ ವ್ಯವಹಾರಗಳ ಇಲಾಖೆ |
| | ________________ ಜಿಲ್ಲೆ | |

**ಅನುಬಂಧ–V**

ಕರ್ನಾಟಕ ಸರ್ಕಾರ

ಸಂಸದೀಯ ವ್ಯವಹಾರಗಳ ಇಲಾಖೆ ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆ

**"ಜಿಲ್ಲಾ ಮಟ್ಟದ ಯುವ ಸಂಸತ್ ಸ್ಪರ್ಧೆ" 2019 –2020**

--------------------------------------ಶಾಲೆಯ---------------------------------

ತರಗತಿಯ ವಿದ್ಯಾರ್ಥಿ/ವಿದ್ಯಾರ್ಥಿನಿಯಾದ--------------------------------------------ಅವರಿಗೆ 2019 – 2020 ನೇ ಶೈಕ್ಷಣಿಕ ವರ್ಷದಲ್ಲಿ ಕರ್ನಾಟಕ ಸರ್ಕಾರದ ಸಂಸದೀಯ ವ್ಯವಹಾರಗಳ ಇಲಾಖೆ ಮತ್ತು ಸಾರ್ವಜನಿಕ ಶಿಕ್ಷಣ ಇಲಾಖೆ ಇವರ ಸಹಭಾಗಿತ್ವದಲ್ಲಿ ನಡೆಸಲಾದ "ಜಿಲ್ಲಾ ಮಟ್ಟದ ಯುವ ಸಂಸತ್ ಸ್ಪರ್ಧೆ"ಯಲ್ಲಿ ಅತ್ಯುತ್ತಮ ಸಾಧನೆಗೆ ------------------------------ ಬಹುಮಾನವನ್ನು ನೀಡಲಾಗಿದೆಯೆಂದು ಪ್ರಮಾಣೀಕರಿಸಲಾಗಿದೆ.

| | | |
|---|---|---|
| ಸ್ಥಳ:__________ | ಉಪ ನಿರ್ದೇಶಕರು | ಸಕ್ಷಮ ಪ್ರಾಧಿಕಾರಿ |
| ದಿನಾಂಕ:__________ | ಸಾರ್ವಜನಿಕ ಶಿಕ್ಷಣ ಇಲಾಖೆ | ಸಂಸದೀಯ ವ್ಯವಹಾರಗಳ |
| | ________________ ಜಿಲ್ಲೆ | ಇಲಾಖೆ |

## ಕರ್ನಾಟಕ ರಾಜ್ಯದ ಪ್ರೌಢ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ನಡೆಸುವ ಯುವ ಸಂಸತ್ ಸ್ಪರ್ಧೆಗೆ ಪೂರಕವಾಗಿ ಸಂಸತ್ ಕಾರ್ಯಕಲಾಪಗಳ ಬಗೆಗೆ ಕೆಲವು ವಿಶೇಷ ಮಾಹಿತಿಗಳು:

ಅಖಿಲ ಭಾರತ ಮುಖ್ಯ ಸಚೇತಕರ ಸಮ್ಮೇಳನವು ಮಾಡಿರುವ ಶಿಫಾರಸ್ಸುಗಳನ್ವಯ ಪ್ರಜಾಸತ್ತಾತ್ಮಕ ವ್ಯವಸ್ಥೆಯ ಬಗ್ಗೆ ಸಂಸತ್ತು, ವಿಧಾನ ಮಂಡಲದ ಅಧಿವೇಶನಗಳ ಬಗ್ಗೆ ಪ್ರೌಢ ಶಾಲಾ ವಿದ್ಯಾರ್ಥಿಗಳಿಗೆ ಮಾಹಿತಿ ನೀಡುವ ಉದ್ದೇಶದಿಂದ ಕರ್ನಾಟಕ ರಾಜ್ಯದಲ್ಲಿ "ಯುವ ಸಂಸತ್" ಸ್ಪರ್ಧೆಗಳನ್ನು ಜಿಲ್ಲಾ ಹಾಗೂ ರಾಜ್ಯ ಮಟ್ಟದಲ್ಲಿ ನಡೆಸಲಾಗುತ್ತಿದೆ. ಪ್ರಸ್ತುತ ಶೈಕ್ಷಣಿಕ ವರ್ಷದಲ್ಲಿ "ವಿಧಾನ ಸಭೆಯ" ಮಾದರಿ ಅಧಿವೇಶನವನ್ನು ನಡೆಸುವ ಕಾರ್ಯಕ್ರಮವನ್ನು ರೂಪಿಸಲಾಗಿದೆ.

2. **ವಿಧಾನ ಸಭೆಯ ರಚನೆ.–** ಭಾರತ ಸಂವಿಧಾನದ 170ನೇ ಅನುಚ್ಛೇದದ ಅನ್ವಯ ಕರ್ನಾಟಕ ರಾಜ್ಯದ ವಿಧಾನ ಸಭೆಯಲ್ಲಿ 224 ಚುನಾಯಿತ ಸದಸ್ಯರು ಹಾಗೂ ನಾಮನಿರ್ದೇಶಿತ ಒಬ್ಬ ಆಂಗ್ಲೋ ಇಂಡಿಯನ್ ಸದಸ್ಯರಿದ್ದಾರೆ.

3. **ವಿಧಾನ ಸಭೆಯ ಕಾರ್ಯಕಲಾಪಗಳು.–** ವಿಧಾನ ಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವಿಧಾನ ಸಭಾಧ್ಯಕ್ಷರ ಅನುಮೋದನೆಯೊಂದಿಗೆ ವಿಧಾನ ಸಭಾ ಸಚಿವಾಲಯದ ಕಾರ್ಯದರ್ಶಿಯವರು ಹೊರಡಿಸುವರು. ಕಾರ್ಯಕಲಾಪಗಳ ಪಟ್ಟಿಯಲ್ಲಿ,–

(ಅ) ಸಂತಾಪ ಸೂಚನೆ

(ಆ) ಪ್ರಶ್ನೋತ್ತರ

(ಇ) ಶೂನ್ಯವೇಳೆ

(ಈ) ವರದಿಗಳನ್ನು ಒಪ್ಪಿಸುವುದು

(ಉ)ಗಮನ ಸೆಳೆಯುವ ಸೂಚನೆಗಳು

(ಊ) ವಿತ್ತೀಯ ಕಾರ್ಯಕಲಾಪಗಳು

(ಋ) ಪೂರಕ ಕಾರ್ಯಕಲಾಪಗಳ ಪಟ್ಟಿ

(ಎ) ನಿಯಮ 69ರ ಅಡಿಯಲ್ಲಿ ಸಾರ್ವಜನಿಕ ಮಹತ್ವಗಳ ಜರೂರು ವಿಷಯದ ಚರ್ಚೆ.

(ಏ) ಶಾಸನ ರಚನೆ.

ಹಾಗೂ ಇನ್ನಿತರೆ ವಿಷಯಗಳನ್ನು ಸೇರಿಸಬಹುದು. ಪ್ರಸ್ತುತ ಅಧಿವೇಶನದ ಮಾದರಿ ಕಾರ್ಯಕಲಾಪಗಳ ಪಟ್ಟಿಯನ್ನು ಅನುಬಂಧ –VI ರಲ್ಲಿ ಒದಗಿಸಲಾಗಿದೆ.

3. **ಸಂತಾಪ ಸೂಚನೆಗಳು:** ಅಧಿವೇಶನ ಪ್ರಾರಂಭವಾದ ದಿನದ ಮೊದಲಿಗೆ ಅಗಲಿದ ಗಣ್ಯ ವ್ಯಕ್ತಿಗಳಿಗೆ ಸಭಾಧ್ಯಕ್ಷರಿಂದ ಸಂತಾಪ ಸೂಚನೆ. ಸಂತಾಪ ಸೂಚನೆಯನ್ನು ಪುಟ ಸಂಖ್ಯೆ 33–34ರಲ್ಲಿ ಒದಗಿಸಲಾಗಿದೆ.

5. **ಪ್ರಶ್ನೋತ್ತರಗಳು.–** (1) ಪ್ರತಿಯೊಂದು ದಿನದ ಅಧಿವೇಶನದ ಮೊದಲನೆಯ ಒಂದು ಗಂಟೆಯ ಅವಧಿಯನ್ನು ಪ್ರಶ್ನೆ ಕೇಳುವುದಕ್ಕೆ ಮತ್ತು ಉತ್ತರಿಸುವುದಕ್ಕೆ ಮೀಸಲಿಡಲಾಗುವುದು. ಸದರಿ ವಿಷಯದಲ್ಲಿ ಒಂದು ಉಪ ಪ್ರಶ್ನೆಗೆ ಅವಕಾಶವಿರುತ್ತದೆ.

(2) ಪ್ರಶ್ನೆಯನ್ನು ಕೇಳಲಿಚ್ಛಿಸುವ ಸದಸ್ಯರು 15 ದಿನಗಳಿಗೆ ಕಡಿಮೆ ಇಲ್ಲದೆ ಪ್ರಶ್ನೆಯ ಬಗ್ಗೆ ಸೂಚನಾ ಪತ್ರವನ್ನು ವಿಧಾನ ಸಭೆಯ ಕಾರ್ಯದರ್ಶಿಯವರಿಗೆ ಕೊಡಬೇಕು. ಪ್ರಶ್ನೆಯು ಲಿಖಿತ ರೂಪದಲ್ಲಿರಬೇಕು ಹಾಗೂ ಅದರಲ್ಲಿ ಯಾರಿಗೆ ಪ್ರಶ್ನೆ ಕೇಳಲಾಗಿದೆಯೋ ಆ ಸಚಿವರ ಪದನಾಮವನ್ನು ನಮೂದಿಸಬೇಕು.

(3) ಪ್ರಶ್ನೆಗಳನ್ನು,–

(ಅ) ಸದನದಲ್ಲಿ ಉತ್ತರಿಸುವ (ಚುಕ್ಕೆ ಗುರುತಿನ) ಪ್ರಶ್ನೆಗಳು; ಹಾಗೂ

(ಆ) ಲಿಖಿತ ಮೂಲಕ ಉತ್ತರಿಸುವ (ಚುಕ್ಕೆ ಗುರುತಿಲ್ಲದ) ಪ್ರಶ್ನೆಗಳು

ಎಂದು ವಿಂಗಡಿಸಲಾಗಿದೆ.

(4) ಪ್ರಶ್ನೆ ಕೇಳುವ ಬಗ್ಗೆ ಕೆಳಕಂಡ ಕೆಲವು ಪ್ರಮುಖ ಷರತ್ತುಗಳಿವೆ,–

(ಎ) ಒಂದು ಪ್ರಶ್ನೆಯು ಒಂದೇ ವಿಚಾರಕ್ಕೆ ಸಂಬಂಧ ಪಟ್ಟಿರಬೇಕು.

(ಬಿ) ಪ್ರಶ್ನೆಯು ಅರ್ಥವಾಗುವಂತೆ ಇರಬೇಕು.

(ಸಿ) ಪ್ರಶ್ನೆಯು ಸಾಮಾನ್ಯವಾಗಿ 150 ಪದಗಳನ್ನು ಮೀರತಕ್ಕುದ್ದಲ್ಲ.

(ಡಿ) ಸರ್ಕಾರಕ್ಕೆ ಸಂಬಂಧಪಡದ ಯಾವುದೇ ವಿಷಯಗಳ ಬಗ್ಗೆ ಪ್ರಶ್ನೆ ಕೇಳತಕ್ಕದ್ದಲ್ಲ.

(ಇ) ಕ್ಷುಲ್ಲಕ, ಸುಲಭವಾಗಿ ದೊರೆಯುವ ಮಾಹಿತಿಗಳನ್ನು ಕೇಳತಕ್ಕದ್ದಲ್ಲ.

(ಎಫ್) ನ್ಯಾಯಾಲಯದಲ್ಲಿ ವಿಚಾರಣೆಯಲ್ಲಿರುವ ವಿಷಯವನ್ನು ಪ್ರಶ್ನಿಸುವಂತಿಲ್ಲ. ಇತ್ಯಾದಿ.

(5) ವಿದ್ಯಾರ್ಥಿಗಳ ಉಪಯೋಗಕ್ಕಾಗಿ, ಸದನದಲ್ಲಿ ಉತ್ತರಿಸುವ (ಚುಕ್ಕೆ ಗುರುತಿನ) ಹಾಗೂ ಲಿಖಿತ ಮೂಲಕ ಉತ್ತರಿಸುವ (ಚುಕ್ಕೆ ಗುರುತಿಲ್ಲದ) ಪ್ರಶ್ನೆಗಳ ಕೆಲವು ಮಾದರಿಗಳನ್ನು ಪುಟ ಸಂಖ್ಯೆ 35–57ರಲ್ಲಿ ಒದಗಿಸಲಾಗಿದೆ.

**6. ಶೂನ್ಯವೇಳೆ.–** ಪ್ರಶ್ನೋತ್ತರ ವೇಳೆ ನಂತರ ಸರ್ಕಾರಿ ಕಾರ್ಯಕಲಾಪಕ್ಕೆ ಮೊದಲು ಬರುವ ಅವಧಿಯೇ ಶೂನ್ಯವೇಳೆ. ಈ ಅವಧಿಯಲ್ಲಿ ತುರ್ತು ವಿಷಯಗಳನ್ನು ಮಾತ್ರ ಪ್ರಸ್ತಾಪಿಸಬಹುದು.

**7. ಗಮನ ಸೆಳೆಯುವ ಸೂಚನೆಗಳು.–** (1) ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಮಂತ್ರಿಯವರ ಗಮನಕ್ಕೆ ತರಬಹುದು. ಮಂತ್ರಿಯವರು ಸಂಕ್ಷಿಪ್ತವಾಗಿ ಒಂದು ಹೇಳಿಕೆಯನ್ನು ಕೊಡಬಹುದು ಅಥವಾ ಇನ್ನೊಂದು ದಿನ ತಮ್ಮ ಹೇಳಿಕೆ ನೀಡಲು ಕಾಲಾವಕಾಶ ಕೋರಬಹುದು.

(2) (ಅ) ಗಮನ ಸೆಳೆಯುವ ಸೂಚನೆಯನ್ನು ಒಂದಕ್ಕಿಂತ ಹೆಚ್ಚು ಸದಸ್ಯರು ಸಹಿ ಮಾಡಿದ್ದಲ್ಲಿ, ಕಾರ್ಯಕಲಾಪಗಳ ಪಟ್ಟಿಯಲ್ಲಿ ನಮೂದಿಸಿರುವ ಸದಸ್ಯರು ಗಮನ ಸೆಳೆಯಬಹುದು.

(ಆ) ಗಮನ ಸೆಳೆಯುವ ಕಾರ್ಯಕಲಾಪದಲ್ಲಿ ಚರ್ಚೆಗೆ ಅವಕಾಶವಿಲ್ಲ. ಆದರೆ ಸಭಾಧ್ಯಕ್ಷರ ಅನುಮತಿಯೊಂದಿಗೆ ಸ್ಪಷ್ಟೀಕರಣ ಕೋರಬಹುದು. ಗಮನ ಸೆಳೆಯುವ ಸೂಚನೆಗಳ ಮಾದರಿಗಳನ್ನು ಪುಟ ಸಂಖ್ಯೆ 30 ರಲ್ಲಿ ನೀಡಲಾಗಿದೆ.

**8. ಸಾರ್ವಜನಿಕ ಮಹತ್ವದ ಜರೂರು ವಿಷಯದ ಅಲ್ಪ ಕಾಲಾವಧಿ ಚರ್ಚೆ.–** ನಿಯಮ 69ರ ಅಡಿಯಲ್ಲಿ ಸಾರ್ವಜನಿಕ ಮಹತ್ವದ ಒಂದು ಜರೂರು ವಿಷಯದ ಮೇಲೆ ಚರ್ಚೆ ನಡೆಸಲು ಅಪೇಕ್ಷಿಸುವ ಸದಸ್ಯರು ಬರಹದ ಮೂಲಕ ಸೂಚನೆಯನ್ನು ವಿವರಣಾತ್ಮಕ ಟಿಪ್ಪಣಿಯೊಂದಿಗೆ ಕಾರ್ಯದರ್ಶಿಯವರಿಗೆ ಕೊಡಬಹುದು. ಆ ಸೂಚನೆಗೆ ಕನಿಷ್ಟ ಬೇರೆ ಇಬ್ಬರು ಸದಸ್ಯರು ತಮ್ಮ ಸಹಿಗಳನ್ನು ಹಾಕುವುದರ ಮೂಲಕ ಬೆಂಬಲಿಸಲ್ಪಟ್ಟಿರಬೇಕು. ನಿಯಮದ ಅಡಿಯಲ್ಲಿ ಸೂಚನೆಯನ್ನು ಕೊಟ್ಟಿರುವ ಸದಸ್ಯನು ಒಂದು ಸಂಕ್ಷಿಪ್ತ ಹೇಳಿಕೆಯನ್ನು ನೀಡಬಹುದು ಮತ್ತು ಮಂತ್ರಿಗಳು ಸಂಕ್ಷಿಪ್ತವಾಗಿ ಉತ್ತರ ನೀಡಬೇಕು. ಅಧ್ಯಕ್ಷರ ಅನುಮತಿ ಪಡೆದ ಸದಸ್ಯರು ಚರ್ಚೆಯಲ್ಲಿ ಭಾಗವಹಿಸಬಹುದು. ಈ ನಿಯಮದಡಿ ನೀಡುವ ಮಾದರಿ ಸೂಚನೆಯನ್ನು ಪುಟ ಸಂಖ್ಯೆ 32 ರಲ್ಲಿ ಒದಗಿಸಿದೆ.

**9. ಶಾಸನ ರಚನೆ.–** (1) ಶಾಸನ ರಚನೆಯು ಶಾಸಕರ ಪ್ರಮುಖ ಅಧಿಕಾರ ಮತ್ತು ಕರ್ತವ್ಯಗಳಲ್ಲಿ ಒಂದು. ಭಾರತ ಸಂವಿಧಾನದ ಏಳನೇ ಅನುಸೂಚಿಯ ಎರಡನೇ ಪಟ್ಟಿ (ರಾಜ್ಯ ಪಟ್ಟಿ) ಹಾಗೂ ಮೂರನೇ ಪಟ್ಟಿ (ಸಂಯುಕ್ತ ಪಟ್ಟಿ) ಯಲ್ಲಿರುವ ವಿಷಯಗಳ ಬಗ್ಗೆ, ವಿಧಾನ ಸಭೆಯು ಶಾಸನಗಳನ್ನು ರಚಿಸಲು ಅಧಿಕಾರ ಹೊಂದಿದೆ.

(2) ಶಾಸನ ರಚನೆಯಲ್ಲಿ,–

(ಅ) ವಿಧೇಯಕವನ್ನು ಮಂಡಿಸುವುದು;

(ಆ) ವಿಧೇಯಕವನ್ನು ಪರ್ಯಾಲೋಚಿಸುವುದು; ಹಾಗೂ

(ಇ) ವಿಧೇಯಕವನ್ನು ಅಂಗೀಕರಿಸುವುದು.

ಈ ರೀತಿ ಮೂರು ಹಂತಗಳಿವೆ.

(3) ವಿಧೇಯಕಗಳನ್ನು ಸರ್ಕಾರವು ಸಂಬಂಧಪಟ್ಟ ಸಚಿವರ ಮುಖಾಂತರ ವಿಧಾನ ಸಭೆಯಲ್ಲಿ ಮಂಡಿಸುವುದು. ವಿಧೇಯಕದ ಪರ್ಯಾಲೋಚನೆಯಲ್ಲಿ ಆಡಳಿತ ಹಾಗೂ ವಿರೋಧ ಪಕ್ಷದ ಸದಸ್ಯರು ಸಲಹೆಗಳನ್ನು ನೀಡಬಹುದು ಹಾಗೂ ತಿದ್ದುಪಡಿಗಳನ್ನು ಸೂಚಿಸಬಹುದು.

ಪರ್ಯಾಲೋಚನೆಯ ನಂತರ ವಿಧೇಯಕವನ್ನು ಖಂಡ ಖಂಡವಾಗಿ (clause by clause) ಮತಕ್ಕೆ ಹಾಕಲಾಗುವುದು ಹಾಗೂ ಅಂಗೀಕರಿಸಲಾಗುವುದು.

(4) ವಿಧೇಯಕದ ಮಾದರಿಯನ್ನು ಪುಟ ಸಂಖ್ಯೆ 58–61 ರಲ್ಲಿ ಕೊಡಲಾಗಿದೆ.

## ಅನುಬಂಧ – VI

**ಕರ್ನಾಟಕ ವಿಧಾನ ಸಭೆಯ ಮಾದರಿ ಕಾರ್ಯಕಲಾಪಗಳ ಪಟ್ಟಿ**

**ಮಾದರಿ – 1**

**ಕರ್ನಾಟಕ ವಿಧಾನಸಭೆ**

(15ನೇ ವಿಧಾನಸಭೆ)

(ಮೂರನೇ ಅಧಿವೇಶನ)

**ಕಾರ್ಯಕಲಾಪಗಳ ಪಟ್ಟಿ**

(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

**01. ಸಂತಾಪ ಸೂಚನೆಗಳು**

**02. ಪ್ರಶ್ನೋತ್ತರ**

**ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಮೊದಲನೇ ಪಟ್ಟಿ**

**ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಮೊದಲನೇ ಪಟ್ಟಿ**

**03. ವರದಿಗಳನ್ನೊಪ್ಪಿಸುವುದು**

1. **ಶ್ರೀ. ಎಂ. ಕೃಷ್ಣಾರೆಡ್ಡಿ** (ಮಾನ್ಯ ಉಪ ಸಭಾಧ್ಯಕ್ಷರು ಹಾಗೂ ಅಧ್ಯಕ್ಷರು, ಸದಸ್ಯರುಗಳ ಖಾಸಗಿ ವಿಧೇಯಕಗಳ ಮತ್ತು ನಿರ್ಣಯಗಳ ಸಮಿತಿ) ಅವರು 2018-19ನೇ ಸಾಲಿನ ಸದಸ್ಯರುಗಳ ಖಾಸಗಿ ವಿಧೇಯಕಗಳ ಮತ್ತು ನಿರ್ಣಯಗಳ ಸಮಿತಿಯ ಮೂರನೇ ವರದಿಗಳನ್ನೊಪ್ಪಿಸುವುದು.

2. **ಶ್ರೀ. ಕೆ.ಜಿ. ಬೋಪಯ್ಯ** (ಅಧ್ಯಕ್ಷರು, ಸಭೆಯ ಮುಂದಿಡಲಾದ ಕಾಗದ ಪತ್ರಗಳ ಸಮಿತಿ) ಅವರು 2018-19ನೇ ಸಾಲಿನ ಸಭೆಯ ಮುಂದಿಡಲಾದ ಕಾಗದ ಪತ್ರಗಳ ಸಮಿತಿಯ 34ನೇ ವರದಿಯನ್ನೊಪ್ಪಿಸುವುದು.

3. **ಶ್ರೀ ಎ. ಟಿ. ರಾಮಸ್ವಾಮಿ** (ಅಧ್ಯಕ್ಷರು, ಸರ್ಕಾರಿ ಭರವಸೆಗಳ ಸಮಿತಿ)ಅವರು 2018-2019ನೇ ಸಾಲಿನ ಸರ್ಕಾರಿ ಭರವಸೆಗಳ ಸಮಿತಿಯ ಎರಡನೇ ಮತ್ತು ಮೂರನೇ ವರದಿಗಳನ್ನೊಪ್ಪಿಸುವುದು.

**04. ಶಾಸನ ರಚನೆ**

**ವಿಧೇಯಕವನ್ನು ಮಂಡಿಸುವುದು**

ಶ್ರೀ. ಸಹಕಾರ ಸಚಿವರು) **ಅವರು:-**

ಅ) 2018ನೇ ಸಾಲಿನ ಕರ್ನಾಟಕ ಋಣ ಪರಿಹಾರ ವಿಧೇಯಕ, 2018ನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

## 05. ಗಮನ ಸೆಳೆಯುವ ಸೂಚನೆಗಳು

1. **ಶ್ರೀ ಎಸ್ ಕುಮಾರ ಬಂಗಾರಪ್ಪ ಅವರು–** ಗ್ರಾಮ ಪಂಚಾಯತಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ತಮಗೆ ವಹಿಸಿರುವ ಕೆಲಸ ಕಾರ್ಯಗಳನ್ನು ಯಶಸ್ವಿಯಾಗಿ ನಿರ್ವಹಿಸಲು ಅನುಕೂಲವಾಗುವಂತೆ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳನ್ನು ಗ್ರೂಪ್–ಬಿ (ಗೆಜೆಟೆಡ್) ವೃಂದಕ್ಕೆ ಸೇರ್ಪಡೆ ಮಾಡುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

2. **ಶ್ರೀ ನಿಸರ್ಗ ನಾರಾಯಣಸ್ವಾಮಿ, ಎಲ್.ಎನ್. ಅವರು–** ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ನಿರ್ಮಾಣಕ್ಕಾಗಿ ಜಮೀನುಗಳನ್ನು ಕಳೆದುಕೊಂಡ ರೈತರಿಗೆ ದೇವನಹಳ್ಳಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಸರ್ಕಾರಿ ಜಮೀನುಗಳನ್ನು ಗುರುತಿಸಿ ನಿವೇಶನಗಳನ್ನು ಹಂಚಿಕೆ ಮಾಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

## 06. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. **ಶ್ರೀಯುತರುಗಳಾದ ಹೆಚ್. ಹಾಲಪ್ಪ, ವಿಶ್ವೇಶ್ವರ ಹೆಗಡೆ ಕಾಗೇರಿ, ಅರಗ ಜ್ಞಾನೇಂದ್ರ ಮತ್ತು ಎಸ್. ಕುಮಾರ ಬಂಗಾರಪ್ಪ ಇವರುಗಳು–** ಸಾಗರ ತಾಲ್ಲೂಕಿನ ಅರಳಗೋಡಿನಲ್ಲಿ ಕಾಣಿಸಿಕೊಂಡಿರುವ ಮಾರಣಾಂತಿಕ ಮಂಗನ ಕಾಯಿಲೆಯ ತಾಲ್ಲೂಕಿನಾದ್ಯಂತ ಹರಡುತ್ತಿದ್ದು ಅದನ್ನು ನಿಯಂತ್ರಿಸಲು ಅಗತ್ಯ ಕ್ರಮ ಕೈಗೊಳ್ಳುವ ಬಗ್ಗೆ ಚರ್ಚಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

2. **ಶ್ರೀಯುತರುಗಳಾದ ಜೆ.ಸಿ. ಮಾಧುಸ್ವಾಮಿ, ಎಸ್. ಕುಮಾರ ಬಂಗಾರಪ್ಪ, ಎಸ್. ಸುರೇಶಕುಮಾರ್ ಮತ್ತು ಎಸ್.ವಿ. ರಾಮಚಂದ್ರ ಇವರುಗಳು–** ರಾಜ್ಯ ಸರ್ಕಾರವು ವಿವಿಧ ಇಲಾಖೆಗಳು ಹಾಗೂ ಪಂಚಾಯಿತಿಗಳಿಗೆ ಅಂತರ್‌ಜಾಲದ ವ್ಯವಸ್ಥೆ ಅಳವಡಿಸುವ ಸಲುವಾಗಿ ತೊಡಗಿಸಿರುವ ಸುಮಾರು 800ಕ್ಕಿಂತ ಹೆಚ್ಚು ಕೋಟಿ ಸರ್ಕಾರಿ ಹಣವು ದುರುಪಯೋಗ ಆಗಿರುವ ವಿಷಯದ ಬಗ್ಗೆ ಚರ್ಚಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

3. **ಶ್ರೀಯುತರುಗಳಾದ ಎ.ಟಿ. ರಾಮಸ್ವಾಮಿ, ಕೆ.ಎಸ್. ಲಿಂಗೇಶ ಮತ್ತು ಡಿ.ಸಿ. ಗೌರಿಶಂಕರ್ ಇವರುಗಳು–** ಬೆಂಗಳೂರು ದಕ್ಷಿಣ ತಾಲ್ಲೂಕಿನ ಬಿ.ಎಂ. ಕಾವಲು ಗ್ರಾಮದ ಸರ್ವೆ ನಂ. 137ರಲ್ಲಿರುವ 310 ಎಕರೆ 18 ಗುಂಟೆ ಸರ್ಕಾರಿ ಜಾಗ ಹಾಗೂ ಬೆಂಗಳೂರು ಉತ್ತರ ತಾಲ್ಲೂಕಿನ ಸಿದ್ಧಾಪುರ ಗ್ರಾಮದ ಸರ್ವೆ ನಂ. 24ರಲ್ಲಿರುವ 4 ಎಕರೆ 18 ಗುಂಟೆ ಜಮೀನು ಮತ್ತು ಇತರೆ ಸರ್ಕಾರಿ ಜಮೀನುಗಳು ಖಾಸಗಿ ವ್ಯಕ್ತಿಗಳಿಗೆ ಸೃಷ್ಟಿತ ದಾಖಲೆಗಳ ಮೂಲಕ ಪರಭಾರೆಯಾಗುತ್ತಿರುವ ವಿಷಯದ ಬಗ್ಗೆ ಚರ್ಚಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

**ಕರ್ನಾಟಕ ವಿಧಾನ ಪರಿಷತ್ತು**

**ನೂರ ಮೂವತ್ತೆಂಟನೆಯ ಅಧಿವೇಶನ**

ಕಾರ್ಯಕಲಾಪಗಳ ಪಟ್ಟಿ

**(ಸಮಯ: ಬೆಳಿಗ್ಗೆ. 10.30 ಗಂಟೆಗೆ)**

******

**01. ಸಂತಾಪ ಸೂಚನೆಗಳು**

**(15 ನಿಮಿಷಗಳ ನಂತರ ಸದನವು ಪುನ: ಸಮಾವೇಶಗೊಳ್ಳುವುದು)**

**02. ಪ್ರಶ್ನೋತ್ತರ**

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಒಂದನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು: ಒಂದನೆಯ ಪಟ್ಟಿ

**03. ಗಮನ ಸೆಳೆಯುವ ಸೂಚನೆಗಳು**

ಅ) **ಶ್ರೀ ಪಿ. ಆರ್. ರಮೇಶ್** ಅವರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಭೂ ಪರಿವರ್ತನೆಯಾಗದೆ ಅನಧಿಕೃತವಾಗಿ ನಿರ್ಮಿಸಿರುವ ಎಲ್ಲಾ ರೆವಿನ್ಯೂ ನಿವೇಶನಗಳನ್ನು ಕರ್ನಾಟಕ ಲ್ಯಾಂಡ್ ರೆವಿನ್ಯೂ ಕಾಯ್ದೆ ಹಾಗೂ ಕರ್ನಾಟಕ ಕಂಟ್ರಿ ಮತ್ತು ಟೌನ್ ಪ್ಲಾನಿಂಗ್ ಕಾಯ್ದೆ ಮತ್ತು ಕೆ.ಎಂ.ಸಿ. ಕಾಯ್ದೆಗಳಿಗೆ ತಿದ್ದುಪಡಿ ತಂದು ಸಕ್ರಮಗೊಳಿಸುವ ಬಗ್ಗೆ **ಮಾನ್ಯ ಉಪ ಮುಖ್ಯಮಂತ್ರಿಗಳ** ಗಮನ ಸೆಳೆಯುವುದು.

ಆ) **ಶ್ರೀ ಎನ್. ರವಿಕುಮಾರ್** ಅವರು ಬೆಂಗಳೂರು ನಗರದಲ್ಲಿ ಜಾಹಿರಾತು ಫಲಕಗಳನ್ನು ಅದರ ಸ್ಟ್ರಕ್ಚರ್‌ನೊಂದಿಗೆ ತೆರುವುಗೊಳಿಸಬೇಕೆಂದು ಮಾನ್ಯ ಉಚ್ಚ ನ್ಯಾಯಾಲಯದ ಆದೇಶವಿದ್ದರೂ ಅದನ್ನು ಕ್ರಮಬದ್ಧವಾಗಿ ಜಾರಿಗೊಳಿಸದಿರುವ ಬಗ್ಗೆ **ಮಾನ್ಯ ಉಪ ಮುಖ್ಯಮಂತ್ರಿಗಳ** ಗಮನ ಸೆಳೆಯುವುದು.

**04. ನಿಯಮ 330ರ ಮೇರೆಗೆ**

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ** ಅವರು ಧಾರವಾಡದ ಎನ್. ಎ. ಮುತ್ತಣ್ಣ ಸ್ಮಾರಕ ಪೊಲೀಸ್ ಮಕ್ಕಳ ವಸತಿ ಶಾಲೆಯು 1997ರಲ್ಲಿ ಪ್ರಾರಂಭವಾಗಿ ಉತ್ತಮ ಫಲಿತಾಂಶವನ್ನು ಪಡೆಯುತ್ತಾ ಬಂದಿದ್ದರೂ ಏಕಾಏಕಿ ಶಾಲೆಯನ್ನು ಮುಚ್ಚಿರುವುದರಿಂದ ಶಿಕ್ಷಕರು ಹಾಗೂ ವಿದ್ಯಾರ್ಥಿಗಳಿಗೆ ತೊಂದರೆ ಉಂಟಾಗಿರುವ ಬಗ್ಗೆ ಪ್ರಸ್ತಾಪಿಸುವುದು.

## ಅನುಬಂಧ–VII

**ಕರ್ನಾಟಕ ವಿಧಾನಸಭೆ**

ಹದಿನಾಲ್ಕನೇ ವಿಧಾನಸಭೆ

(ಹದಿನಾಲ್ಕನೇ ಅಧಿವೇಶನ)

**ಸಂತಾಪ ಸೂಚನೆ**

**ಮಾನ್ಯ ಸಭಾಧ್ಯಕ್ಷರು:**

ಹಿರಿಯ ರಾಜಕಾರಣಿಯಾಗಿದ್ದ ವಿ. ಧನಂಜಯ ಕುಮಾರ್ ಮತ್ತು ಪ್ರಗತಿಪರ ಚಿಂತಕರಾಗಿದ್ದ ಡಾ:ಗಿರೀಶ್ ಕಾರ್ನಾಡ್ ನಿಧನ ಹೊಂದಿರುವುದನ್ನು ಈ ಸದನಕ್ಕೆ ಅತ್ಯಂತ ವಿಷಾದದಿಂದ ತಿಳಿಸಬಯಸುತ್ತೇನೆ.

**ವಿ. ಧನಂಜಯ ಕುಮಾರ್**

ವಿ. ಧನಂಜಯ ಕುಮಾರ ಅವರು ದಿನಾಂಕ:04.06.1951 ರಲ್ಲಿ ಬೆಳ್ತಂಗಡಿ ತಾಲ್ಲೂಕಿನ ವೇಣೂರಿನಲ್ಲಿ ಜನಿಸಿದ್ದರು, ಕಾನೂನು ಪದವೀಧರರಾಗಿದ್ದ ಅವರು ವೃತ್ತಿಯಲ್ಲಿ ವಕೀಲರಾಗಿದ್ದರು, ದೇಶದಲ್ಲಿ ತುರ್ತು ಪರಿಸ್ಥಿತಿ ಘೋಷಣೆಯಾದಾಗ ಅದರ ವಿರುದ್ಧ ಹೋರಾಟ ನಡೆಸಿ ಜೈಲು ಸೇರಿದ್ದರು. ಜೈಲಿನಿಂದ ಹೊರಬಂದ ನಂತರ ತಮ್ಮನ್ನು ಸಕ್ರಿಯ ರಾಜಕಾರಣದಲ್ಲಿ ತೊಡಗಿಸಿಕೊಂಡಿದ್ದರು.

ದಿವಂಗತರು 1983 ರಲ್ಲಿ 7ನೇ ವಿಧಾನಸಭೆಗೆ ನಡೆದ ಚುನಾವಣೆಯಲ್ಲಿ ಮಂಗಳೂರು ಕ್ಷೇತ್ರದಿಂದ ವಿಧಾನಸಭೆಗೆ ಆಯ್ಕೆಗೊಂಡಿದ್ದರು. 1991 ರಲ್ಲಿ ಸಂಸದರಾಗಿ ಮೊದಲನೇ ಬಾರಿಗೆ ಚುನಾಯಿತರಾಗಿದ್ದ ಅವರು, ಮಂಗಳೂರು ಕ್ಷೇತ್ರದಿಂದ ಸತತ 4 ಬಾರಿ ಸಂಸದರಾಗಿ ಲೋಕಸಭೆ ಪ್ರವೇಶಿಸಿದ್ದರು. 1996 ರಲ್ಲಿ ಕೇಂದ್ರದಲ್ಲಿ ನಾಗರಿಕ ವಿಮಾನಯಾನ ಮತ್ತು ಪ್ರವಾಸೋದ್ಯಮ ಸಚಿವರಾಗಿ, 1999 ರಲ್ಲಿ ಕೇಂದ್ರದ ಹಣಕಾಸು ಖಾತೆ ರಾಜ್ಯ ಸಚಿವರಾಗಿ ಹಾಗೂ 2000ದಲ್ಲಿ ಕೇಂದ್ರದಲ್ಲಿ ಜವಳಿ ಖಾತೆ ರಾಜ್ಯ ಸಚಿವರಾಗಿ ಕಾರ್ಯನಿರ್ವಹಿಸಿದ್ದರು. ಹಿಂದಿ ಭಾಷೆಯ ಮೇಲೆ ಪ್ರಭುತ್ವ ಹೊಂದಿದ್ದ ಅವರು ಹಿರಿಯ ನಾಯಕರ ಭಾಷಣಗಳನ್ನು ನಿರರ್ಗಳವಾಗಿ ಅನುವಾದಿಸುತ್ತಿದ್ದರು. 1996 ರಲ್ಲಿ ಸಂಸದರ ನಿಧಿಯನ್ನು ಶೇಕಡ 100ರಷ್ಟು ಬಳಕೆ ಮಾಡಿಕೊಂಡು 'ಶಹಬ್ಬಾಸ್ ಧನಂಜಯ ಕುಮಾರ್' ಎಂಬ ಪ್ರಶಂಸೆ ಪಡೆದಿದ್ದರು.

ಹಿರಿಯ ರಾಜಕಾರಣಿಯಾಗಿದ್ದ ವಿ. ಧನಂಜಯ ಕುಮಾರ್ ಅವರು ದಿನಾಂಕ:04.03.2019 ರಂದು ನಿಧನ ಹೊಂದಿರುತ್ತಾರೆ.

## ಡಾ: ಗಿರೀಶ್ ಕಾರ್ನಾಡ್

ಡಾ: ಗಿರೀಶ್ ಕಾರ್ನಾಡ್, ಅವರು ದಿನಾಂಕ:19.05.1938 ರಂದು ಮಹಾರಾಷ್ಟ್ರ ರಾಜ್ಯದ ಮಥೇರಾನ್‌ನಲ್ಲಿ ಜನಿಸಿದ್ದರು, ಆಕ್ಸ್‌ಫರ್ಡ್ ವಿಶ್ವವಿದ್ಯಾಲಯದಲ್ಲಿ ಎಂ.ಎ ಪದವಿ ಪಡೆದಿದ್ದ ಅವರು 1994 ರಲ್ಲಿ ಕರ್ನಾಟಕ ವಿಶ್ವವಿದ್ಯಾಲಯದಿಂದ ಗೌರವ ಡಿ.ಲಿಟ್ ಪಡೆದಿದ್ದರು. ವೈಚಾರಿಕ ನೆಲೆಗಟ್ಟಿನ ಮೇಲೆ ಸಾಹಿತ್ಯ ರಚಿಸುತ್ತಿದ್ದ ಅವರು ನಾಟಕ ರಚನೆಗಾಗಿ 1998 ರಲ್ಲಿ ಜ್ಞಾನಪೀಠ ಪ್ರಶಸ್ತಿಯ ಪುರಸ್ಕೃತರಾಗಿದ್ದರು, ಕನ್ನಡದಲ್ಲಿ ಜ್ಞಾನಪೀಠ ಪ್ರಶಸ್ತಿ ಪಡೆದವರಲ್ಲಿ ಅವರು ಏಳನೆಯವರಾಗಿದ್ದರು. ಉತ್ತಮ ನಟರಾಗಿದ್ದ ಕಾರ್ನಾಡರು ಮೇರು ರಂಗಕರ್ಮಿಯಾಗಿದ್ದರಲ್ಲದೇ ಸಿನಿಮಾರಂಗದಲ್ಲೂ ತಮ್ಮದೇ ಆದ ವಿಶೇಷ ಛಾಪು ಮೂಡಿಸಿದ್ದರು. 1974 ರಲ್ಲಿ ಪದ್ಮಶ್ರೀ, 1992 ರಲ್ಲಿ ಪದ್ಮಭೂಷಣ ಮತ್ತು 1998 ರಲ್ಲಿ ಕಾಳಿದಾಸ ಸಮ್ಮಾನ್ ಗೌರವಕ್ಕೆ ಭಾಜನರಾಗಿದ್ದರು. ಇದಲ್ಲದೇ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ, ಗುಬ್ಬಿ ವೀರಣ್ಣ ಪ್ರಶಸ್ತಿಗಳನ್ನು ಪಡೆದಿದ್ದರು. ಯಯಾತಿ, ತುಘಲಕ್, ಹಯವದನ ಮುಂತಾದ ಪ್ರಸಿದ್ಧ ನಾಟಕಗಳನ್ನು ರಚಿಸಿದ್ದ ಅವರು ತಲೆದಂಡ ನಾಟಕ ರಚನೆಗಾಗಿ ಕೇಂದ್ರ ಮತ್ತು ಕರ್ನಾಟಕ ರಾಜ್ಯ ಸರ್ಕಾರಗಳ ಸಾಹಿತ್ಯ ಅಕಾಡೆಮಿ ಪ್ರಶಸ್ತಿಗಳನ್ನು ಪಡೆದಿದ್ದರು. ಪುರಾಣ, ಇತಿಹಾಸ, ಜಾನಪದಗಳಿಗೆ ಸಮಕಾಲೀನ ರಂಗವ್ಯಾಖ್ಯಾನ ನೀಡಿದ್ದ ಕಾರ್ನಾಡರು ವಿವಿಧ ಅಕಾಡೆಮಿ ಪ್ರಶಸ್ತಿಗಳನ್ನು ಪಡೆದಿದ್ದರು.

ಪ್ರಗತಿಪರ ಚಿಂತಕರಾಗಿದ್ದ ಡಾ:ಗಿರೀಶ್ ಕಾರ್ನಾಡ್ ಅವರು ದಿನಾಂಕ:10.06.2019 ರಂದು ನಿಧನ ಹೊಂದಿರುತ್ತಾರೆ.

(ಮೃತರ ಗೌರವಾರ್ಥ ಮಾನ್ಯ ಸದಸ್ಯರು ಒಂದು ನಿಮಿಷ ಮೌನ ಆಚರಿಸಿದರು)

**ಸಭಾಧ್ಯಕ್ಷರು**

**ಕರ್ನಾಟಕ ವಿಧಾನಸಭೆ**

# ಅನುಬಂಧ-VIII

## ಸದನದಲ್ಲಿ ಉತ್ತರಿಸುವ (ಚುಕ್ಕೆ ಗುರುತಿನ) ಹಾಗೂ ಲಿಖಿತ ಮೂಲಕ ಉತ್ತರಿಸುವ (ಚುಕ್ಕೆ ಗುರುತಿಲ್ಲದ) ಪ್ರಶ್ನೆಗಳ ಹಾಗೂ ಉತ್ತರಗಳ ಕೆಲವು ಮಾದರಿಗಳು, ವಿಧಾನ ಸಭೆ ಮತ್ತು ವಿಧಾನ ಪರಿಷತ್ತು

### ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 82

ಸದಸ್ಯರು ಹೆಸರು :

ವಿಷಯ :

ಉತ್ತರಿಸಬೇಕಾದ ದಿನಾಂಕ :

ಉತ್ತರಿಸುವ ಸಚಿವರು : ಕಂದಾಯ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ತರೀಕೆರೆ ತಾಲ್ಲೂಕು ವ್ಯಾಪ್ತಿಯ ಅಜ್ಜಂಪುರ ನೂತನ ತಾಲ್ಲೂಕಿನಲ್ಲಿ ಈವರೆವಿಗೂ ಯಾವುದೇ ಸರ್ಕಾರಿ ಕಛೇರಿಗಳು ಆರಂಭಗೊಂಡಿಲ್ಲದಿರುವುದರಿಂದ ಸರ್ಕಾರಿ ಕೆಲಸಗಳು ಸಂಪೂರ್ಣ ಕುಂಠಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಚಿಕ್ಕಮಂಗಳೂರು ಜಿಲ್ಲೆಯ ಅಜ್ಜಂಪುರ ನೂತನ ತಾಲ್ಲೂಕಿನಲ್ಲಿ ಕಂದಾಯ ಇಲಾಖಾ ವತಿಯಿಂದ ತಾಲ್ಲೂಕು ಕಛೇರಿಯನ್ನು ಪ್ರಾರಂಭ ಮಾಡಲಾಗಿದೆ ಹಾಗೂ ಅಗತ್ಯವಾದ ಹುದ್ದೆಗಳನ್ನು ಸೃಜಿಸಲಾಗಿದೆ. ಇತರೆ ಇಲಾಖೆಗಳು ತಾಲ್ಲೂಕು ಮಟ್ಟದ ಕಛೇರಿಗಳನ್ನು ಸಂಬಂಧ ಪಟ್ಟ ಇಲಾಖೆಗಳು ಆರ್ಥಿಕ ಇಲಾಖೆಯ ಸಹಮತಿಯೊಂದಿಗೆ ಹಂತಹಂತವಾಗಿ ತೆರೆಯಲು ಅನುಮತಿ ನೀಡಲಾಗಿದೆ.<br><br>ಅದರಂತೆ ಹೊಸ ತಾಲ್ಲೂಕು ಮಟ್ಟದ ಕಚೇರಿಗಳನ್ನು 14 ಪ್ರಮುಖ ಇಲಾಖೆಗಳ ತಾಲ್ಲೂಕು ತಾಲ್ಲೂಕು ಮಟ್ಟದ ಕಚೇರಿಗಳನ್ನು ಪ್ರಾರಂಭಿಸಲು ತುರ್ತಾಗಿ ಕ್ರಮಕೈಗೊಳ್ಳುವಂತೆ ಸಂಬಂಧಪಟ್ಟ ಇಲಾಖೆಗಳನ್ನು ಈಗಾಗಲೇ ಕೋರಲಾಗಿದ್ದು, ಈ ಬಗ್ಗೆ ಕ್ರಮವಹಿಸಲಾಗುತ್ತಿದೆ. |
| ಆ) | ಇದರಿಂದ ರೈತರಿಗೆ ಹಾಗೂ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ | ತಾಲ್ಲೂಕು ಕಛೇರಿಯು ಈಗಾಗಲೇ ಪ್ರಾರಂಭಗೊಂಡಿದ್ದು ಸಾರ್ವಜನಿಕ ಕೆಲಸ |

| | | |
|---|---|---|
| | ಗಮನಕ್ಕೆ ಬಂದಿದೆಯೇ? | ಕಾರ್ಯಗಳು ನಡೆಯುತ್ತಿರುತ್ತವೆ. |
| ಇ) | ಹಾಗಿದ್ದಲ್ಲಿ ಈ ನೂತನ ತಾಲ್ಲೂಕಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಎಷ್ಟು ಹಣ ಈವರೆವಿಗೂ ಬಿಡಗಡೆಯಾಗಿದೆ? (ವಿವರ ನೀಡುವುದು) | ಹೊಸದಾಗಿ ರಚನೆಯಾದ ಅಜ್ಜಂಪುರ ತಾಲ್ಲೂಕಿನ ಕಾರ್ಯಾರಂಭ ಮತ್ತು ಆಡಳಿತಾತ್ಮಕ ಪ್ರಕ್ರಿಯೆಯನ್ನು ಪ್ರಾರಂಭಿಸಲು ಹಾಗೂ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಈವರೆಗೆ ಒಟ್ಟು ರೂ. 15.00 ಲಕ್ಷಗಳ ಅನುದಾನವನ್ನು ಜಿಲ್ಲಾಧಿಕಾರಿಗಳಿಗೆ ಬಿಡುಗಡೆ ಮಾಡಲಾಗಿರುತ್ತದೆ. |

ಕಂದಾಯ ಸಚಿವರು

# ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 201

ಸದಸ್ಯರು ಹೆಸರು :

ಉತ್ತರಿಸಬೇಕಾದ ದಿನಾಂಕ :

ಉತ್ತರಿಸುವ ಸಚಿವರು : ಮಾನ್ಯ ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖಾ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಚನ್ನಮ್ಮನ ಕಿತ್ತೂರು ತಾಲ್ಲೂಕು ಕೇಂದ್ರದಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖಾಯ ಉಪ ವಿಭಾಗ ಕಛೇರಿ ಆರಂಭಿಸುವ ಪ್ರಸ್ತಾವನೆ ಸರ್ಕಾರದ ಯಾವ ಹಂತದಲ್ಲಿದೆ; | ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಉಪ ವಿಭಾಗ ಮಟ್ಟದ ಕಛೇರಿ ಇರುವುದಿಲ್ಲ. ಪ್ರತಿ ತಾಲ್ಲೂಕಿಗೆ ಒಂದು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿ ಇರುತ್ತದೆ. ಕಿತ್ತೂರು ತಾಲ್ಲೂಕಿನಲ್ಲಿ ಹೊಸದಾಗಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ ಸೃಜಿಸಬೇಕಾಗಿರುತ್ತದೆ. |
| ಆ) | ಯಾವ ಕಾಲಮಿತಿಯಲ್ಲಿ ಇಲಾಖೆಯ ಉಪ ವಿಭಾಗ ಕಛೇರಿ ಆರಂಭಿಸಲಾಗುವುದು? | ಉಪ ವಿಭಾಗ ಕಛೇರಿಗೆ ಅವಕಾಶವಿರುವುದಿಲ್ಲ. ಕಿತ್ತೂರು ತಾಲ್ಲೂಕಿಗೆ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿಯನ್ನು ಕೇಂದ್ರ ಸರ್ಕಾರದ ಅನುಮೋದನೆ ಬಂದ ತಕ್ಷಣ ಪ್ರಾರಂಭಿಸಲಾಗುವುದು. |

ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ
ಹಾಗೂ ವಿಕಲಚೇತನರ ಮತ್ತು ಹಿರಿಯ
ನಾಗರಿಕರ ಸಬಲೀಕರಣ ಇಲಾಖಾ
ಸಚಿವರು

<u>**ಕರ್ನಾಟಕ ವಿಧಾನಸಭೆ**</u>

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 549

ಸದಸ್ಯರು ಹೆಸರು :

ಉತ್ತರಿಸಬೇಕಾದ ದಿನಾಂಕ :

ಉತ್ತರಿಸುವ ಸಚಿವರು : ಮಾನ್ಯ ಕಾರ್ಮಿಕ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಯಭಾಗ ತಾಲ್ಲೂಕಿನಲ್ಲಿ ಎಷ್ಟು ಜನ ಕಾರ್ಮಿಕರು ಗುರುತಿನ ಚೀಟಿಯನ್ನು ಪಡೆದು ಕೊಂಡಿರುತ್ತಾರೆ.<br><br>ಅವರಿಗೆ ಯಾವ ಯಾವ ಸೌಲಭ್ಯಗಳನ್ನು ಇಲಾಖೆಯಿಂದ ನೀಡಲಾಗಿರುತ್ತದೆ;<br><br>(ವಿವರವನ್ನು ಸಲ್ಲಿಸುವುದು) | 1. ರಾಯಭಾಗ ತಾಲ್ಲೂಕಿನಲ್ಲಿ ಇಲ್ಲಿಯವರೆಗೆ 2427 ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಗುರುತಿನ ಚೀಟಿಯನ್ನು ಪಡೆದಿರುತ್ತಾರೆ. ಮಂಡಳಿಯಿಂದ ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ 15 ರೀತಿಯ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ನೀಡಲಾಗುತ್ತಿದ್ದು, ಅವುಗಳ ವಿವರವನ್ನು ಅನುಬಂಧ-1 ರಲ್ಲಿ ಒದಗಿಸಿದೆ.<br><br>ರಾಯಭಾಗ ತಾಲ್ಲೂಕಿಗೆ ಸಂಬಂಧಿಸಿದಂತೆ ಮಂಡಳಿಯಿಂದ ಈ ಕೆಳಕಂಡಂತೆ ಸೌಲಭ್ಯಗಳನ್ನು ನೀಡಲಾಗಿರುತ್ತದೆ. |

| ಸೌಲಭ್ಯದ ವಿವರ | ಕಾರ್ಮಿಕರ ಸಂಖ್ಯೆ | ಸೌಲಭ್ಯದ ಮೊತ್ತ |
|---|---|---|
| ಶೈಕ್ಷಣಿಕ ಧನ ಸಹಾಯ | 170 | 3,00,575/- |
| ಹೆರಿಗೆ ಧನ ಸಹಾಯ | 01 | 15,000/- |
| ಮದುವೆ ಧನ ಸಹಾಯ | 13 | 6,50,000/- |
| ಅಂತ್ಯ ಸಂಸ್ಕಾರ ಹಾಗೂ ಅನುಗ್ರಹ ರಾಶಿ | 17 | 9,18,000/- |
| **ಒಟ್ಟು** | **201** | **24,83,575/-** |

| | | |
|---|---|---|
| | | 2. ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು ಜಾರಿಗೊಳಿಸುತ್ತಿರುವ “ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ವಾಹನ ಸಾರಿಗೆ ಕಾರ್ಮಿಕರ ಅಪಘತ ಪರಿಹಾರ ಯೋಜನೆ” ಯಡಿ ರಾಯಭಾಗ ತಾಲ್ಲೂಕಿನಲ್ಲಿ 1062 ಖಾಸಗಿ ವಾಣಿಜ್ಯ ವಾಹನ ಚಾಲಕರು ಗುರುತಿನ ಚೀಟಿಯನ್ನು ಪಡೆದುಕೊಂಡಿರುತ್ತಾರೆ.<br>**ಯೋಜನೆಯ ಸೌಲಭ್ಯ:-**<br>• ಅಪಘಾತದಿಂದ ಚಾಲಕರು, ನಿರ್ವಾಹಕರು ಹಾಗೂ ಕ್ಲೀನರಗಳು ಮರಣ ಹೊಂದಿದಲ್ಲಿ ಅವರ ನಾಮನಿರ್ದೇಶಿತರಿಗೆ/ಅವಲಂಬಿತರಿಗೆ ರೂ.5 ಲಕ್ಷ ಪರಿಹಾರ.<br>• ಅಪಘಾತದಿಂದ ಶಾಶ್ವತ ದುರ್ಬಲತೆ ಹೊಂದಿದಾಗ, ಫಲಾನುಭವಿಗೆ ದುರ್ಬಲತೆಯ ಪ್ರಮಾಣಕ್ಕೆ ಅನುಗುಣವಾಗಿ ರೂ.2 ಲಕ್ಷದವರೆಗೆ ಪರಿಹಾರ.<br>• ಅಪಘಾತದಿಂದ ತಾತ್ಕಾಲಿಕ ದುರ್ಬಲತೆ ಹೊಂದಿ, ಚಿಕಿತ್ಸೆ ಪಡೆದಲ್ಲಿ ರೂ. 1 ಲಕ್ಷ ರೂ.ಗಳವರೆಗೆ ಆಸ್ಪತ್ರೆ ವೆಚ್ಚದ ಮರುಪಾವತಿ ಸೌಲಭ್ಯ.<br>ಈ ವರ್ಷದಿಂದ ಯೋಜನೆಯಡಿ ಅಪಘಾತದಿಂದ ನಿಧನರಾದ ಅಥವಾ ಸಂಪೂರ್ಣ ದುರ್ಬಲತೆ ಹೊಂದಿದ ಫಲಾನುಭವಿಗಳ ಇಬ್ಬರು ಮಕ್ಕಳಿಗೆ 1ನೇ ತರಗತಿಯಿಂದ ಪದವಿಪೂರ್ವ ವ್ಯಾಸಂಗದವರೆಗೆ ವಾರ್ಷಿಕ ರೂ. 10,000/- ಶೈಕ್ಷಣಿಕ ಸಹಾಯಧನ ನೀಡಲಾಗುತ್ತೆದೆ. |
| ಆ) | ರಾಯಭಾಗ ತಾಲ್ಲೂಕಿನಲ್ಲಿ ಕಾರ್ಮಿಕರ ಗುರುತಿನ ಚೀಟಿಯನ್ನು ಪಡೆಯುವುದಕ್ಕಾಗಿ ಎಷ್ಟು ಜನ ಅರ್ಜಿಯನ್ನು ಸಲ್ಲಿಸಿರುತ್ತಾರೆ; ಇಲ್ಲಿಯವರೆಗೆ ಅವರಿಗೆ ಗುರುತಿನ ಚೀಟಿ ನೀಡದಿರಲು ಕಾರಣವೇನು; | 1. ರಾಯಭಾಗ ತಾಲ್ಲೂಕಿನಲ್ಲಿ ಗುರುತಿನ ಚೀಟಿಯನ್ನು ಪಡೆಯಲು ದಿನಾಂಕ: 01.02.20119 ಹಾಗೂ 04.02.2019 ರಂದು 60 ಕಾರ್ಮಿಕರು ಅರ್ಜಿ ಸಲ್ಲಿಸಿದ್ದು, ನೋಂದಣಿಗಾಗಿ ಸಲ್ಲಿಸಿರುವ ಅರ್ಜಿಗಳನ್ನು ಪರಿಶೀಲಿಸಲಾಗುತ್ತಿದ್ದು ಅರ್ಹ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ನೋಂದಣಿ ಮಾಡಿ ಗುರುತಿನ ಚೀಟಿಯನ್ನು ನೀಡಲಾಗುವುದು.<br>2. **“ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ವಾಹನ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ”** ಯಡಿ ಸ್ಮಾರ್ಟ್ ಕಾರ್ಡ್‌ಗಾಗಿ ಅರ್ಜಿಯನ್ನು ನೀಡಬೇಕಾಗಿರುವುದಿಲ್ಲ. ಸಾರಿಗೆ ಇಲಾಖೆಯಿಂದ ಊರ್ಜಿತ ಖಾಸಗಿ ವಾಣಿಜ್ಯ ವಾಹನ ಚಾಲನಾ ಪರವಾನಗಿ ಪಡೆದ ಎಲ್ಲಾ ಚಾಲಕರಿಗೆ ಸ್ಮಾರ್ಟ್ ಕಾರ್ಡ್ ನೀಡಲು ಕ್ರಮಕೈಗೊಳ್ಳಲಾಗುತ್ತಿದೆ.<br>ಅದೇ ರೀತಿಯಾಗಿ ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ ಯೋಜನೆ’ |

| | | |
|---|---|---|
| | | ಯಡಿ ಗುರುತಿನ ಚೀಟಿ ಪಡೆಯಲು ರಾಯಭಾಗ ತಾಲ್ಲೂಕಿನಿಂದ ವಿವಿಧ ವಲಯದ ಅಸಂಘಟಿತ ಕಾರ್ಮಿಕ ವಲಯಕ್ಕೆ ಸಂಬಂಧಿಸಿದ ಒಟ್ಟು 12 ಅರ್ಜಿಗಳು ಸ್ವೀಕೃತವಾಗಿದ್ದು, ಸದರಿ ಅರ್ಜಿಗಳ ಗಣಕೀಕರಣಕ್ಕಾಗಿ ಮೆ॥ ಕಿಯೋನಿಕ್ಸ್ ಸಂಸ್ಥೆಗೆ ನೀಡಲಾಗಿದೆ. |
| ಇ) | ಅಧಿಕಾರಿಗಳ ಕೊರತೆಯಿಂದಾಗಿ ನಿಗಧಿತ ಸಮಯದಲ್ಲಿ ಫಲಾನುಭವಿಗಳಿಗೆ ಸೌಲಭ್ಯವನ್ನು ಒದಗಿಸಲು ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಬಂದಿದ್ದಲ್ಲಿ, ಹುದ್ದೆಗಳನ್ನು ತುಂಬಲು ಯಾವ ಕ್ರಮ ಕೈಗೊಳ್ಳಲಾಗುವುದು; | ರಾಯಭಾಗ ಕಾರ್ಮಿಕ ನಿರೀಕ್ಷಕರ ಹುದ್ದೆ ಖಾಲಿ ಇದ್ದು, ಆಡಳಿತ ಹಿತದೃಷ್ಟಿಯಿಂದ ಶ್ರೀ ಪಾಂಡುರಂಗ ಮಾವರ್ಕರ್, ಕಾರ್ಮಿಕ ಶ್ರೀ ಕಾರ್ಮಿಕ ನಿರೀಕ್ಷಕರು, ಗೋಕಾಕ್ ವೃತ್ತ ಇವರನ್ನು ಸದರಿ ಹುದ್ದೆಗೆ ಅಧಿಕ ಪ್ರಭಾರದಲ್ಲಿ ಕಾರ್ಯನಿರ್ವಹಿಸಲು ನಿಯೋಜಿಸಿದೆ.<br><br>ಮಂಡಳಿಯ ಕೆಲಸಗಳನ್ನು ನಿರ್ವಹಿಸಲು ಹೊರಗುತ್ತಿಗೆ ಆಧಾರದ ಮೇಲೆ ಒಬ್ಬರು ಡಾಟಾ ಎಂಟ್ರಿ ಆಪರೇಟರ್ ಅನ್ನು ಮಂಡಳಿಯಿಂದ ನಿಯೋಜಿಸಲಾಗಿರುತ್ತದೆ. |
| ಈ ) | ರಾಯಭಾಗ ತಾಲ್ಲೂಕಿನಲ್ಲಿ ಕಾರ್ಮಿಕ ಇಲಾಖೆಯಲ್ಲಿ ಮಂಜೂರಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು; ಆ ಪೈಕಿ ಎಷ್ಟು ಹುದ್ದೆಗಳು ಖಾಲಿ ಇವೆ? | ರಾಯಭಾಗ ತಾಲ್ಲೂಕಿನಲ್ಲಿ ಕಾರ್ಮಿಕ ಇಲಾಖೆಯಲ್ಲಿ ಮಂಜೂರಾಗಿರುವ ಹುದ್ದೆಗಳ ವಿವರ ಈ ಕೆಳಕಂಡಂತೆದೆ<br><br>ಕಾರ್ಮಿಕ ನಿರೀಕ್ಷಕರ :: 1ಹುದ್ದೆ ಡಾಟ ಎಂಟ್ರಿ ಆಪರೇಟರ್ :: 01 ಹುದ್ದೆ (ಹೊರಗುತ್ತಿಗೆ) ಕಾರ್ಮಿಕ ನಿರೀಕ್ಷಕರ ಹುದ್ದೆ ಖಾಲಿ ಇದ್ದು, ಆಡಳಿತ ಹಿತದೃಷ್ಟಿಯಿಂದ ರಾಯಭಾಗ ತಾಲ್ಲೂಕಿನಲ್ಲಿ ಶ್ರೀ ಪಾಂಡುರಂಗ ಮಾವರ್ಕರ್, ಕಾರ್ಮಿಕ ನಿರೀಕ್ಷಕರು, ಗೋಕಾಕ್ ವೃತ್ತಿ ಇವರನ್ನು ಅಧಿಕ ಪ್ರಭಾರದಲ್ಲಿ ಕಾರ್ಯನಿರ್ವಹಿಸಲು ನಿಯೋಜಿಸಿದೆ. |

**ಕಾರ್ಮಿಕ ಸಚಿವರು**

# ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 16

ಸದಸ್ಯರು ಹೆಸರು :

ಉತ್ತರಿಸಬೇಕಾದ ದಿನಾಂಕ :

ಉತ್ತರಿಸುವ ಸಚಿವರು : ಮಾನ್ಯ ಜಲಸಂಪನ್ಮೂಲ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಭದ್ರ ನಾಲಾ ಮತ್ತು ಉಪನಾಲೆಗಳಿಗೆ ಅಳವಡಿಸಿರುವ ಅಕ್ರಮ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು. |
| ಆ) | ಈ ಅಕ್ರಮ ಪಂಪ್ ಸೆಟ್‌ಗಳ ಅಳವಡಿಕೆಯಿಂದ ಮೇಲ್ಭಾಗದ ಹಂತದಲ್ಲಿ ಹೆಚ್ಚು ನೀರು ಬಳಕೆಯಾಗುತ್ತಿದ್ದು, ಅಚ್ಚುಕಟ್ಟಿನ ಕೊನೆಯ ಭಾಗದ ಜಮೀನುಗಳಿಗೆ ಸಮರ್ಪಕ ನೀರು ಪೂರೈಸಲು ಸಾಧ್ಯವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; | |
| ಇ) | ಹಾಗಿದ್ದಲ್ಲಿ, ಈ ಅಕ್ರಮ ಪಂಪ್ ಸೆಟ್‌ಗಳಿಗೆ ವಿದ್ಯುತ್ ಸಂಪರ್ಕ ಕಡಿತಗೊಳಿಸಿ, ಸಂಬಂಧಪಟ್ಟವರ ವಿರುದ್ಧ ಕ್ರಮವನ್ನು ಜರುಗಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; | ಭದ್ರಾ ನಾಲೆ ಮತ್ತು ಉಪ ನಾಲೆಗಳಿಗೆ ಅಳವಡಿಸಲಾಗಿರುವ ಅಕ್ರಮ ಪಂಪ್‌ಸೆಟ್‌ಗಳ ಮಾಹಿತಿಯನ್ನು ನೀಡಿದಲ್ಲಿ, ವಿದ್ಯುತ್ ಸಂಪರ್ಕ ಕಡಿತಗೊಳಿಸಲು ಕ್ರಮವಹಿಸಲಾಗುವುದು ಎಂದು ಇಂಧನ ಇಲಾಖೆಯು ತಿಳಿಸಿರುವ ಹಿನ್ನಲೆಯಲ್ಲಿ ಭದ್ರಾ ನಾಲೆ ಮತ್ತು ಉಪ ನಾಲೆಗಳಿಗೆ ಅಳವಡಿಸಲಾಗಿರುವ ಅಕ್ರಮ ಪಂಪ್ ಸೆಟ್‌ಗಳ ಮಾಹಿತಿಯನ್ನು ಇಂಧನ ಇಲಾಖೆಗೆ ನೀಡಲು ಕ್ರಮವಹಿಸಲಾಗುತ್ತಿದೆ. |
| ಈ) | ಯಾವ ಕಾಲಮಿತಿಯಲ್ಲಿ ಅಕ್ರಮ ಪಂಪ್ ಸೆಟ್‌ಗಳಿಗೆ ವಿದ್ಯುತ್ ಸಂಪರ್ಕವನ್ನು ಕಡಿತಗೊಳಿಸಲಾಗುವುದು? | |

**ಜಲ ಸಂಪನ್ಮೂಲ ಸಚಿವರು**

# ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 439

ಸದಸ್ಯರು ಹೆಸರು :

ಉತ್ತರಿಸಬೇಕಾದ ದಿನಾಂಕ :

ಉತ್ತರಿಸುವ ಸಚಿವರು : ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯಗಳನ್ನು ಅಭಿವೃದ್ಧಿ ಕಾಮಗಾರಿಗಳಿಗೆ ಮರಗಳನ್ನು ಕಡಿಯಬೇಕಾದ ಸಂದರ್ಭದಲ್ಲಿ ಸರ್ಕಾರ ಕೈಗೊಳ್ಳುತ್ತಿರುವ ಕ್ರಮಗಳೇನು; (ವಿವರ ನೀಡುವುದು | ರಾಜ್ಯದಲ್ಲಿ ಅಭಿವೃದ್ಧಿ ಕಾಮಗಾರಿಗಳಿಗೆ ಮರಗಳನ್ನು ಕಡಿಯಬೇಕಾದ ಸಂದರ್ಭದಲ್ಲಿ, ಅರಣ್ಯೇತರ ಜಮೀನಿನಲ್ಲಿ ಅರಣ್ಯ ಇಲಾಖೆಯ ವತಿಯಿಂದ ಮರಗಳನ್ನು ಕತ್ತಾವಣೆ ಮಾಡಲಾಗುತ್ತದೆ ಅಥವಾ ಮರಗಳ ಮಾಲೀಕತ್ವವನ್ನು ಹೊಂದಿರುವ ಇಲಾಖೆಗೆ ಮರಗಳ ಕತ್ತಾವಣೆಗೆ ಅನುಮತಿಯನ್ನು ನೀಡಲಾಗುತ್ತದೆ. ರಾಜ್ಯದ 9 ಜಿಲ್ಲೆಗಳ ಗ್ರಾಮೀಣ ಪ್ರದೇಶಗಳಲ್ಲಿ ಬೀಟೆ ಮರ ಮತ್ತು ಶ್ರೀಗಂಧದ ಮರಗಳನ್ನು ಹೊರತುಪಡಿಸಿ ಇನ್ನಾವುದೇ ಮರಗಳನ್ನು ಕಡಿಯುವುದಕ್ಕೆ ಅನುಮತಿಯಿಂದ ವಿನಾಯಿತಿ ನೀಡಲಾಗಿದೆ. ಮೇಲಿನ 9 ಜಿಲ್ಲೆಗಳಲ್ಲಿ ಮತ್ತು ನಗರ ಪ್ರದೇಶಗಳಲ್ಲಿ 27 ವಿವಿಧ ಜಾತಿಯ ಮರಗಳನ್ನು ಕಡಿಯುವುದಕ್ಕೆ ಅನುಮತಿಯಿಂದ ವಿನಾಯಿತಿ ನೀಡಲಾಗಿದೆ. ವಿವರಗಳನ್ನು ಅನುಬಂಧ–1ರಲ್ಲಿ ಸಲ್ಲಿಸಿದೆ.<br><br>ಸರ್ಕಾರದ ಆದೇಶ ಸಂಖ್ಯೆ: ಎಫ್‌ಇಇ 168 ಎಫ್‌ಡಿಪಿ 2017, ದಿನಾಂಕ: 06.12.2018 ಮತ್ತು ತಿದ್ದುಪಡಿ ಸಂಖ್ಯೆ: ಎಫ್‌ಇಇ 168 ಎಫ್‌ಡಿಪಿ2017, ದಿನಾಂಕ: 07.12.2018ರನ್ವಯ ಅರಣ್ಯೇತರ ಜಮೀನಿನಲ್ಲಿ ರಸ್ತೆ ನಿರ್ಮಾಣ/ಅಗಲೀಕರಣ ಕಾಮಗಾರಿ ಸಂದರ್ಭದಲ್ಲಿ ಮರಗಳನ್ನು ಸಂಬಂಧಪಟ್ಟ ಇಲಾಖೆಗೆ ವಹಿಸಲಾಗುತ್ತದೆ. ಟೆಂಕೆತನ ತೀರುವಳಿ ದರಗಳನ್ವಯ ಮರಗಳ ಮೌಲ್ಯವನ್ನು ಪಾವತಿಸಿಕೊಂಡು ವಿಲೇ ಮಾಡುವ ಅಧಿಕಾರವನ್ನು ಸಂಬಂಧಿಸಿದ ಸರ್ಕಾರಿ ಇಲಾಖೆ/ ಉಪಯೋಗಿ ಸಂಸ್ಥೆಗೆ ನೀಡಲಾಗುತ್ತಿದೆ. |

| | | |
|---|---|---|
| ಆ) | ಕೆಲವು ಸಂದರ್ಭದಲ್ಲಿ ಮರ ಕಡಿಯಲು ಮರ ಬೆಳೆಸುವ ಷರತ್ತು ಹಾಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು.<br><br>ಮರ ಕಡಿಯಲು ಮರ ಬೆಳೆಸುವ ಷರತ್ತನ್ನು ದಿನಾಂಕ: 14.03.2018ರಿಂದ 10.01.2018ರವರೆಗೆ ಮಾನ್ಯ ರಾಷ್ಟ್ರೀಯ ಹಸಿರು ಮಂಡಳಿಯು (ಎನ್‌ಜಿಟಿ) ಅರ್ಜಿ ಸಂಖ್ಯೆ ಎಂ.ಎ. 1182/2015 (I.A. No. 2530/2009), ಎಂ.ಎ. 1183/2015 (I.A. No. 2531/2009) ರಿಟ್ ಪಿಟಿಷನ್ ಸಂಖ್ಯೆ (c) 202/1995 ಮತ್ತು ಮೂಲ ಅರ್ಜಿ ಸಂಖ್ಯೆ: 167/2016ರಲ್ಲಿ ದಿನಾಂಕ: 14.03.2017 ರಲ್ಲಿ ಹೇಳಲಾಗಿದೆ. |

**ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ**
**ಸಚಿವರು**

**ಕರ್ನಾಟಕ ವಿಧಾನ ಸಭೆ**

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 488

ಮಾನ್ಯ ಸದಸ್ಯರ ಹೆಸರು :

ಉತ್ತರಿಸಬೇಕಾದ ದಿನಾಂಕ :

ಉತ್ತರಿಸುವ ಸಚಿವರು : **ಮುಜುರಾಯಿ ಹಾಗೂ ಕೌಶಲಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು**

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯದ ಯೋಜನೆಗಳ ಬಗ್ಗೆ ಹೆಚ್ಚು ತರಬೇತಿ ನೀಡಲು ಹಾಗೂ ನಿರುದ್ಯೋಗದ ನಿವಾರಣೆಗೆ ಉದ್ಯೋಗವನ್ನು ಕಲ್ಪಿಸಲು ಮಾಹಿತಿ ಒದಗಿಸುವ ಸಲುವಾಗಿ ಜಿಲ್ಲಾ ಕೇಂದ್ರಗಳಲ್ಲಿ ಕಚೇರಿ ಸ್ಥಾಪನೆ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ? | ರಾಜ್ಯದಲ್ಲಿ ಈಗಾಗಲೇ ಎಲ್ಲಾ 30 ಜಿಲ್ಲೆಗಳಲ್ಲಿ ಜಿಲ್ಲಾ ಕೌಶಲ್ಯಾಭಿವೃದ್ಧಿ ಕಚೇರಿಗಳನ್ನು ಸ್ಥಾಪಿಸಲಾಗಿದೆ. ಹಾಗೂ ಎಲ್ಲ 30 ಜಿಲ್ಲೆಗಳಲ್ಲಿ ದಿಶಾ ಮಾರ್ಗದರ್ಶನ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು ಕಾರ್ಯನಿರ್ವಹಿಸುತ್ತದೆ. |
| ಆ) | ಹಾಗಿದ್ದಲ್ಲಿ, ಜಿಲ್ಲಾ ಕೇಂದ್ರಗಳಲ್ಲಿ ಕಚೇರಿ ಸ್ಥಾಪನೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಉದ್ಭವಿಸುವುದಿಲ್ಲ |

**ಮುಜರಾಯಿ ಹಾಗೂ ಕೌಶಲಾಭಿವೃದ್ಧಿ,**

**ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು**

**ಕರ್ನಾಟಕ ವಿಧಾನ ಸಭೆ**

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: : 278
ಮಾನ್ಯ ಸದಸ್ಯರ ಹೆಸರು: :
ಉತ್ತರಿಸಬೇಕಾದ ದಿನಾಂಕ: :
ಉತ್ತರಿಸುವ ಸಚಿವರು: : **ಕಂದಾಯ ಸಚಿವರು**

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಳಗಾವಿ ಜಿಲ್ಲಾ ಹುಕ್ಕೇರಿ ತಾಲ್ಲೂಕಿನ ಕೆಲವೊಂದು ಗಡಿ ಭಾಗದ ಗ್ರಾಮಗಳನ್ನು ನಿಪ್ಪಾಣಿ ಉಪ ನೋಂದಣಾಧಿಕಾರಿಗಳ ಕಚೇರಿಗೆ ಸೇರಿಸಲಾಗಿದೆಯೇ; | ಬೆಳಗಾವಿ ಜಿಲ್ಲೆಯ ಹುಕ್ಕೇರಿ ತಾಲ್ಲೂಕಿನ ಗಡಿ ಭಾಗದ ಗ್ರಾಮಗಳನ್ನು ನಿಪ್ಪಾಣಿ ಉಪ ನೋಂದಣಿ ಕಚೇರಿ ವ್ಯಾಪ್ತಿಗೆ ಸೇರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |
| ಆ) | ಹಾಗಿದ್ದಲ್ಲಿ ಯಾವ ಯಾವ ಗ್ರಾಮಗಳನ್ನು ಸೇರಿಸಲಾಗಿದೆ. | 1) ಕಣಗಲಾ, 2) ಕರಜಗಾ, 3) ಕೋಣನಕೇರಿ, 4) ನಾಂಗನೂರ (ಕೆ.ಎಸ್) 5) ಬಾಡ, 6) ಭೈರಾಪುರ 7) ಬುಗಟೇಆಲೂರ, 8) ರಾಶಿಂಗ್, 9)ಸೂಲಾಪುರ,10) ಶೇಕಿನಹೊಸೂರ,11) ಹಿಟಣಿ, 12)ಹಡಲಗಾ, 13)ಹರಗಾಪುರ, 14)ಹೊನ್ನಿಹಳ್ಳಿ, ಒಟ್ಟು–14 ಗ್ರಾಮಗಳು |
| ಇ) | ಹುಕ್ಕೇರಿ ತಾಲ್ಲೂಕಿನ ಸಂಕೇಶ್ವರ ಪಟ್ಟಣದಲ್ಲಿ ಉಪ ನೋಂದಣಾಧಿಕಾರಿಗಳ ಕಚೇರಿ ಇಲ್ಲದೇ ಗಡಿ ಭಾಗದ ಸಾರ್ವಜನಿಕರಿಗೆ ಅದರಲ್ಲೂ ರೈತರಿಗೆ ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು |
| ಈ) | ಬಂದಿದ್ದಲ್ಲಿ ಸಂಕೇಶ್ವರ ಪಟ್ಟಣದಲ್ಲಿ ಉಪ ನೋಂದಣಾಧಿಕಾರಿಗಳ ಕಚೇರಿ ಸ್ಥಾಪಿಸಿ, ಹುಕ್ಕೇರಿ ತಾಲ್ಲೂಕಿನ ಗ್ರಾಮಗಳನ್ನು ಸಂಕೇಶ್ವರ ಉಪ ನೋಂದಣಾಧಿಕಾರಿಗಳ ಕಚೇರಿ ವ್ಯಾಪ್ತಿಗೆ ಸೇರಿಸುವ ಕುರಿತು ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; | ಸಂಕೇಶ್ವರ ಪಟ್ಟಣದಲ್ಲಿ ಹೊಸದಾಗಿ ಉಪ ನೋಂದಣಿ ಕಚೇರಿ ಸ್ಥಾಪಿಸುವ ಸಂಬಂಧ ಸರ್ಕಾರದಲ್ಲಿ ಪ್ರಸ್ತಾವನೆ ಸ್ವೀಕೃತವಾಗಿದ್ದು, ಪರಿಶೀಲನಾ ಹಂತದಲ್ಲಿರುತ್ತದೆ ಹಾಗೂ ಉಪ ನೋಂದಣಿ ಕಚೇರಿ ಸ್ಥಾಪಿಸಿ, ಹುಕ್ಕೇರಿ ತಾಲ್ಲೂಕಿನ ಗ್ರಾಮಗಳನ್ನು ಸಂಕೇಶ್ವರ ಉಪ ನೋಂದಣಿ ಕಚೇರಿ ವ್ಯಾಪ್ತಿಗೆ ಸೇರಿಸುವ ಕುರಿತು ಅವಶ್ಯಕ ಮಾನದಂಡಗಳನ್ವಯ ಪರಿಶೀಲಿಸಲಾಗುತ್ತಿದೆ. |
| ಉ) | ಸಂಕೇಶ್ವರ ಪಟ್ಟಣದಲ್ಲಿ ಉಪ ನೋಂದಣಾಧಿಕಾರಿಗಳ ಕಚೇರಿ ಸ್ಥಾಪಿಸುವ ಕುರಿತು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನ; (ಯಾವಾಗ ಸ್ಥಾಪಿಸಲಾಗುವುದು)? | |

**ಕಂದಾಯ ಸಚಿವರು.**

**ಕರ್ನಾಟಕ ವಿಧಾನ ಸಭೆ**

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 520 |
| ಮಾನ್ಯ ಸದಸ್ಯರ ಹೆಸರು | : | |
| ಉತ್ತರಿಸಬೇಕಾದ ದಿನಾಂಕ | : | |
| ಉತ್ತರಿಸುವ ಸಚಿವರು | : | **ಮಾನ್ಯ ಯುವ ಸಬಲೀಕರಣ ಹಾಗೂ ಕ್ರೀಡಾ ಸಚಿವರು** |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಎಷ್ಟು ಜಿಲ್ಲಾ ಹಾಗೂ ತಾಲ್ಲೂಕು ಕ್ರೀಡಾಂಗಣಗಳು ಇವೆ; (ಜಿಲ್ಲಾವಾರು ಹಾಗೂ ತಾಲ್ಲೂಕುವಾರು ವಿವರ ನೀಡುವುದು) | ರಾಜ್ಯದಲ್ಲಿರುವ ಜಿಲ್ಲಾ ಮತ್ತು ತಾಲ್ಲೂಕು ಕ್ರೀಡಾಂಗಣಗಳ ವಿವರಗಳನ್ನು ಅನುಬಂಧ–1ರಲ್ಲಿ ಒದಗಿಸಿದೆ. |
| ಆ) | ಪ್ರಸಕ್ತ ಸಾಲಿನಲ್ಲಿ ಹೊಸದಾಗಿ ಎಷ್ಟು ಜಿಲ್ಲಾ ಹಾಗೂ ತಾಲ್ಲೂಕು ಕ್ರೀಡಾಂಗಣಗಳು ಮಂಜೂರಾಗಿವೆ; ಅವುಗಳಿಗೆ ಈವರೆಗೆ ನೀಡಲಾಗಿರುವ ಅನುದಾನವೆಷ್ಟು; (ವಿವರ ನೀಡುವುದು) | 2018–19ನೇ ಸಾಲಿನಲ್ಲಿ ಯಾವುದೇ ಹೊಸ ಜಿಲ್ಲಾ ಹಾಗೂ ತಾಲ್ಲೂಕು ಕ್ರೀಡಾಂಗಣಗಳ ನಿರ್ಮಾಣ ಮಂಜೂರಾಗಿರುವುದಿಲ್ಲ. ಪ್ರಸ್ತುತ ಸಾಲಿನಲ್ಲಿ ಈಗಾಗಲೇ ಅಸ್ತಿತ್ವದಲ್ಲಿರುವ ಜಿಲ್ಲಾ ಮತ್ತು ತಾಲ್ಲೂಕು ಕ್ರೀಡಾಂಗಣಗಳಲ್ಲಿನ ಕ್ರೀಡಾ ಸೌಲಭ್ಯಗಳ ಉನ್ನತೀಕರಣಕ್ಕೆ ಆದ್ಯತೆ ನೀಡಲಾಗಿದೆ. |
| ಇ) | ರಾಜ್ಯದ ಕ್ರೀಡಾಪಟುಗಳಿಗೆ ಅವರವರ ಕ್ರೀಡಾ ಕ್ಷೇತ್ರದಲ್ಲಿ ಬೆಳೆಯಲು ಸರ್ಕಾರ ಕ್ರೀಡಾ ಪಾಲಿಸಿ ಯೋಜನೆಯನ್ನು ಹಾಕಿಕೊಂಡಿದೆಯೇ;<br>(ವಿವರ ನೀಡುವುದು) | ಕರ್ನಾಟಕ ರಾಜ್ಯದಲ್ಲಿ ಕ್ರೀಡಾಭಿವೃದ್ಧಿಗಾಗಿ ಕರ್ನಾಟಕ ರಾಜ್ಯ ಕ್ರೀಡಾ ನೀತಿ–2018ನ್ನು ರೂಪಿಸಲಾಗಿದೆ. ಪ್ರತಿಭಾವಂತ ಕ್ರೀಡಾಪಟುಗಳಿಗೆ ಉತ್ತೇಜನ ನೀಡಲು ಕ್ರೀಡಾ ವಿದ್ಯಾರ್ಥಿ ವೇತನ, ಸಾಧಕ ಕ್ರೀಡಾಪಟುಗಳ ಶೈಕ್ಷಣಿಕ ಶುಲ್ಕ ಮರುಪಾವತಿ, ವಿವಿಧ ಕ್ರೀಡಾ ಸಾಧನೆಗಳಿಗೆ ನಿಗಧಿತ ನಗದು ಪುರಸ್ಕಾರ, ಸ್ಪೋರ್ಟ್ಸ್ ಅಕಾಡೆಮಿ ಫಾರ್ ಎಕ್ಸಲೆನ್ಸ್ ಅಡಿ ಅತ್ಯುನ್ನತ ಕ್ರೀಡಾ ಸಾಧಕರಿಗೆ ಸಹಾಯಧನ ಯೋಜನೆಗಳನ್ನು ರೂಪಿಸಿ, ಅನುಷ್ಠಾನಗೊಳಿಸಲಾಗುತ್ತಿದೆ.<br>ಸಾಧಕ ಕ್ರೀಡಾಪಟುಗಳಿಗೆ ಏಕಲವ್ಯ ಪ್ರಶಸ್ತಿ, ಗ್ರಾಮೀಣ ಕ್ರೀಡೆಗಳಲ್ಲಿನ ಸಾಧಕರಿಗೆ ಕರ್ನಾಟಕ ಕ್ರೀಡಾ ರತ್ನ ಪ್ರಶಸ್ತಿ ನೀಡಲಾಗುತ್ತಿದೆ. |

| | | |
|---|---|---|
| ಈ) | ಮೊಳಕಾಲ್ಮೂರು ತಾಲ್ಲೂಕಿನಲ್ಲಿ ಇದುವರೆಗೂ ತಾಲ್ಲೂಕು ಕ್ರೀಡಾಂಗಣ ಮಂಜೂರು ಮಾಡದಿರಲು ಕಾರಣಗಳೇನು; ಪ್ರಸಕ್ತ ಸಾಲಿನಲ್ಲಿ ಮಂಜೂರು ಮಾಡಲಾಗುವುದೇ? | ಮೊಳಕಾಲ್ಮೂರು ತಾಲ್ಲೂಕು ಕ್ರೀಡಾಂಗಣ ನಿರ್ಮಾಣಕ್ಕೆ ಸೂಕ್ತ ನಿವೇಶನ ಲಭ್ಯವಾಗದ ಹಿನ್ನಲೆಯಲ್ಲಿ ತಾಲ್ಲೂಕು ಕ್ರೀಡಾಂಗಣ ನಿರ್ಮಾಣ ಮಾಡಲು ಸಾಧ್ಯವಾಗಿರುವುದಿಲ್ಲ. ಸೂಕ್ತ ನಿವೇಶನ ಲಭ್ಯವಾದ ನಂತರ ತಾಲ್ಲೂಕು ಕ್ರೀಡಾಂಗಣ ನಿರ್ಮಾಣ ಮಾಡಲಾಗುವುದು. |

**ಯುವ ಸಬಲೀಕರಣ ಹಾಗೂ ಕ್ರೀಡಾ ಸಚಿವರು**

**ಕರ್ನಾಟಕ ವಿಧಾನ ಸಭೆ**

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 917

ಮಾನ್ಯ ಸದಸ್ಯರ ಹೆಸರು :

ಉತ್ತರಿಸಬೇಕಾದ ದಿನಾಂಕ :

ಉತ್ತರಿಸುವ ಸಚಿವರು : **ಮಾನ್ಯ ಜಲ ಸಂಪನ್ಮೂಲ ಸಚಿವರು.**

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಹುಕ್ಕೇರಿ ತಾಲ್ಲೂಕಿನ ಕೊಚರಿ ಬ್ಯಾರೇಜಿನಿಂದ ಅಡವಿ ಸಿದ್ದೇಶ್ವರ ಏತ ನೀರಾವರಿ ಯೋಜನೆ ಮತ್ತು ಸುಲ್ತಾನಪುರ ಬ್ಯಾರೇಜ್‌ನಿಂದ ಶಂಕರಲಿಂಗ ಏತ ನೀರಾವರಿ ಯೋಜನೆಗಳನ್ನು ಅನುಷ್ಠಾನಗೊಳಿಸಲು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ; | ಹುಕ್ಕೇರಿ ತಾಲ್ಲೂಕಿನ ಕೊಚರಿ ಬ್ಯಾರೇಜನಿಂದ ಅಡವಿ ಸಿದ್ದೇಶ್ವರ ಏತ ನೀರಾವರಿ ಯೋಜನೆ ಮತ್ತು ಸುಲ್ತಾನಪೂರ ಬ್ಯಾರೇಜ್‌ನಿಂದ ಶಂಕರಲಿಂಗ ಏತ ನೀರಾವರಿ ಯೋಜನೆಗಳ ಪ್ರಸ್ತಾವನೆಗಳು ನಿಗಮದ ಹಂತದಲ್ಲಿ ಪರಿಶೀಲನೆಯಲ್ಲಿರುತ್ತದೆ. |
| ಆ) | ಹಾಗಿದ್ದಲ್ಲಿ, ಸದರಿ ಯೋಜನೆಗಳ ಅಂದಾಜು ಮೊತ್ತವೆಷ್ಟು? ಯೋಜನೆಗಳಿಂದ ಎಷ್ಟು ಪ್ರದೇಶಕ್ಕೆ ನೀರಾವರಿ ಸೌಲಭ್ಯ ಒದಗಿಸಲು ಉದ್ದೇಶಿಸಲಾಗಿದೆ; ಎರಡೂ ಯೋಜನೆಗಳ ಸಂಪೂರ್ಣ ವಿವರಗಳನ್ನು ಒದಗಿಸುವುದು. | |
| ಇ) | ಈ ಯೋಜನೆಗಳ ಪ್ರಸ್ತುತ ಹಂತವೇನು; ಸರ್ಕಾರ ಯೋಜನೆಗಳಿಗೆ ಅನುಮೋದನೆ ನೀಡಿದೆಯೇ; (ವಿವರ ನೀಡುವುದು) | |
| ಈ) | ಇಲ್ಲವಾಗಿದ್ದಲ್ಲಿ ಸದರಿ ಯೋಜನೆಗಳ ಅನುಷ್ಠಾನಕ್ಕೆ ಸರ್ಕಾರ ಹಾಕಿಕೊಂಡಿರುವ ಕಾಲಮಿತಿಯೇನು; | |

**ಜಲ ಸಂಪನ್ಮೂಲ ಸಚಿವರು**

**ಕರ್ನಾಟಕ ವಿಧಾನ ಸಭೆ**

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 828 |
| ಮಾನ್ಯ ಸದಸ್ಯರ ಹೆಸರು | : | |
| ಉತ್ತರಿಸಬೇಕಾದ ದಿನಾಂಕ | : | |
| ಉತ್ತರಿಸುವ ಸಚಿವರು | : | **ಮಾನ್ಯ ಸಣ್ಣ ನೀರಾವರಿ ಸಚಿವರು.** |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ ಮೂರು ವರ್ಷಗಳಿಂದ ರಾಜ್ಯದ ಯಾವ ಯಾವ ವಿಧಾನ ಸಭಾ ಕ್ಷೇತ್ರಗಳಲ್ಲಿ ಎಷ್ಟು ಕೆರೆಗಳನ್ನು ತುಂಬಿಸುವ ಯೋಜನೆ ಹಾಕಿಕೊಳ್ಳಲಾಗಿತ್ತು (ವಿಧಾನಸಭಾ ಕ್ಷೇತ್ರವಾರು, ಅಂದಾಜು ಮೊತ್ತ ಸಂಪೂರ್ಣ ವಿವರ ನೀಡುವುದು) | ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ |
| ಆ) | ಇದರಲ್ಲಿ ಎಷ್ಟು ಕಾಮಗಾರಿ ಪ್ರಾರಂಭಿಸಲಾಗಿದೆ ಮತ್ತು ಇನ್ನೂ ಎಷ್ಟು ಕಾಮಗಾರಿ ಪ್ರಾರಂಭಿಸಬೇಕಾಗಿದೆ (ಪ್ರಾರಂಭಿಸಲಾದ ಮತ್ತು ಪ್ರಾರಂಭಿಸಬೇಕಾದ ಕಾಮಗಾರಿಗಳ ವಿವರ ನೀಡುವುದು) | ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ. |
| ಇ) | ಬೆಳಗಾವಿ ಜಿಲ್ಲೆ ಚೆನ್ನಮ್ಮನ ಕಿತ್ತೂರು ವಿಧಾನಸಭಾ ಕ್ಷೇತ್ರದಲ್ಲಿ ಕೆರೆ ತುಂಬಿಸುವ ಯೋಜನೆಗಾಗಿ ಸರ್ಕಾರ ಯಾವಾಗ ಆದೇಶ ಹೊರಡಿಸಿದೆ; ಯಾವ ದಿನಾಂಕದಂದು ಭೂಮಿ ಪೂಜೆ ಮಾಡಲಾಗಿದೆ; | ಬೆಳಗಾವಿ ಜಿಲ್ಲೆ, ಕಿತ್ತೂರು ವಿಧಾನಸಭಾ ಕ್ಷೇತ್ರದಲ್ಲಿ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆಯಿಂದ 201-17ನೇ ಸಾಲಿನಲ್ಲಿ ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ಮಾರ್ಗನಕೊಪ್ಪ ಗ್ರಾಮದ ರಿ.ಸರ್ವೇ ನಂ. 113, 127, 04, 15, 164. ಕೆರೆಗಳಿಗೆ ಮಲಪ್ರಭಾ ನದಿಯಿಂದ ನೀರು ತುಂಬಿಸುವ ಕಾಮಗಾರಿಗೆ ರೂ. 300.00 ಲಕ್ಷಗಳ ಅಂದಾಜು ಮೊತ್ತಕ್ಕೆ ಸರ್ಕಾರದ ಆದೇಶ ಸಂಖ್ಯೆ: ಸನೀಇ/22/ಏನೀಯೋ/2017 ರನ್ವಯ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಹಾಗೂ ದಿನಾಂಕ: 08.08.2018ರಂದು ತಾಂತ್ರಿಕ ಮಂಜೂರಾತಿ ನೀಡಲಾಗಿದೆ. ದಿನಾಂಕ: 22.12.2017ರಂದು ಸನ್ಮಾನ್ಯ ಮುಖ್ಯ ಮಂತ್ರಿಯವರಿಂದ ಈ ಕಾಮಗಾರಿಯ ಭೂಮಿ ಪೂಜೆಯನ್ನು ನೆರವೇರಿಸಲಾಗಿದೆ. |

| | | |
|---|---|---|
| ಈ) | ಭೂಮಿ ಪೂಜೆ ಮಾಡಿದಾಗಿನಿಂದ ಇಲ್ಲಿಯವರೆವಿಗೂ ಆಗಿರುವ ಪ್ರಗತಿ ಏನು; ಈ ಯೋಜನೆಯ ವಿಳಂಬಕ್ಕೆ ಕಾರಣವೇನು? | ಕಾಮಗಾರಿಯ ಟೆಂಡರ್‌ನ ತಾಂತ್ರಿಕ ಬಿಡ್ ತೆರೆಯಲಾಗಿದ್ದು ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡ ನಂತರ ಕಾಮಗಾರಿ ಕೈಗೆತ್ತಿಕೊಳ್ಳಲಾಗುವುದು. |

**ಯುವ ಸಬಲೀಕರಣ ಹಾಗೂ ಕ್ರೀಡಾ ಸಚಿವರು**

# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 928

ಮಾನ್ಯ ಸದಸ್ಯರ ಹೆಸರು :

ಉತ್ತರಿಸಬೇಕಾದ ದಿನಾಂಕ :

ಉತ್ತರಿಸುವ ಸಚಿವರು : **ಜವಳಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು**

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಅರಸೀಕೆರೆ ಕ್ಷೇತ್ರದ ರಂಗಾಪುರ ಕಾವಲು ಸರ್ವೆ ನಂ.1 ರಲ್ಲಿ ಸುಮಾರು 500–600 ಎಕರೆ ಭೂಮಿ ಕೈಗಾರಿಕಾ ಪ್ರದೇಶಕ್ಕೆ ಯೋಗ್ಯವಾಗಿದ್ದು, ಈ ಸ್ಥಳದಲ್ಲಿ ಟೆಕ್ಸ್‌ಟೈಲ್ಸ್ ತೆರೆಯುವ ಉದ್ದೇಶ ಸರ್ಕಾರದ ಮುಂದಿದೆಯೇ; | ಅರಸೀಕೆರೆ ತಾಲ್ಲೂಕು ರಂಗಾಪುರ ಕಾವಲು ಸರ್ವೇ ನಂ–01 ರಲ್ಲಿ ಸುಮಾರು 500 ಎಕರೆ ಸರ್ಕಾರಿ ಜಮೀನು (ಗೋಮಾಳ) ಕಂದಾಯ ಇಲಾಖೆ ಸುಪರ್ದಿಯಲ್ಲಿರುತ್ತದೆ.<br>ಈ ಭೂಮಿ ಗೋಮಾಳವಾಗಿರುವುದರಿಂದ ಗೋಮಾಳ ಜಮೀನನ್ನು ಬೇರೆ ಉದ್ದೇಶಕ್ಕಾಗಿ ಬದಲಾವಣೆ ಮಾಡಬೇಕಾದರೆ ಜಿಲ್ಲಾಧಿಕಾರಿಗಳು ಭೂ ಕಂದಾಯ ಕಾಯ್ದೆ ನೀತಿಯಂತೆ ಗೋಮಾಳದಿಂದ ಈ ಭೂಮಿಯನ್ನು ಕಡಿತಗೊಳಿಸಿ, ಕೆ.ಐ.ಎ.ಡಿ.ಬಿ.ಗೆ ನೀಡಿದಲ್ಲಿ, ಸದರಿ ಜಮೀನಿನಲ್ಲಿ ಜವಳಿ ಪಾರ್ಕ್ ಮಾಡಬಹುದಾಗಿರುತ್ತದೆ.<br>ಜವಳಿ ಪಾರ್ಕ್ ಆಗಬೇಕಾದರೆ ಜವಳಿ ಪಾರ್ಕ್ ಮಾಡಬಯಸುವ ಉದ್ದಿಮೆದಾರರು (ಕನಿಷ್ಠ 5 ಉದ್ದಿಮೆದಾರರು ಸೇರಿ) ಒಂದು ಎಸ್.ಪಿ.ವಿ. ರಚನೆ ಮಾಡಿ, ಅದನ್ನು ಕಂಪನಿ ಕಾಯ್ದೆಯಡಿ ನೋಂದಾಯಿಸಿದಲ್ಲಿ, ಅವರಿಗೆ ಸದರಿ ಭೂಮಿಯನ್ನು ಮಾರುಕಟ್ಟೆ ದರದಲ್ಲಿ ವರ್ಗಾಯಿಸಲಾಗುವುದು, ಹೀಗೆ ಕನಿಷ್ಠ 15 ಎಕರೆ ಜಮೀನನ್ನು ಒದಗಿಸಿದಲ್ಲಿ, ಟೆಕ್ಸ್ ಟೈಲ್ ಪಾರ್ಕ್ ರಚನೆಯಾಗುತ್ತದೆ.<br>ಅರಸೀಕೆರೆ ಕ್ಷೇತ್ರವು ನೂತನ ಜವಳಿ ನೀತಿಯಡಿ ವಲಯ–2ರಲ್ಲಿ ಬರುತ್ತದೆ. ಜವಳಿ ಪಾರ್ಕ್‌ನಲ್ಲಿ ಮೂಲಭೂತ ಸೌಕರ್ಯ ಒದಗಿಸಲು ವಲಯ–2ರಲ್ಲಿನ ಪಾರ್ಕ್‌ಗಳಿಗೆ ಯೋಜನಾ ಮೊತ್ತದ ಶೇ.20 ರಷ್ಟು ಅಥವಾ ಗರಿಷ್ಠ ರೂ.15.00 ಕೋಟಿವರೆಗೆ ಪ್ರೋತ್ಸಾಹಧನ ನೀಡಲು ಅವಕಾಶವಿರುತ್ತದೆ. |
| ಆ) | ಹಾಗಿದ್ದಲ್ಲಿ ತೆರೆಯುವ ಉದ್ದೇಶವಿದ್ದಲ್ಲಿ, ಯಾವಾಗ ಪ್ರಾರಂಭಿಸಲಾಗುವುದು? | ಜವಳಿ ಉದ್ದಿಮೆದಾರರ ಎಸ್.ಪಿ.ವಿ. ಕಂಪನಿಯು ಮುಂದೆ ಬಂದು ಜವಳಿ ಕೈಗಾರಿಕೆಗಳನ್ನು ಸ್ಥಾಪಿಸಲು ಪ್ರಸ್ತಾವನೆ ಸಲ್ಲಿಸಿದಲ್ಲಿ ನಿಯಮಾನುಸಾರ ಪರಿಶೀಲಿಸಿ ಮಂಜೂರಾತಿ ನೀಡಲಾಗುವುದು. |

**ಜವಳಿ, ಬಂದರು ಮತ್ತು ಒಳನಾಡು**
**ಜಲಸಾರಿಗೆ ಸಚಿವರು**

# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 1939

ಮಾನ್ಯ ಸದಸ್ಯರ ಹೆಸರು :

ಉತ್ತರಿಸಬೇಕಾದ ದಿನಾಂಕ :

ಉತ್ತರಿಸುವ ಸಚಿವರು : ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ತುಮಕೂರು ಜಿಲ್ಲಾ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಿಂದ ಸಾಮಾಜಿಕ ಅರಣ್ಯ ಯೋಜನೆಯಡಿ ಹಸರೀಕರಣಕ್ಕಾಗಿ ಎಷ್ಟು ಹಣ ನಿಗಧಿಪಡಿಸಲಾಗಿದೆ (ವರ್ಷವಾರು, ತಾಲ್ಲೂಕುವಾರು ಮಾಹಿತಿ ನೀಡುವುದು): | ತುಮಕೂರು ಜಿಲ್ಲಾ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಿಂದ ಸಾಮಾಜಿಕ ಅರಣ್ಯ ಯೋಜನೆಯಡಿ ಹಸರೀಕರಣಕ್ಕಾಗಿ ನಿಗದಿಪಡಿಸಿದ ಅನುದಾನದ ವಿವರಗಳನ್ನು **ಅನುಬಂಧ-1** ರಲ್ಲಿ ನೀಡಲಾಗಿದೆ. |
| ಆ) | ಇದಕ್ಕಾಗಿ ನಿಗದಿಗೊಳಿಸಿರುವ ಭೌತಿಕ ಹಾಗೂ ಆರ್ಥಿಕ ಗುರಿ ಎಷ್ಟು; | ತುಮಕೂರು ಜಿಲ್ಲೆಯಲ್ಲಿ ಸಾಮಾಜಿಕ ಅರಣ್ಯ ವಿಭಾಗಕ್ಕೆ 2016-17 ರಿಂದ 2017-18ನೇ ಸಾಲಿನವರೆಗೆ ತಾಲ್ಲೂಕುವಾರು ನಿಗಧಿಪಡಿಸಿರುವ ಭೌತಿಕ ಮತ್ತು ಆರ್ಥಿಕ ಗುರಿಯನ್ನು **ಅನುಬಂಧ-2**ರಲ್ಲಿ ನೀಡಲಾಗಿದೆ. |
| ಇ) | ಈವರೆವಿಗೂ ಜಿಲ್ಲಾ ವ್ಯಾಪ್ತಿಯಲ್ಲಿ ಸಾಧಿಸಿರುವ ಗುರಿ ಎಷ್ಟು (ತಾಲ್ಲೂಕುವಾರು ವಿವರ ನೀಡುವುದು)? | ತುಮಕೂರು ಜಿಲ್ಲೆಯಲ್ಲಿ ಸಾಮಾಜಿಕ ಅರಣ್ಯ ವಿಭಾಗಕ್ಕೆ 2016-17ರಿಂದ 2017-18ನೇ ಸಾಲಿನವರೆಗೆ ತಾಲ್ಲೂಕುವಾರು ಸಾಧಿಸಿರುವ ಭೌತಿಕ ಮತ್ತು ಆರ್ಥಿಕ ಸಾಧನೆಯನ್ನು **ಅನುಬಂಧ-3**ರಲ್ಲಿ ನೀಡಲಾಗಿದೆ. |

**ಜವಳಿ, ಬಂದರು ಮತ್ತು ಒಳನಾಡು**
**ಜಲಸಾರಿಗೆ ಸಚಿವರು**

## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 2321

ಮಾನ್ಯ ಸದಸ್ಯರ ಹೆಸರು :

ಉತ್ತರಿಸಬೇಕಾದ ದಿನಾಂಕ :

ಉತ್ತರಿಸುವ ಸಚಿವರು : **ಮಾನ್ಯ ಮುಖ್ಯಮಂತ್ರಿಗಳು**

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ನಗರದಲ್ಲಿ ಪಾದಚಾರಿ ಮಾರ್ಗಗಳಲ್ಲಿರುವ ಟ್ರಾನ್ಸ್‌ಫಾರ್ಮರ್‌ಗಳೆಷ್ಟು; | ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ವ್ಯಾಪ್ತಿಯ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಒಟ್ಟು 8,811. ವಿದ್ಯುತ್ ಟ್ರಾನ್ಸ್‌ಫಾರ್ಮರ್‌ಗಳನ್ನು ಪಾದಚಾರಿ ಮಾರ್ಗಗಳಲ್ಲಿ ಅಳವಡಿಸಲಾಗಿರುತ್ತದೆ. |
| ಆ) | ಇದರಿಂದ ಪಾದಚಾರಿಗಳು ಓಡಾಡಲು ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿಯು ಯಾವುದೇ ಪಾದಚಾರಿ ಮಾರ್ಗವನ್ನು ಅತಿಕ್ರಮಿಸಿರುವುದಿಲ್ಲ. ಸ್ಥಳ ಅಭಾವ ಮತ್ತು ರಸ್ತೆಗಳ ಅಗಲೀಕರಣದಿಂದ ಪಾದಚಾರಿಗಳ ಮಾರ್ಗ ಕಿರಿದಾಗಿರುತ್ತದೆ. ವಿದ್ಯುತ್ತನ್ನು ಗ್ರಾಹಕರಿಗೆ ಪೂರೈಸಲು ವಿದ್ಯುತ್ ಪರಿವರ್ತಕಗಳನ್ನು ವಿದ್ಯುತ್ ಪರಿವೀಕ್ಷಕರಿಂದ ಅನುಮತಿ ಪಡೆದು, ಎಲ್ಲಾ ವಿಧವಾದ ಸುರಕ್ಷತಾ ಕ್ರಮಗಳನ್ನು ಅನುಸರಿಸಿ ಟ್ರಾನ್ಸ್‌ಫಾರ್ಮರ್‌ಗಳನ್ನು ಸ್ಥಾಪಿಸಲಾಗಿದೆ. |
| ಇ) | ಇದರಿಂದಾಗಿ ಪಾದಚಾರಿಗಳು ರಸ್ತೆಯಲ್ಲಿಯೇ ಓಡಾಡಬೇಕಾಗಿರುವುದು ನಿಜವಲ್ಲವೇ? | ಪಾದಚಾರಿ ಮಾರ್ಗಗಳಲ್ಲಿರುವ ಟ್ರಾನ್ಸ್‌ಫಾರ್ಮರ್‌ಗಳ ಜಿ.ಓ.ಎಸ್. ಹ್ಯಾಂಡಲ್‌ಗಳನ್ನು ಸೂಕ್ತವಾಗಿ ಮಾರ್ಪಾಟು ಮಾಡಿ ಪಾದಚಾರಿಗಳಿಗೆ ಆಗಬಹುದಾದ ಅನಾನುಕೂಲಗಳಣ್ನು ನಿವಾರಿಸಲು ಕ್ರಮ ಕೈಗೊಳ್ಳಲಾಗಿದೆ. ಈಗಾಗಲೇ 1,000 ಜಿ.ಓ.ಎಸ್. ಹ್ಯಾಂಡಲ್‌ಗಳನ್ನು ಮಾರ್ಪಾಟು ಮಾಡಲಾಗಿದೆ. |
| ಈ) | ಇವುಗಳನ್ನು ಸ್ಥಳಾಂತರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? | ಪಾದಚಾರಿ ಮಾರ್ಗಗಳಲ್ಲಿದ್ದ 18 ಟ್ರಾನ್ಸ್‌ಫಾರ್ಮರ್‌ಗಳನ್ನು ಈಗಾಗಲೇ ಪರ್ಯಾಯ ಸ್ಥಳಕ್ಕೆ ಬದಲಾಯಿಸಲಾಗಿದೆ. ಪಾದಚಾರಿ ಮಾರ್ಗಗಳಲ್ಲಿರುವ ವಿದ್ಯುತ್ ಟ್ರಾನ್ಸ್‌ಫಾರ್ಮರ್‌ಗಳನ್ನು ಸಾರ್ವಜನಿಕರ ಉಪಯೋಗಕ್ಕೆ ಮೀಸಲಾಗಿರುವ ಸ್ಥಳಗಳಿಗೆ ಸ್ಥಳಾಂತರಿಸಲು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯನ್ನು ಅನುಮತಿ ಕೋರಲಾಗಿದ್ದು, ಅನುಮತಿ ದೊರೆತ ನಂತರ ಅವುಗಳನ್ನು ಸ್ಥಳಾಂತರಿಸಲು ಕ್ರಮ ಕೈಗೊಳ್ಳಲಾಗುವುದು. |

**ಮಾನ್ಯ ಮುಖ್ಯಮಂತ್ರಿಗಳು**

# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 2845

ಮಾನ್ಯ ಸದಸ್ಯರ ಹೆಸರು :

ಉತ್ತರಿಸಬೇಕಾದ ದಿನಾಂಕ :

ಉತ್ತರಿಸುವ ಸಚಿವರು : ತೋಟಗಾರಿಕೆ ಮತ್ತು ಕೃಷಿ ಮಾರುಕಟ್ಟೆ ಸಚಿವರು

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಹಾಪ್ ಕಾಮ್ಸ್‌ಗಳಲ್ಲಿ ಮಧ್ಯವರ್ತಿಗಳ ದಂಧೆಯಿಂದಾಗಿ ಖರೀದಿಗಳು ಅವ್ಯವಸ್ಥೆಗೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹಾಪ್ ಕಾಮ್ಸ್‌ಗಳಲ್ಲಿ ಸದಸ್ಯ ರೈತರಿಂದ ನೇರವಾಗಿ ಹಣ್ಣು ಮತ್ತು ತರಕಾರಿಗಳನ್ನು ಖರೀದಿಸುತ್ತಿದ್ದು, ಮಧ್ಯವರ್ತಿಗಳ ದಂಧೆಯಿರುವುದಿಲ್ಲ. |
| (ಆ) | ಬಂದಿದ್ದಲ್ಲಿ ರೈತ ಸದಸ್ಯರ ಪಾತ್ರವೇನು; ಈ ಸದಸ್ಯರು ನಾಮ್ ಕೇವಾಸ್ತೆಯಾಗಿರುವುದು ನಿಜವೇ; | ಹಾಪ್ ಕಾಮ್ಸ್‌ಗಳಲ್ಲಿ ರೈತ್ ಸದಸ್ಯರು ನಾಮ್ ಕೇವಾಸ್ತೆ ಸದಸ್ಯರಾಗಿರುವುದಿಲ್ಲ. ರೈತ ಸದಸ್ಯರು ಪಾತ್ರ ಕೆಳಕಂಡಂತಿರುತ್ತದೆ.<br>1. ಸಂಘದ ಪ್ರತಿಯೊಂದು ಸಾಮಾನ್ಯ ಸಭೆಗೆ ಹಾಜರಾಗಬೇಕು. ಆದರೆ, ಕಳೆದ 5 ವಾರ್ಷಿಕ ಸಾಮಾನ್ಯ ಸಭೆಗಳ ಪೈಕಿ 3 ಸಭೆಗಳಿಗೆ ಹಾಜರಾಗುವುದು ಕಡ್ಡಾಯವಾಗಿರುತ್ತದೆ.<br>2. ಸಾಮಾನ್ಯ ಸಭೆಗೆ ಹಾಜರಾಗುವ ಮುನ್ನ ಸಭೆಯ ಅಜೆಂಡಾ ಹಾಗೂ ಟಿಪ್ಪಣಿಗಳನ್ನು ಅಧ್ಯಯನ ಮಾಡಿ ಸಭೆಯಲ್ಲಿ ಸಕ್ರಿಯವಾಗಿ ಭಾಗವಹಿಸಿ, ತನ್ನ ಅಭಿಪ್ರಾಯಗಳನ್ನು ವ್ಯಕ್ತಪಡಿಸಬೇಕು. ಅಗತ್ಯಬಿದ್ದರೆ ಯಾವುದೇ ನಿರ್ಣಯದ ಬಗ್ಗೆ ತನ್ನ ಅಸಮ್ಮತಿಯನ್ನು ವ್ಯಕ್ತಪಡಿಸಲು ಹಕ್ಕುಳ್ಳವರಾಗಿರುತ್ತಾರೆ.<br>3. ಸಂಘದ ವ್ಯವಹಾರ ಮತ್ತು ಆಗುಹೋಗುಗಳ ಬಗ್ಗೆ ತಿಳಿದುಕೊಳ್ಳಬೇಕು.<br>4. ನಿರ್ದೇಶಕರ ಚುನಾವಣೆಯಲ್ಲಿ ಭಾಗವಹಿಸಿ ಮತ ನೀಡುವ ಹಾಗೂ ಸ್ಪರ್ಧಿಸುವ ಅಧಿಕಾರವಿರುತ್ತದೆ.<br>5. ಸದಸ್ಯನು ತಾನು ಬೆಳೆದಂತಹ ಹಣ್ಣು ಮತ್ತು ತರಕಾರಿಗಳನ್ನು ಕನಿಷ್ಟ 5 ಕ್ವಿಂಟಾಲ್ ನಷ್ಟು ಸಂಘದ ಮೂಲಕ ಮಾರಾಟ ಮಾಡಲು ಅವಕಾಶ ಇರುತ್ತದೆ. |
| (ಇ) | ಇದರಿಂದಾಗಿ ನಕಲಿ ಬಿಲ್‌ಗಳ ಹಾವಳಿ | ಹಾಪ್ ಕಾಮ್ಸ್‌ಗಳಲ್ಲಿ ಯಾವುದ ನಕಲಿ ಹಾವಳಿ ಇರುವುದಿಲ್ಲ. ಜಿಲ್ಲಾ ಹಾಪ್ ಕಾಮ್ಸ್ ಗಳಲ್ಲಿ ಬಿಲ್ಲುಗಳ ಮೊತ್ತವನ್ನು ಆಯಾ ದಿನವೇ |

<table>
<tr>
<td></td>
<td>ಜಾಸ್ತಿಯಾಗಿದ್ದು, ಬಿಲ್ಲುಗಳ ಮೊತ್ತ ಪಾವತಿಗೆ ಬಾಕಿ ಇರುವ ಪ್ರಕರಣಗಳು ಎಷ್ಟು; ಯಾವಾಗಿನಿಂದ ಬಾಕಿ ಇರುತ್ತವೆ;</td>
<td>ರೈತರಿಗೆ ನೆಫ್ಟ್/ಆರ್.ಟಿ.ಜಿ.ಎಸ್./ ಚೆಕ್‌ಗಳ ಮೂಲಕ ಪಾವತಿಸಲಾಗುತ್ತಿದೆ. ಬೆಂಗಳೂರು ಹಾಪ್ ಕಾಮ್ಸ್‌ನಲ್ಲಿ ಪಾವತಿಗೆ ಬಾಕಿ ಇರುವ ಬಿಲ್ಲುಗಳ ಸಂಖ್ಯೆ:417, ದಿನಾಂಕ : 03.06.2017 ರಿಂದ ಬಾಕಿ ಇರುತದೆ. ಪ್ರತಿ ನಿತ್ಯ ಹಣ್ಣು ಮತ್ತು ತರಕಾರಿಗಳನ್ನು ಸರಬರಾಜು ಮಾಡುವ ಸುಮಾರು 150 ರಿಂದ 225 ರೈತರ ಬಿಲ್ಲುಗಳನ್ನು ನಿಯಮಾನುಸಾರ ಪರಿಶೀಲಿಸಿ ನಂತರ ಸದಸ್ಯ ರೈತರಿಗೆ ನೇರವಾಗಿ ಬ್ಯಾಂಕ್ ಖಾತೆಗೆ ನೆಫ್ಟ್/ಆರ್.ಟಿ.ಜಿ.ಎಸ್. ಮೂಲಕ ಕಳುಹಿಸಲು ಕನಿಷ್ಠ 2–3 ದಿನಗಳ ಕಾಲಾವಕಾಶ ಬೇಕಾಗಿರುವುದರಿಂದ ಬಿಲ್ಲುಗಳ ಬಾಕಿ ಇರುತ್ತವೆ.<br><br>ತೋಟಗಾರಿಕೆ ಬೆಳೆ ಬೆಳೆಯುತ್ತಿರುವ ರೈತರು ಹಾಪ್‌ಕಾಮ್ಸ್‌ಗಳಲ್ಲಿ ತೋಟಗಾರಿಕೆ ಬೆಳೆ ಬೆಳೆದಿರುವ ಬಗ್ಗೆ ಆರ್.ಟಿ.ಸಿ. (ಪಹಣಿ) ಯಲ್ಲಿ ಬೆಳೆ ಕಡ್ಡಾಯವಾಗಿ ನಮೂದಾಗಿರಬೇಕು. ನಮೂದಾಗದಿದ್ದಲ್ಲಿ ಗಣಕೀಕೃತ ಬೆಳೆ ದೃಢೀಕರಣ ಪಡೆಯಲಾಗುತ್ತಿದೆ. ಆರ್.ಟಿ.ಸಿ ಹೊಂದಿರುವ ರೈತರು ಕಡ್ಡಾಯವಾಗಿ ಹೆಬ್ಬೆಟ್ಟಿನ ಗುರುತು ನೀಡಬೇಕಾಗಿರುತ್ತದೆ. ಅಲ್ಲದೇ ಸದರಿ ರೈತರ ಆಧಾರ್ ಮತ್ತು ಬ್ಯಾಂಕ್ ಪಾಸ್ ಪುಸ್ತಕದ ಪ್ರತಿಯನ್ನು ಪಡೆದು, ಎಲ್ಲಾಮಾಹಿತಿಯನ್ನು ಹೊಂದಿರುವ ಸ್ಮಾರ್ಟ ಕಾರ್ಡ್ ಗುರುತಿನ ಚೀಟಿಯನ್ನು ಸದಸ್ಯ ರೈತರಿಗೆ ವಿತರಿಸಲಾಗಿರುತ್ತದೆ.</td>
</tr>
<tr>
<td>(ಈ)</td>
<td>ಹಾಪ್ ಕಾಮ್ಸ್ ಗೆ ಹಣ್ಣು ಮತ್ತು ತರಕಾರಿಗಳನ್ನು ಯಾರಿಂಧ ನೇರವಾಗಿ ಖರೀಧಿಸಲಗುತ್ತದೆ; ಈ ಸರಕನ್ನು ಯಾರಿಗೆ ಮಾರಾಟ ಮಾಡಲಾಗುತ್ತದೆ;</td>
<td>ಹಾಪ್ ಕಾಮ್ಸ್‌ಗಳಲ್ಲಿ ಬೇಡಿಕೆಗನುಗುಣವಾಗಿ ಸದಸ್ಯರಿಂದ ನೇರವಾಗಿ ಹಣ್ಣು ಮತ್ತು ತರಕಾರಿಗಳನ್ನು ಖರೀದಿಸಲಾಗುತ್ತಿದೆ. ರೈತರಿಂದ ಲಭ್ಯವಿಲ್ಲದ ಹಣ್ಣು ಮತ್ತು ತರಕಾರಿಗಳನ್ನು ಇತರೆ ಜಿಲ್ಲಾ ಹಾಪ್ ಕಾಮ್ಸ್ ನಿಂದ/ಎ.ಪಿ.ಎಂ.ಸಿ. ಮಾರುಕಟ್ಟೆಯಿಂದ ಖರಿದೀಸಲಾಗುತ್ತಿದೆ.<br><br>ಖರೀದಿಸಲಾಗುವ ಹಣ್ಣು ಮತ್ತು ತರಕಾರಿಗಳನ್ನು ಸಂಸ್ಥೆಯ ಮಾರಾಟ ಮಳಿಗೆಗಳ ಗ್ರಾಹಕರಿಗೆ ಮಾರಾಟ ಮಾಡಲಾಗುತ್ತಿದೆ. ಅಲ್ಲದೇ ಸರ್ಕಾರಿ/ಸರ್ಕಾರೇತರ ಸಂಘ ಸಂಸ್ಥೆಗಳಿಗೆ, ಆಸ್ಪತ್ರೆಗಳಿಗೆ, ಕಾರ್ಖಾನೆಗಳಿಗೆ ಹಾಗೂ ವಸತಿ ಗೃಹಗಳಿಗೆ ಮಾರಾಟ ಮಾಡಲಾಗುತ್ತಿದೆ.<br><br>ಮೂರು ವರ್ಷಗಳಿಂದ ಸದಸ್ಯ ರೈತರಿಂದ ಖರೀದಿಸಿರುವ ಹಣ್ಣು, ತರಕಾರಿಗಳ ವಿವರಗಳು ಕೆಳಕಂಡಂತಿರುತ್ತದೆ.<br><br>
<table>
<tr><th>ಕ್ರ.ಸ</th><th>ವರ್ಷ</th><th>ಸದಸ್ಯ ರೈತರ ಸಂಖ್ಯೆ</th><th>ರೈತರಿಂದ ಖರೀದಿಸಿದ ಪ್ರಮಾನ (ಕೆಜಿಗಳಲ್ಲಿ)</th><th>ವಹಿವಾಟಿನ ಪ್ರಮಾಣ (ಕೆಜಿಗಳಲ್ಲಿ)</th><th>ವಹಿವಾಟಿನ ಮೊತ್ತ (ಲಕ್ಷಗಳಲ್ಲಿ)</th></tr>
<tr><td>1.</td><td>2015–16</td><td>15757</td><td>23670801</td><td>29348067</td><td>8853</td></tr>
</table>
</td>
</tr>
</table>

| | | | | | | | |
|---|---|---|---|---|---|---|---|
| | | 2. | 2016–17 | 16014 | 28115904 | 32968147 | 8919 |
| | | 3. | 2017–18 | 16179 | 26789507 | 31404748 | 9495 |
| (ಉ) | ಈ ಸಮಸ್ಯೆ ಗೊಂದಲಗಳಿಗೆ ಶಾಶ್ವತ ಪರಿಹಾರ ಕಲ್ಪಿಸಲು ಸರ್ಕಾರ ಮುಂದಾಗುವುದೇ; ಹಾಗಿದ್ದಲ್ಲಿ ಕೈಗೊಂಡ ಕ್ರಮಗಳೇನು? (ವಿವರ ಒದಗಿಸುವುದು) | ಹಾಪ್ ಕಾಮ್ಸ್‌ಗಳಲ್ಲಿ ಬೇಡಿಕೆಗನುಗುಣವಾಗಿ ಸದಸ್ಯ ರೈತರಿಂದ ನೇರವಾಗಿ ಹಣ್ಣು ಮತ್ತು ತರಕಾರಿಗಳನ್ನು ಖರೀದಿಸಿ ಗ್ರಾಹಕರಿಗೆ ಹಾಗೂ ಸಂಘ ಸಂಸ್ಥೆಗಳಿಗೆ ಮಾರಾಟ ಮಾಡುತ್ತಿರುವುದರಿಂದ ಯಾವುದೇ ಸಮಸ್ಯೆ ಅಥವಾ ಗೊಂದಲಗಳು ಇರುವುದಿಲ್ಲ. | | | | | |

**ತೋಟಗಾರಿಕೆ ಮತ್ತು ಕೃಷಿ**
**ಮಾರುಕಟ್ಟೆ ಸಚಿವರು**

## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: : 581

ಮಾನ್ಯ ಸದಸ್ಯರ ಹೆಸರು: :

ಉತ್ತರಿಸಬೇಕಾದ ದಿನಾಂಕ: :

ಉತ್ತರಿಸುವ ಸಚಿವರು: : ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಜಾತಿ ಜನಗಣತಿಯ ವಿವರಗಳನ್ನು ಇನ್ನೂ ಕೂಡ ಪ್ರಕಟಿಸದಿರಲು ಕಾರಣವೇನು; | ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ವರದಿಯನ್ನು ಸಿದ್ಧಪಡಿಸಿದೆ. ಆಯೋಗದಿಂದ ವರದಿಯು ಸರ್ಕಾರದಲ್ಲಿ ಸ್ವೀಕೃತಗೊಂಡ ನಂತರ ವರದಿಯಲ್ಲಿನ ವಿವರಗಳನ್ನು ಪ್ರಕಟಿಸುವ ಬಗ್ಗೆ ಕ್ರಮವಹಿಸಲಾಗುವುದು. |
| ಆ) | ಜಾತಿ ಜನಗಣತಿ ಪ್ರಕಟಿಸಿದರೆ ಈಗಿರುವ ಜಾತಿಗಳಲ್ಲಿ ಜನಸಂಖ್ಯೆ ಕಡಿಮೆಯಾಗುತ್ತಿದೆಯೇ; | ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದಿಂದ ವರದಿಯು ಸರ್ಕಾರದಲ್ಲಿ ಸ್ವೀಕೃತವಾಗಿರುವುದಿಲ್ಲ. |
| ಇ) | ಹಿಂದಳಿದ ವರ್ಗಗಳಲ್ಲಿ ಅತಿ ಕಡಿಮೆ ಜನ ಸಂಖ್ಯೆಯಿರುವ ಜಾತಿಗಳಿಗೆ ಸಾಮಾಜಿಕ ನ್ಯಾಯ ದೊರಕಿಸಿ ಕೊಡಲು ಸರ್ಕಾರದ ಕ್ರಮಗಳೇನು; | ಹಿಂದುಳಿದ ವರ್ಗಗಳ ಸರ್ವೋತೋಮುಖ ಅಭಿವೃದ್ಧಿಗಾಗಿ ಕಾರ್ಯಕ್ರಮಗಳನ್ನು/ಯೋಜನೆಗಳನ್ನು ರೂಪಿಸಲು ಹಾಗೂ ಸಾಮಾಜಿಕ ನ್ಯಾಯ ದೊರಕಿಸಿಕೊಡುವ ಉದ್ದೇಶದಿಂದ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಕರ್ನಾಟಕ ರಾಜ್ಯ ಹಿಂದಳಿದ ವರ್ಗಗಳ ಆಯೋಗದಿಂದ ನಡೆಸಲಾಗಿದೆ. ಅದರಂತೆ ವರದಿ ಸಿದ್ಧಪಡಿಸಲಾಗಿದೆ. ಆಯೋಗವು ಸರ್ಕಾರಕ್ಕೆ ವರದಿ ಸಲ್ಲಿಸಿದ ನಂತರ ಪರಿಶೀಲಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು. |
| ಈ) | ಸರ್ಕಾರ ಜಾತಿ ಜನಗಣತಿಗಾಗಿ ಒಟ್ಟು ಖರ್ಚು ಮಾಡಿರುವ ಹಣವೆಷ್ಟು; | ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಗಾಗಿ ಇದುವರೆವಿಗೂ ರೂ. 162.52 ಕೋಟಿಗಳನ್ನು ಖರ್ಚು ಮಾಡಲಾಗಿದೆ. |

**ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.**

# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 999 |
| ಮಾನ್ಯ ಸದಸ್ಯರ ಹೆಸರು | : | |
| ಉತ್ತರಿಸಬೇಕಾದ ದಿನಾಂಕ | : | |
| ಉತ್ತರಿಸುವ ಸಚಿವರು | : | ಮಾನ್ಯ ಕಂದಾಯ ಹಾಗೂ ಕೌಶಲಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಅನುದಾನಿತ ಐಟಿಐ ಕಾಲೇಜುಗಳ ನೌಕರರುಗಳಿಗೆ ಥಾಮಸ್ ವರದಿಯನ್ವಯ 1997ರ ಅನುದಾನ ಸಂಹಿತೆಯನ್ನು ಪರಿಷ್ಕರಿಸಲಾಗಿದೆಯೇ: (ವಿವರ ನೀಡುವುದು); | 1997ರ ಅನುದಾನಿತ ಸಂಹಿತೆಯನ್ನು ಪರಿಷ್ಕರಿಸಲು ಕ್ರಮವಹಿಸಲಾಗುತ್ತಿದೆ. |
| ಆ) | ಅನುದಾನಿತ ಶಿಕ್ಷಣ ಸಂಸ್ಥೆಗಳಿಗೆ ಯಾವ ಯಾವ ಸೌಲಭ್ಯಗಳನ್ನು ನೀಡಲಾಗುತ್ತಿದೆ: ಸದರಿ ಸೌಲಭ್ಯಗಳನ್ನು ಈ ನೌಕರರಿಗೆ ನೀಡಲಾಗಿದೆಯೇ: ನೀಡಿಲ್ಲದಿದ್ದಲ್ಲಿ ಅದಕ್ಕೆ ಕಾರಣಗಳೇನು: (ಸಂಪೂರ್ಣ ವಿವರ ನೀಡುವುದು) | ಮೂಲವೇತನ, ತುಟ್ಟಿಭತ್ಯೆ, ಮನೆ ಬಾಡಿಗೆ ಭತ್ಯೆ, ನಗರ ಪರಿಹಾರ ಭತ್ಯೆ, ವಾರ್ಷಿಕ ವೇತನ ಬಡ್ತಿ, ಗಳಿಕೆ ರಜೆ ನಗಧೀಕರಣ, ಗಳಿಕೆ 10 ವರ್ಷಗಳ ಕಾಲಬದ್ಧ ವೇತನ ಮುಂಬಡ್ತಿ, 15 ವರ್ಷಗಳ ಸ್ವಯಂಚಾಲಿತ ವೇತನ ಮುಂಬಡ್ತಿ, 20-25 ವರ್ಷಗಳ ಹೆಚ್ಚುವರಿ ವೇತನ ಬಡ್ತಿ, ಪಿಂಚಣಿ, ಕುಟುಂಬ ಪಿಂಚಣಿ, ಗ್ರ್ಯಾಚ್ಯುಯಿಟಿ (ನಿವೃತ್ತಿ ಉಪದಾನ)/ ಡಿ.ಸಿ.ಆರ್.ಜಿ (ಮರಣ ಉಪದಾನ), ಪರಿವರ್ತಿತ ಪಿಂಚಣಿ ಸೌಲಭ್ಯಗಳನ್ನು ಅನುದಾನಿತ ಶಿಕ್ಷಣ ಸಂಸ್ಥೆಗಳಿಗೆ ನೀಡಲಾಗುತ್ತಿದೆ.<br>ಮೇಲಿನ ಎಲ್ಲಾ ಸೌಲಭ್ಯಗಳನ್ನು ಅನುದಾನಿತ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಗಳ ನೌಕರರಿಗೂ ನೀಡಲಾಗಿದೆ. ಮಹಿಳಾ ಸಿಬ್ಬಂದಿಗಳಿಗೆ ಹೆರಿಗೆ ರಜೆ ಸೌಲಭ್ಯವನ್ನು ವಿಸ್ತರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |
| ಇ) | ಅನುದಾನಿತ ಐಟಿಐ ಶಿಕ್ಷಣ ಸಂಸ್ಥೆಗಳಿಗೆ ಅನುದಾನ ಸಂಹಿತೆಯನ್ನು ಪರಿಷ್ಕರಿಸದಿರಲು ಕಾರಣಗಳೇನು; | ಅನುದಾನ ಸಂಹಿತೆಯನ್ನು ಪರಿಷ್ಕರಿಸಲಾಗುತ್ತಿದೆ. |
| ಈ) | ಐಟಿಐ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ನೌಕರರಿಗೆ 6ನೇ | |

| | | |
|---|---|---|
| | ವೇತನ ಆಯೋಗದ ಆದೇಶದನ್ವಯ ಇದುವರೆಗೆ ವೇತನ ಪಾವತಿಸದಿರಲು ಕಾರಣವೇನು: (ವಿವರ ನೀಡುವುದು) | |
| | ಯಾವ ಕಾಲಮಿತಿಯಲ್ಲಿ ಹೊಸ ವೇತನ ನೀಡಲಾಗುತ್ತದೆ? (ವಿವರ ನೀಡುವುದು) | |

**ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು**

## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 438

ಮಾನ್ಯ ಸದಸ್ಯರ ಹೆಸರು :

ಉತ್ತರಿಸಬೇಕಾದ ದಿನಾಂಕ :

ಉತ್ತರಿಸುವ ಸಚಿವರು : **ಮಾನ್ಯ ಉಪ ಮುಖ್ಯಮಂತ್ರಿಯವರು.**

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ನೌಕರರ ಕ್ಷೇಮಾಭಿವೃದ್ಧಿ ಸಂಘಕ್ಕೆ ಲಿಂಗಧೀರನಹಳ್ಳಿ ಗ್ರಾಮದ ಸರ್ವೆ ನಂ. ೪, 7/1, 7/5, 7/6, 7/8 ಮತ್ತು 7/9ರಲ್ಲಿನ ಜಮೀನುಗಳನ್ನು ನೋಂದಾಯಿತ ಕ್ರಯಪತ್ರ ಮಾಡಿಕೊಡದೇ ಸದರಿ ಜಮೀನುಗಳನ್ನು ಪರಿಷ್ಕೃತ ಬಡಾವಣೆ ನಕ್ಷೆಯಲ್ಲಿ ಸೇರಿಸಲು ಅವಕಾಶವಿದೆಯೇ; ಇಲ್ಲದಿದ್ದಲ್ಲಿ ಈ ಕ್ರಮಕ್ಕೆ ಕಾರಣರಾದ ನೌಕರರ ವಿರುದ್ದ ಕೈಗೊಂಡ ಕ್ರಮಗಳೇನು; | ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ನೌಕರರ ಕ್ಷೇಮಾಭಿವೃದ್ಧಿ ಸಂಘಕ್ಕೆ ಲಿಂಗಧೀರನಹಳ್ಳಿ ಗ್ರಾಮದ ಸರ್ವೆ ನಂ. ೪, 7/1, 7/5, 7/6, 7/8 ಮತ್ತು 7/9ರಲ್ಲಿನ ಜಮೀನುಗಳನ್ನು ನೋಂದಾಯಿತ ಕ್ರಯಪತ್ರ ಮಾಡಿಕೊಡದೇ ಸದರಿ ಜಮೀನುಗಳನ್ನು ಪರಿಷ್ಕೃತ ಬಡಾವಣೆ ನಕ್ಷೆಯಲ್ಲಿ ಸೇರಿಸಲು ಅವಕಾಶವಿರುವುದಿಲ್ಲ.<br>ಈ ಅಕ್ರಮಕ್ಕೆ ಕಾರಣರಾದವರ ಅಧಿಕಾರಿ/ನೌಕರರುಗಳ ವಿರುದ್ಧ ಶಿಸ್ತಿನ ಕ್ರಮ ತೆಗೆದುಕೊಳ್ಳಲು ಕಾರಣಾಪೇಕ್ಷಿತ ಪತ್ರವನ್ನು ನೀಡಲಾಗಿದೆ. |
| ಆ) | ಪ್ರಾಧಿಕಾರದ ನಿಯಮಾವಳಿಗಳನ್ವಯ ಸಿ.ಎ ನಿವೇಶನಗಳನ್ನು ಹಂಚಿಕೆ ಮಾಡಲು ಕೈಗೊಳ್ಳುವ ಪ್ರಕ್ರಿಯೆಯ ವಿಧಾನಗಳಾವುವು; (ನಿಯಮದ ಪ್ರತಿ ಒದಗಿಸುವುದು) | ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಸಿ.ಎ. ನಿವೇಶನಗಳ ಹಂಚಿಕೆ ನಿಯಮಾವಳಿ 1989ರಂತೆ ಪ್ರಾಧಿಕಾರದಿಂದ ಪತ್ರಿಕಾ ಪ್ರಕಟಣೆ ಹೊರಡಿಸುವ ಮೂಲಕ ಅರ್ಹ ಸಂಘ/ಸಂಸ್ಥೆಗಳಿಂದ ಅರ್ಜಿಗಳನ್ನು ಆಹ್ವಾನಿಸಿ ನಂತರ ಸಿ.ಎ. ನಿವೇಶನ ಹಂಚಿಕೆ ಉಪಸಮಿತಿ ನಿರ್ಣಯದಂತೆ ಅರ್ಹ ಸಂಘ/ಸಂಸ್ಥೆಗಳ ಪರವಾಗಿ 30 ವರ್ಷಗಳ ಗುತ್ತಿಗೆ ಆಧಾರದ ಮೇಲೆ ಹಂಚಿಕೆ ಮಾಡಲು ನಿರ್ಣಯ ಕೈಗೊಳ್ಳಲಾಗುವುದು. (ನಿಯಮದ ಪ್ರತಿಯನ್ನು ಅನುಬಂಧ–01ರಲ್ಲಿ ನೀಡಲಾಗಿದೆ) |
| ಇ) | ಲಿಂಗಧೀರನಹಳ್ಳಿ ಬಡಾವಣೆಯ ಸುಮಾರು 01 ಎಕರೆ ವಿಸ್ತೀರ್ಣದ ಸಿ.ಎ ನಿವೇಶನವನ್ನು ಯಾರಿಗೆ ಹಂಚಿಕೆ ಮಾಡಲಾಗಿದೆ. (ಪ್ರಾಧಿಕಾರದ | ಲಿಂಗಧೀರನ ಬಡಾವಣೆಯ ಸುಮಾರು 01 ಎಕರೆ ವಿಸ್ತೀರ್ಣದ ಸಿ.ಎ ನಿವೇಶನವನ್ನು ಹಂಚಿಕೆ ಮಾಡಲು ಪ್ರಾಧಿಕಾರದ ಸಭೆಯಲ್ಲಿ |

| | | |
|---|---|---|
| | ಮಂಡಳಿ ಸಭೆಯಲ್ಲಿ ಅನುಮತಿಸಿದ ಠರಾವಿನ ಪ್ರತಿ ಒದಗಿಸುವುದು ಮತ್ತು ಗುತ್ತಿಗೆ ಕರಾರು ಪತ್ರ ಒದಗಿಸುವುದು) | ತೀರ್ಮಾನವಾಗಿರುವುದಿಲ್ಲ. ಆದರೆ, ಪ್ರಾಧಿಕಾರದ ಆಯುಕ್ತರವರ ಆದೇಶ ದಿನಾಂಕ: 30.09.2015ರಂತೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ನೌಕರರ ಕ್ಷೇಮಾಭಿವೃದ್ಧಿ ಸಂಘಕ್ಕೆ ಹಂಚಿಕೆ ಮಾಡಲಾಗಿದೆ. (ಆಯುಕ್ತರ ಆದೇಶ ದಿನಾಂಕ: 30.09.2015ರ ಪ್ರತಿಯನ್ನು ಅನುಬಂಧ-2ರಲ್ಲಿ ನೀಡಲಾಗಿದೆ) ಆದರೆ, ಈ ಬಗ್ಗೆ ಪ್ರಾಧಿಕಾರದಿಂದ ಗುತ್ತಿಗೆ ಕರಾರು ಪತ್ರವನ್ನು ನೋಂದಾಯಿಸಿಕೊಟ್ಟಿರುವುದಿಲ್ಲ. |
| ಈ) | ಸಿ.ಎ ನಿವೇಶನವನ್ನು ಪರಿತ್ಯಾಜನಾ ಪತ್ರದ ಮೂಲಕ ಪ್ರಾಧಿಕಾರಕ್ಕೆ ನೋಂದಾಯಿಸಿ, ನಂತರ ಸಂಘದವರು ಖಾಸಗಿಯವರಿಗೆ 30 ವರ್ಷಗಳ ಗುತ್ತಿಗೆಕರಾರು ಪತ್ರವನ್ನು ನೋಂದಾಯಿಸಲು ಅವಕಾಶವಿದೆಯೇ; ಇಲ್ಲದಿದ್ದಲ್ಲಿ, ಸಂಘದವರು ಗುತ್ತಿಗೆ ಕರಾರು ಪತ್ರವನ್ನು ನೋಂದಾಯಿಸಿರುವುದು ನಿಜವೇ; ನೋಂದಾಯಿಸಿದ್ದಲ್ಲಿ ಕೈಗೊಂಡಿರುವ ಕ್ರಮಗಳೇನು; | ಸಿ.ಎ ನಿವೇಶನವನ್ನು ಪರಿತ್ಯಾಜನಾ ಪತ್ರದ ಮೂಲಕ ಪ್ರಾಧಿಕಾರಕ್ಕೆ ನೋಂದಾಯಿಸಿ ನಂತರ ಸಂಘದವರು ಖಾಸಗಿಯವರಿಗೆ 30 ವರ್ಷಗಳ ಗುತ್ತಿಗೆಕರಾರು ಪತ್ರವನ್ನು ನೋಂದಾಯಿಸಲು ಅವಕಾಶವಿರುವುದಿಲ್ಲ.<br><br>ನೌಕರರ ಕ್ಷೇಮಾಭಿವೃದ್ಧಿ ಸಂಘದವರು ಖಾಸಗಿ ವ್ಯಕ್ತಿಗೆ ಮೊದಲಿಗೆ ಶುದ್ಧಕ್ರಯಪತ್ರ ನೋಂದಾಯಿಸಿಕೊಟ್ಟಿದ್ದು, ನಂತರ ಶುದ್ಧಕ್ರಯಪತ್ರ ನೋಂದಾಯಿಸಿಕೊಟ್ಟಿರುವುದನ್ನು ಗುತ್ತಿಗೆ ಎಂದು ತಿದ್ದುಪಡಿ ಪತ್ರವನ್ನು ನೋಂದಾಯಿಸಿರುತ್ತಾರೆ.<br><br>ಖಾಸಗಿ ವ್ಯಕ್ತಿಗೆ ಶುದ್ದ ಕ್ರಯ ಪತ್ರವನ್ನು ನೋಂದಾಯಿಸಿರುವುದರಿಂದ ಸದರಿ ಶುದ್ಧ ಕ್ರಯ ಪತ್ರವನ್ನು ರದ್ದುಗೊಳಿಸುವ ಬಗ್ಗೆ ಸಿಟಿ ಸಿವಿಲ್ ನ್ಯಾಯಾಲಯದಲ್ಲಿ ಓ.ಎಸ್. ಸಂಖ್ಯೆ: 842/2019ನ್ನು ದಾಖಲಿಸಲಾಗಿದೆ. |
| ಉ) | ಸದರಿ ಬಡಾವಣೆಯ ಅಕ್ರಮಗಳ ಬಗ್ಗೆ ಪ್ರಾಧಿಕಾರದ ಜಾಗೃತದಳದ ಎಸ್.ಪಿ. ರವರು ತನಿಖಾ ವರದಿಯನ್ನು ಸಲ್ಲಿಸಿರುವುದು ನಿಜವೇ; (ಪ್ರತಿ ಒದಗಿಸುವುದು) ಅಕ್ರಮಗಳಲ್ಲಿ ಭಾಗಿಯಾದವರ ವಿರುದ್ದ ಕ್ರಿಮಿನಲ್ ಕೇಸ್ ದಾಖಲಿಸಬೇಕೆಂದು ಆಯುಕ್ತರು ಸೂಚಿಸಿರುವುದು ನಿಜವೇ; ಇದ್ದಲ್ಲಿ ಕೈಗೊಂಡ ಕ್ರಮಗಳೇನು? | ಹೌದು ತನಿಖಾ ವರದಿಯ ಪ್ರತಿಯನ್ನು ಅನುಬಂಧ-3ರಲ್ಲಿ ನೀಡಲಾಗಿದೆ.<br><br>ಅಕ್ರಮಗಳಲ್ಲಿ ಭಾಗಿಯಾದವರ ವಿರುದ್ಧ ಕ್ರಿಮಿನಲ್ ಕೇಸ್ ದಾಖಲಿಸಬೇಕೆಂದು ಪ್ರಾಧಿಕಾರದ ಆಯುಕ್ತರು ಸೂಚಿಸಿರುತ್ತಾರೆ.<br><br>ಅಕ್ರಮಗಳಲ್ಲಿ ಭಾಗಿಯಾದವರ ವಿರುದ್ಧ ಕ್ರಿಮಿನಲ್ ಕೇಸ್ ದಾಖಲಿಸುವ ಬಗ್ಗೆ ಪ್ರಾಧಿಕಾರದ ವತಿಯಿಂದ ಕ್ರಮಕೈಗೊಳ್ಳಲಾಗುತ್ತಿದೆ. |

**ಉಪ ಮುಖ್ಯಮಂತ್ರಿ**

## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : (399) 227

ಮಾನ್ಯ ಸದಸ್ಯರ ಹೆಸರು :

ಉತ್ತರಿಸಬೇಕಾದ ದಿನಾಂಕ :

ಉತ್ತರಿಸುವ ಸಚಿವರು : **ಮಾನ್ಯ ಕಾರ್ಮಿಕ ಸಚಿವರು**

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗವು ಶಾಲೆಯಿಂದ ಹೊರಗುಳಿದ ಎಲ್ಲಾ ಮಕ್ಕಳನ್ನು (ವಿಶೇಷವಾಗಿ ಬಾಲಕಾರ್ಮಿಕ ಮಕ್ಕಳು) ಪುನಃ ಮುಖ್ಯ ಶಾಲಾವಾಹಿನಿಗೆ ಕರೆತರಲು "ಶಾಲೆಯ ಕಡೆ ನನ್ನ ನಡೆ" ಎಂಬ ವಿಶೇಷ ಅಭಿಯಾನವನ್ನು ಪ್ರಾರಂಭಿಸಿದ್ದು, ಇದಕ್ಕೆ ಇಲಾಖೆಯಿಂದ ನಿರೀಕ್ಷಿತ ಬೆಂಬಲ ದೊರೆಯದೆ ವಿಫಲಗೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು; | ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗವು ಶಾಲೆಯಿಂದ ಹೊರಗುಳಿದ ಎಲ್ಲಾ ಮಕ್ಕಳನ್ನು (ವಿಶೇಷವಾಗಿ ಬಾಲಕಾರ್ಮಿಕ ಮಕ್ಕಳು) ಪುನಃ ಮುಖ್ಯ ಶಾಲಾವಾಹಿನಿಗೆ ಕರೆತರಲು "ಶಾಲೆಯ ಕಡೆ ನನ್ನ ನಡೆ" ಎಂಬ ವಿಶೇಷ ಅಭಿಯಾನವನ್ನು ಪ್ರಾರಂಭಿಸಿದ್ದು, ಈ ಕಾರ್ಯಕ್ರಮಕ್ಕೆ ಕಾರ್ಮಿಕ ಇಲಾಖೆಯಿಂದ ಸಂಪೂರ್ಣ ಬೆಂಬಲ ನೀಡಲಾಗಿದೆ. ಶಾಲೆಯಿಂದ ಹೊರಗುಳಿದ ಮಕ್ಕಳ ಸಮೀಕ್ಷಾ ಕಾರ್ಯಕ್ರಮಗಳಲ್ಲಿ ಮತ್ತು ವಿಶೇಷ ಅಭಿಯಾನ ಕಾರ್ಯಕ್ರಮಗಳಲ್ಲಿ ಇಲಾಖೆಯು ಸಕ್ರೀಯವಾಗಿ ಪಾಲ್ಗೊಂಡು ಶಾಲೆ ಕಡೆ ನನ್ನ ನಡೆ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಸಹಕರಿಸಲಾಗಿರುತ್ತದೆ. |
| ಆ) | ಈ ವಿಶೇಷ ಅಭಿಯಾನದ ಮೂಲಕ ಇಲ್ಲಿಯವರೆಗೆ ಎಷ್ಟು ಜನ ಬಾಲ ಕಾರ್ಮಿಕರನ್ನು ಮರಳಿ ಶಾಲಾ ಮುಖ್ಯವಾಹಿನಿಗೆ ಕರೆತರಲಾಗಿದೆ? (ಜಿಲ್ಲಾವಾರು ವಿವರ ನೀಡುವುದು) | ಸದರಿ ಅಭಿಯಾನದ ಮೂಲಕ 391 ಬಾಲಕಾರ್ಮಿಕರನ್ನು ಬಾ ಮರಳಿ ಶಾಲಾ ಮುಖ್ಯವಾಹಿನಿಗೆ ಸೇರಿಸಲಾಗಿದ್ದು, ಜಿಲ್ಲಾವಾರು ಮಾಹಿತಿಯನ್ನು "ಅನುಬಂಧ" ದಲ್ಲಿ ಒದಗಿಸಲಾಗಿದೆ. |

**ಕಾರ್ಮಿಕ ಸಚಿವರು**

**ಶಾಸನ ರಚನೆ ಮಾದರಿ ವಿಧೇಯಕ**

**ಕರ್ನಾಟಕ ಋಣ ಪರಿಹಾರ ವಿಧೇಯಕ, 2018**

ಕರ್ನಾಟಕ ರಾಜ್ಯದಲ್ಲಿರುವ ಸಣ್ಣ ರೈತರು, ಭೂ ರಹಿತ ಕೃಷಿ ಕಾರ್ಮಿಕರು ಮತ್ತು ದುರ್ಬಲ ವರ್ಗಗಳ ಜನರಿಗೆ ಋಣದಿಂದ ಪರಿಹಾರವನ್ನು ಒದಗಿಸಲು ಒಂದು ವಿಧೇಯಕ.

ಕರ್ನಾಟಕ ರಾಜ್ಯದಲ್ಲಿನ ಸಣ್ಣ ರೈತರು, ಭೂ ರಹಿತ ಕೃಷಿ ಕಾರ್ಮಿಕರು ಮತ್ತು ದುರ್ಬಲ ವರ್ಗಗಳ ಜನರಿಗೆ ಋಣದಿಂದ ಪರಿಹಾರವನ್ನು ಒದಗಿಸುವುದು ಯುಕ್ತವಾಗಿರುವುದರಿಂದ ಹಾಗೂ ಅದಕ್ಕೆ ಸಂಬಂಧಿಸಿದ ಮತ್ತು ಅದಕ್ಕೆ ಪ್ರಾಸಂಗಿಕವಾದ ಇತರ ವಿಷಯಗಳಿಗಾಗಿ;

ಇದು ಭಾರತ ಗಣರಾಜ್ಯದ ಅರವತ್ತೊಂಬತ್ತನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ, ಎಂದರೆ:–

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.–** (1) ಈ ಅಧಿನಿಯಮವನ್ನು ಕರ್ನಾಟಕ ಋಣ ಪರಿಹಾರ ಅಧಿನಿಯಮ, 2018 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. ಪರಿಭಾಷೆಗಳು.–** ಈ ಅಧಿನಿಯಮದಲ್ಲಿ, ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,–

(1) "ಕೃಷಿ" ಎಂಬುದು, ಈ ಮುಂದಿನವುಗಳನ್ನು ಒಳಗೊಳ್ಳುತ್ತದೆ : –

(i) ಜಲಕೃಷಿ ;

(ii) ತೋಟಗಾರಿಕೆ ;

(iii) ದವಸಧಾನ್ಯ, ಹುಲ್ಲು ಅಥವಾ ತೋಟದ ಉತ್ಪನ್ನಗಳನ್ನು ಬೆಳೆಸುವುದು;

(iv) ಹೈನುಗಾರಿಕೆ ;

(v) ಕೋಳಿ ಸಾಕಣಿಕೆ;

(vi) ಜಾನುವಾರು ತಳಿವರ್ಧನೆ ;

(vii) ಮೇವು ಕೃಷಿ; ಮತ್ತು

(viii) ರೇಷ್ಮೆ ವ್ಯವಸಾಯ.

(2) "ವಾರ್ಷಿಕ ಆದಾಯ" ಎಂದರೆ, ಈ ಅಧಿನಿಯಮದ ಪ್ರಾರಂಭಕ್ಕೆ ನಿಕಟಪೂರ್ವದ ಹನ್ನೆರಡು ತಿಂಗಳ ಅವಧಿಯಲ್ಲಿನ ಒಟ್ಟು ವಾರ್ಷಿಕ ಆದಾಯ;

(3) "ಋಣ ಪರಿಹಾರ ಅಧಿಕಾರಿ" ಎಂದರೆ, ಕಂದಾಯ ಇಲಾಖೆಯ ಸಹಾಯಕ ಆಯುಕ್ತರು ಮತ್ತು ಇದು ಈ ಅಧಿನಿಯಮದ ಅಡಿಯಲ್ಲಿ ಋಣ ಪರಿಹಾರ ಅಧಿಕಾರಿಯ ಅಧಿಕಾರಗಳನ್ನು ಚಲಾಯಿಸಲು ರಾಜ್ಯ ಸರ್ಕಾರವು ಅಧಿಕೃತಗೊಳಿಸಿದ ತಹಶೀಲ್ದಾರ್ ದರ್ಜೆಗೆ ಕಡಿಮೆಯಲ್ಲದ ದರ್ಜೆಯ ಕಂದಾಯ ಇಲಾಖೆಯ ಯಾವೊಬ್ಬ ಅಧಿಕಾರಿಯನ್ನು ಒಳಗೊಳ್ಳುತ್ತದೆ;

(4) "ಲೇಣಿದಾರ" ಎಂಬುದು ಆತನ ಹಕ್ಕುದಾರ, ಕಾನೂನು ಪ್ರತಿನಿಧಿಗಳು ಮತ್ತು ಹಸ್ತಾಂತರಿತನನ್ನು ಒಳಗೊಳ್ಳುತ್ತದೆ;

(5) "ಋಣ" ಎಂದರೆ, ಡಿಕ್ರಿಯಾಗಿರಲಿ ಅಥವಾ ಇಲ್ಲದಿರಲಿ ಭದ್ರತೆಯಾಗಿರಲಿ ಅಥವಾ ಇಲ್ಲದಿರಲಿ ನಗದು ಅಥವಾ ವಸ್ತು ರೂಪದಲ್ಲಿನ ಯಾವುದೇ ಹೊಣೆಗಾರಿಕೆ ಮತ್ತು ಇದು ಅಂಥ ಋಣದ ಮೇಲಿನ ಬಾಕಿಯ ಯಾವುದೇ ಬಡ್ಡಿಯನ್ನು ಒಳಗೊಳ್ಳುತ್ತದೆ;

(6) "ಋಣಿ" ಎಂದರೆ,-

(i) ಒಬ್ಬ ಭೂರಹಿತ ಕೃಷಿ ಕಾರ್ಮಿಕ ;

(ii) ದುರ್ಬಲ ವರ್ಗಕ್ಕೆ ಸೇರಿದ ಒಬ್ಬ ವ್ಯಕ್ತಿ ; ಅಥವಾ

(iii) ಒಬ್ಬ ಸಣ್ಣ ರೈತ;

– ಮತ್ತು ಯಾರಿಂದ ಋಣವು ಬಾಕಿಯಿದೆಯೋ ಆತ;

(7) ಒಬ್ಬ ವ್ಯಕ್ತಿಯ ಸಂಬಂಧದಲ್ಲಿ "ಕುಟುಂಬ" ಎಂದರೆ, ಅಂಥ ವ್ಯಕ್ತಿ, ಅಂಥ ವ್ಯಕ್ತಿಯ ಪತ್ನಿ ಅಥವಾ ಸಂದರ್ಭಾನುಸಾರವಾಗಿ ಪತಿ ಮತ್ತು ಅವರ ಅಪ್ರಾಪ್ತ ವಯಸ್ಸಿನ ಮಕ್ಕಳು;

(8) "ಭೂ ರಹಿತ ಕೃಷಿ ಕಾರ್ಮಿಕ" ಎಂದರೆ, ಈ ಅಧಿನಿಯಮದ ಪ್ರಾರಂಭದ ದಿನಾಂಕದಂದು, ಯಾವುದೇ ಭೂಮಿಯನ್ನು ಹೊಂದಿಲ್ಲದ ಮತ್ತು ಜಮೀನಿನಲ್ಲಿ ದೈಹಿಕ ಶ್ರಮ ದುಡಿಮೆಯು ಮುಖ್ಯವಾದ ಜೀವನಾಧಾರವಾಗಿರುವ ಒಬ್ಬ ವ್ಯಕ್ತಿ ;

(9) "ಸಣ್ಣ ರೈತ" ಎಂದರೆ, ಈ ಅಧಿನಿಯಮದ ಪ್ರಾರಂಭದ ದಿನಾಂಕದಂದು, ಎರಡು ಘಟಕಗಳಿಗಿಂತ ಹೆಚ್ಚಿಲ್ಲದಂತೆ ಜಮೀನನ್ನು, ಅದರ ಮಾಲೀಕನಾಗಿ, ಗುತ್ತಿಗೆದಾರನಾಗಿ ಅಥವಾ ಅಡಮಾನದಾರನಾಗಿ ಅಥವಾ ಭಾಗಶ: ಒಂದು ಅನುಭವದಲ್ಲಿ ಮತ್ತು ಭಾಗಶ: ಇನ್ನೊಂದರಲ್ಲಿ ತನ್ನ ಸ್ವಾಧೀನದಲ್ಲಿ ಹೊಂದಿರುವ, ಅದರಿಂದ ಬರುವ ವಾರ್ಷಿಕ ಆದಾಯವು ಒಂದು ಲಕ್ಷ ಇಪ್ಪತ್ತು ಸಾವಿರ ರೂಪಾಯಿಗಳನ್ನು ಮೀರದಿರುವ ಮತ್ತು ಕೃಷಿಯಿಂದಲ್ಲದೆ ಬೇರೆ ಯಾವ ಮೂಲದಿಂದಲೂ ಆದಾಯವಿಲ್ಲದ ಒಬ್ಬ ವ್ಯಕ್ತಿ;

**ವಿವರಣೆ:–** ಒಬ್ಬ ವ್ಯಕ್ತಿಯು, (10)ನೇ ಖಂಡದಲ್ಲಿ ಉಲ್ಲೇಖಿಸಲಾದ ಒಂದಕ್ಕಿಂತ ಹೆಚ್ಚು ವರ್ಗಗಳ ಭೂಮಿಯನ್ನು ಹೊಂದಿದ್ದಲ್ಲಿ, ಅವನು ಹೊಂದಿರುವ ಭೂಮಿಯ ವಿಸ್ತೀರ್ಣವನ್ನು, ಈ ಮುಂದಿನ ಸೂತ್ರಕ್ಕನುಸಾರವಾಗಿ ನಿರ್ಧರಿಸತಕ್ಕದ್ದು, ಎಂದರೆ :–

ನೀರಾವರಿ ಸೌಲಭ್ಯವಿಲ್ಲದ ಎರಡು ಹೆಕ್ಟೇರ್ ಭೂಮಿ = ಒಂದೂ ಕಾಲು ಹೆಕ್ಟೇರ್ ಮಳೆ ಆಧಾರಿತ ತರಿ ಭೂಮಿ = ಒಂದು ನೀರಾವರಿ ಬೆಳೆ ಬೆಳೆಯಲು ಸೌಲಭ್ಯವನ್ನು ಹೊಂದಿರುವ ಅರ್ಧ ಹೆಕ್ಟೇರ್ ಭೂಮಿ = ಪ್ಲಾಂಟೇಷನ್ ಬೆಳೆಗಳು ಅಥವಾ ದ್ರಾಕ್ಷಿ ಅಥವಾ ತೆಂಗು ಅಥವಾ ಅಡಿಕೆ ಬೆಳೆಯುವುದಕ್ಕಾಗಿ ಅಥವಾ ನೀರಾವರಿ ಮೂಲಕ ಹಿಪ್ಪುನೇರಳೆ ಬೆಳೆಯುವುದಕ್ಕಾಗಿ ಬಳಸಲಾದ ಅರ್ಧ ಹೆಕ್ಟೇರ್ ಭೂಮಿ = ನಿರಂತರ ನೀರಾವರಿ ಸೌಲಭ್ಯಗಳನ್ನು ಹೊಂದಿರುವ ಅಥವಾ ಒಂದು ವರ್ಷದಲ್ಲಿ ಒಂದಕ್ಕಿಂತ ಹೆಚ್ಚು ನೀರಾವರಿ ಬೆಳೆ ಬೆಳೆಯುವುದಕ್ಕಾಗಿ ಸೌಲಭ್ಯಗಳನ್ನು ಹೊಂದಿರುವ ಕಾಲು ಹೆಕ್ಟೇರ್ ಭೂಮಿ;

(10) "ಘಟಕ" ಎಂದರೆ,-

(i) ನೀರಾವರಿ ಸೌಲಭ್ಯವಿಲ್ಲದ ಎರಡು ಹೆಕ್ಟೇರ್ ಭೂಮಿ ; ಅಥವಾ

(ii) ಒಂದೂ ಕಾಲು ಹೆಕ್ಟೇರು ಮಳೆಯಾಧಾರಿತ ತರಿ ಭೂಮಿ ; ಅಥವಾ

(iii) ಒಂದು ನೀರಾವರಿ ಬೆಳೆ ಬೆಳೆಯಲು ಸೌಕರ್ಯವಿರುವ ಅರ್ಧ ಹೆಕ್ಟೇರು ಭೂಮಿ ಅಥವಾ ಪ್ಲಾಂಟೇಷನ್ ಬೆಳೆಗಳು ಅಥವಾ ದ್ರಾಕ್ಷಿ ಅಥವಾ ತೆಂಗು ಅಥವಾ ಅಡಿಕೆ ಅಥವಾ ಕಬ್ಬು ಅಥವಾ ನೀರಾವರಿ ಮೂಲಕ ಹಿಪ್ಪುನೇರಳೆ ಬೆಳೆಯಲು ಬಳಸಲಾದ ಅರ್ಧ ಹೆಕ್ಟೇರು ಭೂಮಿ ; ಅಥವಾ

(iv) ವರ್ಷವಿಡೀ ನೀರಾವರಿ ಸೌಲಭ್ಯಗಳನ್ನು ಹೊಂದಿರುವ ಅಥವಾ ಒಂದು ವರ್ಷದಲ್ಲಿ ಒಂದಕ್ಕಿಂತ ಹೆಚ್ಚು ನೀರಾವರಿ ಬೆಳೆ ಬೆಳೆಯಲು ಸೌಲಭ್ಯಗಳಿರುವ ಕಾಲು ಹೆಕ್ಟೇರು ಭೂಮಿ ;

**ವಿವರಣೆ.–** ಈ ಖಂಡದಲ್ಲಿ "ಪ್ಲಾಂಟೇಷನ್ ಬೆಳೆ" ಎಂದರೆ, ಏಲಕ್ಕಿ, ಕಾಫಿ, ರಬ್ಬರು ಮತ್ತು ಟೀ;

(11) "ದುರ್ಬಲ ವರ್ಗಗಳ ಜನ" ಎಂದರೆ, ಸಣ್ಣ ರೈತರಲ್ಲದ ಅಥವಾ ಭೂರಹಿತ ಕೃಷಿ ಕಾರ್ಮಿಕರಲ್ಲದ, ಯಾರ ವಾರ್ಷಿಕ ಆದಾಯವು ಎಲ್ಲ ಮೂಲಗಳಿಂದ ಒಂದು ಲಕ್ಷ ಇಪ್ಪತ್ತು ಸಾವಿರ ರೂಪಾಯಿಗಳನ್ನು ಮೀರುವುದಿಲ್ಲವೋ ಆ ವ್ಯಕ್ತಿಗಳು.

**3. ಘೋಷಣೆ.–** ಭಾರತ ಸಂವಿಧಾನದ 31ಸಿ ಅನುಚ್ಛೇದದ ಅನುಸರಣೆಯಲ್ಲಿ, ಭಾರತ ಸಂವಿಧಾನದ 39ನೇ ಅನುಚ್ಛೇದದ ಖಂಡ (ಬಿ) ಮತ್ತು (ಸಿ) ಹಾಗೂ 46ನೇ ಅನುಚ್ಛೇದದಲ್ಲಿ ನಿರ್ದಿಷ್ಟಪಡಿಸಿರುವ ತತ್ವಗಳನ್ನು ಭದ್ರಪಡಿಸುವ (ಖಜಭಿಣಡಿಟಿರ) ಸಂಬಂಧದಲ್ಲಿ ರಾಜ್ಯದ ಕಾರ್ಯನೀತಿಯನ್ನು ಜಾರಿಗೊಳಿಸುವುದಕ್ಕಾಗಿ ಈ ಅಧಿನಿಯಮದ ಉಪಬಂಧಗಳನ್ನು ಅಧಿನಿಯಮಿತಗೊಳಿಸಿದೆ ಎಂದು ಈ ಮೂಲಕ ಘೋಷಿಸಲಾಗಿದೆ.

**4. ಋಣದಿಂದ ಮುಕ್ತಿ.–** ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನಲ್ಲಿ ಅಥವಾ ಯಾವುದೇ ಕಾನೂನಿನ ಅಥವಾ ಅನ್ಯಥಾ ಜಾರಿಯಲ್ಲಿರುವ ಯಾವುದೇ ಕರಾರು ಅಥವಾ ಲಿಖಿತದಲ್ಲಿ ಏನೇ ಇದ್ದರೂ, ಮತ್ತು ಈ ಅಧಿನಿಯಮದಲ್ಲಿ ಸ್ಪಷ್ಟವಾಗಿ ಉಪಬಂಧಿಸಿದುದನ್ನುಳಿದು, ಈ ಅಧಿನಿಯಮವು ಪ್ರಾರಂಭಗೊಂಡ ದಿನಾಂಕದಿಂದ ಜಾರಿಗೆ ಬರುವಂತೆ,–

(ಎ) ಈ ಅಧಿನಿಯಮವು ಪ್ರಾರಂಭವಾಗುವುದಕ್ಕೆ ಮೊದಲು ಋಣಿಯು ಭಾಗಿಯಾಗಿರುವ ಮತ್ತು ಋಣಿಯು ಅಂಥ ದಿನಾಂಕದಂದು ಲೇಣಿದಾರನಿಗೆ ಸಂದಾಯ ಮಾಡಬೇಕಾದ ಪ್ರತಿಯೊಂದು ಋಣವನ್ನು ಪೂರ್ಣವಾಗಿ ತೀರಿಸಲಾಗಿದೆ ಎಂದು ಭಾವಿಸತಕ್ಕದ್ದು ;

(ಬಿ) ಯಾವುದೇ ಸಿವಿಲ್ ನ್ಯಾಯಾಲಯವು, ಅಂಥ ಋಣದ ಯಾವುದೇ ಮೊಬಲಗಿನ ವಸೂಲಿಗಾಗಿ ಋಣಿಯ ಅಥವಾ ಜಾಮೀನುದಾರನ ವಿರುದ್ಧದ ಯಾವುದೇ ದಾವೆ ಅಥವಾ ವ್ಯವಹರಣೆಯನ್ನು ಪುರಸ್ಕರಿಸತಕ್ಕದ್ದಲ್ಲ:

ಪರಂತು, ಯಾವುದೇ ದಾವೆ ಅಥವಾ ಇತರ ವ್ಯವಹರಣೆಯನ್ನು ಋಣಿಯ ಮತ್ತು ಜಾಮೀನುದಾರನನ್ನು ಹೊರತುಪಡಿಸಿ ಯಾವೊಬ್ಬ ಇತರ ವ್ಯಕ್ತಿಯ ವಿರುದ್ಧ ಜಂಟಿಯಾಗಿ ಹೂಡಿದ್ದಲ್ಲಿ, ಈ ಪ್ರಕರಣದಲ್ಲಿರುವುದು ಯಾವುದೂ, ಅಂಥ ಇತರ ವ್ಯಕ್ತಿಗೆ ಸಂಬಂಧಪಡುವಷ್ಟರ ಮಟ್ಟಿಗೆ ಅಂಥ ದಾವೆ ಅಥವಾ ವ್ಯವಹರಣೆಯ ಸಮರ್ಥನೀಯತೆಗೆ ಅನ್ವಯವಾಗತಕ್ಕದ್ದಲ್ಲ.

(ಸಿ) ಯಾವುದೇ ಅಂಥ ಋಣದ ವಸೂಲಿಗಾಗಿ ಯಾವೊಬ್ಬ ಋಣಿಯ ಅಥವಾ ಆತನ ಜಾಮೀನುದಾರನ ವಿರುದ್ಧ ಈ ಅಧಿನಿಯಮದ ಪ್ರಾರಂಭದ ದಿನಾಂಕದಂದು ಇತ್ಯರ್ಥದಲ್ಲಿರುವ, ಮೇಲ್ಮನವಿಗಳು, ಪುನರೀಕ್ಷಣೆಗಳು, ಜಪ್ತಿಗಳು ಅಥವಾ ಅಮಲ್ಜಾರಿಯ ವ್ಯವಹರಣೆಗಳನ್ನು ಒಳಗೊಂಡಂತೆ ಎಲ್ಲ ದಾವೆಗಳು ಮತ್ತು ವ್ಯವಹರಣೆಗಳು, ಕೊನೆಗೊಳ್ಳತಕ್ಕದ್ದು :

ಪರಂತು, ಅಂಥ ಯಾವುದೇ ಋಣಕ್ಕೆ ಸಂಬಂಧಿಸಿದಂತೆ, ಈ ಖಂಡದಲ್ಲಿರುವುದಾವುದೂ ,–

(i) ಈ ಅಧಿನಿಯಮವು ಪ್ರಾರಂಭವಾಗವುದಕ್ಕೆ ಮೊದಲು ನ್ಯಾಯಾಲಯದ ಮೂಲಕ ಹೊಂದಿದ್ದ ಮತ್ತು ಕೊನೆಗಾಣಿಸಿದ ಯಾವುದೇ ಚರಾಸ್ತಿಯ;

(ii) ಅಂಥ ಪ್ರಾರಂಭಕ್ಕೆ ಮೊದಲು ನ್ಯಾಯಾಲಯದ ಮೂಲಕ ಹೊಂದಿದ್ದ ಮತ್ತು ಸ್ಥಿರೀಕರಿಸಲಾದ ಯಾವುದೇ ಸ್ಥಿರಾಸ್ತಿಯ,

– ಮಾರಾಟಕ್ಕೆ ಅನ್ವಯವಾಗತಕ್ಕದ್ದಲ್ಲ.

(ಡಿ) ಯಾವುದೇ ಅಂಥ ಋಣದ ಸಂಬಂಧದಲ್ಲಿ ಸಿವಿಲ್ ನ್ಯಾಯಾಲಯದಿಂದ ಋಣಿಯ ಅಥವಾ ಆತನ ಜಾಮೀನುದಾರನ ವಿರುದ್ಧ ಹಣಕ್ಕಾಗಿ ಹೊರಡಿಸಲಾದ ಯಾವುದೇ ಡಿಕ್ರಿಯ ಅಮಲ್ಜಾರಿಯಲ್ಲಿ ಸಿವಿಲ್ ಕಾರಾಗೃಹ ಬಂಧನಕ್ಕೆ ಒಳಗಾಗಿರುವ ಪ್ರತಿಯೊಬ್ಬ ಋಣಿಯನ್ನು ಬಿಡುಗಡೆ ಮಾಡತಕ್ಕದ್ದು ;

(ಇ) ಋಣಿಯು ಅಥವಾ ಆತನ ಜಾಮೀನುದಾರನು ಅಂಥ ಋಣದ ಭದ್ರತೆಯಾಗಿ ಅಡಮಾನ ಮಾಡಿದ ಪ್ರತಿಯೊಂದು ಚರ ಸ್ವತ್ತು, ಅಂಥ ಋಣಿಯ ಅಥವಾ ಸಂದರ್ಭಾನುಸಾರವಾಗಿ ಆತನ ಜಾಮೀನುದಾರನ ಹೆಸರಿನಲ್ಲಿ ಬಿಡುಗಡೆಯಾಗತಕ್ಕದ್ದು ಮತ್ತು ಲೇಣಿದಾರನು ಅದನ್ನು ಕೂಡಲೇ ಋಣಿಗೆ ಅಥವಾ ಆತನ ಜಾಮೀನುದಾರನಿಗೆ ಹಿಂದಿರುಗಿಸಲು ಬದ್ಧನಾಗಿರತಕ್ಕದ್ದು.

(ಎಫ್) ಲೇಣಿದಾರನ ಹೆಸರಿನಲ್ಲಿ ಅಂಥ ಋಣದ ಭದ್ರತೆಯಾಗಿ ಋಣಿಯು ಅಥವಾ ಆತನ ಜಾಮೀನುದಾರನ ಬರೆದುಕೊಟ್ಟ ಪ್ರತಿಯೊಂದು ಅಡಮಾನ ಪತ್ರವು ವಿಮೋಚನೆಗೊಳ್ಳತಕ್ಕದ್ದು ಮತ್ತು ಅಡಮಾನ ಮಾಡಿದ ಸ್ವತ್ತನ್ನು ಅಂಥ ಋಣಿಯ ಹೆಸರಿನಲ್ಲಿ ಅಥವಾ ಸಂದರ್ಭಾನುಸಾರವಾಗಿ ಆತನ ಜಾಮೀನುದಾರನ ಹೆಸರಿನಲ್ಲಿ ಬಿಡುಗಡೆ ಮಾಡತಕ್ಕದ್ದು ಮತ್ತು ಅದನ್ನು ಕೂಡಲೇ ಋಣಿಗೆ ಅಥವಾ ಆತನ ಜಾಮೀನುದಾರನಿಗೆ ಹಿಂದಿರುಗಿಸತಕ್ಕದ್ದು.

**ವಿವರಣೆ:–** ಈ ಪ್ರಕರಣದಲ್ಲಿರುವುದಾವುದೂ, ಈ ಅಧಿನಿಯಮವು ಪ್ರಾರಂಭವಾಗುವುದಕ್ಕೆ ಮೊದಲು ಋಣಿಯು ಅಥವಾ ಆತನ ಜಾಮೀನುದಾರನು ಈಗಾಗಲೇ ಮರುಸಂದಾಯ ಮಾಡಿರುವ ಅಥವಾ ಅವನಿಂದ ಸಂದಾಯ ಮಾಡಲಾದ ಅಥವಾ ಅವನಿಂದ ವಸೂಲು ಮಾಡಿರುವ ಅಂಥ ಋಣದ ಅಥವಾ ಬಡ್ಡಿಯ ಯಾವುದೇ ಭಾಗದ ಮರುಪಾವತಿಗಾಗಿ ಯಾವೊಬ್ಬ ಋಣಿಯನ್ನು ಹಕ್ಕುಳ್ಳವನನ್ನಾಗಿ ಮಾಡುವುದೆಂದು ಅರ್ಥೈಸತಕ್ಕದ್ದಲ್ಲ.

**5. ಲೇಣಿದಾರರು ವಿವರ ಪತ್ರವನ್ನು ಸಲ್ಲಿಸುವುದು ಇತ್ಯಾದಿ.–** (1) 4ನೇ ಪ್ರಕರಣದ (ಇ) ಖಂಡದಲ್ಲಿ ಉಲ್ಲೇಖಿಸಿದ ಪ್ರತಿಯೊಬ್ಬ ಲೇಣಿದಾರನು ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ತೊಂಬತ್ತು ದಿನಗಳೊಳಗಾಗಿ ಸಾಮಾನ್ಯವಾಗಿ ಅಂಥ ಲೇಣಿದಾರನ ವ್ಯವಹಾರ ಸ್ಥಳದಲ್ಲಿನ ಪ್ರದೇಶದ ಅಧಿಕಾರ ವ್ಯಾಪ್ತಿಯನ್ನು ಹೊಂದಿರುವ ಋಣ ಪರಿಹಾರ ಅಧಿಕಾರಿಗೆ ನಿಯಮಿಸಲಾದ ನಮೂನೆಯಲ್ಲಿ, ನಿಯಮಿಸಬಹುದಾದ ಅಂಥ ವಿವರಗಳುಳ್ಳ ವಿವರ ಪತ್ರವನ್ನು ಒದಗಿಸತಕ್ಕದ್ದು.

(2) 4ನೇ ಪ್ರಕರಣದ (ಇ) ಖಂಡದಲ್ಲಿ ಉಲ್ಲೇಖಿಸಿದ ಋಣಿಯು, ಆತನು ಅಥವಾ ಆತನ ಜಾಮೀನುದಾರನು ಅಡಮಾನ ಮಾಡಿರುವ ಚರಾಸ್ಥಿಗಳ ವಾಪಸ್ಸಾತಿ ಆದೇಶಕ್ಕಾಗಿ ಅಂಥ ಋಣ ಪರಿಹಾರ ಅಧಿಕಾರಿಗೆ ನಿಯಮಿಸಿದ ನಮೂನೆಯಲ್ಲಿ ಅರ್ಜಿಯನ್ನು ನೀಡತಕ್ಕದ್ದು.

(3) (1)ನೇ ಉಪಪ್ರಕರಣದ ಅಡಿಯಲ್ಲಿ ವಿವರ ಪತ್ರವನ್ನು ಸ್ವೀಕರಿಸಿದ ಮೇಲೆ ಅಥವಾ (2)ನೇ ಉಪಪ್ರಕರಣದ ಅಡಿಯಲ್ಲಿನ ಅರ್ಜಿಯನ್ನು ಸ್ವೀಕರಿಸಿದ ಮೇಲೆ ಋಣ ಪರಿಹಾರ ಅಧಿಕಾರಿಯು, ಆತನು ಅವಶ್ಯವೆಂದು ಪರಿಗಣಿಸುವ ಅಂಥ ವಿಚಾರಣೆಯ ತರುವಾಯ, ಆದೇಶದ ಮೂಲಕ ಋಣಿಯು ಈ ಅಧಿನಿಯಮದ ಅಡಿಯಲ್ಲಿ ಪರಿಹಾರ ನೀಡಲು ಅರ್ಹನಾಗಿರುವನೇ ಎಂದು ನಿರ್ಧರಿಸತಕ್ಕದ್ದು ಮತ್ತು ಹಾಗಿದ್ದಲ್ಲಿ, ಆದೇಶದಲ್ಲಿ ನಿರ್ದಿಷ್ಟಪಡಿಸಬೇಕಾದ ದಿನಾಂಕದಂದು ಅಥವಾ ಅದಕ್ಕೂ ಮೊದಲು ಅಂಥ ಋಣಿಯ ಋಣವನ್ನು ಸಾಕ್ಷೀಕರಿಸುವ ದಸ್ತಾವೇಜು ಮತ್ತು ಅಂಥ ಋಣಿ ಅಥವಾ ಆತನ ಜಾಮೀನುದಾರನು ಅಡಮಾನ ಮಾಡಿರುವ ಚರಾಸ್ತಿಗಳನ್ನು ಹಾಜರುಪಡಿಸುವಂತೆ ಲೇಣಿದಾರನಿಗೆ ನಿರ್ದೇಶಿಸತಕ್ಕದ್ದು.

(4) ಋಣಿಯು ಅಡಮಾನ ಮಾಡಿದ ಚರಾಸ್ತಿಯು ಲೇಣಿದಾರನ ವರ್ಗಾಯಿತನ ಸ್ವಾಧೀನದಲ್ಲಿದ್ದರೆ, ಲೇಣಿದಾರನು ಅಂಥ ವರ್ಗಾಯಿತನಿಂದ ಅಂಥ ಆಸ್ತಿಯನ್ನು ಬಿಡಿಸಿಕೊಳ್ಳತಕ್ಕದ್ದು ಮತ್ತು ಅದನ್ನು ಆದೇಶದಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ದಿನಾಂಕದಂದು ಅಥವಾ ಅದಕ್ಕೂ ಮೊದಲು ಹಾಜರುಪಡಿಸತಕ್ಕದ್ದು.

(5) (3)ನೇ ಉಪಪ್ರಕರಣದ ಅಡಿಯಲ್ಲಿನ ಆದೇಶದಲ್ಲಿ ನಿರ್ದೇಶಿಸಿದಂತೆ ಲೇಣಿದಾರನು ಅಡಮಾನ ಮಾಡಿದ ದಸ್ತಾವೇಜು ಮತ್ತು ಚರಾಸ್ತಿಯನ್ನು ಹಾಜರುಪಡಿಸಿದಾಗ, ಋಣ ಪರಿಹಾರ ಅಧಿಕಾರಿಯು ಅಂಥ ದಸ್ತಾವೇಜಿನ ಮೇಲೆ ಬಿಡುಗಡೆಯ ಹಿಂಬರಹವನ್ನು ದಾಖಲಿಸತಕ್ಕದ್ದು ಮತ್ತು ಅದನ್ನು ಅಥವಾ ಅಡಮಾನ ಮಾಡಿದ

ವಸ್ತುಗಳೊಂದಿಗೆ ನಿಯಮಿಸಲಾದ ನಮೂನೆಯಲ್ಲಿ ಬಿಡುಗಡೆ ಪ್ರಮಾಣಪತ್ರವನ್ನು (ಅಜಡಿಣಖಿಜಿಥಿಚಿಣಜ ಠಜಿ ಜುಥುಚಿಡಿಂಜ) ಋಣಿಗೆ ಹಿಂದಿರುಗಿಸತಕ್ಕದ್ದು.

(6) (3)ನೇ ಉಪಪ್ರಕರಣದ ಅಡಿಯಲ್ಲಿನ ಆದೇಶದಲ್ಲಿ ನಿರ್ದೇಶಿಸಿದಂತೆ ಅಡಮಾನ ಮಾಡಿದ ದಸ್ತಾವೇಜುಗಳು ಮತ್ತು ಚರಾಸ್ತಿಯನ್ನು ಹಾಜರುಪಡಿಸುವಲ್ಲಿ ಲೇಣಿದಾರನು ವಿಫಲನಾದರೆ, ಋಣ ಪರಿಹಾರ ಅಧಿಕಾರಿಯು ಯಾವುದೇ ಇತರ ಕಾನೂನಿನಲ್ಲಿ ಏನೇ ಒಳಗೊಂಡಿದ್ದರೂ ಆದರೆ, (8)ನೇ ಉಪಪ್ರಕರಣಕ್ಕೆ ಒಳಪಟ್ಟು ಲೇಣಿದಾರನ ಯಾವುದೇ ಆವರಣಗಳೊಳಗೆ ಪ್ರವೇಶಿಸತಕ್ಕದ್ದು ಹಾಗೂ ಸದರಿ ದಸ್ತಾವೇಜುಗಳು ಮತ್ತು ಚರಾಸ್ಥಿಯನ್ನು ಹುಡುಕತಕ್ಕದ್ದು ಮತ್ತು ವಶಪಡಿಸಿಕೊಳ್ಳತಕ್ಕದ್ದು ಹಾಗೂ ನಿಯಮಿಸಿದ ನಮೂನೆಯಲ್ಲಿ ಅಂಥ ಋಣದ ಬಿಡುಗಡೆಯ ಪ್ರಮಾಣಪತ್ರದೊಂದಿಗೆ ಸದರಿ ದಸ್ತಾವೇಜುಗಳು ಮತ್ತು ಆಸ್ತಿಯನ್ನು ಋಣಿಗೆ ಅಥವಾ ಸಂದರ್ಭಾನುಸಾರವಾಗಿ ಆತನ ಜಾಮೀನುದಾರನಿಗೆ ನೀಡತಕ್ಕದ್ದು.

(7) (3)ನೇ ಉಪಪ್ರಕರಣದ ಅಡಿಯಲ್ಲಿನ ಪ್ರಶ್ನೆಯ ನಿರ್ಧರಣೆಯನ್ನು ಬಾಕಿಯಿರಿಸಿ, ಲೇಣಿದಾರನು ಅಥವಾ ಲೇಣಿದಾರನ ವರ್ಗಾಯಿತನು ಋಣಿಯ ಅಥವಾ ಆತನ ಜಾಮೀನುದಾರನು ಅಡಮಾನ ಮಾಡಿದ ಯಾವುದೇ ಚರಾಸ್ತಿಯನ್ನು ಮಾರಾಟ ಮಾಡತಕ್ಕದ್ದಲ್ಲ ಅಥವಾ ಅಡಮಾನ ಮಾಡತಕ್ಕದ್ದಲ್ಲ ಅಥವಾ ಅನ್ಯಥಾ ವರ್ಗಾಯಿಸತಕ್ಕದ್ದಲ್ಲ.

(8) ಹುಡುಕುವಿಕೆ ಮತ್ತು ವಶಪಡಿಸಿಕೊಳ್ಳುವಿಕೆಗೆ ಸಂಬಂಧಿಸಿದ ದಂಡಪ್ರಕ್ರಿಯಾ ಸಂಹಿತೆ 1973ರ (1974ರ ಕೇಂದ್ರ ಅಧಿನಿಯಮ 2) 100ನೇ ಪ್ರಕರಣ ಮತ್ತು 165ನೇ ಪ್ರಕರಣದ ಉಪಬಂಧಗಳು ಸಾಧ್ಯವಿರುವಷ್ಟರ ಮಟ್ಟಿಗೆ (6)ನೇ ಉಪಪ್ರಕರಣದ ಅಡಿಯಲ್ಲಿನ ಹುಡುಕುವಿಕೆ ಮತ್ತು ವಶಪಡಿಸಿಕೊಳ್ಳುವಿಕೆಗೆ ಅನ್ವಯವಾಗತಕ್ಕದ್ದು.

(9) ಈ ಪ್ರಕರಣದ ಅಡಿಯಲ್ಲಿ ಋಣ ಪರಿಹಾರ ಅಧಿಕಾರಿಯು ಹೊರಡಿಸಿದ ಪ್ರತಿಯೊಂದು ಆದೇಶವು ಅಂತಿಮವಾಗಿರತಕ್ಕದ್ದು.

**6. ಋಣಿಗಳಿಗೆ ಅನ್ವಯಿಸುವಲ್ಲಿ ಕೆಲವು ಪ್ರಕರಣಗಳು.- (1)** 3ನೇ ಪ್ರಕರಣದ (ಎಫ್) ಖಂಡದಲ್ಲಿ ಉಲ್ಲೇಖಿಸಿದ ಋಣಿಯು, ಅಡಮಾನ ಮಾಡಿರುವ ಆಸ್ತಿಯನ್ನು ಬಿಡುಗಡೆಗೊಳಿಸುವ ಆದೇಶಕ್ಕಾಗಿ ಮತ್ತು ವಿಮೋಚನಾ ಪ್ರಮಾಣಪತ್ರದ ಮಂಜೂರಾತಿಗಾಗಿ ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ತೊಂಬತ್ತು ದಿನಗಳೊಳಗಾಗಿ ಅಡಮಾನ ಮಾಡಿರುವ ಆಸ್ಥಿಯು ಇರುವ ಪ್ರದೇಶದ ಅಧಿಕಾರ ವ್ಯಾಪ್ತಿಯನ್ನು ಹೊಂದಿರುವ ಋಣಪರಿಹಾರ ಅಧಿಕಾರಿಗೆ ಅರ್ಜಿಯನ್ನು ಸಲ್ಲಿಸಬಹುದು.

(2) (ಎ) ಯಾವುದೇ ನ್ಯಾಯಾಲಯ ಅಥವಾ ಇತರ ಪ್ರಾಧಿಕಾರದ ಮುಂದಿರುವ ಯಾವುದೇ ನಡವಳಿಗಳಲ್ಲಿ ಅಂಥ ವಿಮೋಚನೆಯನ್ನು ಸಾಕ್ಷ್ಯವಾಗಿ ಒಪ್ಪಿಕೊಳ್ಳಬಲ್ಲ ಯಾವುದೇ ಕಾನೂನಿನಲ್ಲಿ ಏನೇ ಒಳಗೊಂಡಿದ್ದರೂ, ಋಣ ಪರಿಹಾರ ಅಧಿಕಾರಿಯು ಅಂಥ ಅರ್ಜಿಯನ್ನು ಸ್ವೀಕರಿಸಿದ ಮೇಲೆ ಮತ್ತು ಆತನು ಅಗತ್ಯವೆಂದು ಪರಿಗಣಿಸಿರುವ ಅಂಥ ವಿಚಾರಣೆಯ ತರುವಾಯ ಅಡಮಾನ ಮಾಡಿರುವ ಆಸ್ತಿಯನ್ನು ಬಿಡುಗಡೆಗೊಳಿಸುವ ಆದೇಶವನ್ನು ಹೊರಡಿಸತಕ್ಕದ್ದು ಮತ್ತು ನಿಯಮಿಸಿದ ನಮೂನೆಯಲ್ಲಿ ವಿಮೋಚನಾ ಪ್ರಮಾಣಪತ್ರವನ್ನು ಮಂಜೂರು ಮಾಡತಕ್ಕದ್ದು.

(ಬಿ) ಋಣ ಪರಿಹಾರ ಅಧಿಕಾರಿಯು ಈ ಮುಂದಿನವುಗಳಿಗೂ ಸಹ ಲೇಣಿದಾರನಿಗೆ ನಿರ್ದೇಶಿಸತಕ್ಕದ್ದು,-

(i) ಋಣಿಯು ಈಗಾಗಲೇ ಅಡಮಾನ ಮಾಡಿರುವ ಆಸ್ತಿಯ ಸ್ವಾಧೀನದಲ್ಲಿ ಇಲ್ಲದಿದ್ದರೆ, ಆದೇಶದಲ್ಲಿ ನಿರ್ದಿಷ್ಟಪಡಿಸಿದ ದಿನಾಂಕದಂದು ಅಥವಾ ಅದಕ್ಕೂ ಮೊದಲು ಅಡಮಾನ ಮಾಡಿದ ಆಸ್ತಿಯ ಸ್ವಾಧೀನವನ್ನು ಋಣಿಗೆ ನೀಡುವುದಕ್ಕೆ; ಮತ್ತು

(ii) ಅಡಮಾನ ಕರಾರು ಅಥವಾ ಇತರ ದಸ್ತಾವೇಜನ್ನು ಆದೇಶದಲ್ಲಿ ನಿರ್ದಿಷ್ಟಪಡಿಸಿದ ದಿನಾಂಕದಂದು ಅಥವಾ ಅದಕ್ಕೂ ಮೊದಲು ಹಾಜರುಪಡಿಸಲು ಹಾಗೂ ಹಾಗೆ ಹಾಜರುಪಡಿಸಿದ ಮೇಲೆ ಋಣ ಪರಿಹಾರ ಅಧಿಕಾರಿಯು ಅಡಮಾನ ಕರಾರು ಅಥವಾ ಇತರ ದಸ್ತಾವೇಜಿನ ಮೇಲೆ ವಿಮೋಚನೆಯ ಹಿಂಬರಹವನ್ನು

ಮಾಡತಕ್ಕದ್ದು ಮತ್ತು ಸದರಿ ಹಿಂಬರಹ ಪ್ರತಿಯನ್ನು ಯಾವುದೇ ಇತರ ಕಾನೂನಿನಲ್ಲಿ ಏನೇ ಒಳಗೊಂಡಿದ್ದರೂ, ಅದನ್ನು ನೋಂದಾಯಿಸಲು ಸಂಬಂಧಪಟ್ಟ ಉಪನೋಂದಣಾಧಿಕಾರಿಗೆ ರವಾನಿಸತಕ್ಕದ್ದು;

(3) (2)ನೇ ಉಪಪ್ರಕರಣದ (ಎ) ಖಂಡದ ಅಡಿಯಲ್ಲಿನ ಆದೇಶಗಳನ್ನು ಬಾಕಿಯಿರಿಸಿ, ಋಣಿಯು ಅಥವಾ ಆತನ ಜಾಮೀನುದಾರನು ಅಡಮಾನ ಮಾಡಿದ ಆಸ್ತಿಯ ಸಂಬಂಧದಲ್ಲಿ ಅದನ್ನು ಲೇಣಿದಾರನು ವರ್ಗಾಯಿಸುವಂತಿಲ್ಲ ಅಥವಾ ಅನ್ಯಥಾ ಆತನ ಹಿತಾಸಕ್ತಿಯನ್ನು ವಹಿಸುವಂತಿಲ್ಲ ಅಥವಾ ಸ್ವತ್ತುಮರುಸ್ವಾಧೀನದ (ಜಿಂಡಿಜಭಿಟಥಣಡಿಜ) ಹಕ್ಕನ್ನು ಚಲಾಯಿಸುವಂತಿಲ್ಲ.

(4) ಈ ಪ್ರಕರಣದ ಅಡಿಯಲ್ಲಿ ಋಣ ಪರಿಹಾರ ಅಧಿಕಾರಿಯು ಹೊರಡಿಸಿದ ಪ್ರತಿಯೊಂದು ಆದೇಶವು ಅಂತಿಮವಾಗಿರತಕ್ಕದ್ದು.

**7. ಪುರಾವೆ, ಇತ್ಯಾದಿಗಳ ಹೊರೆ.– (1)** ನ್ಯಾಯಾಲಯದಲ್ಲಿನ ಯಾವುದೇ ದಾವೆ ಅಥವಾ ಇತರ ನಡೆವಳಿಗಳಲ್ಲಿ ಈ ಅಧಿನಿಯಮದ ಅಡಿಯಲ್ಲಿನ ಋಣಿಯು ಒಬ್ಬ ಪಕ್ಷಕರನಾಗಿರುವನೇ ಎಂಬ ಪ್ರಶ್ನೆಯು ಉದ್ಭವಿಸಿದಲ್ಲಿ, ದಾವೆ ಅಥವಾ ಇತರ ನಡವಳಿಯ ವಿಚಾರಣೆಯನ್ನು ನಡೆಸುವ ನ್ಯಾಯಾಲಯವು, ಅಂಥ ವ್ಯಕ್ತಿಯು ಈ ಅಧಿನಿಯಮದ ಅಡಿಯಲ್ಲಿ ಋಣಿಯಾಗಿರುವುದಿಲ್ಲವೆಂದು ಪ್ರಾಥಮಿಕ ವ್ಯಾಜ್ಯೆಯನ್ನು ರೂಪಿಸತಕ್ಕದ್ದು ಮತ್ತು ಇತರ ವ್ಯಾಜ್ಯೆಗಳನ್ನು ಪರಿಗಣಿಸುವುದಕ್ಕೂ ಮೊದಲು ಅದನ್ನು ತೀರ್ಮಾನಿಸತಕ್ಕದ್ದು.

(2) ಯಾವುದೇ ಕಾನೂನಿನಲ್ಲಿ ಏನೇ ಒಳಗೊಂಡಿದ್ದರೂ, ಯಾವುದೇ ದಾವೆ ಅಥವಾ ನಡವಳಿಗಳಲ್ಲಿ, ಈ ಅಧಿನಿಯಮದ ಅಡಿಯಲ್ಲಿ ಒಬ್ಬ ವ್ಯಕ್ತಿಯು ಋಣಿಯಾಗಿಲ್ಲವೆಂಬುದನ್ನು ಸಾಬೀತುಪಡಿಸುವ ಹೊರೆಯು ಲೇಣಿದಾರನ ಮೇಲೆ ಇರತಕ್ಕದ್ದು.

**8. ಕಾನೂನು ವೃತ್ತಿಪರರು ಹಾಜರಾಗುವಂತಿಲ್ಲ.–** ಈ ಅಧಿನಿಯಮದ ಅಡಿಯಲ್ಲಿ ಋಣ ಪರಿಹಾರ ಅಧಿಕಾರಿಯ ಮುಂದೆ ಯಾವುದೇ ನಡವಳಿಯಲ್ಲಿ ಕಾನೂನು ವೃತ್ತಿಪರರು ಹಾಜರಾಗಲು ಅನುಮತಿಸತಕ್ಕದ್ದಲ್ಲ.

**ವಿವರಣೆ.–** ಈ ಪ್ರಕರಣದಲ್ಲಿ "ಕಾನೂನು ವೃತ್ತಿಪರ" ಪದಾವಳಿಯು ನ್ಯಾಯವಾದಿಗಳ ಅಧಿನಿಯಮ 1961 (1961ರ ಕೇಂದ್ರ ಅಧಿನಿಯಮ 25) 2ನೇ ಪ್ರಕರಣದಲ್ಲಿ ಅದಕ್ಕೆ ನೀಡಲಾದ ಅರ್ಥವನ್ನೇ ಹೊಂದಿರತಕ್ಕದ್ದು.

**9. ದಂಡನೆ.–** ಯಾವೊಬ್ಬ ವ್ಯಕ್ತಿಯು, 5ನೇ ಪ್ರಕರಣದ ಅಡಿಯಲ್ಲಿ ವಿವರ ಪತ್ರವನ್ನು ಒದಗಿಸಲು ಅಥವಾ 5ನೇ ಪ್ರಕರಣ ಅಥವಾ 6ನೇ ಪ್ರಕರಣದ ಅಡಿಯಲ್ಲಿ ಮಾಡಿದ ಆದೇಶ ಅಥವಾ ನೀಡಿದ ನಿರ್ದೇಶನವನ್ನು ಪಾಲಿಸಲು ವಿಫಲನಾದರೆ ಅಥವಾ ಅನ್ಯಥಾ ಸದರಿ ಯಾವುದೇ ಪ್ರಕರಣದ ಉಪಬಂಧಗಳನ್ನು ಉಲ್ಲಂಘಿಸಿದರೆ, ಅಪರಾಧ ನಿರ್ಣೀತನಾದ ಮೇಲೆ ಒಂದು ವರ್ಷದವರೆಗೆ ವಿಸ್ತರಿಸಬಹುದಾದ ಅವಧಿಯ ಕಾರಾವಾಸದೊಂದಿಗೆ ಹಾಗೂ ಒಂದು ಲಕ್ಷ ರೂಪಾಯಿಗಳಿಗೆ ವಿಸ್ತರಿಸಬಹುದಾದ ಜುಲ್ಮಾನೆಯೊಂದಿಗೆ ದಂಡಿತನಾಗತಕ್ಕದ್ದು.

**10. ಕಂಪನಿಗಳಿಂದ ಅಪರಾಧಗಳು.–** (1) ಈ ಅಧಿನಿಯಮದ ಅಡಿಯಲ್ಲಿನ ಅಪರಾಧವನ್ನು ಒಂದು ಕಂಪನಿಯು ಮಾಡಿದ್ದರೆ, ಅಪರಾಧವು ನಡೆದ ಕಾಲದಲ್ಲಿ ಆ ಕಂಪನಿಯ ವ್ಯವಹರಣೆಗಳ ನಿರ್ವಹಣೆಗಾಗಿ ಕಂಪನಿಯ ಪ್ರಭಾರದಲ್ಲಿದ್ದ ಮತ್ತು ಅದಕ್ಕೆ ಜವಾಬ್ದಾರನಾಗಿದ್ದ ಪ್ರತಿಯೊಬ್ಬ ವ್ಯಕ್ತಿಯನ್ನು ಮತ್ತು ಕಂಪನಿಯನ್ನು ಆ ಅಪರಾಧದ ದೋಷಿಯೆಂದು ಭಾವಿಸತಕ್ಕದ್ದು ಮತ್ತು ತದನುಸಾರವಾಗಿ ಅವನು ತನ್ನ ವಿರುದ್ಧದ ವ್ಯವಹರಣೆಗೆ ಮತ್ತು ದಂಡನೆಗೆ ಗುರಿಯಾಗತಕ್ಕದ್ದು:

ಪರಂತು, ಈ ಉಪಪ್ರಕರಣದಲ್ಲಿ ಒಳಗೊಂಡಿರುವುದು ಯಾವುದೂ, ಅಂಥ ಅಪರಾಧವು ತನ್ನ ತಿಳಿವಳಿಕೆಗೆ ಬಾರದೆ ನಡೆಯಿತೆಂದು ಅಥವಾ ಅಂಥ ಅಪರಾಧವನ್ನು ತಡೆಗಟ್ಟಲು ತಾನು ಯಥೋಚಿತವಾದ ಜಾಗರೂಕತೆಯನ್ನು ವಹಿಸಿದ್ದೆನೆಂದು ಅಂಥ ಯಾವೊಬ್ಬ ವ್ಯಕ್ತಿಯು ರುಜುವಾತುಪಡಿಸಿದರೆ, ಯಾವುದೇ ಶಿಕ್ಷೆಗೆ ಆತನನ್ನು ಗುರಿಯಾಗುವಂತೆ ಮಾಡತಕ್ಕದ್ದಲ್ಲ.

(2) (1)ನೇ ಉಪಪ್ರಕರಣದಲ್ಲಿ ಏನೇ ಒಳಗೊಂಡಿದ್ದರೂ, ಈ ಅಧಿನಿಯಮದ ಅಡಿಯಲ್ಲಿ ದಂಡಿಸಬಹುದಾದ ಒಂದು ಅಪರಾಧವನ್ನು ಕಂಪನಿಯು ಮಾಡಿರುವಲ್ಲಿ ಮತ್ತು ಆ ಅಪರಾಧವು ಕಂಪನಿಯ ಯಾವೊಬ್ಬ ನಿರ್ದೇಶಕ, ವ್ಯವಸ್ಥಾಪಕ, ಕಾರ್ಯದರ್ಶಿ ಅಥವಾ ಇತರ ಅಧಿಕಾರಿಯ ಸಮ್ಮತಿಯಿಂದ ಅಥವಾ ಪರೋಕ್ಷ ಸಮ್ಮತಿಯಿಂದ ಅಥವಾ ಅವನ ಕಡೆಯಿಂದಾದ ಯಾವುದೇ ನಿರ್ಲಕ್ಷ್ಯದ ಕಾರಣದಿಂದ ಅಪರಾಧವು ಸಂಭವಿಸಿತೆಂದು ಹೇಳಬಹುದಾದರೆ ಕಂಪನಿಯ ಅಂಥ ನಿರ್ದೇಶಕ, ವ್ಯವಸ್ಥಾಪಕ, ಕಾರ್ಯದರ್ಶಿ ಅಥವಾ ಇತರ ಅಧಿಕಾರಿಯನ್ನು ಸಹ ಆ ಅಪರಾಧದ ಬಗ್ಗೆ ದೋಷಿಯೆಂದು ಭಾವಿಸತಕ್ಕದ್ದು ಮತ್ತು ತದನುಸಾರವಾಗಿ ಅವನು ತನ್ನ ವಿರುದ್ಧದ ವ್ಯವಹರಣೆಗೆ ಮತ್ತು ದಂಡನೆಗೆ ಗುರಿಯಾಗತಕ್ಕದ್ದು.

**ವಿವರಣೆ.**- ಈ ಪ್ರಕರಣದ ಉದ್ದೇಶಗಳಿಗಾಗಿ,-

(ಎ) "ಕಂಪನಿ" ಎಂದರೆ ಒಂದು ನಿಗಮಿತ ನಿಕಾಯ ಹಾಗೂ ಫರ್ಮು ಅಥವಾ ಇತರ ವ್ಯಕ್ತಿಗಳ ಸಂಘವನ್ನು ಒಳಗೊಳ್ಳುವುದು; ಮತ್ತು

(ಬಿ) ಫರ್ಮಿಗೆ ಸಂಬಂಧಿಸಿದಂತೆ "ನಿರ್ದೇಶಕ" ಎಂದರೆ, ಫರ್ಮಿನ ಒಬ್ಬ ಪಾಲುದಾರ.

**11. ಕೆಲವು ಋಣಗಳು ಮತ್ತು ಹೊಣೆಗಾರಿಕೆಗಳು ಬಾಧಿತಗೊಳ್ಳುವಂತಿಲ್ಲ.–** ಈ ಅಧಿನಿಯಮದಲ್ಲಿರುವ ಯಾವುದೂ ಋಣಿಯ ಈ ಮುಂದಿನ ವರ್ಗಗಳ ಋಣಗಳು ಮತ್ತು ಹೊಣೆಗಾರಿಕೆಗಳಿಗೆ ಅನ್ವಯವಾಗತಕ್ಕದ್ದಲ್ಲ:-

(ಎ) ಅಂಥ ಋಣಿಗಳಿಗೆ ಬಿಟ್ಟುಕೊಟ್ಟ ಕೃಷಿ ಭೂಮಿಯನ್ನು ಒಳಗೊಂಡ ಯಾವುದೇ ಸ್ವತ್ತಿನ ಸಂಬಂಧದಲ್ಲಿ ಬಾಕಿಯಿರುವ ಯಾವುದೇ ಬಾಡಿಗೆ;

(ಬಿ) ಭೂಕಂದಾಯದ ಹಿಂಬಾಕಿಯಂತೆ ವಸೂಲಿಯಾಗಬೇಕಾದ ಯಾವುದೇ ಮೊಬಲಗು;

(ಸಿ) ನ್ಯಾಯಾಲಯದ ಡಿಕ್ರಿಯ ಅಡಿಯಲ್ಲಿ ಅಥವಾ ಅನ್ಯಥಾ ಕೇಂದ್ರ ಸರ್ಕಾರ ಅಥವಾ ರಾಜ್ಯ ಸರ್ಕಾರ ಅಥವಾ ಸ್ಥಳೀಯ ಪ್ರಾಧಿಕಾರಕ್ಕೆ ಪಾವತಿಸಬೇಕಾದ ಯಾವುದೇ ಕಂದಾಯ, ತೆರಿಗೆ ಅಥವಾ ಉಪಕರ;

(ಡಿ) ನಂಬಿಕೆದ್ರೋಹದ ಯಾವುದೇ ಹೊಣೆಗಾರಿಕೆ ಅಥವಾ ಯಾವುದೇ ತಿರುಚಿದ (ಣಠಡಿಣಠಿಣ) ಹೊಣೆಗಾರಿಕೆ;

(ಇ) ಸಲ್ಲಿಸಿದ ಸೇವೆಗಳಿಗಾಗಿ ಸಂಬಳ ಅಥವಾ ಅನ್ಯಥಾ ಬಾಕಿಯಿರುವ ಮಜೂರಿಗಳ ಅಥವಾ ಸಂಭಾವನೆಯ ಸಂಬಂಧದಲ್ಲಿನ ಯಾವುದೇ ಹೊಣೆಗಾರಿಕೆ;

(ಎಫ್) ನ್ಯಾಯಾಲಯದ ಡಿಕ್ರಿಯ ಅಥವಾ ಅನ್ಯಥಾ ಇವುಗಳ ಅಡಿಯಲ್ಲಿನ ಜೀವನಾಂಶದ (ಟಚಿಟಿಣಜಟಿಚಿಟಿಛಿಜ) ಸಂಬಂಧದಲ್ಲಿ ಯಾವುದೇ ಹೊಣೆಗಾರಿಕೆ;

(ಜಿ) ಈ ಮುಂದಿನವುಗಳಿಗಾಗಿ ಬಾಕಿ ಇರುವ ಋಣ,-

(i) ಕೇಂದ್ರ ಸರ್ಕಾರ ಅಥವಾ ಯಾವುದೇ ರಾಜ್ಯ ಸರ್ಕಾರ;

(ii) ಯಾವುದೇ ಸ್ಥಳೀಯ ಪ್ರಾಧಿಕಾರ;

(iii) ಕರ್ನಾಟಕ ಕೃಷಿ ಸಾಲ ಕಾರ್ಯಾಚರಣೆಗಳು ಮತ್ತು ಸಂಕೀರ್ಣ ಉಪಬಂಧಗಳ ಅಧಿನಿಯಮ, 1974ರಲ್ಲಿ (1975ರ ಕರ್ನಾಟಕ ಅಧಿನಿಯಮ 2) ಪರಿಭಾಷಿಸಲಾದಂತೆ ಸಾಲ ಏಜೆನ್ಸಿ;

(iv) ಕಂಪನಿಗಳ ಅಧಿನಿಯಮ, 2013ರ (2013ರ ಕೇಂದ್ರ ಅಧಿನಿಯಮ 18) ಅರ್ಥವ್ಯಾಪ್ತಿಯೊಳಗೆ ಬರುವ ಸರ್ಕಾರಿ ಕಂಪನಿ;

(v) ಭಾರತೀಯ ಜೀವ ವಿಮಾ ನಿಗಮ;

(vi) ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ, 1959ರ (1959ರ ಕರ್ನಾಟಕ ಅಧಿನಿಯಮ 11) ಅಡಿಯಲ್ಲಿ ನೋಂದಾಯಿಸಿದ ಸಹಕಾರ ಸಂಘ;

(vii) ಭಾರತೀಯ ರಿಸರ್ವ್ ಬ್ಯಾಂಕ್ ಅಧಿನಿಯಮ, 1934ರಲ್ಲಿ (1934ರ ಕೇಂದ್ರ ಅಧಿನಿಯಮ 02) ನಿರ್ವಹಿಸಲಾದ ಬ್ಯಾಂಕೇತರ ಹಣಕಾಸು ಸಂಸ್ಥೆಗಳು ಮತ್ತು ಕರ್ನಾಟಕ ಸೊಸೈಟಿಗಳ ನೋಂದಣಿ ಅಧಿನಿಯಮ, 1960ರ (1960ರ ಕರ್ನಾಟಕ ಅಧಿನಿಯಮ 17) ಅಡಿಯಲ್ಲಿ ನೋಂದಾಯಿಸಿದ ಅತಿಸಣ್ಣ ಹಣಕಾಸು ಸಂಸ್ಥೆಗಳು, ಕಂಪನಿಗಳ ಅಧಿನಿಯಮ, 2013ರ (2013ರ ಕೇಂದ್ರ ಅಧಿನಿಯಮ 18) 8ನೇ ಪ್ರಕರಣದ ಅಡಿಯಲ್ಲಿ ನೋಂದಾಯಿಸಿದ ನ್ಯಾಸಗಳು, ಕಂಪನಿಗಳು;

(viii) ಬ್ಯಾಂಕಿಂಗ್ ಕಂಪನಿ, ಸಂವಾದಿ ಹೊಸ ಬ್ಯಾಂಕು, ಭಾರತೀಯ ಸ್ಟೇಟ್ ಬ್ಯಾಂಕ್, ಬ್ಯಾಂಕಿಂಗ್ ನಿಯಂತ್ರಣ ಅಧಿನಿಯಮ, 1949ರಲ್ಲಿ (1949ರ ಕೇಂದ್ರ ಅಧಿನಿಯಮ 10) ಪರಿಭಾಷಿಸಿದಂತೆ ಸಹಕಾರಿ ಬ್ಯಾಂಕ್ ಅಥವಾ ಬಹುರಾಜ್ಯ ಸಹಕಾರಿ ಬ್ಯಾಂಕ್; ಮತ್ತು

(ix) ಈ ಖಂಡದ ಉದ್ದೇಶಗಳಿಗಾಗಿ ರಾಜ್ಯ ಸರ್ಕಾರವು ಅಧಿಸೂಚನೆಯ ಮೂಲಕ ನಿರ್ದಿಷ್ಟಪಡಿಸುವ ಯಾವುದೇ ಇತರ ಸಂಸ್ಥೆ.

(ಎಚ್) ಅಂಥ ಋಣಿಯು ಬಾಡಿಗೆ ಖರೀದಿ ಕರಾರಿನ ಅಡಿಯಲ್ಲಿ ಬಾಕಿಯಿರುವ ಯಾವುದೇ ಮೊಬಲಗು;

(ಐ) ಅಂಥ ಋಣಿಯು ಖರೀದಿಸಿದ ಸ್ಥಿರ ಅಥವಾ ಚರ ಆಸ್ತಿಯ ದರವನ್ನು ನಿರೂಪಿಸುವ ಯಾವುದೇ ಋಣ;

(ಜೆ) ಅಂಥ ಋಣಿಯು ಇನ್ನೊಬ್ಬ ಪಾಲುದಾರನೊಂದಿಗೆ ಭಾಗವಾಗಿ ಬಾಕಿಯಿರುವ ಯಾವುದೇ ಮೊಬಲಗು;

(ಕೆ) ಮುಂಬರುವ ದಿನಾಂಕದಲ್ಲಿ ಸರಕುಗಳ ವಿತರಣೆಗಾಗಿ ಋಣಿಯು ಮುಂಗಡವಾಗಿ ಸ್ವೀಕರಿಸಿದ ಯಾವುದೇ ಮೊಬಲಗು;

(ಎಲ್) ನೋಂದಾಯಿಸಿದ ಉಪವಿಧಿಗಳ ಯಾವುದೇ ಚಿಟ್‌ನ ಅಡಿಯಲ್ಲಿ ಉಂಟಾದ ಅಥವಾ ಉದ್ಭವಿಸಿದ ಯಾವುದೇ ಹೊಣೆಗಾರಿಕೆ; ಮತ್ತು

(ಎಂ) ಯಾವುದೇ ನ್ಯಾಯಾಲಯವು ವೆಚ್ಚಗಳಾಗಿರುವಂತೆ ಆಜ್ಞೆಗೊಳಿಸಿದ ಯಾವುದೇ ಮೊತ್ತ.

**12. ಋಣ ಪರಿಹಾರ ಅಧಿಕಾರಿಯು ಅನುಸರಿಸಬೇಕಾದ ಕಾರ್ಯವಿಧಾನ.–** ಈ ಅಧಿನಿಯಮದ ಅಡಿಯಲ್ಲಿಯ ವಿಚಾರಣೆಗಳಲ್ಲಿ, ಅನ್ಯಥಾ ಉಪಬಂಧಿಸದುದನ್ನುಳಿದು, ಋಣ ಪರಿಹಾರ ಅಧಿಕಾರಿಯು, ಕರ್ನಾಟಕ ಭೂ ಕಂದಾಯ ಅಧಿನಿಯಮ, 1964ರ (1964ರ ಕರ್ನಾಟಕ ಅಧಿನಿಯಮ 12) 34ನೇ ಪ್ರಕರಣದ ಅಡಿಯಲ್ಲಿ ಕ್ಷಿಪ್ರ ವಿಚಾರಣೆಗಾಗಿ ನಿರ್ದಿಷ್ಟಪಡಿಸಿದಂಥದೇ ಕಾರ್ಯವಿಧಾನವನ್ನು ಅನುಸರಿಸತಕ್ಕದ್ದು.

**13. ಅಧಿನಿಯಮವು ಅಧ್ಯಾರೋಹಿ ಪರಿಣಾಮವನ್ನು ಹೊಂದಿರತಕ್ಕದ್ದು.–** ಈ ಅಧಿನಿಯಮದ ಉಪಬಂಧಗಳು, ಸಿವಿಲ್ ಪ್ರಕ್ರಿಯಾ ಸಂಹಿತೆ, 1908ರಲ್ಲಿ (1908ರ ಕೇಂದ್ರ ಅಧಿನಿಯಮ 5) ಅಥವಾ ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಇತರ ಕಾನೂನಿನಲ್ಲಿ ಅಥವಾ ಪದ್ಧತಿ, ಬಳಕೆ ಅಥವಾ ಯಾವುದೇ ನ್ಯಾಯಾಲಯದ

ಅಥವಾ ಇತರ ಪ್ರಾಧಿಕಾರದ ಕರಾರು ಅಥವಾ ಡಿಕ್ರಿ ಅಥವಾ ಆದೇಶದಲ್ಲಿ ಅದರೊಂದಿಗೆ ಒಳಗೊಂಡಿರುವುದಕ್ಕೆ ಅಸಂಗತವಾಗಿ ಏನೇ ಒಳಗೊಂಡಿದ್ದರೂ, ಪರಿಣಾಮ ಹೊಂದಿರತಕ್ಕದ್ದು:

ಪರಂತು, ಈ ಅಧಿನಿಯಮದ ಉಪಬಂಧಗಳು, ಅಕ್ರಮ ಮೂಲದ ಹಣವನ್ನು ಕಾನೂನುಬದ್ಧವಾಗಿ ಕಾಣುವಂತೆ ಮಾಡುವುದನ್ನು ಪ್ರತಿಬಂಧಿಸುವ ಅಧಿನಿಯಮ, 2002 (2003ರ ಕೇಂದ್ರ ಅಧಿನಿಯಮ 15) (The Prevention of Money Laundering Act, 2002 (Central Act 15 of 2003) ಮತ್ತು ಪಲಾಯನ ಮಾಡಿರುವ ಆರ್ಥಿಕ ಅಪರಾಧಗಳ ಅಧಿನಿಯಮ, 2018ರ (2018ರ ಅಧಿನಿಯಮ 17) (The Fugitive Economic Offenders Act, 2018 (17 of 2018)] ರಲ್ಲಿ ಅದರೊಂದಿಗೆ ಒಳಗೊಂಡಿರುವುದಕ್ಕೆ ಅಸಂಗತವಾಗದಂತೆ ಹೆಚ್ಚುವರಿಯಾಗಿ ಮತ್ತು ಅದಕ್ಕೆ ಭಂಗವಾಗದಂತೆ ಪರಿಣಾಮ ಹೊಂದಿರತಕ್ಕದ್ದು.

**14. ಮಾರಾಟವಾಗಬೇಕೆಂದು ತಾತ್ಪರ್ಯವಾಗುವ ವರ್ಗಾವಣೆಯು ಅಡಮಾನದ ಸ್ವರೂಪದಲ್ಲಿರಬೇಕೆಂದು ಘೋಷಿಸಲು ಋಣ ಪರಿಹಾರ ಅಧಿಕಾರಿಯ ಅಧಿಕಾರ.–** (1) ಯಾವೊಬ್ಬ ಋಣಿಯು ತಾನು ಮಾಡಿದ ಸ್ಥಿರಾಸ್ತಿಯ ಅಥವಾ ಯಾವೊಬ್ಬ ಇತರ ವ್ಯಕ್ತಿಯ ಮೂಲಕ ತಾನು ಉತ್ತರಾಧಿಕಾರದಿಂದ ಪಡೆದ ಸ್ಥಿರಾಸ್ತಿಯ ಯಾವುದೇ ವರ್ಗಾವಣೆಯು ಅಡಮಾನ ಸ್ವರೂಪದ ವರ್ಗಾವಣೆಯೆಂದು ಸಂಬಂಧಪಟ್ಟ ಋಣ ಪರಿಹಾರ ಅಧಿಕಾರಿಗೆ ಅರ್ಜಿಯನ್ನು ಸಲ್ಲಿಸಬಹುದು ಮತ್ತು ಋಣ ಪರಿಹಾರ ಅಧಿಕಾರಿಯು, ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ವಿಚಾರಣೆಯ ತರುವಾಯ, ವರ್ಗಾವಣೆಯೊಂದಿಗೆ ಸಂಬಂಧಿಸಿದ ಸನ್ನಿವೇಶಗಳು ವರ್ಗಾವಣೆಯು ಅಡಮಾನ ಸ್ವರೂಪದಲ್ಲಿರಬೇಕೆಂದು ತೋರಿಸುತ್ತಿದೆ ಎಂದು ಆತನು ಮನಗಂಡಲ್ಲಿ, ಆಗ ಯಾವುದೇ ಕಾನೂನು, ಪದ್ಧತಿ ಅಥವಾ ಕರಾರಿನಲ್ಲಿ ಇದಕ್ಕೆ ವಿರುದ್ಧವಾದುದು ಏನೇ ಒಳಗೊಂಡಿದ್ದರೂ ಅಂಥ ವರ್ಗಾವಣೆಯು ಅಡಮಾನವಾಗಿರಬೇಕೆಂದು ಘೋಷಿಸಬಹುದು.

(2) ಋಣ ಪರಿಹಾರ ಅಧಿಕಾರಿಯು ಅಂಥ ಘೋಷಣೆಯನ್ನು ಮಾಡಿದಾಗ, ಈ ಅಧಿನಿಯಮವು ಪ್ರಾರಂಭವಾದ ದಿನಾಂಕಕ್ಕೆ ಮೊದಲು ವರ್ಗಾವಣೆ ಮಾಡಲಾಗಿದ್ದಲ್ಲಿ, ವರ್ಗಾವಣೆಯಡಿಯಲ್ಲಿ ಸೇರಿದ ಋಣವು ಸಂಪೂರ್ಣವಾಗಿ ತೀರಿಸಲಾಗಿದೆ ಎಂದು ಭಾವಿಸತಕ್ಕದ್ದು ಮತ್ತು 6ನೇ ಪ್ರಕರಣದ (2)ನೇ ಉಪಪ್ರಕರಣದ ಉಪಬಂಧವು, ಅಡಮಾನವನ್ನು ಕ್ರಯಕ್ಕೆ ತೆಗೆದುಕೊಳ್ಳುವುದನ್ನು (redemption) ಮತ್ತು ಆಸ್ತಿಯ ಸ್ವಾಧೀನತೆಯನ್ನು ವಹಿಸಿಕೊಡುವುದನ್ನು (delivering) ದಾಖಲು ಮಾಡುವುದಕ್ಕಾಗಿ, ಯಥೋಚಿತ ವ್ಯತ್ಯಾಸಗಳೊಂದಿಗೆ ಅನ್ವಯವಾಗತಕ್ಕದ್ದು.

(3) (1)ನೇ ಉಪಪ್ರಕರಣದ ಅಡಿಯಲ್ಲಿನ ಯಾವುದೇ ವಿಚಾರಣೆಯ ಉದ್ದೇಶಕ್ಕಾಗಿ, ಋಣ ಪರಿಹಾರ ಅಧಿಕಾರಿಯು, ಕರ್ನಾಟಕ ಭೂಕಂದಾಯ ಅಧಿನಿಯಮ, 1964ರ (1964ರ ಕರ್ನಾಟಕ ಅಧಿನಿಯಮ 12) ಅಡಿಯಲ್ಲಿ ಆತನಿಗೆ ಪ್ರದತ್ತವಾದ ಎಲ್ಲಾ ಅಥವಾ ಯಾವುದೇ ಅಧಿಕಾರಗಳನ್ನು ಚಲಾಯಿಸಬಹುದು ಮತ್ತು ನಿಯಮಿಸಬಹುದಾದ ಅಂಥ ಕಾರ್ಯವಿಧಾನವನ್ನು ಅನುಸರಿಸತಕ್ಕದ್ದು.

(4) ಋಣ ಪರಿಹಾರ ಅಧಿಕಾರಿಯ ಆದೇಶವು, 15ನೇ ಪ್ರಕರಣದ ಅಡಿಯಲ್ಲಿ ಪುನರೀಕ್ಷಣೆಯಲ್ಲಿನ ಯಾವುದೇ ಆದೇಶಕ್ಕೆ ಒಳಪಟ್ಟು ಅಂತಿಮವಾಗಿರತಕ್ಕದ್ದು.

(5) ಈ ಪ್ರಕರಣದಲ್ಲಿರುವುದಾವುದೂ,–

(i) ಅಡಮಾನವನ್ನು ಹೊರತುಪಡಿಸಿ, ಸಕ್ಷಮ ನ್ಯಾಯಾಲಯದಿಂದ ವರ್ಗಾವಣೆಯಾಗಬೇಕೆಂದು ಅಂತಿಮವಾಗಿ ನ್ಯಾಯನಿರ್ಣಿತ ತೀರ್ಮಾನವಾದ ವರ್ಗಾವಣೆಗೆ;

(ii) ಅಂಥ ವರ್ಗಾವಣೆಯ ನೈಜ ಸ್ವರೂಪದನ್ನು ಗಮನಿಸದೇ ಮೌಲ್ಯಕ್ಕಾಗಿನ ಯಾವೊಬ್ಬ ವಿಶ್ವಾಸಾರ್ಹವಾದ ವರ್ಗಾಯಿತನಿಗೆ ಅಥವಾ ಆತನ ಪ್ರತಿನಿಧಿಗೆ;

(iii) 1974ರ ಮಾರ್ಚ್ 1ಕ್ಕೆ ಮೊದಲು ಮಾಡಲಾದ ವರ್ಗಾವಣೆಗೆ;

(iv) ಕರ್ನಾಟಕ ಕೃಷಿ ಋಣಗಳ ಪರಿಹಾರ ಅಧಿನಿಯಮ, 1966ರ (1966ರ ಕರ್ನಾಟಕ ಅಧಿನಿಯಮ 29) 23ನೇ ಪ್ರಕರಣದ ಮತ್ತು ಕರ್ನಾಟಕ ಋಣ ಪರಿಹಾರ ಅಧಿನಿಯಮ, 1976 (1976ರ ಕರ್ನಾಟಕ ಅಧಿನಿಯಮ 25) ಮತ್ತು ಕರ್ನಾಟಕ ಋಣ ಪರಿಹಾರ ಅಧಿನಿಯಮ, 1980ರ (1980ರ ಕರ್ನಾಟಕ ಅಧಿನಿಯಮ 29) ಉಪಬಂಧಗಳ ಅಡಿಯಲ್ಲಿ ಇತ್ಯರ್ಥವಾಗಲಿರುವ ವ್ಯವಹರಣೆಗಳ ಸಂಬಂಧದಲ್ಲಿನ ವರ್ಗಾವಣೆಗೆ,

–ಅನ್ವಯವಾಗತಕ್ಕದ್ದಲ್ಲ.

**15. ಡೆಪ್ಯುಟಿ ಕಮೀಷನರಿಂದ ಪುನರೀಕ್ಷಣೆ.–** ಡೆಪ್ಯುಟಿ ಕಮೀಷನರನು, ತಾನಾಗಿಯೇ ಅಥವಾ 14ನೇ ಪ್ರಕರಣದ ಅಡಿಯಲ್ಲಿ ಹೊರಡಿಸಲಾದ ಆದೇಶದಿಂದ ಬಾಧಿತನಾದ ಯಾವೊಬ್ಬ ವ್ಯಕ್ತಿಯು ಸಲ್ಲಿಸಿದ ಅರ್ಜಿಯ ಮೇಲೆ, ಅಂಥ ವ್ಯವಹರಣೆಯ ನ್ಯಾಯಬದ್ಧವಾಗಿದೆಯೆಂದು ತಾನೆ ಮನದಟ್ಟು ಮಾಡಿಕೊಳ್ಳುವ ಉದ್ದೇಶಕ್ಕಾಗಿ, ಅಂಥ ಆದೇಶವನ್ನು ಮಾಡುವುದಕ್ಕಾಗಿನ ವ್ಯವಹರಣೆಗಳ ದಾಖಲೆಗಳನ್ನು ಯಾವುದೇ ಸಮಯದಲ್ಲಿ ತರಿಸಿಕೊಳ್ಳಬಹುದು ಮತ್ತು ಪರೀಕ್ಷಿಸಬಹುದು ಮತ್ತು ತಾನು ಸೂಕ್ತವೆಂದು ಭಾವಿಸುವಂತೆ ಅದಕ್ಕೆ ಸಂಬಂಧಿಸಿದ ಅಂಥ ಆದೇಶಗಳನ್ನು ಹೊರಡಿಸಬಹುದು:

ಪರಂತು, ಬಾಧಿತ ವ್ಯಕ್ತಿಗೆ ಅಹವಾಲು ಹೇಳಿಕೊಳ್ಳಲು ಯುಕ್ತ ಅವಕಾಶವನ್ನು ನೀಡಿದ ಹೊರತು ಅಂಥ ಆದೇಶವನ್ನು ಮಾಡತಕ್ಕದ್ದಲ್ಲ.

**16. ಉಳಿಸುವಿಕೆಗಳು.–** (1) ಈ ಅಧಿನಿಯಮದಲ್ಲಿ ಇರುವುದಾವುದೂ, ಕರ್ನಾಟಕ ಋಣಪರಿಹಾರ ಅಧಿನಿಯಮ, 1976ರ (1976ರ ಕರ್ನಾಟಕ ಅಧಿನಿಯಮ 25) ಮತ್ತು ಕರ್ನಾಟಕ ಋಣ ಪರಿಹಾರ ಅಧಿನಿಯಮ, 1980ರ (1980ರ ಕರ್ನಾಟಕ ಅಧಿನಿಯಮ 29) ಕಾರ್ಯಾಚರಣೆಗೆ ಯಾವುದೇ ರೀತಿಯಲ್ಲಿ ಬಾಧಿತಗೊಳಿಸತಕ್ಕದ್ದಲ್ಲ ಅಥವಾ ಬಾಧಿತಗೊಳಿಸಿದೆ ಎಂದು ಭಾವಿಸತಕ್ಕದ್ದಲ್ಲ.

(2) ಈ ಅಧಿನಿಯಮದಲ್ಲಿರುವುದಾವುದೂ, ಯಾವುದೇ ಇತರ ಕಾನೂನು, ಕರಾರು, ಪದ್ಧತಿ ಅಥವಾ ಬಳಕೆಯಡಿಯಲ್ಲಿ ಋಣಿಯು ಅರ್ಹನಾದ ಯಾವುದೇ ಹಕ್ಕುಗಳು ಅಥವಾ ವಿಶೇಷಾಧಿಕಾರಿಗಳನ್ನು, ಅಂಥ ಹಕ್ಕುಗಳು ಅಥವಾ ವಿಶೇಷಾಧಿಕಾರಿಗಳು ಈ ಅಧಿನಿಯಮದ ಅಡಿಯಲ್ಲಿ ಆತನು ಅರ್ಹನಾದುದಕ್ಕಿಂತ ಹೆಚ್ಚಾಗಿ ಆತನಿಗೆ ಅನುಕೂಲಕರವಾಗಿದ್ದಲ್ಲಿ, ಬಾಧಿತಗೊಳಿಸತಕ್ಕದ್ದಲ್ಲ.

(3) (1) ಮತ್ತು (2)ನೇ ಉಪಪ್ರಕರಣಗಳ ಅಡಿಯಲ್ಲಿ ಅನ್ಯಥಾ ಉಪಬಂಧಿಸಿದುದನ್ನು ಉಳಿದು, ಈ ಅಧಿನಿಯಮದ ಉಪಬಂಧಗಳು ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿಗೆ ಹೆಚ್ಚುವರಿಯಾಗಿರತಕ್ಕದ್ದು ಮತ್ತು ಅದಕ್ಕೆ ಭಂಗ ತರತಕ್ಕದ್ದಲ್ಲ.

**17. ತೊಂದರೆಗಳನ್ನು ನಿವಾರಿಸಲು ಅಧಿಕಾರ.–** (1) ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವಲ್ಲಿ ಯಾವುದೇ ತೊಂದರೆಗಳು ಉದ್ಭವಿಸಿದಲ್ಲಿ, ರಾಜ್ಯ ಸರ್ಕಾರವು, ಸರ್ಕಾರಿ ರಾಜ್ಯ ಪತ್ರದಲ್ಲಿ, ಆದೇಶವನ್ನು ಪ್ರಕಟಿಸುವ ಮೂಲಕ, ತೊಂದರೆಗಳನ್ನು ನಿವಾರಿಸಲು ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಾಗಿರದಂತೆ, ತಾನು ಸೂಕ್ತವೆಂದು ಮತ್ತು ಅವಶ್ಯವೆಂದು ಕಂಡುಬರುವ ಅಂಥ ಉಪಬಂಧಗಳನ್ನು ರಚಿಸಬಹುದು:

ಪರಂತು, ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಎರಡು ವರ್ಷಗಳ ಅವಧಿಯು ಮುಕ್ತಾಯವಾದ ತರುವಾಯ, ಈ ಪ್ರಕರಣದ ಅಡಿಯಲ್ಲಿ ಅಂಥ ಯಾವುದೇ ಆದೇಶವನ್ನು ಮಾಡತಕ್ಕದ್ದಲ್ಲ.

(2) (1)ನೇ ಉಪಪ್ರಕರಣದ ಅಡಿಯಲ್ಲಿ ಹೊರಡಿಸಿದ ಪ್ರತಿಯೊಂದು ಆದೇಶವನ್ನು, ಅದನ್ನು ಹೊರಡಿಸಿದ ಮೇಲೆ ಆದಷ್ಟು ಬೇಗನೆ ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ ಮಂಡಿಸತಕ್ಕದ್ದು.

**18. ನಿಯಮಗಳ ರಚನಾಧಿಕಾರ.–** (1) ರಾಜ್ಯ ಸರ್ಕಾರವು, ಪೂರ್ವ ಪ್ರಕಟಣೆಯ ತರುವಾಯ ಅಧಿಸೂಚನೆಯ ಮೂಲಕ, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಅಡಿಯಲ್ಲಿ ಹೊರಡಿಸಲಾದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ, ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ, ಒಂದು ಅಧಿವೇಶನದಲ್ಲಿ ಅಥವಾ ಎರಡು ಅಥವಾ ಹೆಚ್ಚು ನಿರಂತರ ಅಧಿವೇಶನಗಳಲ್ಲಿ ಅಡಕವಾಗಿರಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಅದು ಅಧಿವೇಶನದಲ್ಲಿರುವಾಗ ಮಂಡಿಸತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನ ಅಥವಾ ನಿರಂತರ ಅಧಿವೇಶನಗಳ ನಿಕಟ ತರುವಾಯದ ಅಧಿವೇಶನವು ಮುಕ್ತಾಯವಾಗುವುದಕ್ಕೆ ಮೊದಲು ಉಭಯ ಸದನಗಳು ನಿಯಮದಲ್ಲಿ ಯಾವುದೇ ಮಾರ್ಪಾಡು ಮಾಡಲು ಒಪ್ಪಿದರೆ ಅಥವಾ ಆ ನಿಯಮವನ್ನು ರಚಿಸತಕ್ಕದ್ದಲ್ಲವೆಂದು ಉಭಯ ಸದನಗಳು ಒಪ್ಪಿದರೆ, ತದನಂತರ ಅಂಥ ನಿಯಮವು ಹಾಗೆ ಮಾರ್ಪಾಟಾದ ರೀತಿಯಲ್ಲಿ ಪರಿಣಾಮಕಾರಿಯಾಗತಕ್ಕದ್ದು ಅಥವಾ ಸಂದರ್ಭಾನುಸಾರವಾಗಿ ಪರಿಣಾಮಕಾರಿಯಾಗತಕ್ಕದ್ದಲ್ಲ. ಆದಾಗ್ಯೂ, ಯಾವುದೇ ಅಂಥ ಮಾರ್ಪಾಡು ಅಥವಾ ರದ್ದತಿಯು ಆ ನಿಯಮದ ಅಡಿಯಲ್ಲಿ ಈ ಮೊದಲು ಮಾಡಲಾದ ಯಾವುದೇ ಕಾರ್ಯದ ಮಾನ್ಯತೆಗೆ ಬಾಧಕವನ್ನು ಉಂಟುಮಾಡತಕ್ಕದ್ದಲ್ಲ.

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

## (ವಿಧೇಯಕವನ್ನು ಮಂಡಿಸುವಾಗ ಲಗತ್ತಿಸಿದಂತೆ)

ಕರ್ನಾಟಕ ರಾಜ್ಯದಲ್ಲಿನ ಸಣ್ಣ ರೈತರು, ಭೂ ರಹಿತ ಕೃಷಿ ಕಾರ್ಮಿಕರು ಮತ್ತು ದುರ್ಬಲ ವರ್ಗಗಳ ಜನರು ನೆರೆ ಮತ್ತು ಪ್ರಾಕೃತಿಕ ವಿಪತ್ತುಗಳಿಂದಾಗಿ ಕಠಿಣತಮ ಹಣಕಾಸಿನ ಬಿಕ್ಕಟ್ಟನ್ನು ಎದುರಿಸುತ್ತಿದ್ದಾರೆ. ಆದುದರಿಂದ ರಾಜ್ಯ ಸರ್ಕಾರವು, ಸಣ್ಣ ರೈತರು, ಭೂ ರಹಿತ ಕೃಷಿ ಕಾರ್ಮಿಕರು ಮತ್ತು ದುರ್ಬಲ ವರ್ಗಗಳ ಜನರಿಗೆ ಋಣಪರಿಹಾರ ಕಲ್ಪಿಸುವುದು ಅವಶ್ಯವೆಂದು ಪರಿಗಣಿಸಿದೆ.

ಆದುದರಿಂದ ಈ ವಿಧೇಯಕ.

## ಆರ್ಥಿಕ ಜ್ಞಾಪನ ಪತ್ರ

ಪ್ರಸ್ತಾವಿತ ಶಾಸನಾತ್ಮಕ ಕ್ರಮವು ಯಾವುದೇ ಹೆಚ್ಚಿನ ವೆಚ್ಚವನ್ನು ಒಳಗೊಂಡಿರುವುದಿಲ್ಲ.

## ಪ್ರತ್ಯಾಯೋಜಿತ ಶಾಸನ ರಚನಾಧಿಕಾರ ಕುರಿತು ಜ್ಞಾಪನ ಪತ್ರ

| | |
|---|---|
| • **ಖಂಡ 5:** | • (1)ನೇ ಉಪಖಂಡವು, 4ನೇ ಖಂಡದ (ಇ) ಉಪಖಂಡದ ಉದ್ದೇಶಕ್ಕಾಗಿ ಲೇಣಿದಾರರು ಸಲ್ಲಿಸಬೇಕಾದ ತ:ಖ್ತೆಗಳು ಮತ್ತು ವಿವರಗಳ ಕುರಿತು ನಿಯಮಗಳನ್ನು ರಚಿಸಲು ರಾಜ್ಯ ಸರ್ಕಾರಕ್ಕೆ ಅಧಿಕಾರವನ್ನು ನೀಡುತ್ತದೆ. |
| • **ಖಂಡ 14:** | • (3)ನೇ ಉಪಖಂಡವು, ವಿಚಾರಣೆಯನ್ನು ನಡೆಸುವಾಗ ಋಣ ಪರಿಹಾರ ಅಧಿಕಾರಿಯು ಅನುಸರಿಸಬೇಕಾದ ಕಾರ್ಯವಿಧಾನದ ಕುರಿತು ನಿಯಮಗಳನ್ನು ರಚಿಸಲು ರಾಜ್ಯ ಸರ್ಕಾರಕ್ಕೆ ಅಧಿಕಾರವನ್ನು ನೀಡುತ್ತದೆ. |
| • **ಖಂಡ 18:** | • (1)ನೇ ಉಪಖಂಡವು, ಅಧಿನಿಯಮದ ಉದ್ದೇಶಗಳನ್ನು ಈಡೇರಿಸಲು ಪೂರ್ವ ಪ್ರಕಟಣೆಯ ತರುವಾಯ ನಿಯಮಗಳನ್ನು ರಚಿಸಲು ರಾಜ್ಯ ಸರ್ಕಾರಕ್ಕೆ ಅಧಿಕಾರವನ್ನು ನೀಡುತ್ತದೆ. |

ಪ್ರಸ್ತಾವಿತ ಶಾಸನಾಧಿಕಾರದ ಪ್ರತ್ಯಾಯೋಜನೆಯು ವಾಡಿಕೆಯ ಸ್ವರೂಪದ್ದಾಗಿದೆ.

ಸಹಕಾರ ಮಂತ್ರಿಗಳು

ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

## ಅನುಬಂಧ

### ಕರ್ನಾಟಕ ಕೃಷಿ ಸಾಲ ಕಾರ್ಯಾಚರಣೆಗಳು ಸಂಕೀರ್ಣ ಉಪಬಂಧಗಳ ಅಧಿನಿಯಮ, 1974ರ

### (1975ರ ಕರ್ನಾಟಕ ಅಧಿನಿಯಮ 2) ಉದ್ಧೃತ ಭಾಗ

**Xx xx xx**

**2. ಪರಿಭಾಷೆಗಳು.–** ಈ ಅಧಿನಿಯಮದಲ್ಲಿ ಅನ್ಯಥಾ ಅಗತ್ಯಪಡಿಸಿದುದನ್ನು ಹೊರತುಪಡಿಸಿ,–

**Xx xx xx**

"(ಇ) "ಕ್ರೆಡಿಟ್ ಏಜೆನ್ಸಿ" ಎಂದರೆ,–

(i) ಬ್ಯಾಂಕಿಂಗ್ ನಿಯಂತ್ರಣ ಅಧಿನಿಯಮ, 1949ರಲ್ಲಿ ಪರಿಭಾಷಿಸಲಾದಂತೆ ಒಂದು ಬ್ಯಾಂಕಿಂಗ್ ಕಂಪನಿ;

(ii) ಭಾರತೀಯ ಸ್ಟೇಟ್ ಬ್ಯಾಂಕ್ ಅಧಿನಿಯಮ, 1955ರ ಅಡಿಯಲ್ಲಿ ರಚನೆಯಾದ ಭಾರತೀಯ ಸ್ಟೇಟ್ ಬ್ಯಾಂಕ್;

(iii) ಭಾರತೀಯ ಸ್ಟೇಟ್ ಬ್ಯಾಂಕ್ (ಅಧೀನ ಬ್ಯಾಂಕುಗಳು) ಅಧಿನಿಯಮ, 1959ರಲ್ಲಿ ಪರಿಭಾಷಿಸಲಾದಂತೆ ಅಧೀನ ಬ್ಯಾಂಕು;

(iv) ಬ್ಯಾಂಕಿಂಗ್ ಕಂಪನಿಗಳು (ಉದ್ಯಮಗಳ ಸ್ವಾಧೀನತೆ ಮತ್ತು ವರ್ಗಾವಣೆ) ಅಧಿನಿಯಮ, 1970ರ ಅಡಿಯಲ್ಲಿ ರಚನೆಯಾದ ಸಂವಾದಿ ಹೊಸ ಬ್ಯಾಂಕ್;

(v) ಕೃಷಿ ಮರು ಹಣಕಾಸು ನಿಗಮ ಅಧಿನಿಯಮ, 1963ರ ಅಡಿಯಲ್ಲಿ ರಚನೆಯಾದ ಕೃಷಿ ಮರು ಹಣಕಾಸು ನಿಗಮ;

(vi) (ಸಿ) ಖಂಡದಲ್ಲಿ ಪರಿಭಾಷಿಸಲಾದಂತೆ ಕೃಷಿ ಕೈಗಾರಿಕೆಗಳ ನಿಗಮ;

(vii) ಕೃಷಿ ಹಣಕಾಸು ನಿಗಮ ನಿಯಮಿತ, ಕಂಪನಿಗಳ ಅಧಿನಿಯಮ, 1956ರ ಅಡಿಯಲ್ಲಿ ಸ್ಥಾಪಿತವಾದ ಒಂದು ಕಂಪನಿ;

(vii-a) ಪ್ರಾದೇಶಿಕ ಗ್ರಾಮೀಣ ಬ್ಯಾಂಕುಗಳ ಅಧಿನಿಯಮ, 1976ರ (1976ರ ಕೇಂದ್ರ ಅಧಿನಿಯಮ 21) ಅಡಿಯಲ್ಲಿ ರಚನೆಯಾದ ಪ್ರಾದೇಶಿಕ ಗ್ರಾಮೀನ ಬ್ಯಾಂಕುಗಳು; ಮತ್ತು

(viii) ಈ ಅಧಿನಿಯಮದ ಉದ್ದೇಶಕ್ಕಾಗಿ ಕ್ರೆಡಿಟ್ ಏಜೆನ್ಸಿಯೆಂದು ರಾಜ್ಯ ಸರ್ಕಾರವು ಅಧಿಸೂಚಿಸಿದ ಯಾವುದೇ ಇತರ ಹಣಕಾಸು ಸಂಸ್ಥೆ.

**Xx xx xx**

# ಅನುಬಂಧ – X

## (ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಮತ್ತು ನಡವಳಿಕೆಯ ನಿಯಮಗಳು 324 ರಿಂದ 351ರ ಉದ್ಧೃತ ಭಾಗ)

**ಸದಸ್ಯರು ಪಾಲಿಸಬೇಕಾದ ನಿಯಮಗಳು**

**324. ಸದನದಲ್ಲಿ ಉಪಸ್ಥಿತರಿದ್ದಾಗ ಸದಸ್ಯರು ಪಾಲಿಸಬೇಕಾದ ನಿಯಮಗಳು:**

**ಸಭೆಯ ಉಪವೇಶನದಲ್ಲಿ ಸದಸ್ಯನು:**

(1) ಸದನದ ಕಾರ್ಯಕಲಾಪಕ್ಕೆ ಸಂಬಂಧಿಸಿರುವುದನ್ನು ಹೊರತು, ಯಾವುದೇ ಪುಸ್ತಕ, ವಾರ್ತಾ ಪತ್ರಿಕೆ ಅಥವಾ ಕಾಗದವನ್ನು ಓದತಕ್ಕದ್ದಲ್ಲ.

(2) ಯಾವನೇ ಸದಸ್ಯನು ಮಾತನಾಡುತ್ತಿರುವಾಗ ಅವನಿಗೆ ದುರ್ವಚನೆಗಳಿಂದ ಅಥವಾ ಏರುಸ್ವರದಿಂದ ಅಥವಾ ಇತರ ಯಾವುದೇ ಕ್ರಮಬಾಹಿರ ರೀತಿಯಲ್ಲಿ ತೊಂದರೆಯುಂಟು ಮಾಡತಕ್ಕದ್ದಲ್ಲ.

(3) ಸದನವನ್ನು ಪ್ರವೇಶಿಸುವಾಗ ಅಥವಾ ಅಲ್ಲಿಂದ ನಿರ್ಗಮಿಸುವಾಗ ಮತ್ತು ತಮ್ಮ ಜಾಗದಲ್ಲಿ ಕುಳಿತುಕೊಳ್ಳುವಾಗ ಅಥವಾ ಜಾಗವನ್ನು ಬಿಡುವಾಗ ಅಧ್ಯಕ್ಷರಿಗೆ ವಂದಿಸತಕ್ಕದ್ದು.

(4) ಅಧ್ಯಕ್ಷರ ಮತ್ತು ಮಾತನಾಡುತ್ತಿರುವ ಸದಸ್ಯರ ಮಧ್ಯೆ ಹಾದು ಹೋಗತಕ್ಕದ್ದಲ್ಲ.

(5) ಅಧ್ಯಕ್ಷರು ಸಭೆಯನ್ನು ಉದ್ದೇಶಿಸಿ ಭಾಷಣ ಮಾಡುತ್ತಿರುವಾಗ ಸದನವನ್ನು ತ್ಯಜಿಸತಕ್ಕದ್ದಲ್ಲ.

(6) ಯಾವಾಗಲೂ ಅಧ್ಯಕ್ಷರನ್ನು ಸಂಬೋಧಿಸಿ ಮಾತನಾಡತಕ್ಕದ್ದು.

(7) ಸಭೆಯನ್ನು ಉದ್ದೇಶಿಸಿ ಮಾತನಾಡುವಾಗ ತನ್ನ ಸ್ಥಾನದಲ್ಲಿರತಕ್ಕದ್ದು.

(8) ಸದನದಲ್ಲಿ ಮಾತನಾಡದೇ ಇರುವ ಸಮಯದಲ್ಲಿ ನಿಶ್ಯಬ್ಧವಾಗಿರತಕ್ಕದ್ದು.

(9) ಸಭೆಯ ಕಾರ್ಯವಿಧಿಗೆ ತಡೆ ಅಥವಾ ವಿಘ್ನವನ್ನು ತರತಕ್ಕದ್ದಲ್ಲ ಮತ್ತು ಸದನದಲ್ಲಿ ಭಾಷಣವಾಗುತ್ತಿರುವಾಗ ವೀಕ್ಷಕ ವಿವರಣೆಯನ್ನು ಮಾಡತಕ್ಕದ್ದಲ್ಲ.

(10) ಯಾವುದೇ ಉಪ್ಪರಿಗೆಯ ಮೊಗಸಾಲೆಯನ್ನು (ಗ್ಯಾಲರಿಯನ್ನು) ಒಬ್ಬ ಅಪರಿಚಿತನು ಪ್ರವೇಶಿಸಿದಾಗ ಚಪ್ಪಾಳೆ ಹೊಡೆಯತಕ್ಕದ್ದಲ್ಲ.

(11) ಮಾತನಾಡುತ್ತಿರುವಾಗ, ಯಾವುದೇ ಉಪ್ಪರಿಗೆಯ ಮೊಗಸಾಲೆಯಲ್ಲಿರುವ (ಗ್ಯಾಲರಿಯಲ್ಲಿ) ಅಪರಿಚಿತರನ್ನು ಕುರಿತು ಮಾತನಾಡತಕ್ಕದ್ದಲ್ಲ.



(12) ಸದನದಲ್ಲಿ ಘೋಷಣೆಯನ್ನು ಕೂಗತಕ್ಕದ್ದಲ್ಲ;

(13) ಪೀಠಕ್ಕೆ ಬೆನ್ನು ತೋರಿಸುವಂತೆ ಕುಳಿತುಕೊಳ್ಳತಕ್ಕದ್ದಲ್ಲ ಅಥವಾ ನಿಲ್ಲತಕ್ಕದ್ದಲ್ಲ.

(14) ಸದನದಲ್ಲಿ ಪೀಠದ ಬಳಿ ಖುದ್ದಾಗಿ ಹೋಗತಕ್ಕದ್ದಲ್ಲ ಅವಶ್ಯಕತೆಯುಂಟಾದರೆ ಅವರು ವಿಧಾನ ಮಂಡಲದ ಮುಂದೆ ಅಧಿಕಾರಿಗಳಿಗೆ ಚೀಟಿ ನೀಡಬಹುದು.

(15) ಸದನದಲ್ಲಿ ಬ್ಯಾಡ್ಜುಗಳು ಅಥವಾ ಯಾವುದೇ ವಸ್ತುವನ್ನು ಧರಿಸತಕ್ಕದ್ದಲ್ಲ ಅಥವಾ ಪ್ರದರ್ಶಿಸತಕ್ಕದ್ದಲ್ಲ.

(16) ಸದನದಲ್ಲಿ ಶಸ್ತ್ರಗಳನ್ನು ತರತಕ್ಕದ್ದಲ್ಲ ಅಥವಾ ಪ್ರದರ್ಶಿಸತಕ್ಕದ್ದಲ್ಲ.

(17) ಸದನದಲ್ಲಿ ಬಾವುಟಗಳು, ಲಾಂಛನಗಳು ಅಥವಾ ಯಾವುದೇ ನಿಶಾನೆಗಳನ್ನು ಪ್ರದರ್ಶಿಸತಕ್ಕದ್ದಲ್ಲ.

(18) ತನ್ನ ಭಾಷಣವಾದ ತರುವಾಯ, ಕೂಡಲೇ ಸದನವನ್ನು ಬಿಟ್ಟು ಹೋಗತಕ್ಕದ್ದಲ್ಲ.

(19) ಸದನದ ವ್ಯವಹಾರಗಳಿಗೆ ಸಂಬಂಧಪಡದ ಯಾವುದೇ ಬರವಣಿಗೆ, ಪ್ರಶ್ನಾವಳಿ, ಕರಪತ್ರಗಳು ಪತ್ರಿಕಾ ಹೇಳಿಕೆಗಳು, ಕಾಗದದ ಹಾಳೆಗಳು, ಮೊದಲಾದುವನ್ನು ಸದನದ ಆವರಣದೊಳಗೆ ಹಂಚತಕ್ಕದ್ದಲ್ಲ.

(20) ಸದನದಲ್ಲಿ ಡೆಸ್ಕ್ ಮೇಲೆ ತನ್ನ ಟೋಪಿಯನ್ನು ಇಡತಕ್ಕದ್ದಲ್ಲ, ಕಡತಗಳನ್ನು ಇಡಲು ಅಥವಾ ಬರೆಯುವ ಉದ್ದೇಶಕ್ಕಾಗಿ ರಟ್ಟನ್ನು ತರತಕ್ಕದ್ದಲ್ಲ, ಧೂಮಪಾನ ಮಾಡತಕ್ಕದ್ದಲ್ಲ ಅಥವಾ ಕೋಟನ್ನು ಕೈನಲ್ಲಿ ಹಿಡಿದು ಸದನವನ್ನು ಪ್ರವೇಶಿಸಿತಕ್ಕದ್ದಲ್ಲ.

(21) ಆರೋಗ್ಯದ ಕಾರಣಗಳ ಮೇಲೆ ವಿಧಾನ ಸಭ್ಯಾಧ್ಯಕ್ಷರ ಅನುಮತಿ ಪಡೆಯದೆ ಊರುಗೋಲನ್ನು ತರತಕ್ಕದ್ದಲ್ಲ.

(22) ಸದನದಲ್ಲಿ ಪ್ರತಿಭಟನೆ ಸೂಚಿಸಿ ಕಾಗದ ಪತ್ರಗಳನ್ನು ಹರಿದುಹಾಕತಕ್ಕದ್ದಲ್ಲ;

(23) ಸದನದಲ್ಲಿ ಕ್ಯಾಸೆಟ್ ಅಥವಾ ಟೇಪ್ ರೆಕಾರ್ಡರ್‌ಗಳನ್ನು ತರತಕ್ಕದ್ದಲ್ಲ ಮತ್ತು ಹಾಕತಕ್ಕುದಲ್ಲ ಮತ್ತು

(24) ಸದನಕ್ಕೆ ಜೋರಾಗಿ ಕೇಳಿಸುವಂತೆ ಮೊಗಸಾಲೆಯಲ್ಲಿ ಮಾತನಾಡತಕ್ಕುದಲ್ಲ ಅಥವಾ ನಗತಕ್ಕದಲ್ಲ.

**325. ಅಧ್ಯಕ್ಷರಿಂದ ಕರೆಬಂದಾಗ ಸದಸ್ಯರು ಮಾತನಾಡುವುದು:** ಒಬ್ಬ ಸದಸ್ಯನು ಮಾತನಾಡಲು ಎದ್ದುನಿಂತರೆ, ಅಧ್ಯಕ್ಷರು ಅವರ ಹೆಸರನ್ನು ಕರೆಯತಕ್ಕದ್ದು. ಒಬ್ಬರಿಗಿಂತ ಹೆಚ್ಚು ಸದಸ್ಯರು ಏಕಕಾಲದಲ್ಲಿ ಎದ್ದು ನಿಂತರೆ, ಅಧ್ಯಕ್ಷರು ಹೆಸರು ಕರೆದಿರುವ ಸದಸ್ಯರಿಗೆ ಮಾತನಾಡಲು ಹಕ್ಕಿರುವುದು.



**326. ಸದನವನ್ನು ಉದ್ದೇಶಿಸಿ ಮಾತನಾಡುವ ರೀತಿ :** ಸದನದಲ್ಲಿ ಯಾವುದೇ ವಿಷಯದ ಬಗ್ಗೆ ಒಬ್ಬ ಸದಸ್ಯನು ಯಾವುದೇ ಅಭಿಪ್ರಾಯವನ್ನು ವ್ಯಕ್ತಗೊಳಿಸಲಿಚ್ಛಿಸಿದರೆ, ತನ್ನ ಸ್ಥಳದಿಂದಲೇ ಎದ್ದುನಿಂತು ಅಧ್ಯಕ್ಷರನ್ನು ಸಂಬೋಧಿಸಿ ಮಾತನಾಡತಕ್ಕದ್ದು, ಪರಂತು, ಕಾಯಿಲೆ ಅಥವಾ ದುರ್ಬಲತೆಯಿಂದ ನಿಶ್ಯಕ್ತರಾಗಿರುವವರನ್ನು ಕುಳಿತುಕೊಂಡೆ ಮಾತನಾಡಲು ಅನುಮತಿಸಬಹುದು.

**327. ಮಾತನಾಡುವಾಗ ಪಾಲಿಸಬೇಕಾದ ನಿಯಮಗಳು :**

**ಸದಸ್ಯರು ಮಾತನಾಡುವಾಗ;–**

(1) ನ್ಯಾಯಾಲಯದಲ್ಲಿ ಇತ್ಯರ್ಥದಲ್ಲಿದ್ದು ತೀರ್ಪು ನೀಡಿರದ ಯಾವುದೇ ಸಂಗತಿಯನ್ನು ಕುರಿತು ಮಾತನಾಡತಕ್ಕದ್ದಲ್ಲ.

(2) ಸದಸ್ಯರೊಬ್ಬರ ಮೇಲೆ ವೈಯಕ್ತಿಕ ದೋಷಾರೋಪಣೆ ಮಾಡತಕ್ಕದ್ದಲ್ಲ.

(3) ಸಂಸತ್ತು ಅಥವಾ ಯಾವುದೇ ರಾಜ್ಯ ವಿಧಾನ ಮಂಡಲದ ವ್ಯವಹರಣೆಗಳು ಮತ್ತು ನಡವಳಿಕೆಗಳನ್ನು ಕುರಿತು ಹೀನಾಯವಾಗಿ ಮಾತನಾಡತಕ್ಕದ್ದಲ್ಲ.

(4) ಸದನದ ಯಾವುದೇ ತೀರ್ಮಾನವನ್ನು ಕುರಿತು ಅದನ್ನು ರದ್ದುಪಡಿಸಲು ಪ್ರಸ್ತಾವ ಮಂಡಿಸುವಾಗ ಹೊರತು ಇನ್ನಾವುದೇ ಆರೋಪಣೆ ಮಾಡತಕ್ಕದ್ದಲ್ಲ.

(5) ಸರಿಯಾದ ವಾಕ್ಯಗಳಲ್ಲಿ ರಚಿಸಲಾದ ಆಧಾರಸಹಿತ ಪ್ರಸ್ತಾವದ ಮೇಲೆ ಚರ್ಚೆ ನಡೆಸಿದ್ದ ಹೊರತು ಉನ್ನತಾಧಿಕಾರದಲ್ಲಿರುವ ವ್ಯಕ್ತಿಗಳ ನಡವಳಿಕೆ ಕುರಿತು ಆರೋಪಿಸತಕ್ಕದ್ದಲ್ಲ.

**ವಿವರಣೆ:** ಉನ್ನತಾಧಿಕಾರದಲ್ಲಿರುವ ವ್ಯಕ್ತಿಗಳು ಎಂದರೆ ಭಾರತ ಸಂವಿಧಾನದ ಮೇರೆಗೆ ಯಾವ ನಡವಳಿಕೆಯನ್ನು ಸರಿಯಾದ ವಾಕ್ಯಗಳಲ್ಲಿ ರಚಿಸಿದ ಆಧಾರಸಹಿತ ಪ್ರಸ್ತಾವಗಳ ಮೇಲೆ ಮಾತ್ರವೇ ಚರ್ಚೆ ನಡೆಸಬಹುದೋ ಆ ವ್ಯಕ್ತಿಗಳು ಅಥವಾ ಯಾರ ನಡವಳಿಕೆಯನ್ನು ತಾವು ಒಪ್ಪುವಂತಹ ವಾಕ್ಯಗಳಲ್ಲಿ ರಚಿಸಲಾದ ಆಧಾರಸಹಿತ ಪ್ರಸ್ತಾವದ ಮೇಲೆ ಮಾತ್ರವೇ ಚರ್ಚಿಸತಕ್ಕದ್ದು ಎಂದು ಅಧ್ಯಕ್ಷರು ಅಭಿಪ್ರಾಯಪಡುತ್ತಾರೋ ಆ ವ್ಯಕ್ತಿಗಳು

;

(6) ಚರ್ಚೆಯ ಮೇಲೆ ಪ್ರಭಾವ ಬೀರುವುದಕ್ಕಾಗಿ ರಾಜ್ಯಪಾಲರ ಹೆಸರನ್ನು ಉಪಯೋಗಿಸತಕ್ಕದ್ದಲ್ಲ;

(7) ರಾಷ್ಟ್ರದ್ರೋಹ, ರಾಷ್ಟ್ರವಿರೋಧಿ ಅಥವಾ ಅಪಮಾನಕರವಾದ ಮಾತುಗಳನ್ನು ಆಡತಕ್ಕದ್ದಲ್ಲ.

(8) ಸದನದ ಕಾರ್ಯಕಲಾಪಗಳನ್ನು ಅಡ್ಡಿಪಡಿಸುವುದಕ್ಕಾಗಿ ತಮ್ಮ ವಾಕ್ ಸ್ವಾತಂತ್ರವನ್ನು ಬಳಸಬಾರದು.

(9) ವಿಧಾನ ಸಭಾಧ್ಯಕ್ಷರ ಪರ ಅಥವಾ ವಿಧಾನಮಂಡಲ ಕಾರ್ಯಾಲಯದ ಯಾವುದೇ ಉದ್ದೇಶವನ್ನು ಕುರಿತು ಆರೋಪಿಸತಕ್ಕದ್ದಲ್ಲ.



(10) ರಾಷ್ಟ್ರಾಧ್ಯಕ್ಷರು ಅಥವಾ ರಾಜ್ಯಪಾಲರ ಅಥವಾ ಯಾವುದೇ ನ್ಯಾಯಾಲಯದ ನಡವಳಿಯನ್ನು ಕುರಿತು ಆರೋಪಿಸತಕ್ಕದ್ದಲ್ಲ ಅಥವಾ ಚರ್ಚೆಯನ್ನು ಪರಿಣಾಮಕಾರಿಯಾಗಿ ಮಾಡುವ ಉದ್ದೇಶಕ್ಕಾಗಿ ರಾಜ್ಯಪಾಲರ ಅಥವಾ ರಾಷ್ಟ್ರಾಧ್ಯಕ್ಷರ ಹೆಸರನ್ನು ಬಳಸತಕ್ಕದ್ದಲ್ಲ ;

(11) ಯಾವುದೇ ಗ್ಯಾಲರಿಯಲ್ಲಿರುವ ಅಪರಿಚಿತರ ಬಗ್ಗೆ ಯಾವುದೇ ಉಲ್ಲೇಖ ಮಾಡತಕ್ಕದ್ದಲ್ಲ;

(12) ಸರ್ಕಾರಿ ಅಧಿಕಾರಿಗಳನ್ನು ಹೆಸರು ಹಿಡಿದು ಕರೆಯತಕ್ಕದ್ದಲ್ಲ; ಮತ್ತು

(13) ಪೀಠದ ಪೂರ್ವಾನುಮತಿಯ ಹೊರತು ಬರವಣಿಗೆಯಲ್ಲಿರುವ ಭಾಷಣವನ್ನು ಓದತಕ್ಕದ್ದಲ್ಲ;

**328. ಒಬ್ಬ ವ್ಯಕ್ತಿಯನ್ನು ಕುರಿತು ಆಪಾದನೆಯ ಬಗ್ಗೆ ಕೈಗೊಳ್ಳಬೇಕಾದ ಕಾರ್ಯವಿಧಾನ:** ಸದಸ್ಯರು ಅಧ್ಯಕ್ಷರಿಗೆ ಮತ್ತು ಸಂಬಂಧಪಟ್ಟ ಮಂತ್ರಿಗಳಿಗೆ, ಮಂತ್ರಿಗಳು ಉತ್ತರ ನೀಡುವ ಉದ್ದೇಶಕ್ಕಾಗಿ ತನಿಖೆ ನಡೆಸಲು ಸಾಧ್ಯವಾಗುವಂತೆ ಪೂರ್ವ ಮಾಹಿತಿಯನ್ನು ಕೊಟ್ಟಿದ್ದ ಹೊರತು, ಯಾವ ಸದಸ್ಯರು ಯಾವ ವ್ಯಕ್ತಿಯನ್ನು ಕುರಿತು ಅಪಮಾನಕರವಾದ ಅಥವಾ ಅಪರಾಧದ ಆಪಾದನೆ ಮಾಡುವ ಯಾವ ಆರೋಪವನ್ನು ಮಾಡತಕ್ಕುದಲ್ಲ, ಅಲ್ಲದೆ ಅಧ್ಯಕ್ಷರು ಅಂಥ ಆರೋಪವು ಸದನದ ಮರ್ಯಾದೆಗೆ ಕುಂದು ತರುವಂತಹದು ಅಥವಾ ಅದರಿಂದ ಯಾವುದೇ ಸಾರ್ವಜನಿಕ ಹಿತಾಸಕ್ತಿ ಸಾಧಿತವಾಗುವುದಿಲ್ಲ ಎಂದು ಅಭಿಪ್ರಾಯ ಪಡುವುದಾದರೆ, ಯಾವುದೇ ಸಂದರ್ಭದಲ್ಲಿ ಯಾರೇ ಸದಸ್ಯರು ಅಂಥ ಯಾವುದೇ ಆರೋಪ ಮಾಡುವುದನ್ನು ನಿಷೇಧಿಸಬಹುದು.

**329. ಪರಿಷತ್ತಿನಲ್ಲಿ ಮಾಡಲಾದ ಭಾಷಣಗಳನ್ನು ಉದ್ಧರಿಸುವುದಕ್ಕೆ ಪ್ರತಿಬಂಧ :** ಪರಿಷತ್ತಿನಲ್ಲಿ ಮಾಡಲಾದ ಯಾವುದೇ ಭಾಷಣವನ್ನು ಅದು ಒಂದು ಕಾರ್ಯನೀತಿಯ ಬಗ್ಗೆ ಸಚಿವರ ಸ್ಪಷ್ಟ ಹೇಳಿಕೆಯಾಗಿದ್ದ ಹೊರತು ಸದನದಲ್ಲಿ ಉದ್ಧರಿಸತಕ್ಕದ್ದಲ್ಲ.

ಆದರೂ, ಅಧ್ಯಕ್ಷರು ತಮಗೆ ಮುಂಚಿತವಾಗಿ ಸಲ್ಲಿಸಿದ ಕೋರಿಕೆಯ ಮೇಲೆ ಯಾರೇ ಸದಸ್ಯರಿಗೆ ಪರಿಷತ್ತಿನಲ್ಲಿನ ಭಾಷಣಗಳನ್ನು ಉದ್ಧರಿಸಲು ಅಥವಾ ಅಲ್ಲಿನ ಕಾರ್ಯವಿಧಾನವನ್ನು ಕುರಿತು ಉಲ್ಲೇಖಿಸಲು, ಹಾಗೆ ಮಾಡುವುದು ಆ ಸದಸ್ಯರು ಹಕ್ಕು ಬಾಧ್ಯತೆಯ ಅಥವಾ ಕಾರ್ಯವಿಧಾನದ ಅಂಶವೊಂದನ್ನು ವಿಶದೀಕರಿಸಲು ಅವಶ್ಯವೆಂದು ಅಧ್ಯಕ್ಷರು ಯೋಚಿಸಿದಲ್ಲಿ, ಅನುಮತಿ ನೀಡಬಹುದು.

**330. ಪ್ರಶ್ನೆಗಳನ್ನು ಅಧ್ಯಕ್ಷರ ಮುಖಾಂತರವಾಗಿ ಕೇಳತಕ್ಕದ್ದು:** ಚರ್ಚೆ ನಡೆಯುತ್ತಿರುವಾಗ ವಿವರಣೆ ಉದ್ದೇಶಗಳಿಗಾಗಿ ಅಥವಾ ಇನ್ನಾವುದೇ ಸಾಕಷ್ಟು ಕಾರಣಗಳಿಗಾಗಿ ಸದನದಲ್ಲಿ ಆಗ ಪರ್ಯಾಲೋಚನೆಯಲ್ಲಿರುವ ಯಾವುದೇ ವಿಷಯದ ಸಂಬಂಧದಲ್ಲಿ ಯಾವುದೇ ಸದಸ್ಯರು ಇನ್ನೊಬ್ಬ ಸದಸ್ಯರಿಗೆ ಪ್ರಶ್ನೆಯನ್ನು ಕೇಳುವ ಅಗತ್ಯವುಂಟಾದರೆ, ಅವರು ತಮ್ಮ ಪ್ರಶ್ನೆಯನ್ನು ಅಧ್ಯಕ್ಷರ ಮೂಲಕ ಕೇಳತಕ್ಕದ್ದು.

**331. ಅಸಂಬಂಧಿತ ಅಥವಾ ಪುನರುಕ್ತಿ:** ಅಸಂಬಂಧ ವಿಷಯಗಳನ್ನು ಪ್ರಸ್ತಾಪಿಸುವ ಅಥವಾ ತನ್ನ ವಾದವನ್ನು ಅಥವಾ ಸದಸ್ಯರ ವಾದಗಳನ್ನು ಬೇಸರ ಮಾಡುವಷ್ಟು ಪುನಃ ಪುನಃ ಹೇಳುತ್ತಲೇ ಇರುವ ಸದಸ್ಯರೊಬ್ಬರ ವರ್ತನೆಯನ್ನು ಸದನದ ಗಮನಕ್ಕೆ ತಂದನಂತರ ಅಧ್ಯಕ್ಷರು ಆ ಸದಸ್ಯರನ್ನು ತಮ್ಮ ಭಾಷಣವನ್ನು ನಿಲ್ಲಿಸಬೇಕೆಂದು ನಿರ್ದೇಶಿಸಬಹುದು.

**332. ವೈಯಕ್ತಿಕ ವಿವರಣೆಗಳು:** ಸದಸ್ಯರು ಅಧ್ಯಕ್ಷರ ಅನುಮತಿ ಪಡೆದು ಒಂದು ವಿಷಯವು ಸದನದ ಮುಂದೆ ಚರ್ಚೆಗೆ ಬಂದಿರದಿದ್ದರೂ ಆ ಬಗ್ಗೆ ತಮ್ಮ ವೈಯಕ್ತಿಕ ವಿವರಣೆಯನ್ನು ನೀಡಬಹುದು, ಆದರೆ ಹಾಗೆ ಮಾಡುವಾಗ ಯಾವುದೇ ಚರ್ಚಾಸ್ಪದ ಅಂಶವನ್ನು ತರತಕ್ಕದ್ದಲ್ಲ ಮತ್ತು ಆ ಬಗ್ಗೆ ಯಾವ ಚರ್ಚೆಗೂ ಅವಕಾಶ ನೀಡತಕ್ಕದ್ದಲ್ಲ.

**333. ಭಾಷಣಗಳ ಅನುಕ್ರಮ ಮತ್ತು ಉತ್ತರ ನೀಡಲು ಹಕ್ಕು:** (1) ಪ್ರಸ್ತಾವವನ್ನು ಸಭೆಯಲ್ಲಿ ಮಂಡಿಸಿದ ಸದಸ್ಯರು ಮಾತನಾಡಿದ ನಂತರ ಇತರ ಸದಸ್ಯರು ಅಧ್ಯಕ್ಷರು ಅವರ ಹೆಸರನ್ನು ಅನುಕ್ರಮದಲ್ಲಿಯೇ ಆ ಪ್ರಸ್ತಾವವನ್ನು ಕುರಿತು ಮಾತನಾಡತಕ್ಕದ್ದು. ಯಾರೇ ಸದಸ್ಯರು ಅಧ್ಯಕ್ಷರು ಕರೆದಾಗ ಮಾತನಾಡದಿದ್ದಲ್ಲಿ ಚರ್ಚೆ ಮುಂದುವರೆದಾಗ, ಅಧ್ಯಕ್ಷರ ಅನುಮತಿಯ ಮೇರೆಗೆ ಹೊರತು ಮಾತನಾಡಲು ಹಕ್ಕುಳ್ಳವರಾಗತಕ್ಕದ್ದಲ್ಲ.

(2) ಉತ್ತರ ಹೇಳುವ ತಮ್ಮ ಹಕ್ಕನ್ನು ಚಲಾಯಿಸುವಾಗ, ಹೊರತು ಅಥವಾ ಈ ನಿಯಮಗಳ ಮೂಲಕ ಅನ್ಯಥಾ ಉಪಬಂಧವಿರುವಂತೆ ಹೊರತು ಅಧ್ಯಕ್ಷರ ಅನುಮತಿ ಪಡೆದಲ್ಲದೆ ಯಾವ ಸದಸ್ಯರೂ ಒಂದು ಪ್ರಸ್ತಾವದ ಮೇಲೆ ಒಂದು ಸಲಕ್ಕಿಂತ ಹೆಚ್ಚು ಬಾರಿ ಮಾತನಾಡತಕ್ಕದ್ದಲ್ಲ.

(3) ಒಂದು ಪ್ರಸ್ತಾವವನ್ನು ಮಂಡಿಸಿದ ಸದಸ್ಯರು ಉತ್ತರ ಹೇಳುವ ಸಲುವಾಗಿ ಮತ್ತೊಮ್ಮೆ ಮಾತನಾಡಬಹುದು ಮತ್ತು ಪ್ರಸ್ತಾವವನ್ನು ಖಾಸಗಿ ಸದಸ್ಯರೊಬ್ಬರು ಮಂಡಿಸಿದ್ದರೆ, ಸಂಬಂಧಪಟ್ಟ ಸಚಿವರು ಅಧ್ಯಕ್ಷರ ಅನುಮತಿ ಪಡೆದು (ಅವರು ಚರ್ಚೆಯಲ್ಲಿ ಈ ಹಿಂದೆ ಮಾತನಾಡಿರಲಿ, ಇಲ್ಲದಿರಲಿ) ಪ್ರಸ್ತಾವ ಮಂಡಿಸಿದ ಸದಸ್ಯರು ಉತ್ತರ ನೀಡಿದನಂತರ ಮಾತನಾಡಬಹುದು.

ಆದರೂ, ಈ ಉಪನಿಯಮದಲ್ಲಿರುವುದು ಯಾವುದೂ ಒಂದು ವಿಧೇಯಕಕ್ಕೆ ತಿದ್ದುಪಡಿಯನ್ನು ಅಥವಾ ಒಂದು ನಿರ್ಣಯವನ್ನು ಪ್ರಸ್ತಾವಿಸಿ ಮಂಡಿಸುವ ಯಾವ ವ್ಯಕ್ತಿಗೂ ಅಧ್ಯಕ್ಷರ ಅನುಮತಿ ಪಡೆದಲ್ಲದೆ ಉತ್ತರ ನೀಡಲು ಯಾವುದೇ ಹಕ್ಕನ್ನು ನೀಡುತ್ತದೆ ಎಂದು ಭಾವಿಸತಕ್ಕದ್ದಲ್ಲ.

**334. ಪ್ರಸ್ತಾವ ಮಂಡಿಸಿದವರ ಉತ್ತರದೊಂದಿಗೆ ಚರ್ಚೆಯ ಸಮಾಪ್ತಿ :** 333ನೇ ನಿಯಮದ (3ನೇ) ಉಪನಿಯಮದ ಉಪಬಂಧಗಳಿಗೆ ಒಳಪಟ್ಟು ಮೂಲ ಪ್ರಸ್ತಾವವನ್ನು ಮಂಡಿಸಿದ ವ್ಯಕ್ತಿಯ ಉತ್ತರದೊಂದಿಗೆ ಎಲ್ಲಾ ಸಂದರ್ಭಗಳಲ್ಲಿಯೂ ಚರ್ಚೆಯು ಮುಕ್ತಾಯವಾಗತಕ್ಕದ್ದು.

**335. ಭಾಷಣಗಳ ಕಾಲಾವಧಿ :** ಅಧ್ಯಕ್ಷರು ನಿಯಮಗಳಲ್ಲಿ ನಿರ್ದಿಷ್ಟ ಉಪಬಂಧಗಳನ್ನು ಕಲ್ಪಿಸಿದರೆ ಸಂದರ್ಭಗಳಲ್ಲಿ ಮತ್ತು ಸದನದ ಕಾರ್ಯಕಲಾಪಗಳ ಪರಿಸ್ಥಿತಿಯನ್ನು ಮತ್ತು ಪ್ರಸ್ತಾವದ ಸ್ವರೂಪವನ್ನು ಗಮನದಲ್ಲಿರಿಸಿಕೊಂಡು ಪ್ರಸ್ತಾವವನ್ನು ಕುರಿತು ಭಾಷಣಗಳಿಗೆ ಕಾಲಮಿತಿಯನ್ನು ನಿಗದಿಪಡಿಸಬಹುದು.

**336. ಅಧ್ಯಕ್ಷರ ಭಾಷಣ :** ಅಧ್ಯಕ್ಷರು ಯಾವುದೇ ಸಮಯದಲ್ಲಿ ತಾವಾಗಿಯೇ ಅಥವಾ ಸದಸ್ಯರು ಯಾವುದೇ ಒಂದು ಅಂಶವನ್ನು ಎತ್ತಿದಾಗ ಅಥವಾ ಸದಸ್ಯರೊಬ್ಬರು ಮಾಡಿದ ವಿನಂತಿಯ ಮೇಲೆ, ಸದನದ ಮುಂದೆ ಪರ್ಯಾಲೋಚನೆಯಲ್ಲಿರುವ ವಿಷಯದ ಮೇಲೆ ಸದಸ್ಯರ ಚರ್ಚೆಗೆ ನೆರವು ನೀಡುವ ಉದ್ದೇಶದಿಂದ ಸಭೆಯನ್ನು ಉದ್ದೇಶಿಸಿ ಮಾತನಾಡಬಹುದು ಮತ್ತು ಹಾಗೆ ಅವರು ತಿಳಿಸಿದ ತಮ್ಮ ಅಭಿಪ್ರಾಯಗಳನ್ನು ಒಂದು ತೀರ್ಪು ಎಂದು ಪರಿಗಣಿಸತಕ್ಕದ್ದಲ್ಲ.

**337. ಅಧ್ಯಕ್ಷರು ಎದ್ದುನಿಂತಾಗ ಅನುಸರಿಸಬೇಕಾದ ಕಾರ್ಯವಿಧಾನ:** (1) ಅಧ್ಯಕ್ಷರು ಮಾತನಾಡಲು ಎದ್ದುನಿಂತುಕೊಂಡಾಗಲೆಲ್ಲ ಸದಸ್ಯರು ಮೌನದಿಂದಿದ್ದು ಅವರ ಮಾತುಗಳನ್ನು ಆಲಿಸಬೇಕು ಮತ್ತು ಆ ಸಮಯದಲ್ಲಿ ಮಾತನಾಡುತ್ತಿದ್ದ ಅಥವಾ ಮಾತನಾಡಲು ಆರಂಭಿಸಲಿದ್ದ ಸದಸ್ಯರು ಕೂಡಲೇ ತಮ್ಮ ಸ್ಥಾನದಲ್ಲಿ ಕುಳಿತುಕೊಳ್ಳತಕ್ಕದ್ದು.

(2) ಅಧ್ಯಕ್ಷರು ಸಭೆಯನ್ನುದ್ದೇಶಿಸಿ ಮಾತನಾಡುತ್ತಿರುವಾಗ ಯಾವ ಸದಸ್ಯರು ತಮ್ಮ ಸ್ಥಾನದಿಂದ ಎದ್ದುಹೋಗತಕ್ಕದ್ದಲ್ಲ.

**338. ಮುಕ್ತಾಯ:** (1) ಪ್ರಸ್ತಾವವನ್ನು ಮಂಡಿಸಿದ ಅನಂತರ ಯಾವುದೇ ಸಮಯದಲ್ಲಿ ಯಾರೇ ಸದಸ್ಯರು "ಈಗ ಸಭೆಯ ಅಭಿಮತಕ್ಕೆ ಹಾಕಬೇಕು". ಎಂದು ಪ್ರಸ್ತಾವವನ್ನು ಮಂಡಿಸಬಹುದು ಮತ್ತು ಈ ಪ್ರಸ್ತಾವವು ಈ ನಿಯಮಾವಳಿಯ ದುರುಪಯೋಗ ಅಥವಾ ಸಮಂಜಸ ಚರ್ಚೆಗೆ ಇರುವ ಹಕ್ಕನ್ನು ಕುಂಠಿತಗೊಳಿಸುತ್ತದೆ ಎಂದು ಅಧ್ಯಕ್ಷರಿಗೆ ತೋರಿದ ಹೊರತು ಅಧ್ಯಕ್ಷರು "ಈಗ ಪ್ರಶ್ನೆಯನ್ನು ಕೇಳಬಹುದು" ಎಂಬ ಪ್ರಸ್ತಾವವನ್ನು ಮಂಡಿಸತಕ್ಕದ್ದು.

(2) "ಈಗ ಪ್ರಶ್ನೆಯನ್ನು ಕೇಳಬಹುದು" ಎಂಬ ಪ್ರಸ್ತಾವಕ್ಕೆ ಸಭೆಯ ಅನುಮೋದನೆ ದೊರೆತಲ್ಲಿ ಅದಕ್ಕೆ ಅನುಷಂಗಿಕವಾದ ಪ್ರಶ್ನೆಯನ್ನು ಅಥವಾ ಪ್ರಶ್ನೆಗಳನ್ನು ಹೆಚ್ಚಿನ ಚರ್ಚೆ ಇಲ್ಲದೆ ಕೂಡಲೇ ಕೇಳತಕ್ಕದ್ದು. ಆದಾಗ್ಯೂ ಅಧ್ಯಕ್ಷರು ಯಾರೇ ಸದಸ್ಯರಿಗೆ ಈ ನಿಯಮದ ಮೇರೆಗೆ ಅವರಿಗಿರುವ ಉತ್ತರ ನೀಡುವ ಹಕ್ಕನ್ನು ಚಲಾಯಿಸಲು ಅವಕಾಶ ನೀಡಬಹುದು.

**339. ಚರ್ಚೆಯ ಪರಿಮಿತಿ :** (1) ಒಂದು ವಿಧೇಯಕಕ್ಕೆ ಸಂಬಂಧಿಸಿದ ಯಾವುದೇ ಪ್ರಸ್ತಾವದ ಮೇಲಿನ ಚರ್ಚೆಯು ಅಥವಾ ಯಾವುದೇ ಇತರ ಪ್ರಸ್ತಾವದ ಮೇಲಿನ ಚರ್ಚೆಯೂ ವೇಳೆ ಮೀರಿ ಮುಂದುವರಿಯುತ್ತಾ ಹೋದಾಗಲೆಲ್ಲ ಅಧ್ಯಕ್ಷರು ಸಭೆಯ ಒಟ್ಟು ಅಭಿಪ್ರಾಯವನ್ನು ತಿಳಿದುಕೊಂಡು ಸಂದರ್ಭಾನುಸಾರ ವಿಧೇಯಕದ ಯಾವುದೇ ಹಂತ ಅಥವಾ ಎಲ್ಲಾ ಹಂತಗಳ ಮೇಲಿನ ಚರ್ಚೆಗಳನ್ನು ಅಥವಾ ಆ ಪ್ರಸ್ತಾವದ ಮೇಲಿನ ಚರ್ಚೆಗಳನ್ನು ಮುಕ್ತಾಯಗೊಳಿಸಲು ಕಾಲ ಪರಿಮಿತಿಯನ್ನು ನಿಗದಿಪಡಿಸತಕ್ಕದ್ದು.

(2) ಯಾವುದೇ ವಿಧೇಯಕ ಅಥವಾ ಪ್ರಸ್ತಾವದ ಒಂದು ನಿರ್ದಿಷ್ಟ ಹಂತವನ್ನು ಪೂರೈಸುವುದಕ್ಕಾಗಿ ಗೊತ್ತುಪಡಿಸಲಾದ ಸಮಯಮಿತಿಗೆ ಅನುಸಾರವಾಗಿ, ಗೊತ್ತಾದ ವೇಳೆಯಲ್ಲಿ ಅಧ್ಯಕ್ಷರು, ಚರ್ಚೆ ಅದಕ್ಕಿಂತ ಮುಂಚಿತವಾಗಿಯೇ ಮುಕ್ತಾಯವಾದ ಹೊರತು ವಿಧೇಯಕ ಅಥವಾ ಪ್ರಸ್ತಾವದ ಆ ಹಂತದ ಸಂಬಂಧದಲ್ಲಿ ಉಳಿದಿರುವ ಎಲ್ಲ ಪ್ರಮುಖ ಅಂಶಗಳನ್ನು ಇತ್ಯರ್ಥಗೊಳಿಸಲು ಅಗತ್ಯವಾದ ಪ್ರತಿಯೊಂದು ಪ್ರಶ್ನೆಯನ್ನು ಕೂಡಲೇ ಹಾಕತಕ್ಕದ್ದು.

(3) ಇತ್ಯರ್ಥಕ್ಕಾಗಿ ಪ್ರಶ್ನೆ

**340. ಸದನದ ನಿರ್ಣಯವನ್ನು ಪಡೆಯಲು ಅನುಸರಿಸಬೇಕಾದ ಕಾರ್ಯ ವಿಧಾನ:** ಸದನದ ನಿರ್ಣಯವನ್ನು ಪಡೆಯಬೇಕಾಗಿರುವ ಯಾವುದೇ ವಿಷಯವು ಯಾವೊಬ್ಬ ಸದಸ್ಯರು ಮಾಡಿದ ಪ್ರಸ್ತಾವದ ಆಧಾರದ ಮೇಲೆ ಅಧ್ಯಕ್ಷರು ಕೇಳುವ ಪ್ರಶ್ನೆಯ ಮೂಲಕ ನಿರ್ಧರಿಸತಕ್ಕದ್ದು.

**341. ಪ್ರಸ್ತಾವ ಮತ್ತು ಇತ್ಯರ್ಥಕ್ಕಾಗಿ ಪ್ರಶ್ನೆಯನ್ನು ಹಾಕುವುದು:** ಒಂದು ಪ್ರಸ್ತಾವವನ್ನು ಸೂಚಿಸಿದಾಗ ಅಧ್ಯಕ್ಷರು ಅದರ ಪರವಾಗಿ ಮತ್ತು ಅದಕ್ಕೆ ವಿರೋಧವಾಗಿ, ಸದಸ್ಯರ ಮತಗಳನ್ನು ಕೇಳುವ ಪ್ರಶ್ನೆಯನ್ನು ಹಾಕಿ ಅದಕ್ಕೆ ಅದನ್ನು ಸಭೆಯ ತೀರ್ಮಾನಕ್ಕೆ ಬಿಡತಕ್ಕದ್ದು. ಒಂದು ಪ್ರಸ್ತಾವದಲ್ಲಿ ಎರಡು ಅಥವಾ ಅದಕ್ಕಿಂತ ಹೆಚ್ಚು ಸಂಖ್ಯೆಯ ಪ್ರತ್ಯೇಕವಾದ ವಿಚಾರಗಳು ಅಡಕವಾಗಿದ್ದ ಪಕ್ಷದಲ್ಲಿ, ಅವುಗಳಲ್ಲಿ ಒಂದೊಂದರ ವಿಷಯವಾಗಿಯೂ ಸದನದ ಅಭಿಪ್ರಾಯವನ್ನು ನಿರ್ಧರಿಸಲು ಅಧ್ಯಕ್ಷರು ಪ್ರತ್ಯೇಕವಾದ ಪ್ರಶ್ನೆಯನ್ನು ಹಾಕಬಹುದು.

**342. ಮತವನ್ನು ಗ್ರಹಿಸಿದ ಮೇಲೆ ಸದಸ್ಯರು ಆ ವಿಷಯದ ಮೇಲೆ ಮಾತನಾಡಕೂಡದು:** ಅಧ್ಯಕ್ಷರು ಒಂದು ವಿಷಯದ ಮೇಲೆ ಅದರ ಪರವಾಗಿರುವ ಮತ್ತು ಅದಕ್ಕೆ ವಿರೋಧವಾಗಿರುವ ಸದಸ್ಯರ "ಹೌದು ಅಥವಾ ಅಲ್ಲ" ಎಂಬ ಅಭಿಮತವನ್ನು ಪಡೆದ ತರುವಾಯ ಆ ವಿಷಯದ ಮೇಲೆ ಯಾವ ಸದಸ್ಯರೂ ಪುನಃ ಮಾತನಾಡತಕ್ಕದ್ದಲ್ಲ.

**343. ಪ್ರಸ್ತಾಪಿಸಲ್ಪಟ್ಟ ಕಾಗದ ಪತ್ರಗಳನ್ನು ಸಭೆಯ ಮುಂದೆ ಇಡುವುದು :** ಒಬ್ಬ ಸಚಿವರು ಸದನದ ಮುಂದೆ ಹಾಜರುಪಡಿಸಿದ ಒಂದು ಕಾಗದವನ್ನು ಅಥವಾ ರಾಜ್ಯದ ಇತರ ಪತ್ರವನ್ನು ಸದನದಲ್ಲಿ ಪ್ರಸ್ತಾಪಿಸಿದ ಪಕ್ಷದಲ್ಲಿ ಅವರು ಸಂಬಂಧಪಟ್ಟ ಆ ಪತ್ರವನ್ನು ಸಭೆಯ ಮುಂದೆ ಇಡತಕ್ಕದ್ದು. ಆದರೆ, ಈ ನಿಯಮವು ಕಾಗದಪತ್ರಗಳನ್ನು ಹಾಜರುಪಡಿಸುವುದರಿಂದ ಸಾರ್ವಜನಿಕ ಹಿತಸಾಧನೆಗೆ ಅಸಂಗತವಾದ ಸ್ವಭಾವದವುಗಳಾಗಿರುತ್ತವೆಂಬುದಾಗಿ ಸಚಿವರಿಂದ ತಿಳಿಸಲಾಗುವಂಥ ಕಾಗದ ಪತ್ರಗಳಿಗೆ ಅನ್ವಯಿಸತಕ್ಕದ್ದಲ್ಲ.

ಅಷ್ಟೇ ಅಲ್ಲದೆ, ಅಂಥ, ಕಾಗದದ ಅಥವಾ ರಾಜ್ಯಪತ್ರದ ಸಾರಾಂಶ ಅಥವಾ ಮುಖ್ಯಾಂಶಗಳನ್ನು ಒಬ್ಬ ಸಚಿವರು ತಮ್ಮ ಸ್ವಂತ ಮಾತುಗಳಲ್ಲಿ ತಿಳಿಸಿದಾಗ ಸಂಬಂಧಪಟ್ಟ ಕಾಗದ ಪತ್ರವನ್ನು ಸಭೆಯ ಮುಂದಿಡುವುದು ಅವಶ್ಯಕವಾಗಿರತಕ್ಕದ್ದಲ್ಲ.

**344. ಸಭೆಯ ಮುಂದಿಟ್ಟ ಕಾಗದ ಪತ್ರಗಳ ಬಗೆಗಿನ ವ್ಯವಹಾರ :** 1) ಸಭೆಯ ಮುಂದಿಟ್ಟ ಒಂದು ಕಾಗದ ಅಥವಾ ದಸ್ತಾವೇಜನ್ನು ಅದನ್ನು ಮಂಡಿಸುವ ಸದಸ್ಯರಿಂದ ಕ್ರಮವಾಗಿ ಅಧಿಕೃತಗೊಳಿಸತಕ್ಕದ್ದು.

(2) ಸಭೆಯ ಮುಂದಿಟ್ಟ ಎಲ್ಲ ಕಾಗದಗಳೂ ಮತ್ತು ದಸ್ತಾವೇಜುಗಳೂ ಸಾರ್ವಜನಿಕವಾದುದೆಂದು ಭಾವಿಸತಕ್ಕದ್ದು.

**345. ಮಂತ್ರಿಗಳಿಂದ ಹೇಳಿಕೆ:** ವಿಧಾನ ಸಭಾಧ್ಯಕ್ಷರ ಅನುಮತಿ ಪಡೆದು ಸಾರ್ವಜನಿಕ ಮಹತ್ವದ ವಿಷಯದ ಮೇಲೆ ಹೇಳಿಕೆ ನೀಡಬಹುದು. ಅಂತಹ ಹೇಳಿಕೆಯ ಮೇಲೆ ಯಾವುದೇ ಚರ್ಚೆಗೆ ಅವಕಾಶವಿರತಕ್ಕದ್ದಲ್ಲ. ಆದರೆ, ರಾಜ್ಯಕ್ಕೆ ಸಂಬಂಧಿಸಿದಂತೆ ಹೆಚ್ಚಿನ ಮಾಹಿತಿ ಪಡೆಯುವ ಉದ್ದೇಶಕ್ಕಾಗಿ ಪ್ರಶ್ನೆಗಳನ್ನು ಕೇಳಲು ಸದಸ್ಯರಿಗೆ ಅನುಮತಿ ನೀಡಬಹುದು.

**346. ಮತಗಳ ಎಣಿಕೆ:** (1) ಒಂದು ಚರ್ಚೆಯು ಮುಕ್ತಾಯವಾದ ಮೇಲೆ ಅಧ್ಯಕ್ಷರು ಚರ್ಚೆಯ ವಿಷಯವನ್ನು ಸಭೆಯ ಮುಂದೆ ಮಂಡಿಸತಕ್ಕದ್ದು ಮತ್ತು ಪ್ರಸ್ತಾವಕ್ಕೆ ಒಪ್ಪಿಗೆಯುಳ್ಳವರು, "ಹೌದು" ಎಂದು ಹೇಳಬೇಕೆಂಬುದಾಗಿಯೂ ಮತ್ತು ಅದಕ್ಕೆ ವಿರೋಧವಾಗಿರುವವರು "ಇಲ್ಲ" ಎಂದು ಹೇಳಬೇಕೆಂದಾಗಿಯೂ ತಿಳಿಸಬೇಕು.

(2) ಅಧ್ಯಕ್ಷರು, ಅನಂತರ, ತೀರ್ಮಾನವು "ಹೌದು" ಎಂದು ಹೇಳುವವರಿಗೆ (ಅಥವಾ ಆಯಾ ಸಂದರ್ಭಾನುಸಾರವಾಗಿ "ಇಲ್ಲ" ಎಂದು ಹೇಳುವವರಿಗೆ) ಅನುಕೂಲವಾಗಿದೆಯೆಂದು ನನಗೆ ತೋರುತ್ತದೆ ಎಂದು ತಿಳಿಯತಕ್ಕದ್ದು, ಒಂದು ಪ್ರಶ್ನೆಯ ತೀರ್ಮಾನದ ಸಂಬಂಧದಲ್ಲಿ ಅಧ್ಯಕ್ಷರ ಅಭಿಪ್ರಾಯವನ್ನು ಪ್ರತಿಭಟಿಸದಿದ್ದಲ್ಲಿ ಅವರ ತೀರ್ಮಾನವು "ಹೌದು" ಎನ್ನುವವರೆಗೆ (ಅಥವಾ ಆಯಾ ಸಂದರ್ಭಾನುಸಾರವಾಗಿ "ಇಲ್ಲ" ಎನ್ನುವವರೆಗೆ) ಅನುಕೂಲವಾಗಿದೆ ಎಂದು ಎರಡು ಸಲ ಹೇಳತಕ್ಕದ್ದು ಮತ್ತು ಸದನದ ಮುಂದೆ ತೀರ್ಮಾನಕ್ಕೆ ಬಂದಿರುವ ವಿಚಾರವನ್ನು ಅದಕ್ಕೆ ತಕ್ಕಂತೆ ತೀರ್ಮಾನಿಸತಕ್ಕದ್ದು.

(3) ಒಂದು ಪ್ರಶ್ನೆಯ ತೀರ್ಮಾನದ ಸಂಬಂಧದಲ್ಲಿ ಅಧ್ಯಕ್ಷರ ಅಭಿಪ್ರಾಯವನ್ನು ಪ್ರತಿಭಟಿಸಿದ್ದಲ್ಲಿ ಮತದ ಎಣಿಕೆ ಗಂಟೆಯನ್ನು ಎರಡು ನಿಮಿಷಗಳವರೆಗೆ ಬಾರಿಸುವಂತೆ ವ್ಯವಸ್ಥೆ ಮಾಡತಕ್ಕದ್ದು.

(4) ಆ ಎರಡು ನಿಮಿಷಗಳು ಮುಗಿದ ಮೇಲೆ ಬಾಗಿಲುಗಳನ್ನು ಮುಚ್ಚಿ ಬಿಡುವಂತೆ ಹೇಳತಕ್ಕದ್ದು ಮತ್ತು ಪ್ರಶ್ನೆಯನ್ನು ಎರಡನೆಯ ಸಲ ಹಾಕಬೇಕು. ಮತ್ತು ಪ್ರಸ್ತಾವಕ್ಕೆ ಒಪ್ಪಿಗೆಯುಳ್ಳವರು "ಹೌದು" ಎಂದು ಹೇಳಬೇಕೆಂಬುದಾಗಿಯೂ ಮತ್ತು ಅದಕ್ಕೆ ವಿರೋಧವಾಗಿರುವವರು "ಇಲ್ಲ" ಎಂದು ಹೇಳಬೇಕೆಂಬುದಾಗಿಯೂ ತಿಳಿಸತಕ್ಕದ್ದು.

(5) ಒಂದು ಪ್ರಶ್ನೆಯ ತೀರ್ಮಾನದ ಸಂಬಂಧದಲ್ಲಿ ಅಧ್ಯಕ್ಷರ ಅಭಿಪ್ರಾಯವನ್ನು ಪುನಃ ಪ್ರತಿಭಟಿಸಿದರೆ, ಅವರು ತಾವು ಯುಕ್ತವೆಂದು ಭಾವಿಸಿದರೆ "ಹೌದು" ಎನ್ನುವ ಅಭಿಪ್ರಾಯವುಳ್ಳ ಮತ್ತು "ಇಲ್ಲ" ಎನ್ನುವ ಅಭಿಪ್ರಾಯವುಳ್ಳ ಸದಸ್ಯರು ಕ್ರಮವಾಗಿ ತಮ್ಮ ತಮ್ಮ ಸ್ಥಳಗಳಲ್ಲಿ ಎದ್ದು ಸಭೆಯ ತೀರ್ಮಾನವನ್ನು ಪ್ರಕಟಿಸಬಹುದು.

ಅಂಥ ಸಂದರ್ಭಗಳಲ್ಲಿ ಮತಗಳನ್ನು ಕೊಟ್ಟವರ ಹೆಸರುಗಳನ್ನು ದಾಖಲು ಮಾಡತಕ್ಕದ್ದಲ್ಲ.

(6) ಮೇಲಿನ (3)ನೆಯ ಉಪನಿಯಮದಲ್ಲಿ ವಿಧೇಯಕ ಮಾಡಿರುವಂಥ ಕಾರ್ಯ ವಿಧಾನವನ್ನು ಅಧ್ಯಕ್ಷರು ಅನುಸರಿಸದಿದ್ದಲ್ಲಿ, ಅವರು ತಾವು ತೀರ್ಮಾನಿಸಬಹುದಾದಂಥ ಇತರ ಯಾವುದೇ ವಿಧಾನದಲ್ಲಿ ವಿಷಯದ ಪರವಾಗಿಯೂ ಮತ್ತು ವಿಷಯಕ್ಕೆ ವಿರುದ್ಧವಾಗಿಯೂ ಎಷ್ಟು ಮಂದಿ ಮತವುಳ್ಳವರಾಗಿದ್ದಾರೆಂಬುದನ್ನು ತಿಳಿಯಬೇಕೆಂದು ಆದೇಶಿಸತಕ್ಕದ್ದು.

ಸದಸ್ಯರುಗಳನ್ನು ಸಭೆಯಿಂದ ಹೊರಕ್ಕೆ ಕಳುಹಿಸುವುದು ಮತ್ತು ಕೆಲಕಾಲ ಸಭೆಗೆ ಬರದಂತೆ ಆಜ್ಞೆ ಮಾಡುವುದು.

**347. ಸದಸ್ಯರು ಸಭೆಯಿಂದ ಹೊರಕ್ಕೆ ಹೋಗಬೇಕೆಂದು ಆದೇಶ ಮಾಡುವುದು:** ಅಧ್ಯಕ್ಷರು ಯಾವ ಸದಸ್ಯರ ನಡವಳಿಕೆಯು ತುಂಬಾ ಅಸಭ್ಯವಾಗಿದೆಯೆಂದು ಭಾವಿಸುತ್ತಾರೋ, ಅಂಥ ಸದಸ್ಯರಿಗೆ ಸದನದಿಂದ ಕೂಡಲೇ ಹೊರಗೆ ಹೋಗುವಂತೆ ಆದೇಶಿಸಬಹುದು ಮತ್ತು ಆ ರೀತಿ ಹೋಗಬೇಕೆಂದು ಆದೇಶ ಮಾಡಿದ ಯಾರೇ ಸದಸ್ಯರು ಕೂಡಲೇ ಸಭೆಯಿಂದ ಹೊರಗೆ ಹೋಗಬೇಕು ಮತ್ತು ಆ ದಿನದ ಉಪವೇಶನದ ಉಳಿದ ಸಮಯದಲ್ಲಿ ಅವರು ಗೈರುಹಾಜರಾಗತಕ್ಕದ್ದು.

**348. ಸದಸ್ಯರನ್ನು ಕೆಲಕಾಲ ಸಭೆಗೆ ಬರದಂತೆ ತಡೆ ಹಿಡಿಯುವುದು :** (1) ಅಧ್ಯಕ್ಷರು ತಾವು ಅವಶ್ಯವೆಂದು ಭಾವಿಸಿದ ಪಕ್ಷದಲ್ಲಿ ಯಾವ ಸದಸ್ಯರು ಅಧ್ಯಕ್ಷರ ಅಧಿಕಾರದ ವಿಷಯದಲ್ಲಿ ಲಕ್ಷ್ಯವಿಲ್ಲದೆ ತಿರಸ್ಕಾರ ಮಾಡುತ್ತಾರೋ ಅಥವಾ ಸದನದ ಕಾರ್ಯಕಲಾಪಗಳಿಗೆ ಒಂದೇ ಸಮನಾಗಿ ಮತ್ತು ಉದ್ದೇಶಪೂರ್ವಕವಾಗಿ ಅಡಚಣೆಯನ್ನುಂಟು ಮಾಡುವುದರ ಮೂಲಕ ಸದನದ ನಿಯಮಗಳಿಗೆ ವಿರೋಧವಾಗಿ ವರ್ತಿಸುತ್ತಾರೋ ಆ ಸದಸ್ಯರ ಹೆಸರೆತ್ತಿ ಸದನಕ್ಕೆ ತಿಳಿಸಬಹುದು

(2) ಆ ರೀತಿ, ಅಧ್ಯಕ್ಷರು ಒಬ್ಬ ಸದಸ್ಯರ ಹೆಸರೆತ್ತಿ ತಿಳಿಸಿದ ಪಕ್ಷದಲ್ಲಿ ಆ ಕೂಡಲೇ ಅವರು ಹೆಸರೆತ್ತಿ ತಿಳಿಸಿದ ಸದಸ್ಯರು ಅಧಿವೇಶನದ ಉಳಿದ ಕಾಲದಲ್ಲಿ (ಅಥವಾ ಅಧ್ಯಕ್ಷರು ನಿರ್ದಿಷ್ಟಗೊಳಿಸಬಹುದಾದಂಥ ಅಧಿವೇಶನದ ಒಂದು ಭಾಗದವರೆಗೆ) ಸದನಕ್ಕೆ ಬರಬಾರದಂತೆ ಪ್ರಸ್ತಾವವನ್ನು ಮಂಡಿಸಬೇಕು.

ಆದರೆ, ಸದನವು ಯಾವ ಕಾಲದಲ್ಲಾದರೂ, ಒಂದು ಪ್ರಸ್ತಾವವನ್ನು ಸೂಚಿಸಿದ ಮೇಲೆ ಅಂಥ ನಿಷೇಧವನ್ನು ಮುಕ್ತಾಯಗೊಳಿಸಬೇಕೆಂದು ನಿರ್ಣಯ ಮಾಡಬಹುದು.

(3) ಈ ನಿಯಮದ ಮೇರೆಗೆ ಸದನಕ್ಕೆ ಬರದಂತೆ ನಿಷೇಧಿಸಲ್ಪಟ್ಟ ಸದಸ್ಯರು, ಆ ಕೂಡಲೇ ಸದನದ ಆವರಣವನ್ನು ಬಿಟ್ಟು ಹೊರಟುಹೋಗತಕ್ಕದ್ದು.

**349. ಸದನವು ಕೆಲಕಾಲ ನಡೆಯದಂತೆ ಮುಂದಕ್ಕೆ ಹಾಕುವುದಕ್ಕೆ ಅಥವಾ ಉಪವೇಶನವು ಕೆಲಕಾಲ ನಡೆಯದಂತೆ ಆದೇಶ ಮಾಡುವುದಕ್ಕೆ ಅಧ್ಯಕ್ಷರ ಅಧಿಕಾರ:** ಸದನದಲ್ಲಿ ಭಾರಿ ಗೊಂದಲವಿದ್ದ ಪಕ್ಷದಲ್ಲಿ ಅಧ್ಯಕ್ಷರು ಸದನವು ಕೆಲಕಾಲ ನಡೆಯದಂತೆ ಮುಂದಕ್ಕೆ ಹಾಕುವುದು ಅಥವಾ ಉಪವೇಶನವು ಕೊಂಚ ಕಾಲ ನಡೆಯದಂತೆ ತಡೆಹಿಡಿಯುವುದು ಅವಶ್ಯವೆಂದು ಭಾವಿಸಿದ ಪಕ್ಷದಲ್ಲಿ, ಆ ರೀತಿ ಸದನವನ್ನು ಮುಂದಕ್ಕೆ ಹಾಕಬಹುದು ಅಥವಾ ಉಪವೇಶನವನ್ನು ಕೆಲಕಾಲ ನಡೆಯದಂತೆ ಮಾಡಬಹುದು.

**350. ಕ್ರಿಯಾಲೋಪಗಳು ಮತ್ತು ಅವುಗಳ ಬಗ್ಗೆ ನಿರ್ಣಯಗಳು:** (1) ಒಂದು ಕ್ರಿಯಾಲೋಪವು ಈ ನಿಯಮಗಳ ಅರ್ಥಾನ್ವಯಕ್ಕೆ ಅಥವಾ ಈ ನಿಯಮಗಳನ್ನು ಜಾರಿಗೆ ತರುವುದಕ್ಕೆ ಇಲ್ಲವೇ ವಿಧಾನಸಭೆಯ ಕಾರ್ಯಕಲಾಪಗಳನ್ನು ಕ್ರಮಪಡಿಸುವುದಕ್ಕಿರುವಂತೆ ಸಂವಿಧಾನದ ಅನುಚ್ಛೇದಗಳ ಅರ್ಥಾನ್ವಯಕ್ಕೆ ಅಥವಾ ಅನುಚ್ಛೇದಗಳನ್ನು ಜಾರಿಗೆ ತರುವುದಕ್ಕೆ ಸಂಬಂಧಪಟ್ಟಿರತಕ್ಕದ್ದು ಮತ್ತು ಅಧ್ಯಕ್ಷರು ಗಮನಕ್ಕೆ ತೆಗೆದುಕೊಳ್ಳುವುದಕ್ಕೆ ಸಾಧ್ಯವಿರುವಂಥ ವಿಷಯವನ್ನು ಸದನದ ಗಮನಕ್ಕೆ ತರತಕ್ಕದ್ದು.

(2) ಸದನದ ಮುಂದೆ ತತ್ಕಾಲದಲ್ಲಿ ಬಂದಿರುವ ಕಾರ್ಯಕಲಾಪದ ಸಂಬಂಧದಲ್ಲಿ ಒಂದು

ಕ್ರಿಯಾಲೋಪವನ್ನು ತರಬಹುದು.

ಆದರೆ, ಒಂದು ಕ್ರಿಯಾಲೋಪವು ಸದನದ ಶಿಸ್ತುಪಾಲನೆಯನ್ನು ಮಾಡುವುದಕ್ಕಾಗಲಿ ಅಥವಾ ಸದನದ ಮುಂದೆ ಬಂದಿರುವ ಕಾರ್ಯಕಲಾಪಗಳನ್ನು ವ್ಯವಸ್ಥೆಗೊಳಿಸುವುದಕ್ಕಾಗಲಿ ಸಂಬಂಧಪಟ್ಟಿದ್ದರೆ ಕಾರ್ಯಕಲಾಪಗಳ ಪೈಕಿ ಒಂದು ಬಾಬು ಮುಗಿದು ಇನ್ನೊಂದು ಬಾಬು ಪ್ರಾರಂಭವಾಗುವುದಕ್ಕೆ ಮುಂಚಿತವಾಗಿ ಬರುವ ಮಧ್ಯ ಕಾಲಾವಧಿಯಲ್ಲಿ ಒಬ್ಬರು ಸದಸ್ಯರು ಒಂದು ಕ್ರಿಯಾಲೋಪವನ್ನೆತ್ತುವುದಕ್ಕೆ ಅಧ್ಯಕ್ಷರು ಅನುಮತಿ ಕೊಡಬಹುದು.

(3) ಮೇಲಿನ (1)ನೆಯ ಮತ್ತು (2)ನೆಯ ಉಪನಿಯಮಗಳಲ್ಲಿ ತಿಳಿಸಿರುವಂಥ ಷರತ್ತುಗಳಿಗೊಳಪಟ್ಟು ಒಬ್ಬ ಸದಸ್ಯರು ಒಂದು ಕ್ರಿಯಾಲೋಪವನ್ನು ರಚಿಸಿ ಮಂಡಿಸಬಹುದು. ಹಾಗೆ ಮಂಡಿಸಿರುವುದು ಕ್ರಿಯಾಲೋಪ ಹೌದೇ ಎಂಬುದನ್ನು ಅಧ್ಯಕ್ಷರು ತೀರ್ಮಾನಿಸತಕ್ಕದ್ದು ಮತ್ತು ಅದು ಕ್ರಿಯಾಲೋಪವಾಗಿದ್ದರೆ ಅದರ ವಿಷಯದಲ್ಲಿ ತಮ್ಮ ನಿರ್ಣಯವನ್ನು ಕೊಡತಕ್ಕದ್ದು, ಅಂಥ ನಿರ್ಣಯ ಅಂತಿಮವಾಗಿರತಕ್ಕದ್ದು.

(4) ಕ್ರಿಯಾಲೋಪದ ಮೇಲೆ ಯಾವ ಚರ್ಚೆಗೂ ಅವಕಾಶಕೊಡತಕ್ಕುದಲ್ಲ ಆದರೆ ಅಧ್ಯಕ್ಷರು, ತಮಗೆ ಯುಕ್ತವೆಂದು ಕಂಡುಬಂದರೆ, ತಮ್ಮ ನಿರ್ಣಯವನ್ನು ಕೊಡುವುದಕ್ಕಿಂತ ಮುಂಚಿತವಾಗಿ ಸದಸ್ಯರುಗಳ ಹೇಳಿಕೆಗಳನ್ನು ಕೇಳಬಹುದು.

(5) ಕ್ರಿಯಾಲೋಪವು ಹಕ್ಕುಬಾಧ್ಯತೆಗಳಿಗೆ ಸಂಬಂಧಪಟ್ಟ ಸೂಚನೆಯಾಗುವುದಿಲ್ಲ.

(6) ಒಬ್ಬ ಸದಸ್ಯರು ಈ ಕೆಳಕಂಡ ವಿಷಯಗಳಿಗೆ ಸಂಬಂಧಪಟ್ಟಂತೆ ಕ್ರಿಯಾಲೋಪವನ್ನು ಎತ್ತಕೂಡದು.

(ಎ) ಮಾಹಿತಿಯನ್ನು ಕೇಳುವುದಕ್ಕಾಗಲಿ, ಅಥವಾ

(ಬಿ) ತಮ್ಮ ಅಭಿಪ್ರಾಯವನ್ನು ವಿವರಿಸುವುದಕ್ಕಾಗಲಿ, ಅಥವಾ

(ಸಿ) ಯಾವ ಪ್ರಸ್ತಾವದ ಮೇಲೆ ಆಗಲಿ ಬಂದಿರುವ ಒಂದು ಪ್ರಶ್ನೆಯು ವಿಧಾನಸಭೆಯ ಮುಂದೆ ಮಂಡಿಸುತ್ತಿರುವಾಗ ಆಗಲಿ, ಅಥವಾ

(ಡಿ) ಕೇವಲ ಊಹೆಗೆ ಸಂಬಂಧಪಟ್ಟಂತೆ ಅಥವಾ

(ಇ) ಮತಗಳ ಎಣಿಕೆಯಾಗುವುದೆಂದು ಸೂಚಿಸುವ ಗಂಟೆಗಳ ಶಬ್ದವಾಗಲಿಲ್ಲವೆಂದು ಅಥವಾ ಆ ಶಬ್ದಗಳು ಕೇಳಿಸಲಿಲ್ಲವೆಂದು ಒಂದು ಕ್ರಿಯಾಲೋಪವನ್ನು ಎತ್ತಕೂಡದು.

**351. ಕ್ರಿಯಾಲೋಪವಲ್ಲದ ಒಂದು ವಿಚಾರವನ್ನೆತ್ತುವುದು :** ಒಂದು ಕ್ರಿಯಾ ಲೋಪವಲ್ಲದಂಥ ಯಾವ ವಿಷಯವನ್ನಾಗಲಿ ವಿಧಾನಸಭೆಯ ಗಮನಕ್ಕೆ ತರಬೇಕೆಂದು ಇಚ್ಛಿಸುವ ಸದಸ್ಯರು ವಿಧಾನಸಭೆಯಲ್ಲಿ ತಾವು ಎತ್ತಬೇಕೆಂದಿರುವ ವಿಷಯವನ್ನು, ಅದನ್ನು ಸೂಚಿಸಬೇಕೆಂದಿರುವ ಕಾರಣಗಳೊಡನೆ ಸಂಕ್ಷೇಪವಾಗಿ ತಿಳಿಸಿ ಲಿಖಿತ ಮೂಲಕವಾಗಿ ಕಾರ್ಯದರ್ಶಿಯವರಿಗೆ "ಸೂಚನಾಪತ್ರ" ವನ್ನು ಕೊಡಬೇಕು ಅಧ್ಯಕ್ಷರು ಅನುಮತಿ ಕೊಟ್ಟಮೇಲೆ ಮಾತ್ರವೇ ಅವರು ಅದನ್ನು ಸೂಚಿಸುವುದಕ್ಕೆ ಅವರಿಗೆ ಅನುಮತಿ ದೊರೆಯಬೇಕು ಮತ್ತು ಅಧ್ಯಕ್ಷರು ಗೊತ್ತುಮಾಡಬಹುದಾದ ಕಾಲದಲ್ಲಿ ಮತ್ತು ಆ ದಿನ ಮಾತ್ರ ಅವರು ಅದನ್ನು ಸೂಚಿಸುವುದಕ್ಕೆ ಅವರಿಗೆ ಅನುಮತಿ ದೊರೆಯಬೇಕು.

*****

## ತೀರ್ಪುಗಾರರ ಮಾದರಿ ಅಂಕಪಟ್ಟಿ

### ದಿನಾಂಕ . . . . 2019–2020 ರ ಜಿಲ್ಲಾ ಮಟ್ಟದ ಯುವ ಸಂಸತ್ ಸ್ಪರ್ಧೆಯ ಅಂಕಪಟ್ಟಿ

| ಕ್ರಮ ಸಂಖ್ಯೆ | ಜಿಲ್ಲೆಯ ಹೆಸರು | ವಿದ್ಯಾರ್ಥಿ ಹಾಗೂ ಶಾಲೆಯ ಹೆಸರು ಹಾಗೂ ತರಗತಿ | ಶಿಸ್ತು ಮತ್ತು ಸಭ್ಯತೆ (ಗರಿಷ್ಠ 10 ಅಂಕಗಳು) | ಸಂಸದೀಯ ಕಾರ್ಯ ವಿಧಾನದ ಪಾಲನೆ (ಗರಿಷ್ಠ 20 ಅಂಕಗಳು) | ಪ್ರಶ್ನೆಗಳಿಗಾಗಿ ವಿಷಯಗಳ ಆಯ್ಕೆ ಹಾಗೂ ಅವುಗಳಿಗೆ ನೀಡಿದ ಉತ್ತರಗಳ ಗುಣಮಟ್ಟ (ಗರಿಷ್ಠ 20 ಅಂಕಗಳು) | ಚರ್ಚೆಗಳಿಗೆ ವಿಷಯಗಳ ಆಯ್ಕೆ (ಗರಿಷ್ಠ 10 ಅಂಕಗಳು) | ಮಾಡಿದ ಭಾಷಣದ ಶೈಲಿ ಅಥವಾ ಮೌಲ್ಯ ಚರ್ಚೆಗಳ ಗುಣಮಟ್ಟ (ಗರಿಷ್ಠ 30 ಅಂಕಗಳು) | ಒಟ್ಟಾರೆ ಸಾಧನೆಯ ಸಾಮಾನ್ಯ ಮೌಲ್ಯ ಮಾಪನ (ಗರಿಷ್ಠ 10 ಅಂಕಗಳು) | ಒಟ್ಟು 100 ಅಂಕಗಳು |
|---|---|---|---|---|---|---|---|---|---|
| 1 | | | | | | | | | |
| 2 | | | | | | | | | |

## ಜಿಲ್ಲಾ/ರಾಜ್ಯ ಮಟ್ಟದ ಯುವ ಸಂಸತ್ ಸ್ಪರ್ಧಾರ್ಥಿಗಳ ಪಟ್ಟಿ

| ಕ್ರಮ ಸಂಖ್ಯೆ<br>ಶಾಲೆಯ ಹೆಸರು | ಜಿಲ್ಲೆಯ ಹೆಸರು | ಭಾಗವಹಿಸಿದ ಸ್ಪರ್ಧಾರ್ಥಿಗಳ<br>ಹೆಸರು |
|---|---|---|
| 1 | | |
| 2 | | |
| 3 | | |
| 4 | | |
| 5 | | |
| ಶಾಲೆಗಳ ಒಟ್ಟು ಸಂಖ್ಯೆ | | |
| ವಿದ್ಯಾರ್ಥಿಗಳ ಒಟ್ಟು ಸಂಖ್ಯೆ | | |

### ಜಿಲ್ಲೆಗಳ ವಿವರ

| ಸ್ಪರ್ಧೆಯಲ್ಲಿ ವೈಯಕ್ತಿಕ ಬಹುಮಾನ ಪಡೆದವರ ಸಂಖ್ಯೆ | ಸ್ಪರ್ಧೆಯಲ್ಲಿ ಮೊದಲ ಐದು ಸ್ಥಾನ ಗಳಿಸಿದ ವಿದ್ಯಾರ್ಥಿಗಳ ಹೆಸರು | ಪಡೆದ ಅಂಕಗಳು | ಶಾಲೆಯ ಹೆಸರು |
|---|---|---|---|
| | | | |
| | | | |
| | | | |
| | | | |
| | | | |

*******

ಸರ್ಕಾರಿ ಮುದ್ರಣಾಲಯ, ವಿಕಾಸೌಧ ಘಟಕ, ಬೆಂಗಳೂರು. ಕಾ.ಸೂ. PWS-425 350 ಪ್ರತಿಗಳು ದಿ:12/9/2019